

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಡಿಸೆಂಬರ್ 2 ಸೋಮವಾರ 2024

ಸಂಪುಟ: 45 | ಸಂಚಿಕೆ: 225 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695 ಸುದ್ದಿ
ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮುಡಾದ ಶೇ.50:50 ಅನುಪಾತದ ನಿವೇಶನ ಸಮಸ್ಯೆ ಪರಿಹರಿಸದಿದ್ದರೆ

ಹಲವರ ಪ್ರಾಣ ಹಾನಿ ಖಚಿತ

ಸರ್ಕಾರಕ್ಕೆ ಎಂಎಲ್‌ಸಿ ಎ.ಹೆಚ್. ವಿಶ್ವನಾಥ್ ಎಚ್ಚರಿಕೆ



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಭಾನುವಾರ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಮೈಸೂರು, ಡಿ.1(ಬಿಎಲ್‌ಯು)– ಮುಡಾದಿಂದ ಮಂಜೂರಾಗಿರುವ ಶೇಕಡ 50:50 ಅನುಪಾತದ ನಿವೇಶನ ಖರೀದಿ ಮಾಡಿರುವವರು ಸಂಕಷ್ಟಕ್ಕೆ ಸಿಲುಕಿದ್ದು, ಕೂಡಲೇ ಇವರ ಸಮಸ್ಯೆ ಪರಿಹಾರ ಮಾಡದಿದ್ದರೆ ಬಹಳಷ್ಟು ಜನರ ಪ್ರಾಣ ಹಾನಿಯಾಗುತ್ತದೆ ಎಂದು ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಎಚ್ಚರಿಸಿದ್ದಾರೆ.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾದಿಂದ ಮಂಜೂರಾಗಿರುವ ಶೇಕಡ 50:50 ಅನುಪಾತದ ನಿವೇಶನ ಮಾರಾಟ ಮಾಡಿರುವವರು ಹಾಗೂ ಖರೀದಿಸಿರುವವರು ಇಬ್ಬರೂ ಈಗ ಅತಂತ್ರ ಸ್ಥಿತಿಗೆ ಸಿಲುಕಿದ್ದಾರೆ ಎಂದು ಹೇಳಿದರು.

ಮುಡಾದಲ್ಲಿ ಸಾವಿರಾರು ನಿವೇಶನ ನುಂಗಿದ್ದು, ಇವುಗಳ ಕಡತಗಳ ಕಳ್ಳತನವಾಗಿದೆ. ಈ ಹಿನ್ನೆಲೆ ಕಡತ ನಾಪತ್ತೆ ಬಗ್ಗೆ ಪೊಲೀಸರಿಗೆ ದೂರು ನೀಡುವಂತೆ ಮನವಿ ಮಾಡಿದ್ದೆ. ಆದರೆ ಮೊನ್ನೆ ನಡೆದ ಮುಡಾ ಸಭೆಯ ಸಂದರ್ಭದಲ್ಲಿ ಮುಡಾ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಅವರು ಕಾನೂನು ಸಲಹೆ ಪಡೆಯುತ್ತೇನೆ ಎಂದು ಹೇಳುತ್ತಾರೆ. ಸರ್ಕಾರದ ಪ್ರಮುಖ ದಾಖಲಾತಿ ನಾಪತ್ತೆಯಾದರೆ ಪೊಲೀಸರಿಗೆ ದೂರು ನೀಡಲು ಕಾನೂನು ಸಲಹೆ ಪಡೆಯುವ ಅವಶ್ಯವೇನಿದೆ? ಎಂದು ವಿಶ್ವನಾಥ್ ಪ್ರಶ್ನಿಸಿದರು.

ಮುಡಾದಲ್ಲಿ ಐಎಎಸ್ ಅಧಿಕಾರಿಯೊಬ್ಬ 150 ಕಡತ ಕೊಂಡೊಯ್ದಿದ್ದಾರೆ ಎಂದು ಲೋಕಾಯುಕ್ತ ತನಿಖೆಯ ಟಿಪ್ಪಣಿಯಲ್ಲಿ ಉಲ್ಲೇಖಿಸಲಾಗಿದೆ. ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಮೈಸೂರಿಗೆ ಬಂದು ನೂರಾರು ಕಡತ ಕೊಂಡೊಯ್ದಿದ್ದಾರೆ. ಇಷ್ಟಾದರೂ ದೂರು ನೀಡಿಲ್ಲವೇಕೆ ಎಂದು ಪ್ರಶ್ನಿಸಿದರು. ಪೊಲೀಸರಿಗೆ ದೂರು ನೀಡಲಿಲ್ಲ ವೆಂದರೆ ಪ್ರಕರಣ ಮುಕ್ತಾಯಗೊಳಿಸಲು ಕಾನೂನು ನಿಯಮ ಹೇಳುತ್ತದೆ. ಈ ಹಿನ್ನೆಲೆ ಪೊಲೀಸರಿಗೆ ದೂರು ನೀಡದಿರುವ ಒಂದೇ ಒಂದು ಅಂಶ ಮುಂದಿಟ್ಟು ಕೊಂಡು ಮುಡಾದ ಇಡೀ ಪ್ರಕರಣ ಮುಚ್ಚಿ ಹಾಕುವ ಹುನ್ನಾರ ನಡೆಸಿದ್ದಾರೆ ಎಂದು ಆರೋಪಿಸಿದರು.

ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನದ ಶ್ರೀ ಚಂದ್ರಶೇಖರ ಸ್ವಾಮೀಜಿ ನೀಡಿದ ಹೇಳಿಕೆಗೆ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ನಾನು ಬಾಯ್ತಪ್ಪಿನಿಂದ ಹೇಳಿದ್ದಾಗಿ ಸ್ವಾಮೀಜಿ ಹೇಳಿದ್ದರೂ ಕ್ರಮ ಕೈಗೊಳ್ಳುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳುತ್ತಾರೆ. ಮಾತಿನ ಭರದಲ್ಲಿ ಕಾಂಗ್ರೆಸ್

■6ನೇ ಪುಟಕ್ಕೆ

ಕಷ್ಟ ಬಂದಾಗ ಮಾತ್ರ ಸಿದ್ದರಾಮಯ್ಯಗೆ ಅಹಿಂದ ನೆನಪಿಗೆ ಬರುತ್ತದೆ


ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕಷ್ಟ ಬಂದಾಗ ಮಾತ್ರ ಅಹಿಂದ ನೆನಪಿಗೆ ಬರುತ್ತದೆ. ಆದ ಕಾರಣ ಈಗ ಹಾಸನದಲ್ಲಿ ಸ್ವಾಭಿಮಾನಿ ಸಮಾವೇಶ ನಡೆಸುತ್ತಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಗೇಲಿ ಮಾಡಿದರು.

ಎಐಸಿಸಿಯಲ್ಲಿ ತೀರ್ಮಾನವಾದಂತೆ 30 ತಿಂಗಳ ನಂತರ ಡಿ.ಕೆ.ಶಿವಕುಮಾರ್‌ಗೆ ಸಿದ್ದರಾಮಯ್ಯ ಅಧಿಕಾರ ಹಸ್ತಾಂತರ ಮಾಡಬೇಕು. ಈಗ ಅಧಿಕಾರ ಬಿಟ್ಟುಕೊಡಲು ಕ್ಯಾತೆ ತೆಗೆಯುತ್ತಿರುವ ಸಿದ್ದರಾಮಯ್ಯ ಎಐಸಿಸಿ ಹಾಗೂ ಡಿ.ಕೆ.ಶಿವಕುಮಾರ್ ಹೆದರಿಸಲು ಈ ಸಮಾವೇಶ ಆಯೋಜಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಕುರುಬ ಸಮುದಾಯ ಸೇರಿದಂತೆ ಅಹಿಂದದ ಯಾವುದೇ ವರ್ಗಕ್ಕೂ ಸಿದ್ದರಾಮಯ್ಯ ಯಾವ ಕಲ್ಯಾಣ ಕಾರ್ಯಕ್ರಮವನ್ನು ಜಾರಿಗೊಳಿಸಿಲ್ಲ. ತಮಗೆ ಸಂಕಷ್ಟ ಬಂದ ಸಂದರ್ಭದಲ್ಲಿ ಮಾತ್ರ ಅಹಿಂದ ಬಳಕೆ ಮಾಡಿಕೊಳ್ಳುತ್ತಾರೆ ಎಂದು ವಿಶ್ವನಾಥ್ ಆರೋಪಿಸಿದರು.

ತಾವು ಅಧಿಕಾರಕ್ಕೆ ಬಂದ ನಂತರ ಎಸ್‌ಟಿ ಹಣ, ಭೋವಿ ನಿಗಮದ ಹಣ ಸೇರಿದಂತೆ ಇತರೆ ಹಣ ಲೂಟಿ ಮಾಡಿದ್ದೇವೆ ಎಂದು ಸಮಾವೇಶದಲ್ಲಿ ಹೇಳುತ್ತಾರೆಯೇ, ಯಾವ ಸಂದೇಶ ನೀಡಲು ಈ ಸಮಾವೇಶ ಆಯೋಜಿಸಿದ್ದಾರೆ ಎಂದು ಪ್ರಶ್ನಿಸಿದರು.

ಮುಡಾ ಹಗರಣ ಸಂಬಂಧ ಯಾವುದೇ ತಪ್ಪು ಎಸಗಿಲ್ಲ ಎಂದು ಸಿದ್ದರಾಮಯ್ಯ ಸೇರಿದಂತೆ ಅವರ ಬೆಂಬಲಿಗರು ಸ್ಪಷ್ಟಪಡಿಸುತ್ತಾರೆ. ಹಾಗಾದರೆ ಹೈಕೋರ್ಟ್ ನೀಡಿರುವ ತೀರ್ಪಿನ ಮಹತ್ವವೇನು? ಇಡಿ ಮತ್ತು ಲೋಕಾಯುಕ್ತ ತನಿಖೆ ನಡೆಯುತ್ತಿರುವುದಾದರೂ ಏಕೆ, ಏನೂ ನಡೆದಿಲ್ಲವೆಂದರೆ ನ್ಯಾಯಾಲಯ ಹಾಗೂ ತನಿಖಾ ಸಂಸ್ಥೆಗಳಲ್ಲಿ ಇಷ್ಟೆಲ್ಲಾ ಪ್ರಕ್ರಿಯೆಗಳು ಏಕೆ ನಡೆಯುತ್ತವೆ ಎಂದು ವಿಶ್ವನಾಥ್ ಪ್ರಶ್ನಿಸಿದರು.



ಆಂಧ್ರಪ್ರದೇಶ ಸರ್ಕಾರದಿಂದ ವಕ್ಫ್ ಬೋರ್ಡ್ ವಿಸರ್ಜನೆ

ಚಂದ್ರಬಾಬು ನಾಯ್ಡು

ಅಮರಾವತಿ, ಡಿ.1– ದೇಶಾದ್ಯಂತ ವಕ್ಫ್ ಮಸೂದೆ ವಿಚಾರ ವ್ಯಾಪಕ ಸುದ್ದಿಗೆ ಗ್ರಾಸವಾಗಿರುವಂತೆಯೇ ಅತ್ತ ಆಂಧ್ರಪ್ರದೇಶದ ವಕ್ಫ್ ಮಂಡಳಿಯನ್ನು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ನೇತೃತ್ವದ ಸರ್ಕಾರ ವಿಸರ್ಜಿಸಿದೆ.

ಹಿಂದಿನ ಸಿಎಂ ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್‌ಸಿಪಿ ಸರ್ಕಾರ ರಚಿಸಿದ್ದ ರಾಜ್ಯ ವಕ್ಫ್ ಬೋರ್ಡ್ ದೀರ್ಘಕಾಲದವರೆಗೆ (ಮಾರ್ಚ್, 2023 ರಿಂದ) ಕಾರ್ಯನಿರ್ವಹಿಸುತ್ತಿಲ್ಲ ಎಂದು ರಾಜ್ಯ ಸರ್ಕಾರವು ಗಮನಿಸಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವ ಎನ್.ಎಂ.ಡಿ.ಫಾರೂಕ್ ತಿಳಿಸಿದ್ದಾರೆ.

ಹಿಂದಿನ ಸರ್ಕಾರದ ಅವಧಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹೊರಡಿಸಿದ್ದ ಜೆವಿ 47 ರದ್ದುಗೊಳಿಸಿ, ಹಾಲಿ ಸರ್ಕಾರ ಹೊಸ ಜೆವಿ–75 ಹೊರಡಿಸಿದೆ. ಕಳೆದ ವರ್ಷ ಅಕ್ಟೋಬರ್ 21 ರಂದು ಹಿಂದಿನ ಸರ್ಕಾರವು ಮಂಡಳಿಯ ಸದಸ್ಯರ ನಾಮನಿರ್ದೇಶನವನ್ನು ಪ್ರಶ್ನಿಸಿ ಸಲ್ಲಿಸಿದ ಅರ್ಜಿಯ ನಂತರ ವಕ್ಫ್ ಮಂಡಳಿಯ ಅಧ್ಯಕ್ಷರ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ ಹೈಕೋರ್ಟ್ ಮಧ್ಯಂತರ ಆದೇಶಗಳನ್ನು ನೀಡಿದೆ ಎಂದು ಅವರು ಸ್ಪಷ್ಟಪಡಿಸಿದರು.

ಹಿಂದಿನ ಸರ್ಕಾರದ ಕ್ರಮಗಳಿಂದಾಗಿ ವಕ್ಫ್ ಬೋರ್ಡ್ ಎದುರಿಸಿದ ಕಾನೂನು ಮತ್ತು ಆಡಳಿತಾತ್ಮಕ ಸವಾಲುಗಳನ್ನು ಪ್ರಸ್ತಾಪಿಸಿದರು. ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ನೇತೃತ್ವದ ಪ್ರಸ್ತುತ ಸಮ್ಮಿಶ್ರ ಸರ್ಕಾರವು ಈ ಸಮಸ್ಯೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ ಎಂದರು.

ರಾಜ್ಯದಲ್ಲಿ ವಕ್ಫ್ ಬೋರ್ಡ್ ಆಸ್ತಿಗಳ ರಕ್ಷಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರ ಹೇಳಿದೆ. ಸದ್ಯದಲ್ಲೇ ನೂತನ ವಕ್ಫ್ ಬೋರ್ಡ್ ನೇಮಕಕ್ಕೆ ಕಸರತ್ತು ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಜಗನ್ ಸರ್ಕಾರವು ವಕ್ಫ್ ಬೋರ್ಡ್ ಅನ್ನು ಸ್ಥಾಪಿಸುವಾಗ ಜೆವಿ 47 ಅನ್ನು ಹೊರಡಿಸಿತು . ಆದರೆ, ಆಸ್ತಿಯಲ್ಲಿ ಅವ್ಯವಹಾರ ನಡೆದಿರುವುದನ್ನು ಕಂಡು ವಕ್ಫ್ ಮಂಡಳಿ ಬಿಲ್ ರದ್ದುಗೊಳಿಸಿತ್ತು.

ಸಮುದಾಯದ ಉಳಿವಿಗಾಗಿ ಕನಿಷ್ಠ 3 ಮಕ್ಕಳನ್ನಾದರೂ ಹೆರಬೇಕು



ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್

ನಾಗ್ಪುರ(ಮಹಾರಾಷ್ಟ್ರ), ಡಿ.1– ಸಮುದಾಯದ ಉಳಿವಿಗಾಗಿ ಕನಿಷ್ಠ 3 ಮಕ್ಕಳನ್ನಾದರೂ ಹೆರಬೇಕು ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಭಾನುವಾರ ನಾಗ್ಪುರದಲ್ಲಿ ನಡೆದ 'ಕಥಲೆ ಕುಲ್ ಸಮ್ಮೇಳನ'ದಲ್ಲಿ ಮಾತನಾಡಿದ ಅವರು, ಭಾರತದಲ್ಲಿ ಜನಸಂಖ್ಯಾ ಬೆಳವಣಿಗೆ ದರದ ಕುಸಿತವು ಸಮಾಜಕ್ಕೆ ಒಳ್ಳೆಯದಲ್ಲ. ಜನಸಂಖ್ಯೆ ಕಡಿಮೆಯಾಗುತ್ತಿರುವುದು ಕಳವಳಕಾರಿ ವಿಷಯವಾಗಿದೆ. ಲೋಕಸಂಖ್ಯಾ ಶಾಸ್ತ್ರದ ಪ್ರಕಾರ ಯಾವುದೇ ಸಮಾಜದ ಜನಸಂಖ್ಯಾ ಬೆಳವಣಿಗೆ ದರವು 2.1ಕ್ಕಿಂತ ಕಡಿಮೆಯಾದರೆ ಅಂಥ ಸಮಾಜ ತಾನಾಗಿಯೇ ನಾಶವಾಗುತ್ತದೆ. ಅದನ್ನು ಬೇರೆ ಯಾರೋ ನಾಶಪಡಿಸುವ ಅಗತ್ಯವೇ ಇಲ್ಲ ಎಂದು ಭಾಗವತ್ ಹೇಳಿದರು.

1998 ಅಥವಾ 2002ರ ಸುಮಾರಿಗೆ ರೂಪಿಸಲಾದ ಭಾರತದ ಜನಸಂಖ್ಯಾ ನೀತಿಯು ಜನಸಂಖ್ಯಾ ಬೆಳವಣಿಗೆಯ ದರವು 2.1ಕ್ಕಿಂತ ಕಡಿಮೆ ಇರಬಾರದು ಎಂದು ಹೇಳುತ್ತದೆ. ನಮಗೆ ಎರಡಕ್ಕಿಂತ ಹೆಚ್ಚು ಮಕ್ಕಳು ಬೇಕು. ಅಂದರೆ ಮೂರು (ಜನಸಂಖ್ಯಾ ಬೆಳವಣಿಗೆಯ ದರವಾಗಿ) ಮಕ್ಕಳನ್ನು ಹೆರಬೇಕು. ಜನಸಂಖ್ಯಾ ವಿಜ್ಞಾನ ಕೂಡ ಇದನ್ನೇ ಹೇಳುತ್ತದೆ ಸಮಾಜ ಉಳಿಯಬೇಕಾದರೆ ಈ ಪ್ರಮಾಣದ ಜನಸಂಖ್ಯಾ ಬೆಳವಣಿಗೆ ದರ ಅಗತ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು. ಜನಸಂಖ್ಯೆ ಕುರಿತಾಗಿ ಆರ್‌ಎಸ್‌ಎಸ್ ಮುಖ್ಯಸ್ಥರ ಈ ಹೇಳಿಕೆಗಳನ್ನು ಬಹಳ ಮುಖ್ಯವೆಂದು ಪರಿಗಣಿಸಲಾಗಿದೆ. ಒಂದು ವರದಿಯ ಪ್ರಕಾರ, ಹಿಂದೂಗಳ ಜನಸಂಖ್ಯೆಯು ಶೇಕಡಾ 7.8ರಷ್ಟು ಕಡಿಮೆಯಾಗಿದೆ. ಅದೇ ಸಮಯದಲ್ಲಿ ನೆರೆಯ ದೇಶಗಳ ಜನಸಂಖ್ಯೆ ಹೆಚ್ಚಾಗುತ್ತಿದೆ. ಒಂದು ವರದಿಯ ಪ್ರಕಾರ, ಭಾರತದಲ್ಲಿ ಜನಸಂಖ್ಯಾ ಫಲವತ್ತತೆ ದರವು ನಿರಂತರವಾಗಿ ಕುಸಿಯುತ್ತಿದೆ. ಸ್ವಾತಂತ್ರ್ಯದ ನಂತರ 1950ರಲ್ಲಿ ಭಾರತದಲ್ಲಿ ಜನಸಂಖ್ಯಾ ಬೆಳವಣಿಗೆಯ ದರವು 6.2ರಷ್ಟಿತ್ತು. ಆದರೆ ಈಗ ಅದು 2.1ಕ್ಕೆ ಇಳಿದಿದೆ. ಇದು ಹೀಗೆಯೇ ಮುಂದುವರಿದರೆ, 2050ರ ವೇಳೆಗೆ ಭಾರತದ ಜನಸಂಖ್ಯಾ ಬೆಳವಣಿಗೆಯ ದರ 1.3ಕ್ಕೆ ಕುಸಿಯಲಿದೆ. ಇಂತಹ ಪರಿಸ್ಥಿತಿಯಲ್ಲಿ ಮೋಹನ್ ಭಾಗವತ್ ಅವರ ಹೇಳಿಕೆ ಬಹಳ ಮುಖ್ಯವಾಗುತ್ತದೆ.

ನಿಖಿಲ್ ಕುಮಾರಸ್ವಾಮಿ ಭವಿಷ್ಯದ ನಾಯಕ, ಅವರನ್ನು ಪಕ್ಷಕ್ಕೆ ಒಪ್ಪಿಸಿದ್ದೇನೆ

ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ



ಬಿಡದಿಯಲ್ಲಿರುವ ಫಾರಂಹೌಸ್‌ನಲ್ಲಿ ನಡೆದ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿದರು.

ರಾಮನಗರ, ಡಿ.1– ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಭವಿಷ್ಯದ ನಾಯಕರಾಗಲಿದ್ದು, ಅವರನ್ನು ಪಕ್ಷಕ್ಕೆ ಒಪ್ಪಿಸುತ್ತಿದ್ದೇನೆ. ಮಾರ್ಗದರ್ಶನ ನೀಡುವ ಜವಾಬ್ದಾರಿ ನಿಮಗಿದೆ ಎಂದು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಬಿಡದಿಯ ತಮ್ಮ ನಿವಾಸದಲ್ಲಿ ಭಾನುವಾರ ಜೆಡಿಎಸ್ ಪಕ್ಷದ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಸಚಿವರು ಮತ್ತು ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನಿಖಿಲ್ ನನ್ನ ಮಗನಾಗಿರುವುದರಿಂದ ನಾನು ಮಾತನಾಡುತ್ತಿಲ್ಲ. ಅವರಿಗಿರುವ ಗುಣದ ಬಗ್ಗೆ ಮಾತಾಡುತ್ತೇನೆ. ನಾನು ಅವರನ್ನು ಪಕ್ಷಕ್ಕೆ ಒಪ್ಪಿಸುತ್ತಿದ್ದೇನೆ. ಅವರಿಗೆ ಮಾರ್ಗದರ್ಶನ ಮಾಡುವ ಜವಾಬ್ದಾರಿ ನಿಮಗೆ ಇದೆ ಎಂದು ಹೇಳಿದರು.

ಪಕ್ಷ ಬಲವರ್ಧನೆ ಮತ್ತು ಸಂಘಟನೆಯ ದೃಷ್ಟಿಯಿಂದ ರಾಜ್ಯಾದ್ಯಂತ ಮತ್ತೆ ಸದಸ್ಯತ್ವ ನೊಂದಣಿ ಪುನಾರಂಭವಾಗಬೇಕು ಎಂದು ಸೂಚನೆ ನೀಡಿದರು. ಪ್ರತಿ ಬೂತ್‌ಗಳಲ್ಲಿ ಸದಸ್ಯತ್ವ ನೋಂದಣಿ ಚಾಲನೆ ಆಗಬೇಕು. ಉಪಚುನಾವಣೆ ಫಲಿತಾಂಶಗಳು ಪಕ್ಷದ ಭವಿಷ್ಯವನ್ನು ತೀರ್ಮಾನಿಸುವುದಿಲ್ಲ ಎಂದು ಸಚಿವರು ತಿಳಿಸಿದರು.

ಸಾಮಾನ್ಯ ಚುನಾವಣೆಯ ಚಿತ್ರಣವೇ ಬೇರೆ, ಸ್ವತಃ ಕಾಂಗ್ರೆಸ್ ಪಕ್ಷದ ಶಾಸಕರೇ ಅಭಿವೃದ್ಧಿಗೆ ಹಣವಿಲ್ಲ ಎಂದು ಸ್ಪಷ್ಟವಾಗಿ ಹೇಳುತ್ತಿದ್ದಾರೆ. ಈ ಸರ್ಕಾರವನ್ನು ಕೆಡವಲು ನಾವು ಬಿಜೆಪಿಯೊಂದಿಗೆ

■6ನೇ ಪುಟಕ್ಕೆ

ಜೈಲಿನಲ್ಲಿ ನಮ್ಮ ಹತ್ಯೆಗೆ ಸಂಚು ರೂಪಿಸಲಾಗಿದೆ

ಜಾಮೀನು ಅರ್ಜಿಯಲ್ಲಿ ವಾಲ್ಮೀಕಿ ಹಗರಣ ಪ್ರಕರಣದ ಪ್ರಮುಖ ಆರೋಪಿ ಜಿ.ಸತ್ಯನಾರಾಯಣ ವರ್ಮಾ ಆತಂಕ

ಬೆಂಗಳೂರು, ಡಿ.1– ಜೈಲಿನಲ್ಲಿ ನಮ್ಮ ಹತ್ಯೆಗೆ ಸಂಚು ರೂಪಿಸಲಾಗುತ್ತಿದೆ ಎಂದು ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಹಗರಣ ಪ್ರಕರಣದ ಪ್ರಮುಖ ಆರೋಪಿಯಾಗಿರುವ ಜಿ.ಸತ್ಯನಾರಾಯಣ ವರ್ಮಾ ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಜಾಮೀನು ಅರ್ಜಿಯ ವಿಚಾರಣೆ ವೇಳೆ ವರ್ಮಾ ಅವರು ತಮ್ಮ ವಕೀಲರ ಮೂಲಕ ಈ ಹೇಳಿಕೆ ನೀಡಿದ್ದಾರೆ. ಪ್ರಕರಣದಲ್ಲಿ ನನ್ನನ್ನು ಬಲಿಪಶು ಮಾಡಲಾಗಿದೆ. ನಾನು ನಿರಪರಾಧಿ. ನಿಜವಾದ ಅಪರಾಧಿಗಳು ನನಗೆ ಜೀವ ಬೆದರಿಕೆಗಳನ್ನೊಡ್ಡಿದ್ದಾರೆ. 2024ರ ಜೂನ್ 28ರಂದು ತಮ್ಮ ದೂರಿನ ಹೊರತಾಗಿಯೂ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಮನವಿ ಮಾಡಿದರೂ ಆಡಳಿತಾರೂಢ ಸರ್ಕಾರದ ಪ್ರಭಾವದಿಂದಾಗಿ ನಿಜವಾದ ತಪ್ಪಿತಸ್ಥರ ವಿರುದ್ಧ ತನಿಖೆ ಸಂಸ್ಥೆಗಳು ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದ್ದಾರೆ.

ಸತ್ಯನಾರಾಯಣ ವರ್ಮಾ ಅವರು ಜೂನ್ 13, 2024ರಿಂದ ನ್ಯಾಯಾಂಗ ಬಂಧನದಲ್ಲಿದ್ದಾರೆ. ವರ್ಮಾ ಸೇರಿದಂತೆ 12 ಆರೋಪಿಗಳ ವಿರುದ್ಧ ಸಿಐಡಿ ಆರಂಭಿಕ ಆರೋಪ ಪಟ್ಟಿ ಸಲ್ಲಿಸಿದೆ. ಅಲ್ಲದೆ, ಪ್ರಕರಣದ ಪರಿಣಾಮಕಾರಿ ತನಿಖೆಗಾಗಿ ಆರೋಪಿಗಳಿಗೆ ಜಾಮೀನು ನೀಡದಂತೆ ಮನವಿ ಮಾಡಿಕೊಂಡಿದೆ. ವರ್ಮಾ ಇತರ ಆರೋಪಿಗಳೊಂದಿಗೆ

■6ನೇ ಪುಟಕ್ಕೆ

ಡಿ.5ರಂದು ಕಾಂಗ್ರೆಸ್ ನೇತೃತ್ವದಲ್ಲೇ ಹಾಸನದಲ್ಲಿ ಸಮಾವೇಶ

ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿಕೆಶಿ ಸ್ಪಷ್ಟನೆ



ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿದರು.

ಬೆಂಗಳೂರು, ಡಿ.1– ಕಾಂಗ್ರೆಸ್ ಪಕ್ಷದ ನೇತೃತ್ವದಲ್ಲೇ ಡಿ.5ರಂದು ಹಾಸನದಲ್ಲಿ ಸಮಾವೇಶ ನಡೆಯಲಿದೆ. ಈ ಕಾರ್ಯಕ್ರಮದ ಸಂಪೂರ್ಣ ಜವಾಬ್ದಾರಿಯನ್ನು ನನ್ನ ನೇತೃತ್ವದಲ್ಲಿಯೇ ಕಾಂಗ್ರೆಸ್ ಪಕ್ಷ ವಹಿಸಿಕೊಳ್ಳಲಿದೆ ಎಂದು ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸಮಾವೇಶದ ಪೂರ್ವಭಾವಿ ಸಭೆ ನಡೆಸಿದ ಬಳಿಕ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ಅನೇಕ ಮುಖಂಡರು ಹಾಸನದಲ್ಲಿ ಸಮಾವೇಶ ಮಾಡಲು ತಿಳಿಸಿದ್ದಾರೆ. ನಮ್ಮ ಪಕ್ಷದ ವತಿಯಿಂದ ಸಚಿವರುಗಳು, ಜಿಲ್ಲಾ ಮಂತ್ರಿಗಳು ಸಮಾವೇಶದ ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಈ ಸಮಾವೇಶಕ್ಕೆ ಅನೇಕ ಸಂಘಟನೆಗಳು, ಸಮುದಾಯಗಳು ಬೆಂಬಲ ಸೂಚಿಸಿವೆ. ಇವರ ಬೆಂಬಲವನ್ನು ನಾವು ಸ್ವೀಕರಿಸುತ್ತೇವೆ ಎಂದಿದ್ದಾರೆ.

ನಾನು ನಾಲ್ಕು ದಿನಗಳ ಕಾಲ ದೆಹಲಿ ಪ್ರವಾಸದಲ್ಲಿದ್ದೆ. ಅಲ್ಲದೇ ಮುಖ್ಯಮಂತ್ರಿಗಳು ಸಹ ದೆಹಲಿ ಪ್ರವಾಸದಲ್ಲಿದ್ದರು. ದೇಶದಲ್ಲಾಗುತ್ತಿರುವ ವಿದ್ಯಮಾನ ಹಾಗೂ ಸಂವಿಧಾನ ರಕ್ಷಣೆಗೆ ಕಾರ್ಯಕ್ರಮ ರೂಪಿಸಲು ಎಐಸಿಸಿ ನಾಯಕರು ಮಾರ್ಗದರ್ಶನ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಹಾಸನದಲ್ಲಿ ಸಮಾವೇಶ ಮಾಡುತ್ತಿದ್ದೇವೆ. ನಾಲ್ಕು ಜಿಲ್ಲೆಗಳ ನಾಯಕರು ಹಾಗೂ ಪದಾಧಿಕಾರಿಗಳ ಜೊತೆ ಇದರ ಪೂರ್ವಭಾವಿ ಸಭೆಯನ್ನು ಇಂದು (ಭಾನುವಾರ) ಕೆಪಿಸಿಸಿ ಕಚೇರಿಯಲ್ಲಿ ನಡೆಸಲಾಗಿದೆ. ಸಮಾವೇಶಕ್ಕೆ ಪಕ್ಷದ ಎಲ್ಲಾ

■6ನೇ ಪುಟಕ್ಕೆ

ಹಾಸನದಲ್ಲಿ ಭೀಕರ ಅಪಘಾತ

ಪ್ರೊಬೆಷನರಿ ಐಪಿಎಸ್ ಅಧಿಕಾರಿ ದುರ್ಮರಣ



ಹಾಸನ, ಡಿ.1– ಟಯರ್ ಸ್ಫೋಟಗೊಂಡ ಪರಿಣಾಮ ಪೊಲೀಸ್ ಜೀಪ್ ಪಲ್ಟಿಯಾಗಿ ಪ್ರೊಬೆಷನರಿ ಐಪಿಎಸ್ ಅಧಿಕಾರಿಯೊಬ್ಬರು ಸಾವಿಗೀಡಾದ ಘಟನೆ ಹಾಸನದಲ್ಲಿ ನಡೆದಿದೆ.

ಮೃತ ಅಧಿಕಾರಿಯನ್ನು ಮಧ್ಯಪ್ರದೇಶ ಮೂಲದ ಹರ್ಷಬರ್ದನ್ ಎಂದು ಗುರುತಿಸಲಾಗಿದೆ. ಮೈಸೂರಿನ ಕೆಪಿಎನಿಂದ ಹಾಸನ ಜಿಲ್ಲಾ ಎಸ್ಪಿ ಕಚೇರಿಯಲ್ಲಿ ವರದಿ ಮಾಡಿಕೊಳ್ಳಲು ಬರುತ್ತಿದ್ದ ವೇಳೆ ಕಿತ್ತಾನೆ ಗಡಿ ಭಾಗದಲ್ಲಿ ಈ ಅಪಘಾತ ಸಂಭವಿಸಿದೆ. ಹರ್ಷಬರ್ದನ್ ಅವರು ಹಾಸನ ಜಿಲ್ಲೆಗೆ ನಿಯೋಜನೆಗೊಂಡಿದ್ದರು. ಇಂದು (ಭಾನುವಾರ) ಸಂಜೆ ವರದಿ ಮಾಡಿಕೊಳ್ಳಲು ಹೊಳೆನರಸೀಪುರ ಕಡೆಯಿಂದ ಜೀಪ್‌ನಲ್ಲಿ ಹಾಸನ ನಗರಕ್ಕೆ ಬರುತ್ತಿದ್ದರು. ಇನ್ನೇನು ಕೆಲವೇ ನಿಮಿಷಗಳಲ್ಲಿ

■6ನೇ ಪುಟಕ್ಕೆ

ಜೆಡಿಎಸ್ ಕಟ್ಟಿದವರು ನಾವು, ಆಗ ಕುಮಾರಸ್ವಾಮಿ ಇರಲಿಲ್ಲ

ಈಗ ಆ ಪಕ್ಷದಲ್ಲಿ ಜಾತ್ಯಾತೀತತೆ ಎಲ್ಲಿದೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ



ಕೆಂಗಲ್ ಹನುಮಂತಯ್ಯನವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿ, ನಮಿಸಿದರು.

ಬೆಂಗಳೂರು, ಡಿ.1– ಜೆಡಿಎಸ್ ಪಕ್ಷವನ್ನು ಕಟ್ಟಿದವರು ನಾವು. ಪಕ್ಷ ರಚನೆಗೊಂಡಾಗ ಕುಮಾರಸ್ವಾಮಿ ಇರಲಿಲ್ಲ. ನಾನು, ದೇವೇಗೌಡ, ಇಬ್ರಾಹಿಂ, ಸತೀಶ್ ಜಾರಕಿಹೊಳಿ, ಮಹದೇವಪ್ಪ, ವೆಂಕಟೇಶ್, ಲಕ್ಷ್ಮೀಸಾಗರ್ ಸೇರಿ ಪಕ್ಷ ಕಟ್ಟಿದ್ದು. ದೇವೇಗೌಡರು ರಾಷ್ಟ್ರೀಯ ಅಧ್ಯಕ್ಷರಾದರು, ನಾನು ರಾಜ್ಯಾಧ್ಯಕ್ಷನಾದೆ ಎಂದು ವಿವರಿಸಿದರು.

ಭಾನುವಾರ ಕೆಂಗಲ್ ಹನುಮಂತಯ್ಯ ಅವರ ಪುಣ್ಯಸ್ಮರಣೆಯ ಪ್ರಯುಕ್ತ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ವಿರುದ್ಧ ಹರಿಹಾಯ್ದರು. ಜೆಡಿಎಸ್ ಅನ್ನು ನಾನು ಬಿಟ್ಟಿಲ್ಲ. ನನ್ನನ್ನು ದೇವೇಗೌಡರು ಉಚ್ಚಾಟಿಸಿದರು. ನಂತರ ನಾನು ಬೇರೆ ದಾರಿ ಇಲ್ಲದೆ ಅಹಿಂದ ಸಮಾವೇಶ ನಡೆಸಿದೆ. ಹಾಸನದಲ್ಲಿಯೂ ಸಮಾವೇಶ ಮಾಡಿದ್ದೆ ಎಂದರು.

ಜಾತ್ಯಾತೀತ ನೆಲೆಗಟ್ಟಿನಲ್ಲಿ ಕಟ್ಟಲಾದ ಜೆಡಿಎಸ್ ಈಗ ಜಾತ್ಯಾತೀತವಾಗಿ ಉಳಿದಿದೆಯೇ? ಎಂದು ಪ್ರಶ್ನಿಸಿದ ಅವರು, ಕೋಮುವಾದಿಗಳ ಜೊತೆಗೆ ಸೇರಿದ ಮೇಲೆ ಯಾವ ಜಾತ್ಯಾತೀತತೆ ಅಲ್ಲಿ ಉಳಿಯಲಿದೆ. ಸಂವಿಧಾನದಲ್ಲಿ ಜಾತ್ಯಾತೀತ, ಸಮಾಜವಾದಿ ಎಂದು ಸೇರ್ಪಡೆಯಾಗಿದೆ. ಸುಪ್ರೀಂಕೋರ್ಟ್ ನ್ಯಾಯಾಲಯವೂ ಕೂಡ ಸಂವಿಧಾನದಲ್ಲಿ ಜಾತ್ಯಾತೀತ ಇರಲೇಬೇಕೆಂದು ಹೇಳಿದೆ. ಜೆಡಿಎಸ್ ನವರಿಗೆ ಪಕ್ಷ ಯಾವ ಹಿನ್ನೆಲೆಯಲ್ಲಿ ಕಟ್ಟಲಾಗಿದೆ ಎಂದು ಗೊತ್ತಿಲ್ಲ ಎಂದರು.

■6ನೇ ಪುಟಕ್ಕೆ

ಮುಸ್ಲಿಮರಿಗೆ ಮತದಾನ ಹಕ್ಕು ರದ್ದು ಮಾಡಬೇಕು ಎಂದು ಹೇಳಿಕೆ ನೀಡಿರುವ ವಿಶ್ವ ಒಕ್ಕಲಿಗರ ಸಂಸ್ಥಾನ ಮಠದ ಚಂದ್ರಶೇಖರ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಚಂದ್ರಶೇಖರ ಸ್ವಾಮೀಜಿ ಅವರ ಪ್ರಕರಣದಲ್ಲಿ ಪೊಲೀಸರು ಕಾನೂನಿನ ದೃಷ್ಟಿಯಲ್ಲಿ ಏನು ಮಾಡಬೇಕೋ ಅದನ್ನು ಮಾಡುತ್ತಾರೆ. ಕಾನೂನಿನ ಚೌಕಟ್ಟಿನೊಳಗೆ ಬಂದರೆ ಕ್ರಮ ತೆಗೆದುಕೊಳ್ಳಲಾಗುತ್ತದೆ. ಇಲ್ಲವಾದರೆ ಇಲ್ಲ ಎಂದರು.

ಶಿಬಿರದಲ್ಲಿ 40ಕ್ಕೂ ಹೆಚ್ಚು ಮಂದಿ ರಕ್ತದಾನ



ಮೈಸೂರಿನ ಕುವೆಂಪುನಗರದಲ್ಲಿರುವ ಕಾವೇರಿ ವಿದ್ಯಾಸಂಸ್ಥೆಯ ಆವರಣದಲ್ಲಿ ಆಯೋಜಿಸಿದ್ದ ಬೃಹತ್ ರಕ್ತದಾನ ಶಿಬಿರಕ್ಕೆ ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಚಾಲನೆ ನೀಡಿದರು. ಲೆಫ್ಟಿನೆಂಟ್ ಸಿಡಿಆರ್ ಸರ್ಜನ್, ಪುಷ್ಪ ಗಾಯಕ್‌ವಾಡ್, ಸಮಾಜ ಸೇವಕ ಶ್ರೀನಿವಾಸ್, ನಿವೃತ್ತ ಮೇಜರ್ ಜನರಲ್ ಎಸ್.ಎಸ್.ರಾಜನ್, ನೇವಲ್ ವೆಟರನ್ ಅಸೋಸಿಯೇಷನ್ ಅಧ್ಯಕ್ಷ ಗಜಾನನ ಟಿ.ಭಟ್, ಉಪಾಧ್ಯಕ್ಷ ಉತ್ತಪ್ಪ, ನವೀನ್, ಚಂದ್ರಕುಮಾರ್, ಸಂಜಯ್ ಪ್ರಭು ಚಿತ್ರದಲ್ಲಿದ್ದಾರೆ.

ಮೈಸೂರು, ಡಿ.1(ಜಿಎ)– ಮೈಸೂರಿನ ಕಾವೇರಿ ವಿದ್ಯಾ ಸಂಸ್ಥೆಯ ಆವರಣದಲ್ಲಿ ನೇವಲ್ ವೆಟರನ್ ಅಸೋಸಿಯೇಷನ್, ಕರ್ನಾಟಕ ಲಯನ್ಸ್ ಜೀವಧಾರ ರಕ್ತನಿಧಿ ಹಾಗೂ ರೋಟರಿ ಕ್ಲಬ್ ಆಫ್ ಮೈಸೂರು ಶ್ರೀಗಂಧ ಸಹಯೋಗದಲ್ಲಿ ಆಯೋಜಿಸಿದ್ದ ಬೃಹತ್ ರಕ್ತದಾನ ಶಿಬಿರಕ್ಕೆ ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ರಕ್ತದಾನ ಒಂದು ಜೀವದಾನ. ಜೀವ ಉಳಿಯಬೇಕಾದರೆ ರಕ್ತವನ್ನು ದಾನ ಮಾಡಿ ರೋಗಿಯನ್ನು ಕಾಪಾಡಬೇಕು. ಆರೋಗ್ಯವನ್ನು ಕಾಪಾಡಿಕೊಳ್ಳಬೇಕಾದರೆ ಪ್ರತಿಯೊಬ್ಬರೂ ರಕ್ತದಾನವನ್ನು ಮರೆಯದೇ, ಹೆದರದೇ ಮಾಡಬೇಕಾಗಿರುವುದು ನಮ್ಮೆಲ್ಲರ ಕರ್ತವ್ಯ. 18 ವರ್ಷ ಮೇಲ್ಪಟ್ಟ ವ್ಯಕ್ತಿಗಳು ರಕ್ತದಾನ ಮಾಡುವುದು ಒಳ್ಳೆಯದು. ಅದರಿಂದ ಆರೋಗ್ಯವೂ ಕೂಡ ವೃದ್ಧಿಸುತ್ತದೆ. ಎಲ್ಲಾ ದಾನಗಳಿಗಿಂತ ರಕ್ತದಾನ ಬಹಳ ಶ್ರೇಷ್ಠ. ಅದನ್ನು ಅರಿತು ನಾವೆಲ್ಲರೂ ವರ್ಷಕ್ಕೆ ಒಮ್ಮೆಯಾದರೂ ರಕ್ತದಾನವನ್ನು ಮಾಡಿ ಅನೇಕ ರೋಗಿಗಳನ್ನು ಉಳಿಸಿದರೆ ಬದುಕು ಸಾರ್ಥಕ ಎಂದು ತಿಳಿಸಿದರು.

ಸುಮಾರು 40ಕ್ಕೂ ಹೆಚ್ಚು ಎನ್‌ಸಿಸಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ರಕ್ತದಾನ ಮಾಡಿದರು. ಈ ವೇಳೆ ಲೆಫ್ಟಿನೆಂಟ್ ಸಿಡಿಆರ್ ಸರ್ಜನ್, ಪುಷ್ಪ ಗಾಯಕ್‌ವಾಡ್, ಸಮಾಜ ಸೇವಕ ಶ್ರೀನಿವಾಸ್, ನಿವೃತ್ತ ಮೇಜರ್ ಜನರಲ್ ಎಸ್.ಎಸ್. ರಾಜನ್, ನೇವಲ್ ವೆಟರನ್ ಅಸೋಸಿಯೇಷನ್ ಅಧ್ಯಕ್ಷ ಗಜಾನನ ಟಿ.ಭಟ್, ಜೀವಧಾರ ರಕ್ತನಿಧಿ ಕೇಂದ್ರದ ಗಿರಿಧರ್, ಉಪಾಧ್ಯಕ್ಷ ಉತ್ತಪ್ಪ ನವೀನ್, ಚಂದ್ರಕುಮಾರ್, ಸಂಜಯ್ ಪ್ರಭು ಉಪಸ್ಥಿತರಿದ್ದರು.

ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯ ವಾರ್ಷಿಕ ಕ್ರೀಡಾಕೂಟ



ಮೈಸೂರಿನ ಓವಲ್ ಮೈದಾನದಲ್ಲಿ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯ ವತಿಯಿಂದ ಆಯೋಜಿಸಿದ್ದ ವಾರ್ಷಿಕ ಕ್ರೀಡಾಕೂಟಕ್ಕೆ ಎನ್‌ಸಿಸಿಯ ನಿವೃತ್ತ ಗ್ರೂಪ್ ಕ್ಯಾಪ್ಟನ್ ಎ.ಚತುರ್ವೇದಿ ಚಾಲನೆ ನೀಡಿದರು.

ಮೈಸೂರು, ಡಿ.1(ಜಿಎ)–ಮೈಸೂರಿನ ಓವಲ್ ಮೈದಾನದಲ್ಲಿ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಶಾಲೆಯ ವತಿಯಿಂದ ಭಾನುವಾರ ಆಯೋಜಿಸಿದ್ದ ವಾರ್ಷಿಕ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿ, ಕ್ರೀಡಾ ಸ್ಫೂರ್ತಿ ಮೆರೆದರು.

ಎನ್‌ಸಿಸಿಯ ನಿವೃತ್ತ ಗ್ರೂಪ್ ಕ್ಯಾಪ್ಟನ್ ಎ.ಚತುರ್ವೇದಿ ಹಾಗೂ ದೈಹಿಕ ಶಿಕ್ಷಣ ಇಲಾಖೆ ನಿರ್ದೇಶಕ ಡಾ.ಸಿ.ವೆಂಕಟೇಶ್ ಕ್ರೀಡಾಜ್ಯೋತಿಯನ್ನು ಬೆಳಗಿಸಿ, ಬಲೂನ್‌ಗಳನ್ನು ಆಕಾಶಕ್ಕೆ ಹಾರಿಸುವ ಮೂಲಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ನಂತರ ಕ್ಯಾಪ್ಟನ್ ಎ.ಚತುರ್ವೇದಿ ಮಾತನಾಡಿ, ವಿದ್ಯಾರ್ಥಿಗಳ ಕ್ರೀಡಾ ಮನೋಭಾವವನ್ನು ಶ್ಲಾಘಿಸಿ, ಕ್ರೀಡೆಗಳ ಮಹತ್ವವನ್ನು ತಿಳಿಸಿದರು.

ದೈಹಿಕ ಶಿಕ್ಷಣ ಇಲಾಖೆ ನಿರ್ದೇಶಕ ಡಾ.ಸಿ.ವೆಂಕಟೇಶ್ ಮಾತನಾಡಿ, ಮಕ್ಕಳಿಗೆ ಕ್ರೀಡೆಗಳು ಅಗತ್ಯ. ಕ್ರೀಡೆಗಳು ನಮ್ಮನ್ನು ಆರೋಗ್ಯಕರವಾಗಿ ಮತ್ತು ಫಿಟ್ ಆಗಿ ಇರಿಸುತ್ತದೆ. ಇದು ಮನೋರಂಜನೆ ಮತ್ತು ದೈಹಿಕ ಚಟುವಟಿಕೆಯ ಅಂಶವಾಗಿದ್ದು, ಆದಷ್ಟು ಕ್ರೀಡಾ ಚಟುವಟಿಕೆಯಲ್ಲಿ ಭಾಗವಹಿಸಿ ದೈಹಿಕ ಮತ್ತು ಮಾನಸಿಕ ಒತ್ತಡದಿಂದ ಹೊರಬನ್ನಿ ಎಂದು ಸಲಹೆ ನೀಡಿದರು.

ಕ್ರೀಡಾ ಜ್ಯೋತಿಯನ್ನು ಹಿಡಿದ ವಿದ್ಯಾರ್ಥಿಗಳು ಮೈದಾನದಲ್ಲಿ ಒಂದು ಸುತ್ತು ಹಾಕಿದರು. ಅವರೊಟ್ಟಿಗೆ ಬುಲೆಟ್ ಬೈಕ್‌ಗಳು ಸಾಗುವ ಮೂಲಕ ಎಲ್ಲರ ಗಮನ ಸೆಳೆಯಿತು. ಆಕರ್ಷಕ ಬಣ್ಣಗಳ ಚಿತ್ತಾರಗಳು ಜೊತೆಗೆ ನೃತ್ಯಗಳು ಮತ್ತು ಕರಾಟೆ ಪ್ರದರ್ಶನವು ಕಾರ್ಯಕ್ರಮದ ಮುಖ್ಯ ಆಕರ್ಷಣೆಯಾಗಿತ್ತು. ಕ್ರೀಡಾಕೂಟದಲ್ಲಿ ಸುಮಾರು 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು. 100 ಮೀಟರ್ ಓಟದ ಸ್ಪರ್ಧೆ ಎಲ್ಲರ ಮನಸೂರೆಗೊಂಡಿತು. ಪೋಷಕರಿಗೂ ಹಲವಾರು ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಅವರು ಸಹ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡು ಬಹುಮಾನವನ್ನು ತಮ್ಮದಾಗಿಸಿಕೊಂಡರು. ಈ ವೇಳೆ ಶಾಲೆ ಅಧ್ಯಕ್ಷ ರಘು ಆರ್.ಕೌಟಿಲ್ಯ, ಪ್ರಾಂಶುಪಾಲೆ ಶಾಂತಿನಿ ಜೆರಾಲ್ಡ್, ಅಕ್ಷಯ್, ಭಾವನ ಇನ್ನಿತರರು ಉಪಸ್ಥಿತರಿದ್ದರು.

ಡಿ.7ಕ್ಕೆ ಡಾ.ರಾಜ್ ಕಪ್ ಕ್ರಿಕೆಟ್ ಫೈನಲ್




ಮೈಸೂರು, ಡಿ.1(ಜಿಎ)–ಡಾ.ರಾಜ್ ಕಪ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಹಾಗೂ ಬಹುಮಾನ ವಿತರಣಾ ಸಮಾರಂಭವನ್ನು ಡಿ.7ರಂದು ನಗರದ ಗಂಗೋತ್ರಿ ಗ್ಲೇಡ್ಸ್ ಮೈದಾನದಲ್ಲಿ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಆಯೋಜಕ ರಾಜೇಶ್ ಬ್ರಹ್ಮಾವರ್ ಈ ವಿಷಯ ತಿಳಿಸಿ, ಡಾ.ರಾಜ್ ಕಪ್ ಕ್ರಿಕೆಟ್ ಪಂದ್ಯಾವಳಿಯ 32 ಪಂದ್ಯಗಳು ದುಬೈನಲ್ಲಿ ನಡೆದಿದ್ದು, ಈ ಪಂದ್ಯಾವಳಿಯಲ್ಲಿ ಕಲಾವಿದರು, ತಂತ್ರಜ್ಞರು, ಚಿತ್ರೋದ್ಯಮ ಕಾರ್ಮಿಕರು ಮೊದಲಾದವರು ಪಾಲ್ಗೊಂಡಿದ್ದರು. ಈಗ ಫೈನಲ್ ಪಂದ್ಯ ಮತ್ತು ಬಹುಮಾನ ವಿತರಣಾ ಸಮಾರಂಭ ಮೈಸೂರಲ್ಲಿ ನಡೆಯಬೇಕೆಂದು ಈ ಬಾರಿ ಇಲ್ಲಿ ಆಯೋಜಿಸಲಾಗಿದೆ. ಅಶ್ವಿನಿ ಪುನೀತ್ ರಾಜ್‌ಕುಮಾರ್ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದರು. ಅಂದು ಬೆಳಗ್ಗೆ 8 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಹತ್ತು ಓವರ್‌ಗಳ ಫೈನಲ್ ಪಂದ್ಯ ನಡೆಯಲಿದೆ.

ಈ ವೇಳೆ ಚಿತ್ರರಂಗದ ಬಹುತೇಕ ಎಲ್ಲ ಖ್ಯಾತ ತಾರೆಯರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ನಟರಾದ ಅನಿರುದ್ಧ್, ಧರ್ಮ, ನಿರ್ದೇಶಕ ಸಿಂಪಲ್ ಸುನಿ, ಶಿವರಾಜ್ ಕೆ.ಆರ್.ಪೇಟೆ ಉಪಸ್ಥಿತರಿದ್ದರು.

ಬೀರಿಹುಂಡಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಮಾದೇಗೌಡ ಅವಿರೋಧ ಆಯ್ಕೆ



ಬೀರಿಹುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಕೆ.ಮರೀಗೌಡರು ಸನ್ಮಾನಿಸಿದರು.

ಮೈಸೂರು, ಡಿ.1–ಬೀರಿಹುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮಾದೇಗೌಡ (ಗುಡ್ಡಪ್ಪ), ಉಪಾಧ್ಯಕ್ಷರಾಗಿ ಬಿ.ಪಿ.ಮಲ್ಲೇಶ್ ಅವಿರೋಧವಾಗಿ ಆಯ್ಕೆಯಾದರು.

ಅಧ್ಯಕ್ಷ ಮಾದೇಗೌಡ ಮಾತನಾಡಿ, ಜಿ.ಪಂ. ಮಾಜಿ ಅಧ್ಯಕ್ಷರಾದ ಕೆ.ಮರೀಗೌಡರು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಹಕಾರದಿಂದ ನಮ್ಮ ಗ್ರಾಮಕ್ಕೆ ಐಟಿಐ ಕಾಲೇಜು, ಆಸ್ಪತ್ರೆ, ಪಶು ಆಸ್ಪತ್ರೆ, ಹಾಲಿನ ಡೈರಿ, ಬಿಸಿಎಂ ಹಾಸ್ಟೆಲ್, ಹೈಸ್ಕೂಲ್, ನ್ಯಾಯಬೆಲೆ ಅಂಗಡಿ ಮಾಡಿಕೊಟ್ಟು ಗ್ರಾಮದ ಜನರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಈಗ ಕೃಷಿ ಪತ್ತಿನ ಸಹಕಾರ ಸಂಘ ಮಾಡಿ ರೈತರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಅವರಿಗೆ ಧನ್ಯವಾದ ಅರ್ಪಿಸುತ್ತಿದ್ದೇನೆ ಎಂದರು.

ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಅಭಿನಂದಿಸಿ, ಮಾತನಾಡಿದ ಕೆ.ಮರೀಗೌಡರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಹಕಾರಿ ಸಚಿವ ಕೆ.ಎನ್.ರಾಜಣ್ಣ ಅವರ ಸಹಕಾರದಿಂದ ರೈತರ ಅನುಕೂಲಕ್ಕಾಗಿ ಸಂಘವನ್ನು ಮಾಡಿದ್ದೇವೆ. ಈ ಸಂಘಕ್ಕೆ ಬೀರಿಹುಂಡಿ, ಗೋಹಳ್ಳಿ, ಬಲ್ಲಹಳ್ಳಿ, ಕುಮಾರಬೀಡು ಗ್ರಾಮಗಳು ಸೇರಿ 200 ಮಂದಿ ಸದಸ್ಯರಿದ್ದಾರೆ. 5 ವರ್ಷಗಳ ಅವಧಿಗೆ ನೂತನ ಆಡಳಿತ ಮಂಡಳಿ ಕಾರ್ಯನಿರ್ವಹಿಸುತ್ತದೆ. 12 ಜನ ನಿರ್ದೇಶಕರು ಒಗ್ಗಟ್ಟಿನಿಂದ ಕೆಲಸ ಮಾಡಿ ಸರ್ಕಾರದಿಂದ ದೊರೆಯುವ ಸಾಲ ಸೌಲಭ್ಯಗಳನ್ನು ರೈತರಿಗೆ ತಲುಪಿಸಿ, ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಎಂದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಬೀರಿಹುಂಡಿ ಬಸವಣ್ಣ, ಕರೀಗೌಡ, ಕೆಂಪೇಗೌಡ, ಬಸವರಾಜು, ಜವವರ, ವಿಜಯ, ಮಮತ, ಅಶ್ವಿನಿ, ಪುಟ್ಟಸ್ವಾಮಿ ಉಪಸ್ಥಿತರಿದ್ದರು. ಚುನಾವಣಾಧಿಕಾರಿಯಾಗಿ ಸುಮ ಹೆಚ್.ಎನ್. ಕಾರ್ಯನಿರ್ವಹಿಸಿದರು.

ಇಂದಿನಿಂದ ಮಹಿಳಾ ನಾಟಕೋತ್ಸವ

ಮೈಸೂರು, ಡಿ.1(ಜಿಎ)–ಸಂಚಲನ ಮೈಸೂರು ರಂಗ ಸಂಸ್ಥೆ ವತಿಯಿಂದ ಡಿ.2ರಿಂದ 5ರವರೆಗೆ ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಮಹಿಳಾ ನಾಟಕೋತ್ಸವ ಆಯೋಜಿಸಲಾಗಿದೆ ಎಂದು ಸಂಚಲನ ಮೈಸೂರು ರಂಗ ಸಂಸ್ಥೆ ಮುಖ್ಯಸ್ಥ ದೀಪಕ್ ಮೈಸೂರು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.2ರಂದು ಸಂಜೆ 6 ಗಂಟೆಗೆ ಸ್ತ್ರೀ ಆಧಾರಿತ ವರ್ಣಚಿತ್ರಗಳ ಪ್ರದರ್ಶನವನ್ನು ಬಿ.ಎನ್.ಶಶಿಕಲಾ ಉದ್ಘಾಟಿಸುವರು. ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ.ನಾಗರಾಜಮೂರ್ತಿ, ಜಿಪಂ ಸಿಇಒ ಕೆ.ಎಂ. ಗಾಯತ್ರಿ, ಕನ್ನಡ–ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಹಿರಿಯ ರಂಗಕರ್ಮಿ ಇಂದಿರಾನಾಯರ್ ಅವರಿಗೆ ರಂಗ ಗೌರವ ಸಲ್ಲಿಸಲಾಗುವುದು. ಸಂಜೆ 6.30ಕ್ಕೆ ಚಾಮರಾಜನಗರದ ಶಾಂತಲಾ ಕಲಾವಿದರಿಂದ ಏಕವ್ಯಕ್ತಿ ಪ್ರಯೋಗವಾದ 'ಮೈ ತೆನ್ನು ಫಿರ್ ಮಿಲಾಂಗಿ' ನಾಟಕ ಪ್ರದರ್ಶನವಿದೆ ಎಂದು ತಿಳಿಸಿದರು.

ಡಿ.3ರಂದು ಸಂಜೆ 6 ಗಂಟೆಗೆ ಶಶಿ ಥಿಯೇಟರ್‌ನಿಂದ 'ಉರಿಯ ಉಯ್ಯಾಲೆ' ನಾಟಕ ಪ್ರದರ್ಶನವಿದ್ದು, ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಅಧ್ಯಕ್ಷ ರಾಜೇಶ್ ತಲಕಾಡು, ರಂಗ ಸಮಾಜ ಸುರೇಶ್‌ಬಾಬು, ಹೆಚ್.ಡಿ.ಕೋಟೆ ವೈದ್ಯಾಧಿಕಾರಿ ಡಾ.ಪೂರ್ಣಿಮಾ, ನಾಟಕ ಅಕಾಡೆಮಿ ಸದಸ್ಯ ಡಾ.ಎಂ.ಜಾಹಿದಾ ಉಪಸ್ಥಿತರಿರುವರು. ಈ ವೇಳೆ ಶಶಿಕಲಾ ಅವರಿಗೆ ರಂಗ ಗೌರವ ಸಲ್ಲಿಸಲಾಗುವುದು. ಡಿ.4ರಂದು ಸಂಜೆ 6 ಗಂಟೆಗೆ ಶಶಿ ಥಿಯೇಟರ್‌ನಿಂದ ಏಕವ್ಯಕ್ತಿ ರಂಗ ಪ್ರಯೋಗವಾದ 'ಕಸ್ತೂರ ಬಾ' ಪ್ರದರ್ಶನವಿದೆ. ವೃತ್ತಿ ರಂಗಭೂಮಿ ಕಲಾವಿದೆ ಸರಸ್ವತಿ ಜುಲೇಖಾ ಬೇಗಂ ಅವರಿಗೆ ರಂಗ ಗೌರವವಿದೆ. ಡಿ.5ರಂದು ಸಂಜೆ 6ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ನಾಟಕ ಲೇಖಕ ಪ್ರಸನ್ನಕುಮಾರ್ ಕೆರಗೋಡು, ಕನ್ನಡ–ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್, ಸಮಾಜ ಸೇವಕ ಸೈಯದ್ ಅಲ್ಲಾಹ್ ಬಕಾಶ್ ಆಗಮಿಸಲಿದ್ದಾರೆ. ಈ ವೇಳೆ ಡಾ.ಭುವನೇಶ್ವರಿ, ವಿದುಷಿ ಡಾ.ಶಾಂಭವಿಸ್ವಾಮಿ ಅವರಿಗೆ ರಂಗ ಗೌರವ ಸಲ್ಲಿಸಲಾಗುತ್ತಿದ್ದು, ನಂತರ ರಂಗ ಬಂಡಿ ಮಳವಳ್ಳಿ ತಂಡದಿಂದ 'ಮಧುರ ಮಂಡೋದರಿ' ನಾಟಕ ಪ್ರದರ್ಶನವಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ರಾಧಾ ನಾರಾಯಣ್, ರಾಮು, ಸುಬ್ರಹ್ಮಣ್ಯ, ವಿದುಷಿ ಶಾಂಭವಿ ಸ್ವಾಮಿ ಉಪಸ್ಥಿತರಿದ್ದರು.

ಯೋಗಾಚಾರ್ಯ ಶರತ್ ಜೋಯಿಸ್ ಅವರಿಗೆ ಶ್ರದ್ಧಾಂಜಲಿ



ಇತ್ತೀಚೆಗೆ ನಿಧನರಾದ ಯೋಗಾಚಾರ್ಯ ಶರತ್ ಜೋಯಿಸ್ ಅವರಿಗೆ ವಿವಿಧ ಯೋಗ ಒಕ್ಕೂಟದ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಮೈಸೂರು,ಡಿ.1(ಎಸ್‌ಪಿಎನ್)–ಸ್ವಾಮಿ ವಿವೇಕಾನಂದ, ಶಂಕರಾಚಾರ್ಯರು, ಬಸವಣ್ಣ ಹಾಗೂ ರಾಮಾನುಜಾಚಾರ್ಯ ಸೇರಿದಂತೆ ಇತರೆ ದಾರ್ಶನಿಕರು ಅತೀ ಕಡಿಮೆ ವಯಸ್ಸಿನಲ್ಲೆ ಎತ್ತರ ಸಾಧನೆ ಮಾಡಿದ್ದಾರೆ. ಅದರಂತೆ ಯೋಗಕ್ಷೇತ್ರದಲ್ಲಿ ಶರತ್ ಜೋಯಿಸ್ ಅವರು ಎತ್ತರ ಸಾಧನೆ ಮಾಡಿದ್ದಾರೆ ಎಂದು ಹಿರಿಯ ಸಾಹಿತಿ ಡಾ.ಲೀಲಾಪ್ರಕಾಶ್ ಅಭಿಪ್ರಾಯಪಟ್ಟರು.


ಮೈಸೂರಿನ ಜಿಲ್ಲಾ ಕಸಾಪ ಭವನದಲ್ಲಿ ಆಯೋಜಿಸಿದ್ದ ಹಿಮಾಲಯ ಪ್ರತಿಷ್ಠಾನ, ಜಿಲ್ಲಾ ಕಸಾಪ ಹಾಗೂ ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟ ಸಹಯೋಗದೊಂದಿಗೆ ಇತ್ತೀಚೆಗೆ ನಿಧನರಾದ ಯೋಗಾಚಾರ್ಯ ಶರತ್ ಜೋಯಿಸ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದರು.

ಮೈಸೂರಿನ ಯೋಗ ಪರಂಪರೆಯಲ್ಲಿ ತಿರುಮಲೆ ಕೃಷ್ಣಮಾಚಾರ್ಯ ಅವರ ಅಷ್ಟಾಂಗ ವಿನ್ಯಾಸ ಯೋಗಕ್ರಮವನ್ನು ಪಟ್ಟಾಭಿ ಜೋಯಿಸ್ ನಂತರ ಶರತ್ ಜೋಯಿಸ್ ಮುನ್ನಡೆಸಿಕೊಂಡು ಬಂದರಾದರೂ ಅವರ ಅಕಾಲಿಕ ಮರಣ ಯೋಗ ಕ್ಷೇತ್ರಕ್ಕೆ ತುಂಬಲಾರದ ನಷ್ಟವನ್ನುಂಟು ಮಾಡಿದೆ ಎಂದು ಶ್ರದ್ಧಾಂಜಲಿ ಅರ್ಪಿಸಿದರು.

ಮೈಸೂರು ಯೋಗ ಒಕ್ಕೂಟದ ಅಧ್ಯಕ್ಷ ಕೆ.ಜಿ.ದೇವರಾಜ್ ಮಾತನಾಡಿ, ಅಷ್ಟಾಂಗ ಯೋಗವನ್ನು ಮೈಸೂರಿಂದ ವಿಶ್ವಕ್ಕೆ ಪರಿಚಯಿಸಿದ ಕೀರ್ತಿ ಜೋಯಿಸ್ ಅವರಿಗೆ ಸಲ್ಲುತ್ತದೆ. ಈ ಪರಂಪರೆಯಲ್ಲಿ ನಡೆದು ಯಶಸ್ಸು ಕಂಡು ವಿಶ್ವಗುರುವಾಗಿ ಹೊರಹೊಮ್ಮಿದವರು ಶರತ್ ಜೋಯಿಸ್ ಎಂದರು.

ಮೈಸೂರು ಯೋಗ ಅಸೋಸಿಯೇಷನ್ ಅಧ್ಯಕ್ಷ ಯೋಗ ಪ್ರಕಾಶ್, ವಿಪ್ರಮುಖಂಡ ಕೆ.ರಘುರಾಂ ವಾಜಪೇಯಿ, ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ, ಮೈಸೂರು ಯೋಗ ಒಕ್ಕೂಟದ ಉಪಾಧ್ಯಕ್ಷ ಟಿ.ಜಲೇಂದ್ರಕುಮಾರ್, ಕಾರ್ಯಾಧ್ಯಕ್ಷ ಬಿ.ಪಿ.ಮೂರ್ತಿ, ಕಾರ್ಯದರ್ಶಿ ಯೋಗಕುಮಾರ್, ಯೋಗಗುರುಗಳಾದ ಜಿ.ವೆಂಕಟೇಶ್, ಎಂ.ಪಿ.ರಮೇಶ್‌ಬಾಬು, ಸಂಪತ್‌ಕುಮಾರ್, ಯೋಗಾಚಾರ್ಯ ಎಸ್‌ವಿ ವೆಂಕಟೇಶಯ್ಯ, ವ್ಯಂಗ್ಯಚಿತ್ರಕಾರ ಎಂ.ವಿ.ನಾಗೇಂದ್ರಬಾಬು, ಹರ್ಷವರ್ಧನ ಮುಂತಾದವರು ಉಪಸ್ಥಿತರಿದ್ದರು.

ಬ್ರಾಂಡೆಡ್ ಗಾರ್ಮೆಂಟ್ಸ್, ಶೂಗಳ ಮಾರಾಟ ಮೇಳ




ಮೈಸೂರು, ಡಿ.1(ಜಿಎ)–ಮೈಸೂರಿನ ಕುವೆಂಪುನಗರದಲ್ಲಿರುವ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ಡಿ.2ರಂದು ಬೆಳಗ್ಗೆ 10.30ರಿಂದ 9.30ರವರೆಗೆ ಬ್ರಾಂಡೆಡ್ ಗಾರ್ಮೆಂಟ್ಸ್ ಮತ್ತು ಶೂಗಳ ಮಾರಾಟ ಮೇಳ ಆಯೋಜಿಸಲಾಗಿದೆ.

ಬ್ರಾಂಡೆಡ್ ರೆಡಿಮೇಡ್ ಗಾರ್ಮೆಂಟ್ಸ್ ಮತ್ತು ಫುಟ್‌ವೇರ್‌ಗಳ ಮಾರಾಟವನ್ನು ಹಮ್ಮಿಕೊಂಡಿದ್ದು, ವಿಶೇಷವಾಗಿ ರಿಯಾಯಿತಿ ಮತ್ತು ಕೊಡುಗೆಗಳು ಲಭ್ಯವಿದ್ದು, ಲಕ್ಷದಷ್ಟು ವಿವಿಧ ಬಗೆಯ ಬ್ರಾಂಡೆಡ್ ಸಿದ್ಧ ಉಡುಪುಗಳು, ಸೀರೆಗಳು ಮತ್ತು ಶೂಗಳ ಬೃಹತ್ ಮಾರಾಟ ನಡೆಯುತ್ತಿದೆ.

ಬ್ರಾಂಡೆಡ್ ಫುಟ್‌ವೇರ್ ಪುರುಷರ ಮತ್ತು ಮಹಿಳೆಯರ ಸ್ಪೋರ್ಟ್ಸ್ ಶೂಸ್, ಪುರುಷರ ಬ್ರಾಂಡೆಡ್ ಶರ್ಟ್ಸ್, ಪ್ಯಾಂಟ್ಸ್, ಟೀ–ಶರ್ಟ್ಸ್, ಜಾಕೆಟ್ಸ್, ಟ್ರಾಕ್ ಪ್ಯಾಂಟ್, ಲೋವರ್ ಶರ್ಟ್ಸ್‌ಗಳು ಲಭ್ಯವಿರುತ್ತದೆ. ಮಹಿಳೆಯರ ಬ್ರಾಂಡೆಡ್ ಕುರ್ತಿಗಳು, ಲೇಡಿಸ್ ಟಾಪ್ಸ್, ಜಾಕೆಟ್ಸ್, ಸ್ವೆಟರ್ಸ್, ಟ್ರ್ಯಾಕ್ ಪ್ಯಾಂಟ್ಸ್, ಟೀ ಶರ್ಟ್ಸ್, ಟೈಟ್ಸ್, ಪಾಲ್ಲಜೋ, ಲೆಗ್ಗಿನ್ಸ್ ಸಹಿತ ಅನೇಕ ಬ್ರಾಂಡೆಡ್ ಉತ್ಪನ್ನಗಳು ಆಫರ್ ದರದಲ್ಲಿ ಲಭ್ಯವಿದೆ. ಬ್ರಾಂಡೆಡ್ ಪೂಮಾ, ನೈಕ್, ವುಡ್‌ಲ್ಯಾಂಡ್, ಅಡಿದಾಸ್, ಸ್ಕೆಚಸ, ಅಂತ, ಯುಎಸ್ ಪೋಲೋ, ಎಸಿಕ್ಸ್, ಕೆಟಿಯ, ನ್ಯೂ ಬ್ಯಾಲೆನ್ಸ್, ಕ್ಯಾಂಪಸ್, ವಿವಿಧ ಕಂಪನಿಗಳ ಬ್ರಾಂಡೆಡ್ ಶೂಗಳು, ಸ್ಯಾಂಡಲ್ಸ್ ಭಾರಿ ರಿಯಾಯಿತಿ ದರದಲ್ಲಿ ಮಾರಾಟವಾಗುತ್ತಿದೆ. ಈ ಅವಕಾಶ ಡಿ.2ರಂದು ಮಾತ್ರ ಬೆಳಗ್ಗೆ 10.30ರಿಂದ ರಾತ್ರಿ 9.30 ರವರೆಗೆ ಪ್ರದರ್ಶನ ಹಾಗೂ ಮಾರಾಟ ಸೌಲಭ್ಯವಿದೆ. ಗ್ರಾಹಕರ ಅನುಕೂಲತೆಗಾಗಿ ಡೆಬಿಟ್ ಹಾಗೂ ಕ್ರೆಡಿಟ್ ಕಾರ್ಡ್‌ಗಳನ್ನು ಸ್ವೀಕರಿಸಲಾಗುತ್ತದೆ. ಮೈಸೂರಿಗರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

02.12.2024 ಸೋಮವಾರ, ಮಳೆ ನಕ್ಷತ್ರ: ಅನೂರಾಧ, 19.11.2024ರಿಂದ 01.12.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಕಾರ್ತಿಕ ಮಾಸ, ಕೃಷ್ಣ ಪಕ್ಷ, ತಿಥಿ: ಪಾಡ್ಯ, ನಕ್ಷತ್ರ: ಜ್ಯೇಷ್ಠ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆನ್ನು ನೋವಿನ ಕಾರಣಗಳು, ಲಕ್ಷಣಗಳು ಮತ್ತು ಚಿಕಿತ್ಸೆ ಬಗ್ಗೆ ತಜ್ಞ ವೈದ್ಯರಿಂದ ಸಲಹೆ ಹಾಗೂ ಯೋಗದಿಂದ ರೋಗ ತಡೆಯುವ ಕುರಿತು ಯೋಗಾಭ್ಯಾಸ ತರಗತಿ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9ರಿಂದ.

■ **ಲಾ ಗೈಡ್ ಬಳಗ, ಮೈಸೂರು :** ಲಾ ಗೈಡ್ 2025 ಕ್ಯಾಲೆಂಡರ್ ಹಾಗೂ ಡೈರಿ ಬಿಡುಗಡೆ ಕಾರ್ಯಕ್ರಮ, ಅಧ್ಯಕ್ಷತೆ: ಕರ್ನಾಟಕ ಮುಖ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ, ಡೈರಿ ಬಿಡುಗಡೆ: ಮಾಜಿ ಸಚಿವ ಎ.ಮಂಜು, ಕ್ಯಾಲೆಂಡರ್ ಬಿಡುಗಡೆ: ಹಿರಿಯ ಪತ್ರಕರ್ತ ಕೃಷ್ಣಪ್ರಸಾದ್, ಮುಖ್ಯ ಅತಿಥಿಗಳು: ಮಾಜಿ ಉಪಸಭಾಪತಿ ಮರಿತಿಬ್ಬೇಗೌಡ, ಮೈಸೂರು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಹಿರಿಯ ವಕೀಲ ಎಂ.ಡಿ.ಹರೀಶ್‌ಕುಮಾರ್ ಹೆಗಡೆ, ಲಾಗೈಡ್ ಕನ್ನಡ ಕಾನೂನು ಮಾಸ ಪತ್ರಿಕೆ ಗೌರವ ಸಂಪಾದಕ ಹೆಚ್.ಎನ್.ವೆಂಕಟೇಶ್, ಸನ್ಮಾನಿತರು: ಮೈಸೂರು ನಗರ ಪೊಲೀಸ್ ಆಯುಕ್ತರಾದ ಶ್ರೀಮತಿ ಸೀಮಾ ಲಾಟ್ಕರ್, ಅಪರ ಜಿಲ್ಲಾಧಿಕಾರಿ ಶಿವರಾಜ್, ಸ್ಥಳ: ಮೆಟ್ರೋಪೋಲ್ ಹೋಟೆಲ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ (ಶ್ರೀ ಸುತ್ತೂರು ಕ್ಷೇತ್ರ, ಮೈಸೂರು ಜಿಲ್ಲೆ):** ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳ ಕರ್ತೃ ಗದ್ದುಗೆ, ಶ್ರೀ ಮಹದೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ ಮತ್ತು ಶ್ರೀ ಸೋಮೇಶ್ವರ ದೇವಸ್ಥಾನಗಳು, ಕಾರ್ತಿಕ ಮಾಸದ ವಿಶೇಷ ಪೂಜಾ ಕಾರ್ಯಕ್ರಮ, ಸ್ಥಳ: ಮಠದ ಆವರಣ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರಿಸರ್ಚ್ ಡಿವಿಷನ್ ಆಫ್ ಕಾಸ್ಮೆಟಿಕ್ ಸೈನ್ಸ್, ಸ್ಕೂಲ್ ಆಫ್ ಲೈಫ್ ಸೈನ್ಸಸ್, ಮೈಸೂರು:** ಕಾಸ್ಮೆಟಿಕ್ ಸೈನ್ಸ್ ಕನರ್ವೆನ್ಸಜೆನ್ಸ್–2024 ಕಾರ್ಯಕ್ರಮ, ಸಾನ್ನಿಧ್ಯ: ಸುತ್ತೂರು ಶ್ರೀಗಳು, ಸ್ಥಳ: ಶ್ರೀ ರಾಜೇಂದ್ರ ಆಡಿಟೋರಿಯಂ, ಜೆಎಸ್‌ಎಸ್ ಕಾಲೇಜ್ ಆಫ್ ಫಾರ್ಮಸ್ಸಿ, ಬೆಳಗ್ಗೆ 10 ಗಂಟೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ದೀಪ ಎಜುಕೇಷನ್ ಅಂಡ್ ಸರ್ವಿಸ್ ಟ್ರಸ್ಟ್, ದೀಪ ಸಂಯುಕ್ತ ಪಿಯು ಕಾಲೇಜು :** ಅಂತರ ಸ್ಕೂಲ್ ಸ್ಪರ್ಧೆಗಳು, ಸ್ಥಳ: ವಿವೇಕಾನಂದ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಮೈಸೂರು :** ಮಹಿಳೆ ಮತ್ತು ಕಾನೂನು–ಚಿಂತನೆ ಮತ್ತು ಸಂವಾದ, ದಿವ್ಯ ಸಾನ್ನಿಧ್ಯ: ಶ್ರೀ ಸುತ್ತೂರು ಶ್ರೀಗಳು, ಉದ್ಘಾಟನೆ: ನಿವೃತ್ತ ನ್ಯಾಯಮೂರ್ತಿ ಎಸ್.ಆರ್.ಬನ್ನೂರ ಮಠ, ಸ್ಥಳ: ಜೆಎಸ್‌ಎಸ್ ಲಾ ಕಾಲೇಜು, ಸಿಲ್ವರ್ ಜ್ಯುಬಿಲಿ ಸಭಾಂಗಣ, ಕುವೆಂಪುನಗರ, ಬೆಳಗ್ಗೆ 10.30ಕ್ಕೆ.

■ **ಪರಿವರ್ತನಂ ಟ್ರಸ್ಟ್, ಮೈಸೂರು:** ಪುಟ್ಟಣ್ಣ ನೆನಪಿನ ಅಂಗಳ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಸಮಾಜ ಸೇವಕ ಡಾ.ಕೆ.ರಘುರಾಂ ವಾಜಪೇಯಿ, ಮೈಸೂರು ನಗರ, ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಮಾಜಿ ಕಾರ್ಪೊರೇಟರ್ ಮಾ.ವಿ.ರಾಮಪ್ರಸಾದ್, ಸ್ಥಳ: ಟ್ರಸ್ಟ್ ಕಚೇರಿ ಆವರಣ, ಚಾಮರಾಜಪುರಂ, ಬೆಳಗ್ಗೆ 11 ಗಂಟೆಗೆ.

■ **ಹಿರಿಯ ನಾಗರಿಕರ ಮಂಡಲಿ:** ಮಾಸಿಕ ಉಪನ್ಯಾಸ, ನಿವೃತ್ತ ಉಪನಿರ್ದೇಶಕ ಸ್ವಾಮಿ ಅವರಿಂದ ಶಿಕ್ಷಣ ಹಾಗೂ ವಿದ್ಯಾಭ್ಯಾಸದಿಂದ ಆರೋಗ್ಯಕರ ಮತ್ತು ಉತ್ತಮ ಜೀವನ ನಡೆಸುವ ಬಗ್ಗೆ ಉಪನ್ಯಾಸ, ಅಧ್ಯಕ್ಷತೆ: ಹಿರಿಯ ನಾಗರಿಕರ ಮಂಡಳಿ ಅಧ್ಯಕ್ಷ ಡಾ.ಹೆಚ್.ಎಂ.ನಾಗರಾಜು, ಸ್ಥಳ: ಸರಸ್ವತಿ ಸಮುದಾಯ ಭವನ, ಹಿರಿಯ ನಾಗರಿಕರ ಮಂಡಳಿ, ಜಯಲಕ್ಷ್ಮೀಪುರಂ, ಸಂಜೆ 5 ಗಂಟೆಗೆ.

■ **ಸಂಚಲನ ಮೈಸೂರು:** ಮಹಿಳಾ ನಾಟಕೋತ್ಸವ–2024–25, ಉದ್ಘಾಟನೆ: ಸಂಜೆ 6 ಗಂಟೆಗೆ ಸ್ತ್ರೀ ಆಧಾರಿತ ವರ್ಣಚಿತ್ರ ಪ್ರದರ್ಶನ, ಉದ್ಘಾಟನೆ: ರಂಗಾಯಣದ ಶಶಿಕಲಾ ಬಿ.ಎನ್., ಸಂಜೆ 6.30ಕ್ಕೆ ಶಾಂತಲಾ ಕಲಾವಿದರಿಂದ 'ವೈಪೆನ್ನು ಫರ್ ಮಿಲಾಂಗಿ ಏಕವ್ಯಕ್ತ ಪ್ರಯೋಗ ನಾಟಕ, ಸ್ಥಳ: ಕಿರುರಂಗಮಂದಿರ, ಕಲಾಮಂದಿರ, ಆವರಣ.

■ **ಜೆಎಸ್‌ಎಸ್ ಸಂಗೀತ ಸಭಾ ಟ್ರಸ್ಟ್ :** ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾ ಸ್ವಾಮಿಗಳ ಸಂಸ್ಮರಣ, 21ನೇ ಸಂಗೀತ ಸಮ್ಮೇಳನ–2024, ದಿವ್ಯ ಸಾನ್ನಿಧ್ಯ: ಸುತ್ತೂರು ಶ್ರೀಗಳು, ಕೇಂದ್ರ ಸಂಗೀತ ನಾಟಕ ಅಕಾಡೆಮಿಯ 'ಅಕಾಡೆಮಿ ರತ್ನ' ಫೆಲೋಶಿಪ್ ಪುರಸ್ಕೃತರು ಮತ್ತು ಸಮ್ಮೇಳನಾಧ್ಯಕ್ಷರಾದ ವೈಣಿಕ ವಿದ್ವಾನ್ ಡಾ.ರಾ.ವಿಶ್ವೇಶ್ವರನ್, ಉದ್ಘಾಟನೆ: ಇಸ್ರೋ ಮಾಜಿ ಅಧ್ಯಕ್ಷ ಡಾ.ಎಎಸ್.ಕಿರಣ್‌ಕುಮಾರ್, ಮುಖ್ಯ ಅತಿಥಿಗಳು: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, 'ಸಂಗೀತ ಸೇವಾ ನಿಧಿ' ಪ್ರಶಸ್ತಿ ಪ್ರದಾನ: ಪಿ.ನಿತ್ಯಾನಂದರಾವ್ (ಕಲಾ ಪೋಷಕರು), ಅಧ್ಯಕ್ಷತೆ: ಕೇನ್ಸ್ ಟೆಕ್ನಾಲಜಿ ವ್ಯವಸ್ಥಾಪಕ ನಿರ್ದೇಶಕ ರಮೇಶ್ ಕಣ್ಣನ್, ಸಂಗೀತ ಕಾರ್ಯಕ್ರಮ: ವಿದ್ವಾನ್ ಡಾ.ರಾ.ವಿಶ್ವೇಶ್ವರನ್–ವೀಣೆ, ವಿದ್ವಾನ್ ಕೆ.ವಿ.ಪ್ರಸಾದ್–ಮೃದಂಗ, ವಿದ್ವಾನ್ ಜಿ.ಎಸ್.ರಾಮಾನುಜನ್–ಘಟಂ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಸಂಜೆ 5.30ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ–ಡಾ.ಲಕ್ಷ್ಮೀ ನಾರಾಯಣ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: ಅಂಚೆ–ಅಂಕನ–ಆಕಾಶವಾಣಿ ಅಂಕಣ, ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎನ್.ವಿಜಯಲಕ್ಷ್ಮೀ, ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಹಂಸಿನಿ. ಎಸ್.ಕುಮಾರ್, ಎನ್.ಹೇಮಾ, ವ್ಯಾಖ್ಯಾನ–ಡಾ.ಹೆಚ್.ಎಂ.ಕಲಾಶ್ರೀ, 6.50–ರೈತರಿಗೆ ಸಲಹೆ, 7.15–"ಭರವಸೆ ಹೊನಲು –ವೈದ್ಯರ ಕಿವಿಮಾತು"–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು–ಟ್ರಸ್ಟ್‌ವೆಲ್ ಆಸ್ಪತ್ರೆ, ಜೆ.ಸಿ.ರಸ್ತೆ, ಬೆಂಗಳೂರು, 8.30–ಕನ್ನಡ ಚಿತ್ರಗೀತೆಗಳು, 9.00–ನೆನಪಿನಂಗಳ (ಧ್ವನಿ ಭಂಡಾರದಿಂದ): ಹಿರಿಯ ಮೃದಂಗ ಕಲಾವಿದರಾದ ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಎಂ.ಎನ್.ಜೋಯಿಸ್ ಅವರೊಂದಿಗೆ ಆರ್.ಕೆ.ದಿವಾಕರ ಅವರು ನಡೆಸಿದ್ದ ಸಂವಾದ. 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಅಮೃತಾ ವೆಂಕಟೇಶ್, ವೀಣಾ ವಾದನ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್‌ಇನ್ ಕಾರ್ಯಕ್ರಮ, ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್ ಬಿ. ಮತ್ತು ಕೀರ್ತನಾ. ವಿ, 12.05–ವನಿತಾ ವಿಹಾರ–ಎಚ್‌ಐವಿ ಸೋಂಕಿತರ ಆಶಾಕಿರಣ ಆಶ್ರಯ ಬೆಳಗಾವಿಯ ಆಶ್ರಯ ಸಂಸ್ಥೆಯ ಸಂಸ್ಥಾಪಕಿ ನಾಗರತ್ನ ರಾಮಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಿಸುತ್ತಾರೆ–ಮಂಜುಳಾ ಪುರಾಣಿಕ, **ಮಧ್ಯಾಹ್ನ:** 12.35–ದೇವರನಾಮ–ಮಾನಸ ನಯನ, 12.45–ನಮ್ಮ ಆರೋಗ್ಯ: 'ಚಳಿಗಾಲದಲ್ಲಿ ಕಂಡುಬರುವ ಶ್ವಾಸಕೋಶದ ಸಾಮಾನ್ಯ ತೊಂದರೆಗಳು ಮತ್ತು ಚಿಕಿತ್ಸೆ' ಕುರಿತು ಶ್ವಾಸಕೋಶ ತಜ್ಞರಾದ ಡಾ.ಆರ್.ಲಕ್ಷ್ಮೀನರಸಿಂಹನ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಪ್ರಗತಿ ಪಥ, 1.20–ಭಾವಗೀತೆಗಳು–ಎನ್.ಶ್ರೀನಾಥ್, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಕದ್ರಿ ಗೋಪಾಲನಾಥ್–ಸ್ಯಾಕ್ಸೋಫೋನ್ ವಾದನ, 4.00–ಮಹಿಳಾರಂಗ–"ನಾನು ನನ್ನ ಕಂಪನಿ" ಉತ್ತರ ಕರ್ನಾಟಕ ಶೈಲಿಯ ಆಹಾರ ಪದಾರ್ಥಗಳನ್ನು ಮನೆಯಲ್ಲಿಯೇ ತಯಾರಿಸುವ ಮಹೇಶ್ವರಿ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಎಂ.ಎಸ್.ಭಾರತಿ, 4.45–ಹಿಂದಿ ಪಾಠ– ಅನುರಾಧಾಮೂರ್ತಿ, 6.50–ಕೃಷಿರಂಗ: ಮುಸುಕಿನ ಜೋಳದ ಬೇಸಾಯ. ಈ ಕುರಿತು ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ.ಪಿ.ಮಹದೇವು ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45–ಕನ್ನಡ ಚಿತ್ರಗೀತೆಗಳು, 8.00–ಸಂಸದ್ ಸಮೀಕ್ಷಾ, 8.15–ಯುವವಾಣಿ: ಮೈಸೂರು ವಿಶ್ವವಿದ್ಯಾಲಯದ 104ನೇ ಘಟಿಕೋತ್ಸವದಲ್ಲಿ ಎಂ.ಎ. ಕನ್ನಡ ವಿಷಯದಲ್ಲಿ 05 ಚಿನ್ನದ ಪದಕ ಗಳಿಸಿದ ಚಾಮರಾಜನಗರ ತಾಲೂಕು ಬದನಗುಪ್ಪೆಯ ಚಂದನ. ಜಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಡಾ.ಮೈಸೂರು ಉಮೇಶ್, 9.30–ಕರ್ನಾಟಕ ಶಾಸ್ತ್ರೀಯ ಸಂಗೀತ: ವಿಜಯಲಕ್ಷ್ಮೀ ಸುಬ್ರಹ್ಮಣ್ಯಂ– ಹಾಡುಗಾರಿಕೆ, 10.00–ಸಂಸತ್ತಿನ ಪ್ರಶ್ನೋತ್ತರ ಅವಧಿಯ ಕಲಾಪಗಳ ಧ್ವನಿಮುದ್ರಣ, 10.30–ಸವಿನೆನಪು.

ಬಾಹ್ಯಾಕಾಶದ ಕೌತುಕಗಳ ತಿಳಿಯಲು ಇಲ್ಲೊಂದು ಸ್ಪೇಸ್ ಲ್ಯಾಬ್

ನಾಳೆ ಇಸ್ರೋ ಮಾಜಿ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತರಾದ ಡಾ.ಎ.ಎಸ್.ಕಿರಣ್‌ಕುಮಾರ್ ಅವರಿಂದ ನೈಪುಣ್ಯದಲ್ಲಿ ಲ್ಯಾಬ್ ಉದ್ಘಾಟನೆ

ಮೈಸೂರು: ಇಂದು ಶಿಕ್ಷಣ ಕ್ಷೇತ್ರ ಹತ್ತು ಹಲವು ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಮುನ್ನಡೆಯುತ್ತಿದೆ. ಸಾಂಪ್ರದಾಯಿಕ ಶಿಕ್ಷಣದ ಜೊತೆಗೆ ಓಡುತ್ತಿರುವ ಜಗತ್ತಿನ ವೇಗದೊಂದಿಗೆ ಹೆಜ್ಜೆ ಹಾಕಲು ನೂತನ ಆವಿಷ್ಕಾರಗಳನ್ನೊಳಗೊಂಡ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವುದು ಶಿಕ್ಷಣ ಸಂಸ್ಥೆಗಳಿಗೆ ಅವಶ್ಯವೂ, ಅನಿವಾರ್ಯವೂ ಆಗಿದೆ. ಅದರಲ್ಲೂ ಇತ್ತೀಚಿನ ದಿನಗಳಲ್ಲಿ ಬಾಹ್ಯಾಕಾಶದ ಕುರಿತು ಮಕ್ಕಳಲ್ಲಿ ಹೆಚ್ಚಿನ ಆಸಕ್ತಿ ಪಡಿಮೂಡುತ್ತಿದೆ.


ಡಾ.ಎ.ಎಸ್. ಕಿರಣ್‌ಕುಮಾರ್

ಈ ನಿಟ್ಟಿನಲ್ಲಿ ಬಾಹ್ಯಾಕಾಶದ ಸಂಶೋಧನೆ ಹಾಗೂ ಚಟುವಟಿಕೆಗಳನ್ನು ಕುರಿತು ಶಾಲಾ ಹಂತದಲ್ಲಿಯೇ ಮಕ್ಕಳು ತಿಳಿದುಕೊಳ್ಳುವುದು ಅವಶ್ಯವೆಂದು ಪರಿಗಣಿಸಿರುವ ಮೈಸೂರಿನ ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ತನ್ನ ನೂತನ ಕ್ಯಾಂಪಸ್‌ನಲ್ಲಿ ಸುಸಜ್ಜಿತವಾದ ಸ್ಪೇಸ್ ಲ್ಯಾಬ್ ಅಳವಡಿಸಿದ್ದು, ಅಭಿವೃದ್ಧಿಪಡಿಸಿದ ತಂತ್ರಜ್ಞಾನವನ್ನು ಪರಿಚಯಿಸುವ ಉಪಕರಣಗಳನ್ನೊಳಗೊಂಡಿದೆ. ಸ್ಪೇಸ್ ಲ್ಯಾಬ್ ಹೊಂದಿರುವ ಮೈಸೂರಿನ ಪ್ರಥಮ ಶಾಲೆ ಎಂಬ ಹೆಗ್ಗಳಿಕೆಯನ್ನೂ ನೈಪುಣ್ಯ ತನ್ನ ಹೆಗಲಿಗೇರಿಸಿಕೊಂಡಿದೆ.

ಇಸ್ರೋ ಅಧ್ಯಕ್ಷರಾಗಿದ್ದ ಹೆಮ್ಮೆಯ ಕನ್ನಡಿಗ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ.ಎ.ಎಸ್.ಕಿರಣ್ ಕುಮಾರ್ ಅವರು ಈ ಸ್ಪೇಸ್ ಲ್ಯಾಬ್ ಅನ್ನು ಇದೇ ಮಂಗಳವಾರ ಮಧ್ಯಾಹ್ನ 3 ಗಂಟೆಗೆ ಉದ್ಘಾಟನೆ ಮಾಡಲಿದ್ದಾರೆ. ಇದೇ ಸಂದರ್ಭದಲ್ಲಿ ಡಾ.ಕಿರಣ್ ರವರೊಂದಿಗೆ ಬಾಹ್ಯಾಕಾಶ ತಂತ್ರಜ್ಞಾನದ ಕುರಿತು ವಿದ್ಯಾರ್ಥಿಗಳು ಸಂವಾದ ನಡೆಸಲಿದ್ದಾರೆ. ನೈಪುಣ್ಯ ಶಾಲೆಯ ಅಧ್ಯಕ್ಷರಾಗಿರುವ ಆರ್.ರಘು ಅವರ ಕಲ್ಪನೆಯ ಕೂಸು ಇದಾಗಿದೆ.

ದೈನಂದಿನ ಪಾಠ-ಪ್ರವಚನಗಳಿಗೆ ಯಾವುದೇ ಅಡಚಣೆ ಉಂಟಾಗದಂತೆ ಸ್ಪೇಸ್ ಲ್ಯಾಬ್ ಚಟುವಟಿಕೆಗಳಲ್ಲಿ ಮಕ್ಕಳು ತೊಡಗಿಸಿಕೊಳ್ಳುವಂತೆ ನೈಪುಣ್ಯ ಶಾಲೆಯು ಸಮಯವನ್ನು ನಿಗದಿಪಡಿಸಿಕೊಂಡಿದ್ದು, ಭವಿಷ್ಯದ ದಿನಗಳಲ್ಲಿ ಅಂತರಿಕ್ಷಯಾನ ಹಾಗೂ ಬಾಹ್ಯಾಕಾಶ ಸಂಶೋಧನೆಯ ಕುರಿತಂತೆ ಜಗತ್ತಿನ ಹೊಸ ಹೊಸ ಆವಿಷ್ಕಾರಗಳನ್ನು ಕುರಿತು ಈ ಲ್ಯಾಬ್‌ನ್ನು ಉನ್ನತೀಕರಣಗೊಳಿಸಲು ಲ್ಯಾಬ್‌ನ ಉಪಕರಣಗಳನ್ನು ಸರಬರಾಜು ಮಾಡಿರುವ ಸಂಸ್ಥೆಯೊಂದಿಗೆ ನೈಪುಣ್ಯ ಸಂಸ್ಥೆ ಒಪ್ಪಂದ ಮಾಡಿಕೊಂಡಿದೆ. ಬಾಹ್ಯಾಕಾಶ ಕ್ಷೇತ್ರದಲ್ಲಿ ವಿಜ್ಞಾನಿಗಳಾಗಲು ಸಾಮರ್ಥ್ಯವಿರುವ ಪ್ರತಿಭಾವಂತ ಮಕ್ಕಳು ಈ ಶಾಲೆಯ ಲ್ಯಾಬ್‌ನ ಅನುಕೂಲತೆ ಬಳಸಿಕೊಳ್ಳಬೇಕೆಂಬುದು ಸಹ ನೈಪುಣ್ಯ ಸಂಸ್ಥೆಯ ಆಶಯವಾಗಿದೆ.


ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್‌ನಲ್ಲಿರುವ ಸ್ಪೇಸ್ ಲ್ಯಾಬ್‌ನ ಒಂದು ನೋಟ.

ಸ್ಪೇಸ್‌ಲ್ಯಾಬ್‌ನ ಪ್ರಮುಖ ಉದ್ದೇಶಗಳು

- ವಿದ್ಯಾರ್ಥಿಗಳಿಗೆ ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನಗಳ ಬಗ್ಗೆ ಪ್ರಾಥಮಿಕ ತಿಳುವಳಿಕೆ ನೀಡುವುದು. ಮಕ್ಕಳಲ್ಲಿ ಬಾಹ್ಯಾಕಾಶದ ನಿಗೂಢತೆ ಮತ್ತು ರಹಸ್ಯಗಳ ಬಗ್ಗೆ ಕುತೂಹಲ ಕೆರಳುವಂತೆ ಮಾಡಿ, ಅದರ ಬಗ್ಗೆ ಆಳವಾದ ಅಧ್ಯಯನದಲ್ಲಿ ತೊಡಗಿಕೊಳ್ಳುವಂತೆ ಮಾಡುವುದು.
- ಬಾಹ್ಯಾಕಾಶ ವಿಜ್ಞಾನವನ್ನು ಅರಿಯಲು ಖಗೋಳಶಾಸ್ತ್ರ, ರಾಕೆಟರಿ, ಮತ್ತು ಉಪಗ್ರಹ ತಂತ್ರಜ್ಞಾನ ಸೇರಿದಂತೆ ಹಲವು ಶಾಖೆಗಳ ಜ್ಞಾನ ಅತ್ಯವಶ್ಯಕ. ಆ ನೆಲೆಯಲ್ಲಿ ಸ್ಪೇಸ್ ಲ್ಯಾಬ್, ಅದಕ್ಕೆ ಅಗತ್ಯವಾದ ಚಟುವಟಿಕೆಗಳಲ್ಲಿ ಮಕ್ಕಳನ್ನು ತೊಡಗಿಸುವುದಲ್ಲದೆ, ಅದಕ್ಕೆ ಅಗತ್ಯವಾದ ಉಪಕರಣಗಳು ಮತ್ತು ಪರಿಕರಗಳನ್ನು ಒದಗಿಸುತ್ತದೆ.
- STEM (ಅಧ್ಯಯನಕ್ಕೆ ಅವಕಾಶ ಕೊಡುವುದು. STEM ಅಂದರೆ, ವಿಜ್ಞಾನ (Science), ತಂತ್ರಜ್ಞಾನ(Technology), ಇಂಜಿನಿಯರಿಂಗ್ (Engineering) ಮತ್ತು ಗಣಿತ (Maths) ಒಳಗೊಂಡ ಸಮಗ್ರ ಅಧ್ಯಯನ.

ಕನ್ನಡ ಕಿರುತೆರೆ ನಟಿ ಶೋಭಿತಾ ಶಿವಣ್ಣ ಆತ್ಮಹತ್ಯೆ



ಹೈದರಾಬಾದ್, ಡಿ. 1- ಕನ್ನಡದ ಮತ್ತೊಬ್ಬ ಕಿರುತೆರೆ ಹಾಗೂ ಹಲವು ಸಿನಿಮಾಗಳಲ್ಲಿ ನಟಿಸಿದ್ದ ನಟಿ ಶೋಭಿತಾ ಆತ್ಮಹತ್ಯೆಗೆ ಶರಣಾಗಿದ್ದಾರೆ. ಎರಡೊಂದ್ಲಾ ಮೂರು, ಎಟಿಎಮ್, ಒಂದ್ ಕಥೆ ಹೇಳ್ಲಾ, ಜಾಕ್‌ಪಾಟ್, ಅಪಾರ್ಟ್‌ಮೆಂಟ್ ಟು ಮರ್ಡರ್, ವಂದನಾ ಸಿನಿಮಾದಲ್ಲಿ ನಟಿಸಿದ್ದರು. ಇನ್ನು ಕಿರುತೆರೆಯಲ್ಲಿ ಬ್ರಹ್ಮಗಂಟು ಹಾಗೂ ನಿನ್ನಿಂದಲೇ ಧಾರಾವಾಹಿಯಲ್ಲಿ ಸಹ ನಟಿಸಿದ್ದರು. ಇದೀಗ ತೆಲುಗು ಚಿತ್ರರಂಗದಲ್ಲಿ ನಟಿಸುತ್ತಾ ನೆಲೆಸಿದ್ದರು. ಕಳೆದ ವರ್ಷ ಮದುವೆ ಮಾಡಿಕೊಂಡಿದ್ದ ಶೋಭಿತಾ ಶಿವಣ್ಣ ಅವರು ಇದೀಗ ಹೈದರಾಬಾದ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ. ಹಾಸನ ಜಿಲ್ಲೆ ಸಕಲೇಶಪುರದವರಾದ ಇವರು ಕಳೆದ ಎರಡು ವರ್ಷಗಳ ಹಿಂದೆ ಹೈದರಾಬಾದ್‌ನಲ್ಲಿ ಮದುವೆಯಾಗಿ ಸೆಟಲ್ ಆಗಿದ್ದರು. ನಟಿ ಆತ್ಮಹತ್ಯೆಗೆ ಕಾರಣ ಗೊತ್ತಾಗಿಲ್ಲ.

ಮಹದೇಶ್ವರ ಪೂಜೆ


ಚಾಮುಂಡಿಬೆಟ್ಟದಲ್ಲಿ ನಾಯಕರ ಸಂಘದ ವತಿಯಿಂದ 20ನೇ ವರ್ಷದ ಮಹದೇಶ್ವರ ಪೂಜೆ ಅದ್ದೂರಿಯಿಂದ ನಡೆಯಿತು. ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮಹದೇಶ್ವರ ದೇವಸ್ಥಾನದ ಅರ್ಚಕ ಚರಣ್, ಚಾಮುಂಡಿಬೆಟ್ಟದ ನಾಯಕರ ಸಂಘದ ಅಧ್ಯಕ್ಷ ಆರ್ ಶಂಭು ಲಿಂಗು, ದೊಡ್ಡಯಾಜಮಾನರಾದ ಶಿವರಾಂ ನಾಯಕ, ಶ್ರೀಧರ್ ನಾಯಕ, ಎಲ್.ಮಹದೇವಸ್ವಾಮಿ, ನಾಗೇಂದ್ರ ನಾಗೇಂದ್ರಎಸ್, ಸ್ಣ್ಣ ಮಾದನಾಯಕ, ಪುಟ್ಟರಾಜು, ಕೋರ್ಟ್ ಸುಬ್ರಮಣ್ಯ, ಚನ್ನಪ್ಪ ಮಹದೇವ ರಮೇಶ್, ಮಾರ್ಷಲ್ ಜಯರಾಮ್, ಮಂಜು ನಾಯಕ, ಚಿಕ್ಕ ಮಹದೇವ್, ಚಾಮರಾಜು, ಶ್ರೀನಿವಾಸ ಹಾಗೂ ಗ್ರಾಮಸ್ಥರು ಇದ್ದರು

ಹುಟ್ಟುಹಬ್ಬ ಆಚರಣೆ


ಕರುನಾಡು ಸೇವಾ ಸೇನೆ ರಾಜ್ಯಾಧ್ಯಕ್ಷ ಬಿ.ಗಣೇಶ್ ಅವರ ಹುಟ್ಟುಹಬ್ಬವನ್ನು ಕರುನಾಡು ಸೇವಾ ಸೇನೆಯ ಪದಾಧಿಕಾರಿಗಳು ಆಚರಿಸಿದರು. ಈ ವೇಳೆ ವಿ.ಕುಮಾರಸ್ವಾಮಿ, ಕೆ.ಮುರಳಿ, ಎನ್.ನಂದೀಶ್, ಗಿರೀಶ್, ಹೇಮಂತ್, ಚೇತನ್, ದಿವಾಕರ್, ವಿನಯ್, ಚಂದ್ರು, ದೀಲಿಪ್, ಸಾಧಿಕ್, ನಿಶಾತ್, ಸದಾನಂದ, ನಾಗು, ತ್ರಿಶೂಲ್ ಇತರರು ಹಾಜರಿದ್ದರು.

ದೆಹಲಿ ರೈತರ ಬೆಂಬಲಿಸಿ ಡಿ.6ರಿಂದ ರಾಜ್ಯದಲ್ಲಿ ರೈತರ ಸತ್ಯಾಗ್ರಹ

ಮೈಸೂರು, ಡಿ.1(ಎಂಟಿವೈ)- ದೆಹಲಿ ಗಡಿಯಲ್ಲಿ ನಡೆಯುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಸಂಘಟನೆಯ ರಾಷ್ಟ್ರೀಯ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ ಉಪವಾಸ ಸತ್ಯಾಗ್ರಹ ಬೆಂಬಲಿಸಿ ಕರ್ನಾಟಕದಲ್ಲಿ ಡಿ.6 ರಿಂದ ಉಪವಾಸ ಸತ್ಯಾಗ್ರಹ ಹಮ್ಮಿಕೊಳ್ಳುವುದಾಗಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದ್ದಾರೆ.

ಮೈಸೂರಿನ ನಜ್ಜರ್‌ಬಾದ್‌ನಲ್ಲಿರುವ ಲೋಕೋಪಯೋಗಿ ಇಲಾಖೆ ಅತಿಥಿಗೃಹದಲ್ಲಿ ಭಾನುವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ ನ.26ರಿಂದ ದೇಶದ ರೈತರ ಹಿತಕ್ಕಾಗಿ ಉಪವಾಸ ಆರಂಭಿಸಿದ್ದು, ಆರನೇ ದಿನಕ್ಕೆ ಕಾಲಿಟ್ಟಿದೆ. ಅವರ ಪರಿಸ್ಥಿತಿ ಗಂಭೀರವಾಗಿದೆ. ದಲ್ಲೆವಾಲರ ಉಪವಾಸ ಬೆಂಬಲಿಸಿ ಕರ್ನಾಟಕದ ರೈತ ಸಂಘಟನೆಗಳು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ನಿರಂತರ ಉಪವಾಸ ಸತ್ಯಾಗ್ರಹ ನಡೆಸಲು ತೀರ್ಮಾನಿಸಿದ್ದು, ಡಿ.6ರಿಂದ ಉಪವಾಸ ಆರಂಭಿಸಲು ನಿರ್ಧರಿಸಲಾಗಿದೆ. ಹೋರಾಟನಿರತ ರೈತ ಮುಖಂಡರನ್ನು ದೇಶದ್ರೋಹಿ ಹಾಗೂ ಕಳ್ಳರಂತೆ ಬಂಧಿಸಿ ದೇಶದ ರೈತರಿಗೆ ಅಪಮಾನ ಮಾಡಿದ್ದಾರೆ. ಕೇಂದ್ರ ಸರ್ಕಾರ ರೈತರ ಹಕ್ಕನ್ನು ದಮನ ಮಾಡಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.


ಮೈಸೂರಿನ ಲೋಕೋಪಯೋಗಿ ಇಲಾಖೆ ಅತಿಥಿಗೃಹದಲ್ಲಿ ಭಾನುವಾರ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು

ರಾಜ್ಯದ ವಿಭಾಗ ಮಟ್ಟದಲ್ಲಿ ಬೆಳಗಾವಿ, ಬಿಜಾಪುರ, ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ರೈತ ಜಾಗೃತಿ ಸಭೆಗಳನ್ನು ನಡೆಸಲಾಗುತ್ತಿದೆ ರೈತರಲ್ಲಿ ಜಾಗೃತಿ ಮೂಡಿಸಿ ರಾಜ್ಯದಲ್ಲಿಯೂ ಗಂಭೀರ ಹೋರಾಟಕ್ಕೆ ಸಜ್ಜುಗೊಳಿಸಲಾಗುತ್ತಿದೆ ಎಂದರು.

ಕೇಂದ್ರ ಬಜೆಟ್ ನಲ್ಲಿ ರೈತರ ಸಾಲವನ್ನು ಶೇ.16ಕ್ಕೆ ಏರಿಕೆ ಮಾಡಿದ್ದೇವೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಘೋಷಣೆ ಮಾಡಿದರು. ಆದರೆ ಈಗ ನಬಾರ್ಡ್ ಮೂಲಕ ಸಹಕಾರ ಸಂಘಗಳಲ್ಲಿ ರೈತರಿಗೆ ಕೊಡುತ್ತಿದ್ದ ಬಡ್ಡಿ ರಹಿತ ಸಾಲ ಕಡಿವಾಣ ಹಾಕಲು ಶೇ.50 ಅನುದಾನ ಕಡಿತ ಮಾಡಿದ್ದಾರೆ. ಇದು ರೈತರಿಗೆ ಸಹಕಾರ ಸಂಘಗಳಲ್ಲಿ ನೀಡುತ್ತಿದ್ದ ಬಡ್ಡಿ ರಹಿತ ಕೃಷಿ ಸಾಲ ತಪ್ಪಿಸುವ ಹುನ್ನಾರವಾಗಿದೆ ಎಂದು ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಪ್ರೊ.ಮಹದೇವಯ್ಯ, ಮಹಿ ಮಹೇಶ್, ವಸಂತ್‌ಕುಮಾರ್ ಮೈಸೂರು ಮಠ, ರಾಜ್ಯ ಸಂಘಟನಾ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಜಿಲ್ಲಾಧ್ಯಕ್ಷ ಸೋಮಶೇಖರ್, ಜಿಲ್ಲಾ ಉಪಾಧ್ಯಕ್ಷ, ಮಾರ್ಬಳ್ಳಿ ನೀಲಕಂಠಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್ ಸೇರಿದಂತೆ ಇನ್ನಿತರರು ಇದ್ದರು.

ಚುನಾವಣಾ ಆಯೋಗದಲ್ಲಿ ಪಾರದರ್ಶಕತೆ ಇಲ್ಲ

ಇವಿಎಂ ದುರ್ಬಳಕೆ ಸಾಧ್ಯತೆ ಹೆಚ್ಚು: ಮಾಜಿ ಸಂಸದ ವಿ.ಎಸ್.ಉಗ್ರಪ್ಪ

ಮೈಸೂರು, ಡಿ.1(ಎಂಟಿವೈ)- ಚುನಾವಣಾ ಆಯೋಗ ಪಾರದರ್ಶಕವಾಗಿ ಕಾರ್ಯನಿರ್ವಹಿಸುತ್ತಿಲ್ಲ. ಇವಿಎಂ ದುರ್ಬಳಕೆ ಸಾಧ್ಯತೆ ಹೆಚ್ಚಾಗಿರುವುದರಿಂದ ಅದನ್ನು ಎದುರಿಸಲು ನಾವು ಸಿದ್ಧರಾಗಬೇಕು ಎಂದು ಮಾಜಿ ಸಂಸದ ವಿ.ಎಸ್. ಉಗ್ರಪ್ಪ ಸಲಹೆ ನೀಡಿದ್ದಾರೆ.



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಸ್ಥಳೀಯ ಸಂಸ್ಥೆಗಳಿಗೆ ಯಾವುದೇ ಸಂದರ್ಭದಲ್ಲಾದರೂ ಚುನಾವಣೆ ಘೋಷಣೆಯಾಗಬಹುದು. 324 ಸೆಕ್ಷನ್ ಅಡಿ ಚುನಾವಣಾ ಆಯೋಗ ಸೂಕ್ತವಾಗಿ ಕಾರ್ಯ ನಿರ್ವಹಿಸುತ್ತಿಲ್ಲ. ಇವಿಎಂ ದುರ್ಬಳಕೆ ಸಾಧ್ಯತೆ ಇದ್ದು, ಅದನ್ನು ಎದುರಿಸಲು ನಾವು ಸಿದ್ಧರಾಗಿರಬೇಕು. ಇದೆಲ್ಲವೂ ಸಾಧ್ಯವಾಗಬೇಕಾದರೆ ಪಕ್ಷದ ಸಂಘಟನೆ ಪ್ರಬಲವಾಗಬೇಕು. ಮುಖ್ಯಮಂತ್ರಿಗಳ ತವರು ಜಿಲ್ಲೆಯಲ್ಲಿ ಕಾಂಗ್ರೆಸ್ ನಿರೀಕ್ಷೆಯಷ್ಟು ಸಂಘಟನೆ ಆಗಿಲ್ಲ. ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ ಸಿಕ್ಕಿಲ್ಲ ಎಂಬ ಕೊರಗು ಇದೆ. ಆದರೆ ಆ ಕಾರಣಕ್ಕೆ ನಿಷ್ಕ್ರಿಯ ಆಗುವುದು ರಾಜಕಾರಣಿಯ ಬದುಕಲ್ಲ. ರಾಜಕಾರಣದಲ್ಲೂ ಕೆಲವು ಪ್ರದಕ್ಷಿಣೆಯ ರಾಜಕಾರಣಿಗಳು ಇದ್ದಾರೆ. ಇನ್ನೂ ಕೆಲವರು ಜನಸಾಮಾನ್ಯರ ಕಷ್ಟಗಳಿಗೆ ಸ್ಪಂದಿಸುವವರೂ ಇದ್ದಾರೆ ಎಂದರು.

ತಪ್ಪು ಮಾಡಿದವರನ್ನು ಪ್ರಶ್ನಿಸುವ ನೈತಿಕತೆಯನ್ನು ಪ್ರತಿಯೊಬ್ಬ ಕಾರ್ಯಕರ್ತ ಬೆಳೆಸಿಕೊಳ್ಳಬೇಕು. ನಾನು ಎನ್ನುವುದಕ್ಕಿಂತ ನಾವು ಎನ್ನುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು. ದೇಶದಲ್ಲಿ ಪ್ರಜಾಪ್ರಭುತ್ವ ಹಾಗೂ ಸಂವಿಧಾನಕ್ಕೆ ಗಂಡಾಂತರ ಇದೆ. ಬಿಜೆಪಿಯಲ್ಲಿ ಮನುಷ್ಯತ್ವ ಇರುವವರು ಕಡಿಮೆ. ಬರೀ ರಾಜಾಹುಲಿಗಳೇ ಇದ್ದಾರೆ. ಅಂತಹವರನ್ನು ಸಮರ್ಥವಾಗಿ ಎದುರಿಸಬೇಕು. ಇಲ್ಲದಿದ್ದರೆ ರಾಜ್ಯ ಹಾಗೂ ರಾಷ್ಟ್ರದಲ್ಲಿ ರಾಜಕೀಯ ಸ್ಥಿತ್ಯಂತರಗಳು ನಡೆಯುತ್ತವೆ ಎಂದು ತಿಳಿಸಿದರು.

ಮುಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರವೇ ಇಲ್ಲ. ತಮ್ಮ ಜಮೀನಿಗೆ ಬದಲಾಗಿ ನಿವೇಶನ ಪಡೆದಿರುವುದಕ್ಕೆ ಬಿಜೆಪಿ-ಜೆಡಿಎಸ್ ನಾಯಕರು ದೊಡ್ಡ ಪಾದಯಾತ್ರೆ ಮಾಡಿದರು. ಜನಪರ ಸರ್ಕಾರದ ಮೇಲೆ ನಿರಂತರವಾಗಿ ಸುಳ್ಳು ಆರೋಪ ಮಾಡುವ ಮೂಲಕ ಕೆಸರು ಎರಚುವ ಕೆಲಸ ಮಾಡುತ್ತಲೇ ಇದ್ದಾರೆ. ಇದರ ಬಗ್ಗೆ ಕಾಂಗ್ರೆಸ್ ಕಾರ್ಯಕರ್ತರು ಹೋರಾಡಬೇಕು. ಜನರಿಗೆ ಸತ್ಯ ತಿಳಿಸಬೇಕು. ಬಿಜೆಪಿ ನಾಯಕರ ಸುಳ್ಳು ಆರೋಪಗಳನ್ನು ಸತ್ಯಾಸತ್ಯತೆ ಬಯಲು ಮಾಡಬೇಕು ಎಂದರು.

ಬಿಜೆಪಿ ಒಂದು ಮನೆ ಮೂರು ಬಾಗಿಲಿನಂತಾಗಿದೆ. ಕೇಂದ್ರದ ಜನವಿರೋಧಿ ನೀತಿ ಮುಚ್ಚಿಕೊಳ್ಳಲು ಮುಡಾ, ವಕ್ಫ್ ಹೆಸರಿನಲ್ಲಿ ಹೋರಾಟ ನಡೆಸುತ್ತಿದೆ. ಕೇಂದ್ರದಲ್ಲಿ 2012ರಲ್ಲಿ 52 ಲಕ್ಷ ಕೋಟಿ ಸಾಲ ಇದ್ದದ್ದು ಈಗ 180 ಲಕ್ಷ ಕೋಟಿಗೆ ಸಾಲ ಏರಿಕೆ ಆಗಿದೆ. ಆದರೆ ಹಸಿವು, ಬಡತನ, ನಿರುದ್ಯೋಗ ಸೂಚ್ಯಂಕ ಏರುತ್ತಲೇ ಇದೆ. ಅದಾನಿ ಅಕ್ರಮವನ್ನು ವಿದೇಶಗಳೇ ಬಯಲಿಗೆ ಎಳೆದಿವೆ. ಇದರ ವಿರುದ್ಧ ಉಗ್ರ ಹೋರಾಟದ ಅಗತ್ಯ ಇದೆ ಎಂದು ತಿಳಿಸಿದರು.

ಹಾಸನದಲ್ಲಿ ನಡೆಯುವ ಸ್ವಾಭಿಮಾನಿ ಸಮಾವೇಶದಲ್ಲಿ ಮೈಸೂರು ಜಿಲ್ಲೆಯಿಂದ ಕನಿಷ್ಠ ಒಂದೂವರೆ ಲಕ್ಷ ಜನರು ಪಾಲ್ಗೊಂಡು ಎಚ್ಚರಿಕೆಯ ಸಂದೇಶ ನೀಡಬೇಕು. ಆ ಮೂಲಕ ಸಿಎಂ ಸಿದ್ದರಾಮಯ್ಯ ಅವರ ನಾಯಕತ್ವವನ್ನು ಮತ್ತಷ್ಟು ಬಲಪಡಿಸಬೇಕು. ಸಿಎಂ ವಿರುದ್ಧ ಸುಳ್ಳು ಆರೋಪ ಮಾಡುತ್ತಿರುವ ಪ್ರತಿಪಕ್ಷಗಳಿಗೆ ಎಚ್ಚರಿಕೆ ಸಂದೇಶ ನೀಡಲು ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯ ಕಾರ್ಯಕರ್ತರು ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ಸಿಎಂ ಸಿದ್ದರಾಮಯ್ಯ ಅವರು ಖಾಲಿಯಿರುವ ನಿಗಮ ಮಂಡಳಿಗೆ ಶೀಘ್ರದಲ್ಲಿ ನೇಮಕ ಮಾಡಲಿದ್ದಾರೆ. ಪಕ್ಷ ನಿಷ್ಠರಿಗೆ ಅವಕಾಶ ದೊರೆಯುತ್ತಿದೆ. ನಿಷ್ಠಾವಂತರಿಗೆ ಮುಂದಿನ ದಿನಗಳಲ್ಲಿ ಅಧಿಕಾರ ಸಿಗಲಿದೆ. ಆ ನಿಟ್ಟಿನಲ್ಲಿ ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಎಂದರು.

ರಾಜ್ಯೋತ್ಸವದಲ್ಲಿ ಪೌರಕಾರ್ಮಿಕರಿಗೆ ಸನ್ಮಾನ


ಬಸವ ಬಳಗ ಚಾಮುಂಡಿಪುರಂ ಸಂಘದ ವತಿಯಿಂದ ಬಸವೇಶ್ವರ ರಸ್ತೆಯಲ್ಲಿರುವ ಸಂಘದ ಕಚೇರಿ ಮುಂಭಾಗದಲ್ಲಿ ನಡೆದ ಕನ್ನಡ ರಾಜ್ಯೋತ್ಸವದ ಸಮಾರಂಭದಲ್ಲಿ ವಿಶೇಷವಾಗಿ ಪೌರಕಾರ್ಮಿಕರಿಂದ ಧ್ವಜಾರೋಹಣ ಮಾಡಿಸಿ, ಪೌರಕಾರ್ಮಿಕರಾದ ವಾಸುದೇವ್, ರತ್ನಮ್ಮ, ರಾಣಿ ಅವರನ್ನು ಸನ್ಮಾನಿಸಲಾಯಿತು. ಸಂಘದ ಗೌರವಾಧ್ಯಕ್ಷ ಅಂಬಳೆ ಶಿವಣ್ಣ, ಅಧ್ಯಕ್ಷ ಸಿ.ಸಂದೀಪ್, ಉಪಾಧ್ಯಕ್ಷ ಬಸವರಾಜು, ಖಜಾಂಚಿ ಬಸವರಾಜು, ಸಹಕಾರ್ಯದರ್ಶಿ ಮಹದೇವಪ್ಪ, ನಿರ್ದೇಶಕರಾದ ಬಸವರಾಜು, ಮಂಜುಳಾ, ಧರ್ಮೇಂದ್ರ, ಯೋಗೇಶ್, ಮಂಜುನಾಥ್, ವೀರಶೈವ ಲಿಂಗಾಯತ ಸಂಘದ ನಿರ್ದೇಶಕರಾದ ಸಕಹಳ್ಳಿ ಮಹದೇವಸ್ವಾಮಿ, ಕೆ.ಆರ್.ಬ್ಯಾಂಕ್ ನಿರ್ದೇಶಕ ಭಾಸ್ಕರ್, ಬಿಜೆಪಿ ಮೈಸೂರು ನಗರ ಜಿಲ್ಲಾ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಿ.ಲೋಹಿತ್, ಮುಖಂಡರಾದ ಎಸ್.ಆರ್.ಶಿವಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ಜಿಎಸ್‌ಟಿ ಆದಾಯ ಶೇ.8.5 ರಷ್ಟು ಹೆಚ್ಚಳ


ನವದೆಹಲಿ, ಡಿ.1- ಸರಕು ಮತ್ತು ಸೇವಾ ತೆರಿಗೆ(ಜಿಎಸ್‌ಟಿ) ಸಂಗ್ರಹದಲ್ಲಿ ಶೇ.8.5 ರಷ್ಟು ಏರಿಕೆಯಾಗಿದ್ದು, ನವೆಂಬರ್ ತಿಂಗಳಲ್ಲಿ 1.82 ಲಕ್ಷ ಕೋಟಿ ರೂಪಾಯಿ ಜಿಎಸ್‌ಟಿ ಸಂಗ್ರಹವಾಗಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ಭಾನುವಾರ ತಿಳಿಸಿದೆ.

ತೆರಿಗೆ ಸಂಗ್ರಹ ಹೆಚ್ಚಳ ಪ್ರವೃತ್ತಿ ಮುಂದುವರೆದಿದ್ದು, ಕಳೆದ ವರ್ಷದ ನವೆಂಬರ್ ತಿಂಗಳಿಗೆ ಹೋಲಿಸಿದರೆ ಈ ವರ್ಷದ ನವೆಂಬರ್‌ನಲ್ಲಿ ಶೇ.8.5 ರಷ್ಟು ಹೆಚ್ಚಳವಾಗಿದೆ. ನವೆಂಬರ್ ತಿಂಗಳಲ್ಲಿ ಕೇಂದ್ರದ ಜಿಎಸ್‌ಟಿ 34,141 ಕೋಟಿ ರೂ. ಸಗ್ರಹವಾಗಿದ್ದು, ರಾಜ್ಯದ ಜಿಎಸ್‌ಟಿ 43,047 ಕೋಟಿ ರೂ., ಇಂಟಿಗ್ರೇಟೆಡ್ ಐಜಿಎಸ್‌ಟಿ ರೂ.91,828 ಕೋಟಿ ಮತ್ತು ಸೆಸ್ 13,253 ಕೋಟಿ ರೂ.ಸಂಗ್ರಹವಾಗಿದೆ ಎಂದು ಇಂದು ಬಿಡುಗಡೆಯಾದ ಸರ್ಕಾರಿ ಅಂಕಿಅಂಶಗಳು ತಿಳಿಸಿವೆ.

ಕರುನಾಡಿಗೆ ಮತ್ತೊಂದು ಗರಿ: ದೇಶದ ಅತ್ಯಂತ ಕಿರಿಯ ಪೈಲಟ್ ಆಗಿ ವಿಜಯಪುರದ ಸಮೈರಾ

ವಿಜಯಪುರ, ಡಿ.1- ಗುಮ್ಮಟ ನಗರಿ ವಿಜಯಪುರ ಜಿಲ್ಲೆಯ ಯುವತಿಯೊಬ್ಬರು ದೇಶದ ಅತ್ಯಂತ ಕಿರಿಯ ಪೈಲಟ್ ಆಗುವ ಮೂಲಕ ರಾಜ್ಯದ ಹಿರಿಮೆ ಹೆಚ್ಚಿಸಿದ್ದಾರೆ.

18 ವರ್ಷದ ಸಮೈರಾ ಹುಲ್ಲೂರು ಕಮರ್ಶಿಯಲ್ ಪೈಲಟ್ ಲೈಲೆನ್ಸ್ ಪಡೆಯುವ ಮೂಲಕ ಅಭೂತಪೂರ್ವ ಸಾಧನೆಗೈದಿದ್ದಾರೆ. ಈ ಸಾಧನೆಯಿಂದ ಕುಟುಂಬದಲ್ಲಿ ಸಂತೋಷ ಮನೆ ಮಾಡಿದೆ. ಇತಿಹಾಸ ಸೃಷ್ಟಿಸಿರುವ ಸಮೈರಾ ವಿಜಯಪುರ ಜಿಲ್ಲೆ ಮಾತ್ರವಲ್ಲದೇ ರಾಜ್ಯದ ಕೀರ್ತಿ ಪತಾಕೆಯನ್ನು ಹಾರಿಸಿದ್ದಾರೆ.




ತಮ್ಮ ಶಿಕ್ಷಣವನ್ನು ವಿಜಯಪುರದಲ್ಲಿ ಮುಗಿಸಿ, 6 ತಿಂಗಳ ಕಾಲ ದೆಹಲಿಯಲ್ಲಿ ಪೈಲಟ್ ಟ್ರೇನಿಂಗ್ ಮುಗಿಸಿ 18ನೇ ವಯಸ್ಸಿಗೆ ಪೈಲಟ್ ಆಗಿ ಹೊರಹೊಮ್ಮಿದ್ದಾರೆ. 25ನೇ ವಯಸ್ಸಿಗೆ ಪೈಲಟ್ ಆಗಿರುವ ಕ್ಯಾಪ್ಟನ್ ತಪೇಶ್ ಕುಮಾರ್ ಇವರ ಈ ಸಾಧನೆಗೆ ಪ್ರೇರಣೆಯಾಗಿದ್ದಾರೆ. ಸಮೈರಾಳ ಸಾಧನೆಗೆ ಜಿಲ್ಲೆ, ರಾಜ್ಯ ಹಾಗೂ ದೇಶದ ಹಲವೆಡೆಯಿಂದ ಶುಭಾಶಯಗಳ ಮಹಾಪೂರ ಹರಿದು ಬರುತ್ತಿದೆ. ಹೆಣ್ಣು ಮಕ್ಕಳನ್ನು ಕಡೆಗಣಿಸುವ ಜನರಿಗೆ ಸಮೈರಾ ಕುಟುಂಬ ಮಾದರಿ ಆಗಿದೆ. ಜೊತೆಗೆ ಇಂದಿನ ಕಾಲದ ಯುವ ಪೀಳಿಗೆಗೆ ಸಮೈರಾ ಸಾಧನೆ ಪ್ರೇರಣೆ ಆಗಿದೆ.

ತಲಕಾಡು ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಗಣ್ಯರ ಆಗ್ರಹ

ಮೈಸೂರು, ಡಿ.1(ಎಸ್‌ಬಿಡಿ)- ತಲಕಾಡು ಅಭಿವೃದ್ಧಿ ಪ್ರಾಧಿಕಾರ ರಚಿಸಬೇಕೆಂದು ಮೈಸೂರಿನ ವಿವಿಧ ಕ್ಷೇತ್ರದ ಗಣ್ಯರು ಆಗ್ರಹಿಸಿದ್ದಾರೆ.

ಶ್ರೀ ಪುರುಷ ಸಾಂಸ್ಕೃತಿಕ ಸಮಿತಿ ವತಿಯಿಂದ ಭಾನುವಾರ ವಿಜಯನಗರದ ಕನ್ನಡ ಸಾಹಿತ್ಯ ಭವನದಲ್ಲಿ ಏರ್ಪಡಿಸಿದ್ದ ತಲಕಾಡು ಗಂಗರ ಇತಿಹಾಸ ಮತ್ತು ಐದನೇ ವರ್ಷದ ಶ್ರೀ ಪುರುಷೋತ್ಸವ ಆಚರಣೆ ಸಮಾರಂಭದಲ್ಲಿ ಮಹದೇಶ್ವರ ಬೆಟ್ಟ ಅಭಿವೃದ್ಧಿ ಪ್ರಾಧಿಕಾರ, ಚಾಮುಂಡಿ ಬೆಟ್ಟ ಅಭಿವೃದ್ಧಿ ಪ್ರಾಧಿಕಾರ ಮಾದರಿಯಲ್ಲಿ ರಾಜ್ಯ ಸರ್ಕಾರ, ತಲಕಾಡು ಅಭಿವೃದ್ಧಿ ಪ್ರಾಧಿಕಾರ ರಚಿಸಬೇಕು ಎಂದು ಒತ್ತಾಯಿಸಲಾಯಿತು.

ಸಮಾರಂಭ ಉದ್ಘಾಟಿಸಿದ ವಿಧಾನ ಪರಿಷತ್ ಮಾಜಿ ಸದಸ್ಯ ಡಿ.ಮಾದೇಗೌಡರು ಮಾತನಾಡಿ, ಶಾಲಾ ಪಠ್ಯದಲ್ಲಿ ಗಂಗರ ಬಗ್ಗೆ ನಾಲ್ಕು ಸಾಲು ಓದಿದನ್ನು ಬಿಟ್ಟರೆ ತೀರಾ ಇತ್ತೀಚಿನವರೆಗೆ ಅವರ ಬಗ್ಗೆ ಹೆಚ್ಚಿನ ಮಾಹಿತಿಯೇ ಇರಲಿಲ್ಲ. ಕನ್ನಡದ ಮೊದಲ ರಾಜರಾದ ಗಂಗರು ನೂರಾರು ವರ್ಷಗಳ ಕಾಲ ಕನ್ನಡ ನಾಡನ್ನು ಆಳಿದ್ದಾರೆ. ನಾವು ದಸರಾ ವಸ್ತು ಪ್ರದರ್ಶನ ಆವರಣದಲ್ಲಿ ಶ್ರೀ ಮಹದೇಶ್ವರರ ಉತ್ಸವ ಏರ್ಪಡಿಸಿ, ಅಂದಿನ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರನ್ನು ಕರೆಸಿ, ಮಹದೇಶ್ವರಬೆಟ್ಟ ಪ್ರಾಧಿಕಾರ ರಚಿಸುವಂತೆ ಆಗ್ರಹಿಸಿದ್ದವು. ನಂತರ ಅದು ಕಾರ್ಯಗತವಾಯಿತು. ಅದೇ ರೀತಿ ತಲಕಾಡು ಅಭಿವೃದ್ಧಿ ನಿಟ್ಟಿನಲ್ಲೂ ಮುಂದಿನ ದಿನಗಳಲ್ಲಿ ಸರ್ಕಾರದ ಮೇಲೆ ಒತ್ತಡ ಹೇರಬೇಕಾಗಿದೆ ಎಂದರು.


ಶ್ರೀ ಪುರುಷ ಸಾಂಸ್ಕೃತಿಕ ಸಮಿತಿ ವತಿಯಿಂದ ಹಿರಿಯ ಸಾಹಿತಿ ಡಾ.ಸಿಪಿಕೆ ಅವರಿಗೆ 'ಶ್ರೀಪುರುಷ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ಮಾಜಿ ಎಂಎಲ್‌ಸಿ ಡಿ.ಮಾದೇಗೌಡ, ಇತಿಹಾಸಕಾರ ಡಾ.ತಲಕಾಡು ಚಿಕ್ಕರಂಗೇಗೌಡ, ಶ್ರೀ ಪುರುಷ ಸಾಂಸ್ಕೃತಿಕ ಸಮಿತಿಯ ಡಾ.ಬಿ.ಎನ್.ರವೀಶ್, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮತ್ತಿತರರಿದ್ದರು.

ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್ ಅವರು 'ಶ್ರೀ ಪುರುಷ' ಪ್ರಶಸ್ತಿ ಸ್ವೀಕರಿಸಿ ಮಾತನಾಡಿ, ಈ ಪ್ರಶಸ್ತಿ ಬಹಳ ವಿಶಿಷ್ಟವಾದುದು. ಶ್ರೀಪುರುಷನ ಹೆಸರಿನ ಮೊದಲ ಪ್ರಶಸ್ತಿಯನ್ನು ನನಗೆ ನೀಡುತ್ತಿರುವುದಕ್ಕೆ ಧನ್ಯೋಸ್ಮಿ. ಪ್ರಶಸ್ತಿಯ ಹೆಸರೇ ಶ್ರೀಪುರುಷ ಎಂದಿರುವುದರಿಂದ ಇದನ್ನು ಮಹಿಳೆಯರಿಗೆ ಕೊಡಲಾಗದು ಎಂದು ಹಾಸ್ಯ ಚಟಾಕಿಯೊಂದಿಗೆ ಸಂತಸ ವ್ಯಕ್ತಪಡಿಸಿದರು.

ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜ್ ಗೌಡ ಮಾತನಾಡಿ, ಮಹದೇಶ್ವರ ಬೆಟ್ಟ, ಚಾಮುಂಡಿ ಬೆಟ್ಟದಂತೆ ತಲಕಾಡು ಅಭಿವೃದ್ಧಿ ಪ್ರಾಧಿಕಾರ ರಚಿಸಿ, ಬಜೆಟ್‌ನಲ್ಲಿ 100 ಕೋಟಿ ರೂ. ಮೀಸಲಿಡಬೇಕು ಎಂದು ಒತ್ತಾಯಿಸಿದರು.

ಗೌಡತಿಯರ ಸೇನೆ ರಾಜ್ಯಾಧ್ಯಕ್ಷೆ ರೇಣುಕಾ ಬಿ. ಭಕ್ತರಹಳ್ಳಿ ಮಾತನಾಡಿ, ಕುಣಿಗಲ್ ಕೆರೆಯ ಬಳಿ ಶ್ರೀಪುರುಷರ ಪ್ರತಿಮೆ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು. ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ನಾಗರಾಜ ವಿ. ಬೈರಿ, ಗಂಗರ ಬಗ್ಗೆ ಇನ್ನೂ ಹೆಚ್ಚಿನ ಸಂಶೋಧನೆ ಆಗಬೇಕು ಎಂದರು.

ತಲಕಾಡು ಗಂಗರ ಬಗ್ಗೆ ಉಪನ್ಯಾಸ ನೀಡಿದ ಇತಿಹಾಸಕಾರಾದ ಡಾ.ತಲಕಾಡು ಚಿಕ್ಕರಂಗೇಗೌಡ, ಇಡೀ ದೇಶದಲ್ಲಿಯೇ ಸತತ 654 ವರ್ಷಗಳ ಸುದೀರ್ಘ ಕಾಲ ರಾಜ್ಯಭಾರ ನಡೆಸಿದ ಏಕೈಕ ರಾಜಮನೆತನ ಎಂಬ ಹೆಗ್ಗಳಿಗೆ ಗಂಗರದು. ಇಂತಹ ಗಂಗರನ್ನು ಹತ್ತನೇ ಶತಮಾನದಲ್ಲಿ ಕಳೆದುಕೊಂಡು ಇಪ್ಪತ್ತೊಂದನೇ ಶತಮಾನದಲ್ಲಿ ಹುಡುಕುತ್ತಿದ್ದೇವೆ. ಗಂಗರ ಬಗ್ಗೆ ಜನರಿಗೆ ತಿಳುವಳಿಕೆ ಮೂಡಿಸಲು ಬೆಂಗಳೂರು, ಮೈಸೂರು ಸೇರಿದಂತೆ ವಿವಿಧೆಡೆ ಬೃಹತ್ ಕಾರ್ಯಕ್ರಮಗಳನ್ನು ಮಾಡುವ ಉದ್ದೇಶವಿದೆ. ಇದಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಕೆಂಪೇಗೌಡರ ಪ್ರತಿಮೆ ಬರಲು ನಾವು ಕಾರಣ. ಆದರೆ ಬೇರೆಯವರು ಪ್ರಚಾರ ಪಡೆದುಕೊಂಡರು. ನಮ್ಮ ಸಂಶೋಧನೆಯ ವಿಷಯದಲ್ಲೂ ಕೆಲವರು ಕಾಲೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ. ಆದರೆ ನಾವು ಇಂತಹ ಸವಾಲುಗಳನ್ನು ಎದುರಿಸಿಯೇ ಮುಂದೆ ಸಾಗಬೇಕಾಗಿದೆ ಎಂದು ಇದೇ ವೇಳೆ ತಿಳಿಸಿದರು.

ಸಿಪಿಕೆ ಅವರಿಗೆ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಪ್ರಶಸ್ತಿ ಪ್ರದಾನ ಮಾಡಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಮಾತನಾಡಿದರು. ಶ್ರೀ ಪುರುಷರ ಬಗ್ಗೆ ಡಾ.ಬಿ.ಎನ್.ರವೀಶ್ ಉಪನ್ಯಾಸ ನೀಡಿದರು. ಎನ್.ಬೆಟ್ಟೇಗೌಡ, ಚಂದ್ರಕಲಾ ಮತ್ತಿತರರಿದ್ದರು.

ನಕ್ಕರೆ ಅದೇ ಸ್ವರ್ಗ

ಮೊದಲನೇ ರೋಗಿ : ನಿನಗೆ ಹೇಗೆ ಗೊತ್ತಾಯ್ತು ಅವನು ನಕಲಿ ಡಾಕ್ಟರ್ ಅಂತ...

ಎರಡನೇ ರೋಗಿ : ಅವನ ಹ್ಯಾಂಡ್ ರೈಟಿಂಗ್ ತುಂಬಾ ಚೆನ್ನಾಗಿದೆ ಕಣೋ... ಅದಕ್ಕೆ ಡೌಟ್...!

ಮೈಸೂರು ಮಿತ್ರ

ಸೋಮವಾರ, 2 ಡಿಸೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

'ಗುರು ಎಂಬುದು ಭಾವವೇ ವಿನಃ ದೇಹವಲ್ಲ. ಶುದ್ಧ ಭಾವವಿದ್ದಲ್ಲಿ ಅವನು ಯಾವ ರೂಪದಲ್ಲಿಯಾದರೂ ಬರಬಹುದು. ಅವನು ರೂಪಾತೀತ, ದೇಹಾತೀತ, ಸ್ವರೂಪಾತೀತ'

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { 'ವಿದ್ಯೆಗೆ ವಿನಯವೇ ಭೂಷಣ'

ನಿಮ್ಮ ಪತ್ರಗಳು

ವಿದ್ಯಾ ಮಂತ್ರಿಗಳೇ ಇಷ್ಟೊಂದು ಸಿಟ್ಯಾಕೆ?

ಮಾನ್ಯರೆ,

ಮಗುವೊಂದು ಆಕ್ಷೇಪಾರ್ಹ ಮಾತನ್ನು ಆಡಿದರೆ ತಪ್ಪು ಮಗುವಿನದಲ್ಲ, ಯಾಕೆಂದರೆ ಮಗು ಗಿಳಿಯಿದ್ದಂತೆ, ತಾನು ಕೇಳಿಸಿಕೊಂಡಿದ್ದನ್ನು ಪುನರುಚ್ಚರಿಸುತ್ತದೆಯೇ ಹೊರತು, ಅದು ಮಗುವಿನ ಸ್ವಂತ ಮಾತಲ್ಲ. ಕರ್ನಾಟಕದ ಶಿಕ್ಷಣ ಮಂತ್ರಿಗಳು ಮುಜುಗರಕ್ಕೊಳಗಾದ ಘಟನೆಯೊಂದು ರಾಜ್ಯದಲ್ಲಿ ನಡೆದಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವ ಸಲುವಾಗಿ ಉಚಿತ ಆನ್‌ಲೈನ್ ತರಬೇತಿ ಕಾರ್ಯಕ್ರಮದ ಉದ್ಘಾಟನೆ ವೇಳೆ ಸಚಿವರು ವಿದ್ಯಾರ್ಥಿಗಳೊಂದಿಗೆ ಸಂಭಾಷಿಸುತ್ತಿದ್ದರು. ಆಗ ಇದ್ದಕ್ಕಿದ್ದಂತೆ ಶಿಕ್ಷಣ ಸಚಿವರಿಗೆ ಕನ್ನಡ ಬರಲ್ಲ ಎಂದು ವಿದ್ಯಾರ್ಥಿಯೊಬ್ಬ ಹೇಳಿದ್ದು ಕೇಳಿಬಂತು. ಮೊದಲು ತಮ್ಮನ್ನು ತಾವೇ ಸಮರ್ಥಿಸಿಕೊಳ್ಳಲು ಪ್ರಯತ್ನಿಸಿದ ಸಚಿವರು ನಗೆಪಾಟಲಿಗೆ ಸಿಲುಕಿ ಆತನ ಟೀಕೆಗೆ ಸ್ಟುಪಿಡ್ ಎಂದು ಪ್ರತಿಕ್ರಿಯಿಸಿ ಆತ ಯಾರೆಂದು ತಿಳಿದು ಕ್ರಮ ಕೈಗೊಳ್ಳುವಂತೆ ಆದೇಶಿಸಿದರು.

ಈ ಪ್ರಕರಣವನ್ನು ವಿಶ್ಲೇಷಿಸುವಾಗ ಯಾರು ಸ್ಟುಪಿಡ್? ಎಂಬುದು ಮೊದಲ ಪ್ರಶ್ನೆಯಾಗಿದೆ. ಯಾರು ಸ್ಟುಪಿಡ್? ಎಂಬುದನ್ನು ನಿರ್ಧರಿಸುವ ಕಾಲ ಬಂದಿದೆ. ವಿದ್ಯಾರ್ಥಿ ಯಾರೆಂಬುದನ್ನು ತಿಳಿದುಕೊಳ್ಳುವುದು ದೊಡ್ಡ ವಿಷಯವಲ್ಲ. ಆ ವಿದ್ಯಾರ್ಥಿಯ ಪೋಷಕರು ಪ್ರಸ್ತುತ ಬೇರೆ ಪಕ್ಷದ ಬೆಂಬಲಿಗರಾಗಿರಬಹುದು, ಮನೆಯಲ್ಲಿ ಅವರು ಆಡುವ ಮಾತುಗಳನ್ನು ಕೇಳಿಸಿಕೊಂಡು ಹಾಗೆ ಹೇಳಿರಬಹುದು. ಆತನ ಟೀಕೆಯನ್ನು ಗಂಭೀರವಾಗಿ ಪರಿಗಣಿಸಿ ತಮ್ಮ ಕನ್ನಡವನ್ನು ಸುಧಾರಿಸಿಕೊಳ್ಳುವ ಪ್ರಯತ್ನಕ್ಕೆ ಸಚಿವರು ಕೈ ಹಾಕುತ್ತಾರ? ಒಟ್ಟಿನಲ್ಲಿ ಯಾರು ಸ್ಟುಪಿಡ್ ಎಂಬುದು ಮುಂದಿನ ದಿನಗಳಲ್ಲಿ ನಿರ್ಧಾರವಾಗಲಿದೆ. ಸಚಿವರು ವಿದ್ಯಾರ್ಥಿ ಮನೆಗೆ ಭೇಟಿ ನೀಡಿ ತಮಗೆ ಕನ್ನಡ ಚನ್ನಾಗಿ ಬರುತ್ತದೆ ಎಂಬುದನ್ನು ಸಮರ್ಥಿಸಿಕೊಳ್ಳಲಿ ಅದನ್ನು ಬಿಟ್ಟು ವಿದ್ಯಾ ಮಂತ್ರಿಯಾಗಿದ್ದು ವಿದ್ಯಾರ್ಥಿಯನ್ನು ನಿಂದಿಸಿದ್ದು, ಅಲ್ಲದೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದು ಸರಿಯಲ್ಲ.

–ಕೆ.ಎಸ್.ಸುರೇಶ್, ಮುಖ್ಯ ಶಿಕ್ಷಕರು, ಸರಗೂರು.

ಮೂಲೆಗುಂಪಾಗಿರುವ ಹಾಡುಗಳನ್ನು ಮರಳಿ ತರುವ ಪ್ರಯತ್ನ !!

ಮಾನ್ಯರೆ,

ಇತ್ತೀಚೆಗೆ ಮೈಸೂರಿನ ಶಾರದಾವಿಲಾಸ ಕಾಲೇಜು ಶತಮಾನೋತ್ಸವ ಭವನದಲ್ಲಿ ಭೂಮಿಕಾ ಅಸೋಸಿಯೇಟ್ಸ್ ಹಾಗೂ ದಿ.ಮೈಕ್ ಚಂದ್ರು ಗೆಳೆಯರ ಬಳಗದ ವತಿಯಿಂದ ಸಂಘಟಕ ಸುರೇಶ್ ಅವರಿಂದ ಹಳೆಯ ಕನ್ನಡ ಚಲನಚಿತ್ರಗಳ ನೈಜ ವಾದ್ಯಗೋಷ್ಠಿಯನ್ನು ಆಯೋಜಿಸಲಾಗಿತ್ತು. ಇಂದಿನ ಯುವಪೀಳಿಗೆಗೆ ಬಹುಶಃ ಮೂಲೆಗುಂಪಾಗಿರುವ ಹಳೆಯ ಜನಪ್ರಿಯ ಕನ್ನಡ ಹಾಡುಗಳು ಮರೆತು ಹೋಗಿವೆ. ಅದಕ್ಕೆ ಪುನಃ ಜೀವಕೊಟ್ಟು ಹೊರ ತರುವ ಪ್ರಯತ್ನ ವನ್ನು ಸುರೇಶ್ ಮಾಡುತ್ತಿರುವುದು ಶ್ಲಾಘನೀಯ. ಅಂದಿನ ಗೀತರಚನೆ, ಸಂಗೀತ, ಹಿನ್ನೆಲೆ ಗಾಯಕರು ಎಂದೆಂದಿಗೂ ಅಚ್ಚ ಹಸಿರು. ಹಾಡುಗಳ ಆಯ್ಕೆಯೂ ಅಷ್ಟೇ ಮಧುರವಾಗಿ ಕಿವಿಗೆ ಇಂಪಾಗಿತ್ತು. ಇಲ್ಲಿ ವೇದಿಕೆ ಕಾರ್ಯಕ್ರಮಕ್ಕೆ ಆಸ್ಪದ ಕೊಡದೇ ಹಾಡುಗಳಿಗೆ ಹೆಚ್ಚಿನ ಮಹತ್ವ ಕೊಡಲಾಗಿತ್ತು. ಸುರೇಶ್ ಅವರ ತಂಡ ಈ ಕಾರ್ಯಕ್ರಮಕ್ಕೆ ಮೂರ್‍ನಾಲ್ಕು ತಿಂಗಳುಗಳಿಂದ ಪೂರ್ವಭಾವಿ ಅಭ್ಯಾಸ ನಡೆಸಿತ್ತು. ಎಲ್ಲಾ ವರ್ಗದ ಜನರು ಹಾಡುಗಳನ್ನು ಆಸ್ವಾದಿಸಿದರು. ಯಾವುದೇ ಗೊಂದಲವಿರಲಿಲ್ಲ. ಈ ಕಾರ್ಯಕ್ರಮದ ಮುಖ್ಯ ರೂವಾರಿ ಹಾಗೂ ಭೂಮಿಕಾ ಅಸೋಸಿಯೇಟ್ಸ್ ಮಾಲೀಕರಾದ ಸುರೇಶ್ ಹಾಗೂ ಅವರ ತಂಡಕ್ಕೆ ಧನ್ಯವಾದಗಳು. ಇವರಿಂದ ಇನ್ನೂ ಹೆಚ್ಚಿನ ಕಾರ್ಯಕ್ರಮಗಳು ಮೂಡಿಬರಲಿ ಎಂಬುದೇ ನಮ್ಮೆಲ್ಲರ ಆಶಯ. –ಜಿ.ಪಿ.ಹರೀಶ್, ವಿ.ವಿ.ಮೊಹಲ್ಲಾ, ಮೈಸೂರು.

ಉಪಚುನಾವಣೆಗಳ ಫಲಿತಾಂಶ: ಒಂದು ಕಿರುನೋಟ

ಮಾನ್ಯರೆ,

ಇತ್ತೀಚೆಗೆ ರಾಜ್ಯ ವಿಧಾನಸಭೆಯ ಮೂರು ಸ್ಥಾನಗಳಿಗೆ ನಡೆದ ಉಪಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಿದೆ. ಪ್ರಮುಖ ವಿರೋಧ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳಿಗೆ ಈ ಫಲಿತಾಂಶ ತಾತ್ಕಾಲಿಕ ಹಿನ್ನಡೆಯಾಗಿದೆ ಎಂದು ಹೇಳಬಹುದು. ಸಾಮಾನ್ಯವಾಗಿ ಉಪಚುನಾವಣೆಗಳಲ್ಲಿ ಆಡಳಿತಾರೂಢ ಪಕ್ಷ ಗೆಲ್ಲುವುದು ಸ್ವಾಭಾವಿಕವೆನ್ನಬಹುದು. ಆದರೆ, ಚನ್ನಪಟ್ಟಣದಲ್ಲಿ ಅತ್ಯಂತ ಬಿರುಸಿನ ಪೈಪೋಟಿ ನಡೆದಿತ್ತು. ಎರಡು ಬಾರಿ ಸೋಲಿನ ಕಹಿಯನ್ನು ಉಂಡಿದ್ದ ನಿಖಿಲ್ ಕುಮಾರಸ್ವಾಮಿಯವರು ಗೆಲ್ಲಬಹುದೆಂಬ ನಿರೀಕ್ಷೆ ಇದ್ದರೂ ಮತದಾರ ಅವರ ಕೈಹಿಡಿಯದೇ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿದ್ದಾರೆ.

ಅದೇ ರೀತಿ ಶಿಗ್ಗಾಂವಿಯಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ಗೆಲ್ಲುವ ಉತ್ಸಾಹದಲ್ಲಿದ್ದರು. ಅವರಿಗೂ ಸೋಲುಂಟಾಗಿದೆ. ಅಂದಹಾಗೆ ಮುಡಾ ಹಗರಣದಲ್ಲಿ ಒಂದನೇ ಆರೋಪಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯವರ ನಾಯಕತ್ವಕ್ಕೆ ಈ ಫಲಿತಾಂಶ ಸ್ವಲ್ಪ ಬಲ ಅಥವಾ ಆತ್ಮಸ್ಥೈರ್ಯ ತುಂಬಬಹುದು. ಆದರೆ ಕಾನೂನಾತ್ಮಕವಾಗಿ ಇದರಿಂದ ಅವರಿಗೆ ಹೆಚ್ಚಿನ ಪ್ರಯೋಜನವಿಲ್ಲವೆನ್ನಬಹುದು. ಕಾನೂನಿನ ಪ್ರಕ್ರಿಯೆ ಬೇರೆಯೇ ಆಗಿರುತ್ತದೆ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಅಬ್ಬರಗಳಿಗೆ ಸ್ವಲ್ಪಮಟ್ಟಿಗೆ ಪೆಟ್ಟು ಬಿದ್ದಿರುವುದಂತೂ ನಿಜವಾದ ಮಾತು.

–ಕೆ.ವಿ.ವಾಸು, ವಕೀಲರು–ನೋಟರಿ, ಮೈಸೂರು.

ಕೊಳ್ಳೆ ಹೊಡೆದ ಮೇಲೆ ಊರು ಬಾಗಿಲು ಮುಚ್ಚಿದಂಗೆ!

ಮಾನ್ಯರೇ,

50:50 ಅನುಪಾತದಡಿಯಲ್ಲಿ ನಿವೇಶನಗಳ ಹಂಚಿಕೆ ಹಗರಣ ಬೆಳಕಿಗೆ ಬಂದ ಮೇಲೆ ಮುಡಾದಿಂದ ಸ್ಥಳೀಯ ಸಂಸ್ಥೆಗಳಿಗೆ 240 ಖಾಸಗಿ ಬಡಾವಣೆಗಳ ವರ್ಗಾವಣೆ ಮಾಡಿರುವ ಈ ತೀರ್ಮಾನ ಕೊಳ್ಳೆ ಹೊಡೆದ ಮೇಲೆ ಊರು ಬಾಗಿಲು ಮುಚ್ಚಿದಂಗೆ ಅಂತ ಅನಿಸುತ್ತದೆ. –ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು

ಸರ್ಜರಿ ಅಂಡ್ ಭರ್ಜರಿ!


ಮಾನ್ಯರೆ,

'ಸಚಿವ ಸಂಪುಟ ಸರ್ಜರಿ' ಹಾಗೂ 'ದರ್ಶನ್ ಬೆನ್ನಿನ ಸರ್ಜರಿ' ಸದ್ದು ಮಾಡುತ್ತಿವೆ! ಎರಡೂ ಸರ್ಜರಿಗಳು ಆಗುತ್ತದೆಯೋ ಆಗುವುದಿಲ್ಲವೋ ಎಂಬುದು ಯಕ್ಷಪ್ರಶ್ನೆ! ಒಟ್ಟಿನಲ್ಲಿ ಈ ಎರಡೂ 'ಸರ್ಜರಿಗಳು ಸುದ್ದಿವಾಹಿನಿಗಳಲ್ಲಿ ಮಾತ್ರ 'ಭರ್ಜರಿ' ಪ್ರಚಾರ ಪಡೆಯುತ್ತಿವೆ! –ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

ನಮ್ಮ ಮೈಸೂರಿನ ಅಸಾಮಾನ್ಯರು...



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ್ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು, ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಅಪೂರ್ವ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿ ಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ಅದೇ ನನಗೆ ಬರೆದ ತೃಪ್ತಿ.



46. ಆಸ್ಥಾನ ವಿದ್ವಾನ್ ಕವಿರತ್ನ ಮಂಡಿಕಲ್ ರಾಮಾಶಾಸ್ತ್ರಿ



ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ. 87627 88685

ಮಂಡಿಕಲ್ ಕೋಲಾರ ಜಿಲ್ಲೆಯ ಚಿಕ್ಕಬಳ್ಳಾಪುರ ಬಳಿ ಇರುವ ಒಂದು ಗ್ರಾಮ. ಈ ಹಿಂದೆ ಅದು ಕಲೆ, ಸಾಹಿತ್ಯ, ಪೌರೋಹಿತ್ಯ, ಭಜನೆ ಹೀಗೆ ಹಲವಾರು ಕ್ಷೇತ್ರಗಳಿಗೆ ಹೆಸರುವಾಸಿಯಾಗಿತ್ತು. ಹಲವಾರು ಪಂಡಿತರನ್ನು ಪಡೆದು ಕೀರ್ತಿ ಗಳಿಸಿತ್ತು. ಅಲ್ಲಿನ ಪ್ರಮುಖ ಭಾಷೆಗಳ ಪೈಕಿ ಒಂದಾದ ತೆಲುಗು ಭಾಷೆಯಲ್ಲಿ ಅದನ್ನು 'ಅನ್ನಿ ವಿದ್ಯಲಕು ಓರಗಲ್ಲು ಮಂಡಿಕಲ್ಲು" ಎನ್ನುತ್ತಿದ್ದರು. ಎಲ್ಲಾ ವಿದ್ಯೆಗಳನ್ನು ಓರೆ ಹಚ್ಚಬಲ್ಲ ವಿದ್ವಾಂಸರ ತವರೂರು ಮಂಡಿಕಲ್ಲು ಎಂದು ಪ್ರಶಂಸಿಸುತ್ತಿದ್ದರು.

ಈ ಗ್ರಾಮದಲ್ಲಿ ಮುಂದೆ ಶ್ರೇಷ್ಠ ಮಟ್ಟದ ಸಂಸ್ಕೃತ ಪಂಡಿತರೆಂದು ಮನ್ನಣೆ ಗಳಿಸಿದ್ದ ರಾಮಾಶಾಸ್ತ್ರಿಗಳು 1849ರಲ್ಲಿ ಜನಿಸಿದರು. ಇವರ ತಂದೆ ವೆಂಕಟಸುಬ್ಬಾಶಾಸ್ತ್ರಿಗಳು. ತಾಯಿ ಅಕ್ಕಂಮಾಂಬ. ಚಿಕ್ಕಂದಿನಲ್ಲೇ ಸಂಸ್ಕೃತ ಅಭ್ಯಾಸವನ್ನು ಪ್ರಾರಂಭಿಸಿ ವಿದ್ವಾನ್ ವೆಂಕಟ ರಾಮಾಚಾರ್ ಅವರಿಂದ ಋಗ್ವೇದ ಮತ್ತು ಸಂಸ್ಕೃತ ಶಾಸ್ತ್ರಗಳ ಅಭ್ಯಾಸ ಮಾಡಿದರು. ನಂತರ ಉತ್ತರ ಭಾರತಕ್ಕೆ ತೆರಳಿ ಹೆಚ್ಚು ಪಾಂಡಿತ್ಯವನ್ನು ಗಳಿಸಿದರು. ಹಲವು ಗುರುಗಳ ಆಶ್ರಯ ಪಡೆದು ಹೆಚ್ಚಿನ ವೇದಾಭ್ಯಾಸ ಮಾಡಿದ ನಂತರ ಮೈಸೂರಿಗೆ ಹಿಂತಿರುಗಿ ಬಂದು ವಿದ್ವಾನ್ ಪಂಡಿತರತ್ನ ಸೀತಾರಾಮ ಶಾಸ್ತ್ರಿಗಳಿಂದ ಅಲಂಕಾರ ಶಾಸ್ತ್ರವನ್ನು ಕಲಿತರು.

ಸಂಸ್ಕೃತ–ಶಾಸ್ತ್ರಗಳ ವಿದ್ವಾಂಸರಾದ ಶಾಸ್ತ್ರಿಗಳು ಸಂಸ್ಕೃತದ ಮಹಾನ್ ಉಪಾಧ್ಯಾಯರೂ ಆಗಿದ್ದರು. ಮೈಸೂರಿನ ಮಹಾರಾಜ ಸಂಸ್ಕೃತ ಪಾಠಶಾಲೆಯಲ್ಲಿ ಹಲವಾರು ವರ್ಷಗಳು ಹಿರಿಯ ವಿದ್ವಾಂಸರಾಗಿ ಅನೇಕ ಶಿಷ್ಯರಿಗೆ ಮಾರ್ಗದರ್ಶನ ಮಾಡಿದರು. ತಮ್ಮ ಪಾಠಗಳಲ್ಲಿ ಇವರು ಪ್ರಾಚೀನ ಸಂಸ್ಕೃತಿಯ ಪರಿಚಯವನ್ನೂ ಮಾಡಿಕೊಡುತ್ತಿದ್ದರು. ಅವರ ಶಿಷ್ಯರಲ್ಲಿ ಕೀರ್ತಿ ಗಳಿಸಿದ ಹಲವಾರು ಮಂದಿಯ ಪೈಕಿ ಖ್ಯಾತಿ ಪಡೆದ ಆರ್. ಶಾಮಾ ಶಾಸ್ತ್ರಿಗಳು ಮತ್ತು ವಿ.ಲಕ್ಷ್ಮೀ ಪತಯ್ಯನವರು ಸೇರಿದ್ದರು. ಶಾಮಾಶಾಸ್ತ್ರಿಗಳು ಕೌಟಿಲ್ಯನ ಅರ್ಥ ಶಾಸ್ತ್ರವನ್ನು ಜಗತ್ತಿಗೆ ಕೊಟ್ಟು ಕೀರ್ತಿ ಪಡೆದರು.

ಮೈಸೂರು ಮತ್ತು ಕಾಶಿಯ ಮಹಾರಾಜರುಗಳಲ್ಲದೆ, ಹಲವಾರು ಮಠಾಧಿಪತಿಗಳೂ ಮಂಡಿಕಲ್ ರಾಮಾಶಾಸ್ತ್ರಿಗಳನ್ನು ಸನ್ಮಾನಿಸಿ ಗೌರವಿಸಿದ್ದರು. ಶೃಂಗೇರಿ, ಉತ್ತರಾದಿ ಮಠ, ರಾಘವೇಂದ್ರಸ್ವಾಮಿ ಮಠ ಹಾಗೂ ಶಿವಗಂಗೆಯ ಮಠಾಧಿಪತಿಗಳಿಂದಲೂ ಅವರಿಗೆ ಸನ್ಮಾನಗಳು ಸಂದಿದ್ದವು. ಮೈಸೂರು ಮಹಾರಾಜರ ಆಸ್ಥಾನ ವಿದ್ವಾಂಸರೂ ಆಗಿದ್ದರು. ನಾಲ್ವಡಿ ಕೃಷ್ಣರಾಜ ಒಡೆಯರು 'ಕವಿರತ್ನ' ಬಿರುದನ್ನು ಕೊಟ್ಟು ಅವರ ವಿದ್ವತ್ತಿಗೆ ಮನ್ನಣೆ ನೀಡಿದ್ದರು. 81 ವರ್ಷಗಳ ತುಂಬು ಜೀವನ ನಡೆಸಿ ಸಂಸ್ಕೃತ ಕಾವ್ಯಕ್ಕೆ ಅಪಾರ ಕೊಡುಗೆ ನೀಡಿ ಶಾಸ್ತ್ರಿಗಳು ಕಾಲವಾದರು. ಅವರ ಜ್ಞಾಪಕಾರ್ಥವಾಗಿ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸ್ವರ್ಣಪದಕವನ್ನು ಸ್ಥಾಪಿಸಲಾಗಿದೆ. ಶಾರದಾ ವಿಲಾಸ ಹೈಸ್ಕೂಲು ಮತ್ತು ಸದ್ವಿದ್ಯಾ ಹೈಸ್ಕೂಲಿನಲ್ಲಿ ರಾಮಾಶಾಸ್ತ್ರಿಗಳ ಹೆಸರಿನಲ್ಲಿ ಸಂಸ್ಕೃತ ಭಾಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸುವ ಹತ್ತನೇ ತರಗತಿ ವಿದ್ಯಾರ್ಥಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ.

ಆಸ್ಥಾನ ವಿದ್ವಾನ್ ಮಂಡಿಕಲ್ ರಾಮಾಶಾಸ್ತ್ರಿ ದಂಪತಿಗಳಿಗೆ ಆರು ಜನ ಮಕ್ಕಳು. ಅವರಲ್ಲಿ ಒಬ್ಬರಿಗೆ ವೆಂಕಟಸುಬ್ಬಾಶಾಸ್ತ್ರಿ ಎಂದು ತಾತನ ಹೆಸರನ್ನೇ ಇಡಲಾಗಿತ್ತು. 1898ರಲ್ಲಿ ಜನಿಸಿದ ಅವರೂ ತಂದೆಯ ಹಾದಿಯನ್ನೇ ಅನುಸರಿಸಿ ಸಂಸ್ಕೃತ ಪಂಡಿತರಾಗಿದ್ದರು. 1991ರಲ್ಲಿ ತಮ್ಮ 93ನೇ ವಯಸ್ಸಿನಲ್ಲಿ ಕೀರ್ತಿಶೇಷರಾದರು.

ಮಂಡಿಕಲ್ ರಾಮಾಶಾಸ್ತ್ರಿಗಳು ಹಲವಾರು ಶ್ರೇಷ್ಠ ಗ್ರಂಥಗಳನ್ನು ರಚಿಸಿದ್ದಾರೆ. ಅವುಗಳು ಸಂಸ್ಕೃತ ಭಾಷೆಯಲ್ಲಿದ್ದು ಕಾವ್ಯ, ನಾಟಕ, ಗದ್ಯ ಪ್ರಾಕಾರಗಳಲ್ಲಿವೆ. ಕಾಳಿದಾಸನ 'ಮೇಘ ಸಂದೇಶ'ಕ್ಕೆ ಉತರಾರ್ಧವಾಗಿ 'ಮೇಘ ಪ್ರತಿ ಸಂದೇಶ' ಎಂಬ ಕೃತಿಯನ್ನು ರಚಿಸಿದ್ದಾರೆ. ಇದು ಅವರ ಶ್ರೇಷ್ಠ ಕೃತಿಗಳಲ್ಲಿ ಒಂದಾಗಿದ್ದು ಅವರಿಗೆ ಮನ್ನಣೆಯನ್ನು ತಂದುಕೊಟ್ಟಿತು. 'ಕವಿರತ್ನ' ಎಂಬ ಬಿರುದೂ ಅವರಿಗೆ ಲಭ್ಯವಾಯಿತು. ಈ ಕೃತಿಯಲ್ಲಿ ಮೈಸೂರಿನ ಸುಂದರ ವರ್ಣನೆಯೂ ಸೇರಿದೆ. ಜೊತೆಗೆ ಮೈಸೂರು ಸಂಸ್ಥಾನದ ಚಿತ್ರವೂ ವರ್ಣಿತವಾಗಿದೆ ಎನ್ನಲಾಗಿದೆ.

ಅವರ ಇತರೆ ಕೃತಿಗಳಲ್ಲಿ 'ಕುಂಭಾಭಿಷೇಕ ಚಂಪೂ', 'ಆರ್ಯಧರ್ಮಪ್ರಕಾಶಿಕಾ', 'ಭೈಮಿ ಪರಿಣಯಂ', 'ಸಂಸ್ಕೃತ ಕಥಾಸಪ್ತತಿ' ಹಾಗೂ 'ಭಗವತ್ಪ್ರಾರ್ಥನ' ಇವುಗಳು ಸೇರಿವೆ. ತಮ್ಮ ಗ್ರಂಥಗಳಲ್ಲಿ ಇತರೆ ಹಲವಾರು ಕೃತಿಗಳನ್ನು ಪ್ರಸ್ತಾಪಿಸಿದ್ದು ಅವುಗಳಲ್ಲಿ 'ಚಾಮರಾಜ ಕಲ್ಯಾಣ ಚಂಪೂ', 'ಚಾಮರಾಜ ರಾಜ್ಯಾಭಿಷೇಕ ಚರಿತಂ'; 'ಕೃಷ್ಣರಾಜಾಭ್ಯುದಯ' ಅಲಭ್ಯವಾಗಿವೆ ಎನ್ನಲಾಗಿದೆ.

ಅವರ 'ಕುಂಭಾಭಿಷೇಕಚಂಪೂ' ಕೃತಿ ಶೃಂಗೇರಿಯಲ್ಲಿ ಶ್ರೀಶಾರದಾಂಬಾ ದೇವಸ್ಥಾನಕ್ಕೆ ನಡೆದ ಕುಂಭಾಭಿಷೇಕದ ವಿವರಣೆಯಾಗಿದೆ. ರಾಮಾಶಾಸ್ತ್ರಿಗಳ ಸಾಹಿತ್ಯಿಕ ಶ್ರೇಷ್ಠತೆಯ ಬಗ್ಗೆ ಮೆಚ್ಚುಗೆ ಹೊಂದಿದ್ದ ಅಂದಿನ ಶೃಂಗೇರಿ ಜಗದ್ಗುರುಗಳಾದ ಶ್ರೀಚಂದ್ರಶೇಖರಭಾರತೀ ಸ್ವಾಮಿಗಳು ಕುಂಭಾಭಿಷೇಕ ಸಮಾರಂಭದ ವೈಭವವನ್ನು ವರ್ಣಿಸುವ ಈ ಕೃತಿಯನ್ನು ರಚಿಸಲು ಅವರನ್ನು ಪ್ರೇರೇಪಿಸಿದರು ಎನ್ನಲಾಗಿದೆ.

'ಆರ್ಯಧರ್ಮಪ್ರಕಾಶಿಕಾ' ಕೃತಿಯನ್ನು ಮೈಸೂರು ಮಹಾರಾಜರ ಆಶಯದಂತೆ ಸಿದ್ಧಪಡಿಸಲಾಗಿದ್ದು, ಅದರ ಪೂರ್ವಭಾಗ ಚತುರ್ವಿಧ ಮೌಲ್ಯಗಳಾದ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷಗಳ ವಿವರಣೆ ಹೊಂದಿದೆ. ಉತ್ತರಾರ್ಧ ಚಾರ್ವಾಕ, ಬೌದ್ಧ ಮತ್ತು ಜೈನ ಶಾಖೆಗಳನ್ನು ಒಳಗೊಂಡು, ಕೃತಿಯು ಭಾರತೀಯ ತತ್ವಶಾಸ್ತ್ರದ ವಿವಿಧ ವ್ಯವಸ್ಥೆಗಳ ಸಂಕ್ಷಿಪ್ತ ವಿವರಣೆಯನ್ನು ಒಳಗೊಂಡಿದೆ. 'ಭೈಮೀಪರಿಣಯಂ' ಹತ್ತು ಅಂಕಗಳ ಸಂಸ್ಕೃತ ನಾಟಕ. ಇದು ಮಹಾಭಾರತದ ನಳೋಪಾಖ್ಯಾನವನ್ನು ಆಧರಿಸಿ ರಚಿತವಾಗಿರುವ ಕೃತಿ. 'ಸಂಸ್ಕೃತ ಕಥಾ ಸಪ್ತತಿ' ಎಪ್ಪತ್ತು ಕಥೆಗಳ ಸಂಗ್ರಹ. ರಾಮಾಶಾಸ್ತ್ರಿಗಳು ಈ ಕಥೆಗಳನ್ನು ಮೂಲತಃ ಕನ್ನಡದಲ್ಲಿ ಬರೆದಿದ್ದಾರೆ. ಸಂಸ್ಕೃತ ವಿದ್ಯಾರ್ಥಿಗಳ ಅಗತ್ಯತೆಯನ್ನು ಪೂರೈಸಲು ಇವರು ಸಂಸ್ಕೃತ ಗದ್ಯದಲ್ಲಿಯೂ ಈ ಕಥೆಗಳನ್ನು ಪುನಃ ಹೇಳಿದ್ದಾರೆ. 'ಭಗವತ್ಪ್ರಾರ್ಥನೆ' ದೈನಂದಿನ ಪೂಜೆ ಮತ್ತು ಪಾರಾಯಣಕ್ಕಾಗಿ ಸಿದ್ಧಪಡಿಸಲಾದ ಪ್ರಾರ್ಥನೆಗಳ ಪುಸ್ತಕ.

ರಾಮಾಶಾಸ್ತ್ರಿಗಳ ಹೆಸರಿನಲ್ಲಿ ಅವರ ಕುಟುಂಬದ ಸದಸ್ಯರು ಒಂದು ದತ್ತಿ ರಚಿಸಿದ್ದು, ಶಾಸ್ತ್ರಿಗಳ ಎಲ್ಲಾ ಕೃತಿಗಳ ಸಂಗ್ರಹ ಮತ್ತು ಮರುಪ್ರಕಟಣೆ ಅದರ ಉದ್ದೇಶಗಳಲ್ಲಿ ಸೇರಿದೆ.

ಇಂದು ಆಂಥ್ರೋಪೊಲಾಜಿಕಲ್ ಸರ್ವೇ ಆಫ್ ಇಂಡಿಯಾದ 80ನೇ ಸಂಸ್ಥಾಪನಾ ದಿನಾಚರಣೆ

ಮೈಸೂರು,ಡಿ.1(ಪಿಎಂ)–ಭಾರತ ಸರ್ಕಾರದ ಸಂಸ್ಕೃತಿ ಸಚಿವಾಲಯ ಅಧೀನದ ಆಂಥ್ರೋಪೊಲಾಜಿಕಲ್ ಸರ್ವೇ ಆಫ್ ಇಂಡಿಯಾದ 80ನೇ ಸಂಸ್ಥಾಪನಾ ದಿನವನ್ನು ಸಂಸ್ಥೆಯ ಮೈಸೂರಿನ (ಬೋಗಾದಿ) ದಕ್ಷಿಣ ಪ್ರಾದೇಶಿಕ ಕೇಂದ್ರದಲ್ಲಿ ಡಿ.2ರಂದು ಬೆಳಗ್ಗೆ 11.30ಕ್ಕೆ ಹಮ್ಮಿಕೊಳ್ಳಲಾಗಿದೆ. ಶಿಲ್ಲಾಂಗ್‌ನ ನಾರ್ತ್ ಈಸ್ಟರ್ನ್ ಹಿಲ್ ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ಪಿ.ಕೆ.ಮಿಶ್ರಾ, ಕರ್ನಾಟಕ ವಿವಿಯ ಆಂಥ್ರೋಪೊಲಾಜಿ ಅಧ್ಯಯನ ವಿಭಾಗದ ಮಾಜಿ ಮುಖ್ಯಸ್ಥ ಪ್ರೊ.ಸಿ.ಜಿ.ಹುಸೇನ್‌ಖಾನ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಸಂಸ್ಥೆಯ ಮೈಸೂರಿನ ದಕ್ಷಿಣ ಪ್ರಾದೇಶಿಕ ಕೇಂದ್ರದ ಉಪನಿರ್ದೇಶಕ ಡಾ.ಹರ್ಷವರ್ಧನ ಉಪಸ್ಥಿತರಿರಲಿದ್ದಾರೆ. ಇದೇ ವೇಳೆ ಮ್ಯೂಸಿಯಂನ ಕಲಾಕೃತಿಗಳ ಪ್ರದರ್ಶನ ಸಹ ಹಮ್ಮಿಕೊಳ್ಳಲಾಗಿದೆ. ಮಧ್ಯಾಹ್ನ 3ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಡಾ.ಬಿ.ರಾಜಶಂಕರ್ ಗುಹಾ ನಿರ್ದೇಶಕರಾಗಿ ಮತ್ತು ವೆರಿಯರ್ ಎಲ್ವಿನ್ ಅವರು ಉಪನಿರ್ದೇಶಕರಾಗಿ 1945ರಲ್ಲಿ ಆಂಥ್ರೋಪೊಲಾಜಿಕಲ್ ಸರ್ವೇ ಆಫ್ ಇಂಡಿಯಾ ಸ್ಥಾಪನೆಯಾಯಿತು. ಮಾನವಶಾಸ್ತ್ರೀಯ ಅಧ್ಯಯನಗಳಿಗೆ ಮೀಸಲಾಗಿರುವ ಏಕೈಕ ಸರ್ಕಾರಿ ಸಂಶೋಧನಾ ಸಂಸ್ಥೆ ಇದಾಗಿದೆ ಎಂದು ಸಂಸ್ಥೆ ಪ್ರಕಟಣೆ ತಿಳಿಸಿದೆ.

ಮನೆ ಕಳ್ಳತನ ಮಾಡಿದ್ದ ಆರೋಪಿ ಬಂಧನ

2.35 ಲಕ್ಷ ಮೌಲ್ಯದ ಚಿನ್ನಾಭರಣ ವಶ

ಮೈಸೂರು, ಡಿ.1(ಬಿಎಲ್‌ಯು)– ಮೈಸೂರಿನ ರಾಮಾನುಜ ರಸ್ತೆಯಲ್ಲಿ ಮನೆ ಕಳ್ಳತನ ಮಾಡಿದ್ದ ಆರೋಪಿಯನ್ನು ಬಂಧಿಸಿರುವ ಕೃಷ್ಣರಾಜ ಠಾಣೆ ಪೊಲೀಸರು 2.35 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ದ್ವಿಚಕ್ರ ವಾಹನ ವಶಪಡಿಸಿಕೊಂಡಿದ್ದಾರೆ. ನಗರದ ರಾಮಾನುಜ ರಸ್ತೆಯ ಮನೆಯೊಂದರಲ್ಲಿ ನ.22ರಂದು ಮನೆ ಕಳ್ಳತನವಾಗಿತ್ತು. ಈ ಸಂಬಂಧ ಕೃಷ್ಣರಾಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪೊಲೀಸರು ನವೆಂಬರ್ 29ರಂದು ಗಸ್ತಿನಲ್ಲಿರುವಾಗ ತಮಗೆ ದೊರೆತ ಖಚಿತ ಮಾಹಿತಿ ಮೇರೆಗೆ ಕಾಡಾ ಕಚೇರಿ ಬಳಿ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ರಾಮಾನುಜ ರಸ್ತೆಯ ಮನೆಯಲ್ಲಿ ಕಳ್ಳತನ ಮಾಡಿರುವುದು ತಿಳಿಯಿತು. ಈ ಸಂಬಂಧ ಆರೋಪಿಯನ್ನು ಬಂಧಿಸಿರುವ ಪೊಲೀಸರು 2.35 ಮೌಲ್ಯದ ಚಿನ್ನಾಭರಣ ಹಾಗೂ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ಎಸಿಪಿ ಹೆಚ್.ಬಿ.ರಮೇಶ್‌ಕುಮಾರ್ ನೇತೃತ್ವದಲ್ಲಿ ಇನ್ಸ್‌ಪೆಕ್ಟರ್ ಮೋಹಿತ್ ಸಹದೇವ, ಪಿಎಸ್‌ಐ ಲಕ್ಕಪ್ಪ ಹೆಚ್.ಕುಕ್ಕಡಿ, ಸಿಬ್ಬಂದಿಗಳಾದ ನಟರಾಜು, ಮೊಖದ್ದರ್ ಷರೀಫ್, ಕಾರ್ತಿಕ್‌ಕುಮಾರ್, ಪ್ರಸಾದ್, ಸವಿತಾ, ಅಶ್ವಿನಿ ಪತ್ತೆ ಕಾರ್ಯ ಕೈಗೊಂಡಿದ್ದರು.

ಪೀಠೋಪಕರಣ ಕಳ್ಳತನ ಮಾಡಿ ಮಾರಾಟಕ್ಕೆ ಯತ್ನ

ಇಬ್ಬರು ಆರೋಪಿಗಳ ಬಂಧನ

ಮೈಸೂರು, ಡಿ.1(ಬಿಎಲ್‌ಯು)– ಮೈಸೂರಿನ ಜಯಲಕ್ಷ್ಮಿಪುರಂ ಮನೆಯಲ್ಲಿ ಪೀಠೋಪಕರಣ ಕಳ್ಳತನ ಮಾಡಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ನಗರದ ಜಯಲಕ್ಷ್ಮಿಪುರಂನ ಮನೆಯಲ್ಲಿ ನ.27ರಂದು ಪೀಠೋಪಕರಣ ಕಳ್ಳತನವಾಗಿತ್ತು. ಈ ಸಂಬಂಧ ಜಯಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ನಗರದ ಪ್ರೀಮಿಯರ್ ಸ್ಟುಡಿಯೋ ಮೆಟ್ರೋ ಪೊಲೀಸ್ ಅಪಾರ್ಟ್‌ಮೆಂಟ್ ಬಳಿ ನವೆಂಬರ್ 29ರಂದು ಪೊಲೀಸರು ಗಸ್ತಿನಲ್ಲಿದ್ದರು. ಈ ವೇಳೆ ಪೀಠೋಪಕರಣಗಳನ್ನು ಮಾರಾಟ ಮಾಡಲು ಆಟೋದಲ್ಲಿ ಹೋಗುತ್ತಿದ್ದ ಇಬ್ಬರನ್ನು ಬಂಧಿಸಿದ್ದರು. ಆರೋಪಿಗಳಿಂದ 85 ಸಾವಿರ ಮೌಲ್ಯದ ಟಿವಿ, ಫ್ರಿಡ್ಜ್ ಸೇರಿದಂತೆ ಇತರೆ ಪೀಠೋಪಕರಣಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ನರಸಿಂಹರಾಜ ಎಸಿಪಿ ಅಶ್ವಥ್ ನಾರಾಯಣ್ ನೇತೃತ್ವದಲ್ಲಿ ಇನ್ಸ್‌ಪೆಕ್ಟರ್ ಕುಮಾರ್, ಪಿಎಸ್‌ಐ ಎಂ.ಕೆ. ಸ್ಮಿತಾ, ಎಎಪ್‌ಐ ರಾಜೇಗೌಡ ಹಾಗೂ ಸಿಬ್ಬಂದಿಗಳಾದ ಅಭಿಷೇಕ್ ಬೆಂಜಮಿನ್, ಎಂ.ಡಿ.ರವಿ, ಸೋಮಣ್ಣ, ಸಂಪತ್ ಕುಮಾರ್, ಸಚಿನ್, ಎಂ.ಜಿ.ಕುಮಾರ್ ಹಾಗೂ ಇತರರು ಪತ್ತೆ ಕಾರ್ಯ ಕೈಗೊಂಡಿದ್ದರು.

ಚಂದ್ರಶೇಖರ್ ಸ್ವಾಮೀಜಿ ವಿರುದ್ಧದ ಎಫ್‌ಐಆರ್ ವಾಪಸ್ಸಿಗೆ ಆಗ್ರಹಿಸಿ ಒಕ್ಕಲಿಗ ಸಂಘದಿಂದ ಪ್ರತಿಭಟನೆ



ಚಂದ್ರಶೇಖರ್ ಸ್ವಾಮೀಜಿ ವಿರುದ್ಧದ ಎಫ್‌ಐಆರ್ ವಾಪಸ್ಸಿಗೆ ಆಗ್ರಹಿಸಿ ಒಕ್ಕಲಿಗ ಸಂಘ ವತಿಯಿಂದ ಜಿಲ್ಲಾ ಪಂಚಾಯತ್ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಡಿ.1(ಜಿಎ)–ಬೆಂಗಳೂರು ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಶ್ರೀ ಚಂದ್ರಶೇಖರನಾಥ ಸ್ವಾಮೀಜಿ ಅವರ ಮೇಲೆ ರಾಜ್ಯ ಸರ್ಕಾರ ಎಫ್‌ಐಆರ್ ದಾಖಲಿಸಿರುವುದನ್ನು ಈ ಕೂಡಲೇ ವಾಪಸು ತೆಗೆದುಕೊಳ್ಳ ಬೇಕು ಎಂದು ಆಗ್ರಹಿಸಿ ಮೈಸೂರಿನ ಜಿಲ್ಲಾ ಪಂಚಾಯತ್ ಕಚೇರಿ ಮುಂಭಾಗ ರಾಜ್ಯ ಒಕ್ಕಲಿಗರ ಸಂಘ, ಮೈಸೂರು ಜಿಲ್ಲಾ ಒಕ್ಕಲಿಗರ ಸಂಘ ಮತ್ತು ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ವತಿಯಿಂದ ಪ್ರತಿಭಟನೆಯನ್ನು ನಡೆಸಲಾಯಿತು.

ಒಬ್ಬ ಮುಸ್ಲಿಂ ಮಹಿಳೆ ನಮಗೆ ಕುರಾನ್ ಮೊದಲ ಸಂವಿಧಾನ. ಮುಸ್ಲಿಂ ಕಾನೂನನ್ನು ಪ್ರತಿಸುವ ಯಾವುದನ್ನು ನಾವು ಸ್ವೀಕರಿಸಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ಹೇಳಿದ್ದಕ್ಕೆ ಶ್ರೀ ಚಂದ್ರಶೇಖರ್ ಸ್ವಾಮೀಜಿ ಅವರು ಇವರಿಗೆ ಸಂವಿಧಾನ ಬೇಡ ಎಂದ ಮೇಲೆ ಮತದಾನದ ಹಕ್ಕು ಏಕೆ? ಎಂದು ಹೇಳಿದ್ದಾರೆ. ಸ್ವಾಮೀಜಿ ಅವರು ಮಾತನಾಡುವಾಗ ಮುಸ್ಲಿಂ ರಾಷ್ಟ್ರ ಪಾಕಿಸ್ತಾನದ ವಿಸ್ತೀರ್ಣಕ್ಕಿಂತ ನಮ್ಮ ದೇಶದಲ್ಲಿರುವ ವಕ್ಫ್ ಆಸ್ತಿ ವಿಸ್ತೀರ್ಣವೇ ಹೆಚ್ಚಿದೆ. ಆದ್ದರಿಂದ ಒಂದು ಭಾರತದಲ್ಲಿರುವ ಮುಸ್ಲಿಮರಿಗೆ ಮತದಾನದ ಹಕ್ಕು ಬೇಡ ಅಥವಾ ವಕ್ಫ್ ಬೋರ್ಡ್ ರದ್ದು ಮಾಡಿ ಎಂದು ಹೇಳಲು ಹೋಗಿರುವುದು ಅಷ್ಟೇ ವಿನಾ ಬೇರೇನೂ ಉದ್ದೇಶದಿಂದ ಹೇಳಿಲ್ಲ. ಆದರೆ, ಕಳೆದ ತಿಂಗಳು ಸಚಿವ ಜಮೀರ್ ಅಹ್ಮದ್ ಕೇಂದ್ರ ಮಂತ್ರಿ ಕುಮಾರಸ್ವಾಮಿ ಅವರ ವಿರುದ್ಧ ವರ್ಣಭೇದ, ಜನಾಂಗೀಯ ಮಾತನಾಡಿದ್ದರೂ ಸಹ ಅವರ ಮೇಲೆ ರಾಜ್ಯ ಸರ್ಕಾರ ಎಫ್‌ಐಆರ್ ದಾಖಲಿಸದೆ, ಸ್ವಾಮೀಜಿ ಮೇಲೆ ದಾಖಲಿಸಿರುವುದನ್ನು ನೋಡಿದರೆ ಈ ಸರ್ಕಾರ ಹಿಂದೂ ವಿರೋಧಿ ಸರ್ಕಾರ ಎನಿಸುತ್ತದೆ ಎಂದು ಕಿಡಿಕಾರಿದರು.

ರಾಜ್ಯ ಸರ್ಕಾರ ಈ ಕೂಡಲೇ ಸ್ವಾಮೀಜಿಯವರ ಮೇಲೆ ದಾಖಲಿಸಿರುವ ಎಫ್‌ಐಆರ್ ಅನ್ನು ವಾಪಸ್ ಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಒಕ್ಕಲಿಗ ಸಂಘಟನೆಗಳು ಬೃಹತ್ ಪ್ರತಿಭಟನೆಯನ್ನು ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷ ಸಿ.ಜಿ. ಗಂಗಾಧರ್, ಶಿವೇಗೌಡ, ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್‌ಗೌಡ, ಲತಾ ರಂಗನಾಥ್, ಶಿವಲಿಂಗಯ್ಯ ಮೈಸೂರು ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಮರಿಸ್ವಾಮಿ, ಚೇತನ್, ಮಂಜುನಾಥ್, ರಘುರಾಂ, ಚರಣ್‌ರಾಜ್, ನಾಗಣ್ಣ, ವರಕೂಡು ಕೃಷ್ಣೇಗೌಡ, ರಾಮಕೃಷ್ಣ, ಆಟೋ ಮಹದೇವು, ನಾಗರಾಜು, ಆನಂದ್, ಲಕ್ಕೀ, ಬಸವರಾಜು, ಪ್ರಕಾಶ್, ಹನುಮಂತಯ್ಯ, ಗಿರೀಶ್, ಮಂಜುಳಾ, ಭಾಗ್ಯಮ್ಮ, ನೇಹಾ, ರಾಮಣ್ಣ, ರವಿ ಒಲಂಪಿಯಾ, ಪ್ರದೀಪ್, ಚಂದ್ರಶೇಖರ್, ಪರಿಸರ ಚಂದ್ರು, ಕುಮಾರ್‌ಗೌಡ, ಹೊಂಬೇಗೌಡ, ಸ್ವಾಮಿ, ದರ್ಶನ್‌ಗೌಡ ಇನ್ನಿತರರು ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431777 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581/1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ಬಿಜೆಪಿಯಲ್ಲಿ ಭಿನ್ನಮತ ತಾರಕಕ್ಕೆ


ನಿಮ್ಮ ಹೊಂದಾಣಿಕೆ ರಾಜಕೀಯದಿಂದಲೇ ವಿರೋಧ ಪಕ್ಷದಲ್ಲಿ ಕುಳಿತಿದ್ದೇವೆ

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ವಾಗ್ದಾಳಿ

ಬೆಳಗಾವಿ, ಡಿ.1– ಕಾಂಗ್ರೆಸ್ ಪಕ್ಷ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ಹೊಂದಾಣಿಕೆ ರಾಜಕಾರಣ ಮಾಡಲು ನಿಮ್ಮನ್ನು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರನ್ನಾಗಿ ಮಾಡಿಲ್ಲ, ಹುಷಾರ್ ಎಂದು ಮಾಜಿ ಸಚಿವ ಅರವಿಂದ ಲಿಂಬಾವಳಿ ಅವರು ಬಿ.ವೈ.ವಿಜಯೇಂದ್ರ ಅವರಿಗೆ ಎಚ್ಚರಿಕೆ ನೀಡಿದರು.

ವಕ್ಫ್ ಮಂಡಳಿಯ ಭೂಕಬಳಿಕೆ ವಿರೋಧಿಸಿ, ಯತ್ನಾಳ ನೇತೃತ್ವದ ಬಿಜೆಪಿಯವರು ಭಾನುವಾರ ಹಮ್ಮಿಕೊಂಡಿದ್ದ ಜನಜಾಗೃತಿ ಹೋರಾಟ ಸಮಾವೇಶದಲ್ಲಿ ಅವರು ಮಾತನಾಡಿದರು.

ವಕ್ಫ್ ಮಂಡಳಿಯ ಭೂಕಬಳಿಕೆ ವಿರುದ್ಧದ ಹೋರಾಟ ಜನಪರವಾದದ್ದು. ಇದರ ನೇತೃತ್ವ ವಹಿಸಿದ ಬಸನಗೌಡ ಪಾಟೀಲ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟಿಸುತ್ತೇನೆ ಎನ್ನುತ್ತೀರಾ?ಎಂದು ಪ್ರಶ್ನಿಸಿದ ಅವರು, ರಾಜ್ಯದಲ್ಲಿ ಉಪ ಚುನಾವಣೆ ಮುಗಿದು ಬಹಳ ದಿನಗಳಾಯಿತು. ಇನ್ನಾದರೂ ನಮ್ಮ ಜತೆಗೆ ಸೇರಿಕೊಂಡು, ವಕ್ಫ್ ಮಂಡಳಿ ವಿರುದ್ಧ ರಸ್ತೆಗಿಳಿದು ಹೋರಾಟಕ್ಕೆ ಬನ್ನಿ. ನಮ್ಮೊಂದಿಗೆ ಬರಲು ಇಷ್ಟ ಇಲ್ಲದಿದ್ದರೆ ನೀವೇ ಪ್ರತ್ಯೇಕವಾಗಿ ಹೋರಾಡಿ. ನಮ್ಮ ಪಾಡಿಗೆ ನಾವು ಹೋರಾಟ ಮಾಡಲು ಬಿಡಿ ಎಂದರು.



ಲಿಂಬಾವಳಿ

ಜನಪರವಾಗಿ ಕೆಲಸ ಮಾಡಲೆಂದು ನಿಮ್ಮನ್ನು ಅಧ್ಯಕ್ಷರನ್ನಾಗಿ ನೇಮಿಸಿದ್ದರೆ, ನೀವು ಹಾದಿಬೀದಿಯಲ್ಲಿ ನಿಂತು ಮಾತನಾಡುತ್ತೀರಾ? ನಾವು ಹಾದಿಬೀದಿಯಲ್ಲಿ ನಿಂತು ಹೇಳಿಕೆ ಕೊಡುತ್ತಿಲ್ಲ. ಬೆಂಗಳೂರಿನಲ್ಲಿ ಕುಳಿತು ನೀವೇ ಗೊಂದಲ ಸೃಷ್ಟಿಸುತ್ತಿದ್ದೀರಿ. ಇದು ಪಕ್ಷಕ್ಕೂ ಹಾಗೂ ನಿಮಗೂ ಗೌರವ ತರುವುದಿಲ್ಲ. ನೀವು ಹೊಂದಾಣಿಕೆ ರಾಜಕಾರಣ ಮಾಡಿದ್ದರಿಂದ ನಾವು ಇಂದು ವಿರೋಧ ಪಕ್ಷದಲ್ಲಿ ಕುಳಿತಿದ್ದೇವೆ. ತಾವು ಚುನಾವಣೆಯಲ್ಲಿ ಏನೇನು ಮಾಡಿದ್ದೀರಿ ಎಂದು ಹೇಳುವ ಸಂದರ್ಭ ಇದಲ್ಲ. ಜನರು ಬಿಜೆಪಿ ಮೇಲೆ ನಂಬಿಕೆ ಇಟ್ಟಿದ್ದಾರೆ. ನೀವು ಜನರ ಜತೆಗೆ ಹೋರಾಟಕ್ಕೆ ಇಳಿಯಿರಿ. ಆಗ ಶಹಬ್ಬಾಸ್ ಎನ್ನುತ್ತೇವೆ ಎಂದು ಹೇಳಿದರು.

10 ಲಕ್ಷ ಜನರನ್ನು ಸೇರಿಸುತ್ತೇವೆ: ಶಾಸಕ ರಮೇಶ ಜಾರಕಿಹೊಳಿ ಮಾತನಾಡಿ, ವಕ್ಫ್ ವಿರುದ್ಧದ ಹೋರಾಟದ ಕೊನೆಗೆ ದಾವಣಗೆರೆಯಲ್ಲಿ ಸಮಾವೇಶ ಮಾಡುತ್ತೇವೆ. ಅಲ್ಲಿ 10 ಲಕ್ಷ ಜನರನ್ನು ಸೇರಿಸುತ್ತೇವೆ. ಬೆಳಗಾವಿಯಿಂದ 1 ಲಕ್ಷ ಜನರನ್ನು ಕರೆದೊಯ್ಯುತ್ತೇವೆ. ಸಮಾವೇಶಕ್ಕೆ ಸಾಕಷ್ಟು ಖರ್ಚಾಗುತ್ತದೆ. ಈ ಪೈಕಿ ಬೆಳಗಾವಿಯ ಬಿಜೆಪಿ ಕಾರ್ಯಕರ್ತರಿಂದ 1 ಕೋಟಿ ನಿಧಿ ನೀಡುತ್ತೇವೆ. ನಾನು, ಯತ್ನಾಳ್ ಸೇರಿ ನಾಯಕರೇ ಸಮಾವೇಶಕ್ಕೆ ಬೇಕಿರುವ ಹಣ ಕೊಡಬಹುದಿತ್ತು. ಹಾಗೆ ಮಾಡಿದರೆ ನಾವು 'ಪೂಜ್ಯ ತಂದೆ, ಪೂಜ್ಯ ಮಗ' ಆಗುತ್ತೇವೆ. ಹಾಗಾಗಿ ಕಾರ್ಯಕರ್ತರಿಂದ ಹಣ ಸಂಗ್ರಹಿಸುತ್ತೇವೆ ಎಂದರು.

ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಮಾತನಾಡಿ, ರಮೇಶ ಜಾರಕಿಹೊಳಿ ಆಪರೇಷನ್ ಮಾಡಿದ್ದರಿಂದ ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂತು. ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾದರು. ಈಗ ನಮ್ಮನ್ನು ಆಪರೇಷನ್ ಮಾಡುತ್ತಾರಂತೆ. ಇಡೀ ರಾಜ್ಯದಲ್ಲಿ ಆಪರೇಷನ್ ಮಾಡುವಲ್ಲಿ ನಾವು ಟಾಪ್‌ಮೋಸ್ಟ್ ಡಾಕ್ಟರ್‌ಗಳಿದ್ದೇವೆ. ನಮ್ಮನ್ನು ಆಪರೇಷನ್ ಮಾಡಿದರೆ ನಿಮ್ಮ ನರನಾಡಿಗಳನ್ನೇ ಕಟ್ ಮಾಡುತ್ತೇವೆ ಎಂದು ಪರೋಕ್ಷವಾಗಿ ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಹರಿಹಾಯ್ದರು.

ಬೆಳಗಾವಿಯಲ್ಲಿನ ಸಮಾವೇಶವು ರಮೇಶ್ ಜಾರಕಿಹೊಳಿ ಅವರ ತಾಕತ್ತಿನ ಟ್ರೇಲರ್ ಅಷ್ಟೇ. ದಾವಣಗೆರೆಯಲ್ಲಿ ಪಿಕ್ಚರ್ ಇನ್ನೂ ಬಾಕಿ ಹೈ ಎಂದು ವಾಗ್ದಾಳಿ ನಡೆಸಿದರು. ಯತ್ನಾಳ್ ಮತ್ತು ಲಿಂಬಾವಳಿ ಅವರೂ ದಾವಣಗೆರೆಯ ಸಮಾವೇಶಕ್ಕೆ ಕಾರ್ಯಕರ್ತರ ಮೂಲಕ ತಲಾ 1 ಕೋಟಿ ನೀಡುವುದಾಗಿ ತಿಳಿಸಿದರು.

ಗೋಪ್ಯ ಸಭೆ: ಸಮಾವೇಶಕ್ಕೂ ಮುನ್ನ ನಗರದ ಹೋಟೆಲ್‌ನಲ್ಲಿ ಶಾಸಕರಾದ ರಮೇಶ ಜಾರಕಿಹೊಳಿ, ಬಸನಗೌಡ ಪಾಟೀಲ ಯತ್ನಾಳ, ಬಿಜೆಪಿ ಮುಖಂಡರಾದ ಅರವಿಂದ ಲಿಂಬಾವಳಿ, ಕುಮಾರ ಬಂಗಾರಪ್ಪ, ಜಿ.ಎಂ. ಸಿದ್ದೇಶ್ವರ, ಪ್ರತಾಪ್ ಸಿಂಹ ಮತ್ತಿತರರು ಗೌಪ್ಯ ಸಭೆ ನಡೆಸಿ ಚರ್ಚಿಸಿದರು.

ಯತ್ನಾಳ್ ಬಣವನ್ನು ಉಚ್ಚಾಟಿಸುವಂತೆ ಬಿ.ವೈ. ವಿಜಯೇಂದ್ರ ಬಣ ಆಗ್ರಹ



ಬಿ.ವೈ. ವಿಜಯೇಂದ್ರ ಬಣ

ಬೆಂಗಳೂರು, ಡಿ.1– ರಾಜ್ಯ ಬಿಜೆಪಿ ಘಟಕದಲ್ಲಿ ಭಿನ್ನಮತ ತಾರಕಕ್ಕೆ ಏರಿದೆ. ಕಾಂಗ್ರೆಸ್‌ನೊಂದಿಗೆ ನಾನು ಒಳಒಪ್ಪಂದ ಮಾಡಿಕೊಂಡಿದ್ದಕ್ಕೆ ದಾಖಲೆಗಳಿದ್ದರೆ ತಕ್ಷಣವೇ ಅವುಗಳನ್ನು ಬಿಡುಗಡೆ ಮಾಡಿ ಎಂದು ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಬಸನಗೌಡ ಪಾಟೀಲ ಯತ್ನಾಳ ಅವರಿಗೆ ಸವಾಲು ಹಾಕಿದರು.

ಇನ್ನೊಂದೆಡೆ ವಿಜಯೇಂದ್ರ ಜತೆಗೆ ಗುರುತಿಸಿಕೊಂಡಿರುವ ಮಾಜಿ ಶಾಸಕರ ಬಣವು, ಯತ್ನಾಳ್ ಬಣದ ಮೇಲೆ ಮುಗಿಬಿದ್ದಿದೆ. ಬಿ.ಎಸ್.ಯಡಿಯೂರಪ್ಪ ಅವರ ಮನೆಯಲ್ಲಿ ಭಾನುವಾರ ಸಭೆ ನಡೆಸಿ, ಶಾಸಕ ಬಸನಗೌಡ ಯತ್ನಾಳ್ ಮತ್ತವರ ಜತೆ ಗುರುತಿಸಿಕೊಂಡಿರುವ ಶಾಸಕರನ್ನು ಪಕ್ಷದಿಂದ ಕೂಡಲೇ ಉಚ್ಚಾಟನೆ ಮಾಡಬೇಕು ಎಂದು ವಿಜಯೇಂದ್ರ ಬಣದ ನಾಯಕರು ಒತ್ತಾಯಿಸಿದ್ದಾರೆ. ಈ ಸಂಬಂಧ ಹೈಕಮಾಂಡ್‌ಗೆ ದೂರು ನೀಡಲೂ ಸಿದ್ಧತೆ ನಡೆಸಿದ್ದಾರೆ.

ನಗರದಲ್ಲಿ ಇಂದು ಸುದ್ದಿಗಾರರ ಜತೆಗೆ ಮಾತನಾಡಿದ ವಿಜಯೇಂದ್ರ ಅವರು, ಬೇರೆ ಪಕ್ಷಗಳ ಜೊತೆ ಹೊಂದಾಣಿಕೆ ರಾಜಕಾರಣ ಮಾಡಿಕೊಳ್ಳಬೇಕಾದ ಅವಶ್ಯಕತೆ ನನಗಿಲ್ಲ. ರಾಜ್ಯಾಧ್ಯಕ್ಷನಾಗಿ ಪಕ್ಷದ ಸಂಘಟನೆ ಹಾಗೂ ಬಲಪಡಿಸುವ ಬಗ್ಗೆ ಗಮನಹರಿಸಿದ್ದೇನೆ. ಯತ್ನಾಳ್‌ಗೆ ಖಂಡಿತ ಒಳ್ಳೆಯದಾಗುವುದಿಲ್ಲ. ನನ್ನ ವಿರುದ್ಧ ಅವರು ತಮ್ಮೊಂದಿಗೆ ಇನ್ನೂ ಹತ್ತು ಜನರನ್ನು ಸೇರಿಸಿಕೊಳ್ಳಲಿ. ನನಗೇನು ತೊಂದರೆ ಇಲ್ಲ ಎಂದರು.

ವರಿಷ್ಠರನ್ನು ಭೇಟಿ ಮಾಡಿ, ಮೂರು ಕ್ಷೇತ್ರಗಳ ಉಪಚುನಾವಣೆಗಳ ಹಿನ್ನಡೆ ಬಗ್ಗೆ ಚರ್ಚೆ ಮಾಡಿದ್ದೇನೆ. ರಾಜ್ಯದ ರಾಜಕೀಯ ಪರಿಸ್ಥಿತಿ ಬಗ್ಗೆಯೂ ತಿಳಿಸಿದ್ದೇನೆ. ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಒಗ್ಗಟ್ಟಿನ ಹೋರಾಟ ಮಾಡಬೇಕು. ಆದರೆ ಕೆಲವರಿಗೆ ಅದು ಅರ್ಥ ಆಗುತ್ತಿಲ್ಲ. ಯಡಿಯೂರಪ್ಪ ಮತ್ತು ವಿಜಯೇಂದ್ರಗೆ ಬೈಯುವುದೇ ಒಂದು ಪದವಿ ಅಂದುಕೊಂಡಿದ್ದಾರೆ. ಯತ್ನಾಳ್‌ರನ್ನು ಉಚ್ಚಾಟನೆ ಮಾಡಬೇಕು ಎಂಬುದು ಕಾರ್ಯಕರ್ತರ ಅಪೇಕ್ಷೆ. ಈ ಸಂಬಂಧ ಬಿಗಿ ಕ್ರಮ ಆಗಬೇಕು. ಇದರ ಬಗ್ಗೆ ವರಿಷ್ಠರು ತೀರ್ಮಾನ ಮಾಡುತ್ತಾರೆ ಎಂದರು.

ಎಂ.ಪಿ.ರೇಣುಕಾಚಾರ್ಯ ಮಾತನಾಡಿ, ಬಸನಗೌಡ ಪಾಟೀಲ್ ಯತ್ನಾಳ್‌ಗೆ ಎಲ್ಲಿದೆ ಶಕ್ತಿ? ಅವರ ಹಿಂದೆ ಇರುವುದು ನಾಲ್ಕೈದು ಜನರು ಮಾತ್ರ. ಡಿ.10ರಂದು ನಾವೆಲ್ಲರೂ ದಾವಣಗೆರೆಯಲ್ಲಿ ಅರವತ್ತಕ್ಕೂ ಹೆಚ್ಚು ಮಾಜಿ ಶಾಸಕರು ಸೇರುತ್ತೇವೆ. ಯತ್ನಾಳ್ ಅವರನ್ನು ಉಚ್ಚಾಟನೆ ಮಾಡಬೇಕಾ ಬೇಡವೇ ಎಂಬ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದರು.

ಯತ್ನಾಳ್ ಜೊತೆ ಸೇರಿಕೊಂಡಿರುವ ರಮೇಶ ಜಾರಕಿಹೊಳಿ, ಕುಮಾರ್ ಬಂಗಾರಪ್ಪ, ಅರವಿಂದ್ ಲಿಂಬಾವಳಿ, ಬಿ.ಪಿ ಹರೀಶ್, ಪ್ರತಾಪ್ ಸಿಂಹ ಅವರಿಗೆ ಒಂದು ಪಾಠ ಆಗಬೇಕು. ಹೀಗಾಗಿ ಅವರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ವರಿಷ್ಠರಿಗೆ ದೂರು ನೀಡಲು ನಿರ್ಧರಿಸಲಾಗಿದೆ ಎಂದರು.

ಸಾಧಕರನ್ನು ಬೆಳೆಸುವ ನಗರಗಳ ಕೀರ್ತಿ ಜಗತ್ತಿಗೆ ಹರಡುತ್ತದೆ

ದೀಪೋತ್ಸವ, ಗೀತಾಗಾಯನ, ಸಾಧಕರಿಗೆ ಸನ್ಮಾನಿಸುವ ಸಮಾರಂಭದಲ್ಲಿ ಶಾಸಕ ಶ್ರೀವತ್ಸ ಅಭಿಪ್ರಾಯ



ದೀಪೋತ್ಸವ, ಗೀತಾಗಾಯನ ಕಾರ್ಯಕ್ರಮದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ.ರವಿಶಂಕರ್, ರಂಗಕರ್ಮಿ ಎಚ್.ಜನಾರ್ಧನ್, ಸುವರ್ಣ ಸಂಭ್ರಮ ಪ್ರಶಸ್ತಿ ಪುರಸ್ಕೃತ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಜಿಲ್ಲಾ ರಾಜ್ಯೋತ್ಸವ ಪುರಸ್ಕೃತರಾದ ಕಾವೇರಿ ಪ್ರಕಾಶ್, ಮೈಸೂರು ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಹಿನ್‌ಕಲ್ ಬಸವರಾಜು ಇದ್ದರು.

ಮೈಸೂರು, ಡಿ.1(ಎಸ್‌ಪಿಎನ್)– ಸಾಧಕರನ್ನು ಬೆಳೆಸುವ ನಗರಗಳ ಕೀರ್ತಿ ಇಡೀ ಜಗತ್ತಿಗೆ ಹರಡುತ್ತದೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಅಭಿಪ್ರಾಯಪಟ್ಟರು.

ಮೈಸೂರು ಅಗ್ರಹಾರ ರಾಮಾನುಜ ರಸ್ತೆಯ ನಮೋ ಯೋಗಭವನ ಸಭಾಂಗಣದಲ್ಲಿ ನಮೋ ಯೋಗಭವನ ಹಾಗೂ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಭಾನುವಾರ ಏರ್ಪಡಿಸಿದ್ದ ದೀಪೋತ್ಸವ, ಗೀತಾಗಾಯನ ಹಾಗೂ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ನಮ್ಮ ಕ್ಷೇತ್ರಕ್ಕೆ ಸೀಮಿತವಾಗದೇ ಇಡೀ ಮೈಸೂರು ನಗರಕ್ಕೆ ಸೇರಿದ ಎಲ್ಲಾ ವರ್ಗದ ಸಾಧಕರನ್ನು ಗೌರವಿಸುತ್ತಿರುವ ಎರಡೂ ಸಂಘಟನೆಗಳ ಕಾರ್ಯ ಶ್ಲಾಘನೀಯ. ಇತ್ತೀಚೆಗೆ ಮೈಸೂರಿನ ಮೂವರು ಬಾಲಪ್ರತಿಭೆಗಳು ಶ್ಲೋಕಪಠಣ ಹಾಗೂ ಯೋಗದಲ್ಲಿ ರಾಷ್ಟ್ರ ಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಈ ರೀತಿಯ ಸಾಧಕರಿಂದ ಸಾಂಸ್ಕೃತಿಕ ನಗರಿಗೆ ಗರಿಮೆ ಎಂದು ಅವರು ಹೇಳಿದರು.

ಸಾಧಕರಿಗೆ ಸನ್ಮಾನ: ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ರಂಗಕರ್ಮಿ ಎಚ್. ಜನಾರ್ಧನ್, ಸುವರ್ಣ ಸಂಭ್ರಮ ಪ್ರಶಸ್ತಿ ಪುರಸ್ಕೃತ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಜಿಲ್ಲಾ ರಾಜ್ಯೋತ್ಸವ ಪುರಸ್ಕೃತರಾದ ಕಾವೇರಿ ಪ್ರಕಾಶ್, ಜಿ. ನವೀನ್‌ಕುಮಾರ್, ಡಾ.ಜಿ.ರವಿಶಂಕರ್, ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಶಸ್ತಿ ಪುರಸ್ಕೃತ ಗಾಯಕ ಅಮ್ಮ ರಾಮಚಂದ್ರ ಮೈಸೂರು ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಹಿನ್‌ಕಲ್ ಬಸವ ರಾಜು, ನಿರ್ದೇಶಕಿ ಎಂ.ದ್ರಾಕ್ಷಾಯಿಣಿ, ಕೆಆರ್. ಬ್ಯಾಂಕ್ ಅಧ್ಯಕ್ಷ ಡಿ.ಬಸವರಾಜು(ಬಸಪ್ಪ), ಉಪಾಧ್ಯಕ್ಷೆ ಎಚ್.ಎನ್. ಸರ್ವಮಂಗಳಾ, ಚಾಮರಾಜ ನಗರ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಸಾಮಾನ್ಯ ವಿಭಾಗದಲ್ಲಿ ಪ್ರವೇಶ ಪಡೆದಿರುವ ರೇಖಾ ಮಂಜುನಾಥ್ ಪುತ್ರಿ ಎಂ.ಯಶಸ್ವಿನಿ, ರಾಜ್ಯ ಮಟ್ಟದ ಯೋಗಪಟು ಕೋಕಿಲಾ ಮಹೇಂದ್ರಕುಮಾರ್ ಪುತ್ರ ನಿತಿನ್ ಕುಮಾರ್, ಗಾಯಕ ಮರಿಸ್ವಾಮಿ ಸರ್ವಾರ್ಥ ಅವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ನಮೋ ಯೋಗಭವನದ ಗೌರವಾಧ್ಯಕ್ಷರಾದ ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಕೆ. ಸೇತುರಾಮ್, ಪ್ರಮಥ ಪ್ರಿಂಟ್ಸ್ ಮಾಲೀಕ ಮಂಜುನಾಥ್, ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಕ್ಯಾತನಹಳ್ಳಿ ಪ್ರಕಾಶ್, ಯೋಗ ಶಿಕ್ಷಕ ಹಾಗೂ ಯೋಗ ಭವನ ಉಪಾಧ್ಯಕ್ಷ ಎಂ.ಮಲ್ಲಿಕಾರ್ಜುನ ಸ್ವಾಮಿ, ಮೀನಾಕ್ಷಿ ಮತ್ತು ತಂಡದವರು ಪ್ರಾರ್ಥಿಸಿದರು. ಜಿ. ರವಿಶಂಕರ್ ನಿರೂಪಿಸಿದರು. ನಂತರ ಜ್ಞಾನವೇಣಿ, ಲೋಕೇಶ್ವರಿ, ಕಂಸಾಳೆ ಮಹದೇವ, ಸಂಗೀತ ಪ್ರಿಯರ ಬಳಗದವರು ಗೀತಗಾಯನ ನಡೆಸಿಕೊಟ್ಟರು.

ಕೆ.ಆರ್.ಕ್ಷೇತ್ರದಲ್ಲಿ ಒಕ್ಕಲಿಗರು ಅಲ್ಪಸಂಖ್ಯಾತರಾಗಿದ್ದಾರೆ

ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ



ರಾಷ್ಟ್ರಕವಿ ಕುವೆಂಪು ಅವರ 'ವಿಶ್ವಮಾನವರಾಗೋಣ' ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಶಾಸಕರಾದ ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ ಪ್ರದಾನ ಮಾಡಿದರು.

ಮೈಸೂರು,ಡಿ.1(ಎಸ್‌ಪಿಎನ್)– ಕೆ.ಆರ್. ಕ್ಷೇತ್ರದಲ್ಲಿ ಒಕ್ಕಲಿಗ ಮತದಾರರು ಅಲ್ಪಸಂಖ್ಯಾತರಾಗಿದ್ದಾರೆ. ಇವರಿಗೆ ಮೂಲಸೌಕರ್ಯ ಒದಗಿಸುವಂತೆ ಶಾಸಕ ಕೆ.ಹರೀಶ್‌ಗೌಡ ಸಮುದಾಯದವರ ಪರವಾಗಿ, ಶಾಸಕ ಟಿ.ಎಸ್. ಶ್ರೀವತ್ಸ ಅವರಲ್ಲಿ ಮನವಿ ಮಾಡಿದರು.

ಮೈಸೂರು ಜೆ.ಪಿ.ನಗರದಲ್ಲಿರುವ ಡಾ.ಪುಟ್ಟರಾಜ ಗವಾಯಿಗಳ ಯೋಗ ಮತ್ತು ಧ್ಯಾನ ಕೇಂದ್ರದಲ್ಲಿ ವಿಶ್ವಮಾನವ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದಿಂದ ಭಾನುವಾರ ಆಯೋಜಿಸಿದ್ದ ರಾಷ್ಟ್ರಕವಿ ಕುವೆಂಪು ಅವರ 'ವಿಶ್ವಮಾನವರಾಗೋಣ' ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಹಿರಿಯ ಸದಸ್ಯರುಗಳಿಗೆ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ರಾಜಕಾರಣಿಗಳು ಎಲ್ಲಾ ಮತದಾರರನ್ನು ಸಮನಾಗಿ ಕಾಣಬೇಕು. ಅದರಂತೆ ನಾನು ಮತ್ತು ಶ್ರೀವತ್ಸ, ನಮ್ಮ ನಮ್ಮ ಕ್ಷೇತ್ರದಲ್ಲಿ ಎಲ್ಲಾ ಮತದಾರರನ್ನು ಸಮನಾಗಿ ಕಾಣುತ್ತಿದ್ದೇವೆ. ಆದರೆ, ಲೋಕಾರೂಢಿಯಾಗಿ ಸಮುದಾಯದವರ ಬಗ್ಗೆ ಸ್ವಲ್ಪ ಪ್ರೀತಿ ಇರುತ್ತದೆ. ಬೇಕಿದ್ದರೆ ಶ್ರೀವತ್ಸ ಅವರನ್ನೇ ಕೇಳಿ ಎಂದರು. ಇದಕ್ಕೆ ಶಾಸಕ ಶ್ರೀವತ್ಸ, ಕಿರುನಗೆಯ ಮೂಲಕ ಒಪ್ಪಿಗೆ ಸೂಚಿಸಿದರಲ್ಲದೆ, ನನ್ನ ಕ್ಷೇತ್ರದಲ್ಲಿ ನಿಮ್ಮ ಮನವಿಯನ್ನು ಪಾಲಿಸುತ್ತೇನೆ ಎಂದು ವೇದಿಕೆಯಿಂದಲೇ ಭರವಸೆ ನೀಡಿದರು.

ವಿಶೇಷ ಅನುದಾನಕ್ಕೆ ಮನವಿ: ವಿಶ್ವಮಾನವ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು, ಸಿಎ ನಿವೇಶನ ಕೊಡಿಸುವಂತೆ ಮನವಿ ನೀಡಿದ್ದೀರಿ ಮತ್ತು ಅರ್ಧಕ್ಕೆ ನಿಂತಿರುವ ಕನ್ನಡ ಭವನ ಕಟ್ಟಡ ನಿರ್ಮಾಣದ ಕಾರ್ಯ ಮುಗಿಸಲು ಅನುದಾನಕ್ಕೆ ಮನವಿ ಮಾಡಿದ್ದೀರಿ. ಇದಕ್ಕೆ ಬೇಕಾದ ಅನುದಾನವನ್ನು ಸರ್ಕಾರದಿಂದ ಸಾಧ್ಯವಾದಷ್ಟು ಕೊಡಿಸಲು ಪ್ರಯತ್ನಿಸುತ್ತೇನೆ. ಜೊತೆಗೆ ಈ ಕ್ಷೇತ್ರದ ಶಾಸಕರ ಜೊತೆ ಕೈಜೋಡಿಸಿ, ನಿಮ್ಮ ಬೇಡಿಕೆ ಬಗೆಹರಿಸಲು ಪ್ರಯತ್ನಿಸುತ್ತೇನೆ ಎಂದರು.

ಮುಡಾ ಈಗ ವಿವಾದ ಕೇಂದ್ರಬಿಂದು: ಮುಡಾ ಈಗ ವಿವಾದದ ಕೇಂದ್ರಬಿಂದು. ಈ ಹಗರಣ ಬಯಲಿಗೆ ತರುವಲ್ಲಿ ನನ್ನ ಪಾತ್ರವಿದೆ. ಹಾಗಾಗಿ ಈ ಹಗರಣಕ್ಕೆ ನಾನೇ ತಾರ್ಕಿಕ ಅಂತ್ಯ ಕಾಣಿಸುತ್ತೇನೆ. ಅಲ್ಲದೆ, ಈ ವಿವಾದ ಮುಗಿದ ನಂತರ ನಿಮ್ಮ ಬೇಡಿಕೆ ಈಡೇರಿಸುತ್ತೇನೆ ಎಂದರು.

ನಂತರ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ವಿದ್ಯಾರ್ಥಿಗಳು ಶಾಲಾ ಹಂತದಲ್ಲಿಯೇ ಆಸಕ್ತಿಯಿಂದ ಕಲಿಯುವುದರ ಜೊತೆಗೆ ಬದುಕಿಗೆ ಆಸರೆಯಾಗುವ ಸ್ಪರ್ಧಾತ್ಮಕ ಜ್ಞಾನವನ್ನು ಪಡೆದು ಉನ್ನತ ಶಿಕ್ಷಣ ಪಡೆದು ಸಾಧನೆ ಮಾಡಬೇಕು. ಪ್ರತಿಭೆಗಳನ್ನು ಗೌರವಿಸುವುದರಿಂದ ಮತ್ತೊಬ್ಬರ ಸಾಧನೆಗೆ ಇಂತಹ ಪ್ರೋತ್ಸಾಹದಾಯಕ ಕಾರ್ಯಕ್ರಮ ಪ್ರೇರಣೆಯಾಗಲಿವೆ. ಪ್ರತಿ ಮಕ್ಕಳಲ್ಲೂ ಒಂದೊಂದು ಪ್ರತಿಭೆ ಇರುತ್ತದೆ. ಮಕ್ಕಳಲ್ಲಿರುವ ಪ್ರತಿಭೆಯನ್ನು ಪೋಷಕರು ಹಾಗೂ ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕು. ಆಗ ಇನ್ನಷ್ಟು ಸಾಧನೆ ಮಾಡಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕಿರಿಯ ಮತ್ತು ಹಿರಿಯ ನಾಗರಿಕರಿಗೆ ಸನ್ಮಾನ: ಈ ವೇಳೆ ಎಸ್‌ಎಸ್‌ಎಲ್‌ಸಿ ಪ್ರತಿಭಾವಂತ ವಿದ್ಯಾರ್ಥಿಗಳಾದ ಅನುಷ್ಕ, ಲಾವಣ್ಯಲಕ್ಷ್ಮಿ, ಆರ್.ಕೃಷ್ಣ ಅಭಯ್ ತೇಜರಾಜ್ ಹಾಗೂ ಪಿಯುಸಿ ವಿದ್ಯಾರ್ಥಿಗಳಾದ ಪಿ.ದಿಶಾ, ಸ್ವಜನ್ ಎಸ್.ಗೌಡ, ಪ್ರೇರಣಾ ತೇಜರಾಜ್, ಪ್ರಥುದ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಹಿರಿಯ ನಾಗರಿಕರಾದ ಪಿ.ಪದ್ಮನಾಭ, ಚಿಕ್ಕಣ್ಣೇಗೌಡ, ಹುಚ್ಚೇಗೌಡ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ರಾಜ್ಯ ಒಕ್ಕಲಿಗ ಸಂಘದ ನಿರ್ದೇಶಕರಾದ ಎಂ.ಬಿ.ಮಂಚೇಗೌಡ, ಸಿ.ಜೆ.ಗಂಗಾಧರ್, ಮಾಜಿ ಮಹಾಪೌರ ಬಿ.ಎಲ್. ಭೈರಪ್ಪ ವಿಶ್ವಮಾನವ ಒಕ್ಕಲಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಕೆ.ಎಸ್.ಕೃಷ್ಣ ಇದ್ದರು.

> ರಾಜ್ಯ ಸರ್ಕಾರ ಜಾರಿಗೊಳಿಸಿರುವ ನೂತನ ಶಿಕ್ಷಣ ನೀತಿ(ಎನ್‌ಇಪಿ) ಒಂದನೇ ತರಗತಿ ದಾಖಲಾತಿಗೆ 6 ವರ್ಷ ನಿಗದಿಗೊಳಿಸಿದ್ದು, ಇದರಿಂದ ಸಾವಿರಾರು ಮಕ್ಕಳಿಗೆ ಪ್ರವೇಶ ಪಡೆಯಲು ಆಗುತ್ತಿಲ್ಲ. ಇದರ ಬಗ್ಗೆ ಬೆಳಗಾವಿ ಅಧಿವೇಶನದಲ್ಲಿ ಗಮನ ಸೆಳೆಯುವಂತೆ ಶಾಸಕ ಟಿ.ಎಸ್.ಶ್ರೀವತ್ಸ, ಕೆ.ಹರೀಶ್‌ಗೌಡರಿಗೆ ಜೆ.ಪಿ.ನಗರ ವಿಶ್ವಮಾನವ ಒಕ್ಕಲಿಗರ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಮನವಿ ಸಲ್ಲಿಸಿದರು. ಇದಕ್ಕೆ ನಾವಿಬ್ಬರು ಮುಂದಿನ ಅಧಿವೇಶನದಲ್ಲಿ ಶೂನ್ಯವೇಳೆಯಲ್ಲಿ ಈ ವಿಷಯವನ್ನು ಪ್ರಸ್ತಾಪ ಮಾಡುತ್ತೇವೆ ಎಂದು ಶಾಸಕದ್ವಯರು ಭರವಸೆ ನೀಡಿದರು.

> ಶಾಸಕ ಟಿ.ಎಸ್.ಶ್ರೀವತ್ಸ ಸದಾ ಸಮುದಾಯ ಹಾಗೂ ಕ್ಷೇತ್ರದ ಜನರ ಪರವಾಗಿ ಕೆಲಸ ಮಾಡುತ್ತಿರುವ ಶಾಸಕರು. ಅವರು ಎಲ್ಲಾ ಸಮುದಾಯದೊಂದಿಗೆ ಉತ್ತಮ ಬಾಂಧವ್ಯ ಹೊಂದಿ ಎಲ್ಲಾ ಕೆಲಸಗಳಿಗೂ ಸ್ಪಂದಿಸುತ್ತಾರೆ. ಅವರ ಈ ಕೆಲಸ ನನಗೂ ಮಾದರಿ.
> -ಕೆ.ಹರೀಶ್‌ಗೌಡ.

ಇಡೀ ಬಿಜೆಪಿಯೇ ಬಸವಣ್ಣನವರ ವ್ಯಕ್ತಿತ್ವಕ್ಕೆ ಮಸಿ ಬಳಿಯುತ್ತಿದೆ: ಡಿಕೆಶಿ



ಬೆಂಗಳೂರು, ಡಿ.1– ಬಸನಗೌಡ ಪಾಟೀಲ ಯತ್ನಾಳ್ ಒಬ್ಬರೇ ಬಸವಣ್ಣನವರ ವ್ಯಕ್ತಿತ್ವಕ್ಕೆ ಮಸಿ ಬಳಿದಿಲ್ಲ. ಇಡೀ ಬಿಜೆಪಿಯೇ ಮಸಿ ಬಳಿಯುತ್ತಿದೆ' ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರ ಜೊತೆ ಭಾನುವಾರ ಮಾತನಾಡಿದ ಅವರು, ಯತ್ನಾಳ್ ಹೇಳಿಕೆಯನ್ನು ಯಡಿಯೂರಪ್ಪ ವಿಜಯೇಂದ್ರ ಅಶೋಕ ಸೋಮಣ್ಣ ಬೊಮ್ಮಾಯಿ.. ಯಾರಾದರು ಖಂಡಿಸಿದ್ದಾರೆಯೇ? ಬಿಜೆಪಿ ಬಸವಣ್ಣನವರ ವಿರೋಧಿ ಎಂಬುದನ್ನು ಇದು ನಿರೂಪಿಸುತ್ತದೆ ಎಂದರು.

ಬಸವಣ್ಣನವರ ಬಗ್ಗೆ ಹುಚ್ಚರಂತೆ ಮಾತನಾಡಿರುವ ಯತ್ನಾಳ್ ಅವರನ್ನು ಹುಚ್ಚಾಸ್ಪತ್ರೆಗೆ ಸೇರಿಸಬೇಕು ಎಂದು ಅನೇಕ ಮಠಾಧೀಶರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ ಎಂದರು.

ಬಸವಣ್ಣನವರ ಚಿಂತನೆಯೇ ಕಾಂಗ್ರೆಸ್ ಪಕ್ಷದ ಚಿಂತನೆ. ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಮುಖ್ಯಮಂತ್ರಿಗಳಾದಾಗ ಬಸವಣ್ಣನವರ ಜಯಂತಿಯಂದೇ ಪ್ರಮಾಣವಚನ ತೆಗೆದುಕೊಂಡರು. ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣನವರ ಭಾವಚಿತ್ರ ಕಡ್ಡಾಯ ಮಾಡಿದ್ದು, ಬಸವಣ್ಣನವರ ಜಯಂತಿಗೆ ಶಕ್ತಿ ಕೊಟ್ಟಿದ್ದು, ಅವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಕಾಂಗ್ರೆಸ್ ಸರ್ಕಾರ ಎಂದರು.

ಯಡಿಯೂರಪ್ಪ ಬಂದಿದ್ದರು: ನಿಮ್ಮ ಮತ್ತು ವಿಜಯೇಂದ್ರ ನಡುವಿನ ಸ್ನೇಹ ಮತ್ತು ಅವರ ಪತ್ರಗಳಿಗೆ ಸಹಿ ಹಾಕಿರುವ ವಿಡಿಯೋಗಳನ್ನು ಬಹಿರಂಗ ಮಾಡುತ್ತೇನೆ ಎಂಬ ಯತ್ನಾಳ್ ಹೇಳಿಕೆಗೆ ಪ್ರತಿಕ್ರಿಯಿಸಿದ ಶಿವಕುಮಾರ್, ಯಡಿಯೂರಪ್ಪನವರು ತಮ್ಮ ಕ್ಷೇತ್ರದ ಕೆಲಸಗಳಿಗೆ ಕೆಲವು ಪತ್ರಗಳಿಗೆ ಸಹಿ ಹಾಕಿಸಿಕೊಂಡಿದ್ದರು. ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ನನ್ನ ಕ್ಷೇತ್ರದ ಕೆಲಸ ಮಾಡಿಕೊಡುವುದಾಗಿ ಸದನದಲ್ಲಿ ಮಾತು ಕೊಟ್ಟಿದ್ದರು. ಆದರೆ ಮಾಡಿಕೊಟ್ಟಿರಲಿಲ್ಲ. ಹೀಗಾಗಿ, ನಾನೇ ಅವರನ್ನು ಭೇಟಿ ಮಾಡಿದ್ದೆ ಎಂದರು.

ಸುವರ್ಣ ಸೌಧಕ್ಕೆ ಮುತ್ತಿಗೆ ಹಾಕುವುದು ಶತಸಿದ್ಧ: ಬಸವಜಯ ಮೃತ್ಯುಂಜಯ ಸ್ವಾಮೀಜಿ

ಬೆಳಗಾವಿ, ಡಿ.1– ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಪ್ರವರ್ಗ '2ಎ' ಮೀಸಲಾತಿ ನೀಡಬೇಕು ಎಂದು ಆಗ್ರಹಿಸಿ, ಇಲ್ಲಿನ ಸುವರ್ಣ ವಿಧಾನಸೌಧಕ್ಕೆ ಡಿ.10ರಂದು ಮುತ್ತಿಗೆ ಹಾಕುವುದು ಶತಸಿದ್ಧ' ಎಂದು ಕೂಡಲಸಂಗಮ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು. ನಗರದಲ್ಲಿ ಪಂಚಮಸಾಲಿ ಸಮುದಾಯದ ಮುಖಂಡರೊಂದಿಗೆ ಭಾನುವಾರ ಸಭೆ ನಡೆಸಿದ ನಂತರ ಸುದ್ದಿಗಾರರ ಜತೆ ಅವರು ಮಾತನಾಡಿದರು. ಹೋರಾಟದ ಕುರಿತು ಸಭೆ ನಡೆಸಿ ಚರ್ಚಿಸಿದ್ದೇವೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ಎಂಥದ್ದೇ ತೊಡಕು ಎದುರಾದರೂ, ಸುವರ್ಣ ವಿಧಾನಸೌಧಕ್ಕೆ ಮುತ್ತಿಗೆ ಹಾಕುವುದರಿಂದ ಹಿಂದೆ ಸರಿಯುವುದಿಲ್ಲ ಎಂದರು.

ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಶಾಸಕರಾದ ಸಿ.ಸಿ.ಪಾಟೀಲ, ಬಾಬಾಸಾಹೇಬ ಪಾಟೀಲ, ಮಾಜಿ ಸಚಿವ ಎ.ಬಿ.ಪಾಟೀಲ, ಮಾಜಿ ಶಾಸಕರಾದ ಡಾ.ವಿಶ್ವನಾಥ ಪಾಟೀಲ, ಎಚ್.ಎಸ್. ಶಿವಶಂಕರ, ಮೃಣಾಲ್ ಹೆಬ್ಬಾಳಕರ, ನಿಂಗಪ್ಪ ಪಿರೋಜಿ, ಗುಂಡು ಪಾಟೀಲ ಇದ್ದರು.

ಸಂವಿಧಾನ ಓದು ಅಧ್ಯಯನ ಶಿಬಿರದ ಸಮಾರೋಪ

ಸಂವಿಧಾನದಿಂದ ಏನನ್ನು ಸಾಧಿಸಬೇಕಿತ್ತೋ ಅದು ಆಗಿಲ್ಲ

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ವಿಷಾದ



ಸಂವಿಧಾನ ಓದು ಅಧ್ಯಯನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ಮಾತನಾಡಿದರು

ಮೈಸೂರು, ಡಿ.1(ಎಂಕೆ)– ಜಾತಿ ವ್ಯವಸ್ಥೆಯಲ್ಲಿ ಅತೀ ಹಿಂದುಳಿದ ಸಮುದಾಯದವರು ಉನ್ನತ ಸ್ಥಾನಕ್ಕೇರಲು ಅವಕಾಶ ಮಾಡಿಕೊಟ್ಟಿದ್ದು ಸಂವಿಧಾನ. ಆದರೆ ನಾವು ಸಂವಿಧಾನವನ್ನು, ಸರಿಯಾಗಿ ಅರ್ಥಮಾಡಿಕೊಳ್ಳದೆ, ಅರಿತುಕೊಳ್ಳದೆ ಏನನ್ನು ಸಾಧಿಸಬೇಕಿತ್ತೋ ಅದು ಸಾಧ್ಯವಾಗಿಲ್ಲ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನದಾಸ್ ವಿಷಾದಿಸಿದರು.

ಮೈಸೂರು ವಿವಿ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಸಂವಿಧಾನ ಓದು ಅಭಿಯಾನ, ಅಖಿಲ ಭಾರತ ಸಂಶೋಧಕರ ಸಂಘ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಾರ್ವಜನಿಕ ಆಡಳಿತ ಅಧ್ಯಯನ ವಿಭಾಗ ಹಾಗೂ ಸಮಾನಮನಸ್ಕ ಜನಪರ ಸಂಘಟನೆಗಳ ವತಿಯಿಂದ ಆಯೋಜಿಸಿದ್ದ ಎರಡು ದಿನಗಳ ಜಿಲ್ಲಾ ಮಟ್ಟದ 'ಸಂವಿಧಾನ ಓದು ಅಧ್ಯಯನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಸಂವಿಧಾನದಿಂದ ಏನನ್ನು ಸಾಧಿಸಬೇಕಿತ್ತೋ ಅದು ಸಾಧ್ಯವಾಗಿಲ್ಲ. ಇದಕ್ಕೆ ಕಾರಣ ನಾವು ಸಂವಿಧಾನವನ್ನು ಸರಿಯಾಗಿ ಅರ್ಥಮಾಡಿಕೊಳ್ಳದಿರುವುದಾಗಿದೆ. ಅನ್ಯಾಯದ ವಿರುದ್ಧ ಧ್ವನಿ ಎತ್ತದಿರುವುದಾಗಿದೆ. ಮುಂದಾದರೂ ಸಂವಿಧಾನವನ್ನು ಅರ್ಥಮಾಡಿಕೊಂಡು, ಅನ್ಯಾಯದ ವಿರುದ್ಧ ಧ್ವನಿ ಎತ್ತುವಂತೆ ತಿಳಿಸಿದರು.

ಇಷ್ಟು ವರ್ಷವಾದರೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಅಭಿವೃದ್ಧಿಯಾಗಿಲ್ಲ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪಜಾ–ಪಪ ಸಮುದಾಯ ಅಭಿವೃದ್ಧಿಯಾಗಿಲ್ಲ ಎಂಬುದನ್ನು ಒಪ್ಪಲು ಸಾಧ್ಯವಿಲ್ಲ. ದೇಶದ ಮೊದಲ ಪ್ರಜೆಯಾದ ರಾಷ್ಟ್ರಪತಿ ಆದಿವಾಸಿ ಸಮುದಾಯಕ್ಕೆ ಸೇರಿದವರು. ಪ್ರಧಾನಿ ಮೋದಿಯವರು ಗಾಣಿಗ ಸಮುದಾಯದವರು. ರೈತನ ಮಗನಾದ ನಾನು ಜಾತಿ ವ್ಯವಸ್ಥೆಯಲ್ಲಿ ರೈತನೇ ಆಗಬೇಕಿತ್ತು. ಆದರೆ ನ್ಯಾಯಾಂಗ ವ್ಯವಸ್ಥೆಯಲ್ಲಿ ಸೇವೆ ಮಾಡಲು ಅವಕಾಶ ಮಾಡಿಕೊಟ್ಟಿದ್ದು, ಸಂವಿಧಾನ ಎಂದು ನೆನೆದರು.

ಮಾನವೀಯ ಕಟ್ಟಿಕೊಳ್ಳಿ: ನುಡಿದಂತೆ ನಡೆಯಬೇಕು ಎಂಬುದನ್ನು ಸಾಧ್ಯವಾಗಿಸಬಹುದು. ಆದರೆ ಅದು ಕಾನೂನಿನಿಂದ ಮಾತ್ರ ಸಾಧ್ಯವಿಲ್ಲ. ನಾವೆಲ್ಲರೂ ಮಾನವೀಯ ಮೌಲ್ಯಗಳನ್ನು ಕಟ್ಟಿಕೊಂಡರೆ ಮಾತ್ರ ಸಾಧ್ಯವಾಗಿಸಬಹುದು. ಮಹಾಭಾರತದಲ್ಲಿ ಭೂಮಿ ಹಂಚಿಕೆ ವಿಚಾರದಲ್ಲಿ ಎಲ್ಲಾ ಮಾತುಕತೆ ಮುಗಿದು ಕೊನೆಗೆ ಯುದ್ಧವಾಯಿತು. ಅದೇ ಶಾಂತಿ ಮತ್ತು ತಾಳ್ಮೆ, ಸಹೋದರತೆ ಎಂಬ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡಿದ್ದರೆ ಯುದ್ಧವೇ ನಡೆಯುತ್ತಿರಲಿಲ್ಲ. ಹಾಗೆಯೇ ನಾವೆಲ್ಲರೂ ಮೌಲ್ಯಗಳನ್ನು ಅಳವಡಿಸಿಕೊಂಡರೆ ಸುಂದರ ಭಾರತವನ್ನು ನಿರ್ಮಾಣ ಮಾಡಬಹುದು. ಕಾನೂನುಗಳು ಬೇಕು. ಅದಕ್ಕಿಂತ ಹೆಚ್ಚಾಗಿ ಮೌಲ್ಯಗಳು ಬೇಕು. ಆ ಮೌಲ್ಯಗಳನ್ನು ಮನೆಯಲ್ಲೂ ಹೇಳಿಕೊಡುತ್ತಿಲ್ಲ. ಶಾಲೆಯಲ್ಲೂ ಹೇಳಿಕೊಡುತ್ತಿಲ್ಲ. ಕಾಲೇಜು ಮತ್ತು ಮಾರುಕಟ್ಟೆಯಲ್ಲೂ ಹೇಳಿಕೊಡುತ್ತಿಲ್ಲ. ಆಗಾಗಿ ಕೆಟ್ಟ ಪರಿಸ್ಥಿತಿಯಲ್ಲಿ ನಾವಿದ್ದೇವೆ ಎಂದು ವಿಷಾದಿಸಿದರು.

ಯುಪಿಎ ಕಾಯ್ದೆಗೆ ತಿದ್ದುಪಡಿ ಅವಶ್ಯ: ದೇಶದಲ್ಲಿ ವಿಚ್ಛಿದ್ರಕಾರಿ, ದಮನಕಾರಿ ಶಕ್ತಿಗಳಿವೆ. ಆ ಶಕ್ತಿಗಳನ್ನು ಮಟ್ಟಹಾಕಲು ಯುಪಿಎ ಕಾಯ್ದೆ(ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಕಾಯ್ದೆ) ತರಲಾಯಿತು. ಆದರೆ ಪೊಲೀಸರು ಮತ್ತು ಸರ್ಕಾರದಿಂದ ಈ ಕಾಯ್ದೆ ಬಳಕೆ ಅತೀರೇಕಕ್ಕೆ ಹೋಗಿದ್ದು, ಸಂವಿಧಾನದ ಮೌಲ್ಯಗಳನ್ನು ಎತ್ತಿ ಹಿಡಿಯಬೇಕಾದರೆ ಯುಪಿಎ ಕಾಯ್ದೆ ಬೇಕು. ಆದರೆ, ತಿದ್ದುಪಡಿಯ ಅಗತ್ಯವಿದೆ ಎಂದು ಸಲಹೆ ನೀಡಿದರು.

ನಮ್ಮ ರಾಷ್ಟ್ರಗ್ರಂಥ: ಸಮಾಜ ಕಲ್ಯಾಣ ಇಲಾಖೆ, ಡಾ.ಅಂಬೇಡ್ಕರ್ ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಸಬೀರ ಅಹ್ಮದ್ ಮುಲ್ಲಾ ಮಾತನಾಡಿ, ಸಂವಿಧಾನ ನಮ್ಮ ರಾಷ್ಟ್ರ ಗ್ರಂಥ. ಇದನ್ನು ಆಧಾರದಲ್ಲಿಟ್ಟುಕೊಂಡು ಇಲ್ಲಿಯವರೆಗೆ ಬಂದಿದ್ದೇವೆ. ಯಾವುದೇ ವಿಷಯವನ್ನು ಅಧ್ಯಯನ ಮಾಡಿದರೂ ಭಾರತೀಯ ಎಲ್ಲಾ ನಾಗರಿಕರು ಸಂವಿಧಾನದ ಬಗ್ಗೆ ತಿಳಿದುಕೊಳ್ಳಲೇಬೇಕು. ಸಂವಿಧಾನದ ತಿಳುವಳಿಕೆ ಹೊಂದಿದ್ದರೆ ಅಪರಾಧಗಳಾಗದಂತೆ ತಡೆಯಬಹುದು ಎಂದು ಹೇಳಿದರು. ಪ್ರಗತಿಪರ ಚಿಂತಕ ಉಗ್ರನರಸಿಂಹೇಗೌಡ, ಡಾ.ಕುಶಾಲ್ ಬರಗೂರು, ಡಾ.ಜಯಕುಮಾರ್ ಮತ್ತಿತರರಿದ್ದರು.

> **ಭಾರತವೆಂಬ ಪ್ಯಾಲೆಸ್ ಮೇಲಿರುವ ಕಳಸ...!**
> ನಮ್ಮ ಸಂವಿಧಾನವೂ ಭಾರತವೆಂಬ ಪ್ಯಾಲೆಸ್ ಮೇಲಿರುವ ಕಳಸವಾಗಿದ್ದು, ಅದನ್ನು ಜೀವಂತವಾಗಿಡುವ ಕೆಲಸವನ್ನು ನಾವೆಲ್ಲರೂ ಮಾಡಬೇಕಿದೆ. ಸಂವಿಧಾನವನ್ನು ಜಾರಿಗೊಳಿಸುವವರು ದೇಶದ ಜನತೆಯೇ ಹೊರತು ಬೇರ್‍ಯಾರು ಅಲ್ಲ. ಜನಶಕ್ತಿ ಸಂವಿಧಾನ ಉಳಿಸಿದೆ, ಉಳಿಸಲಿದೆ.
> - ಪ್ರೊ.ಎಂ.ಉಮಾಪತಿ, ನಿವೃತ್ತ ಪ್ರಾಧ್ಯಾಪಕ

> **ಸರ್ಕಾರಿ ಶಾಲೆಗಳಲ್ಲಿ ಪಜಾ ಮತ್ತು ಪಪ ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛತೆ...!**
> ಇಂದಿಗೂ ಸರ್ಕಾರಿ ಶಾಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಮಕ್ಕಳನ್ನೇ ಹೆಚ್ಚಾಗಿ ಶೌಚಾಲಯ ಸ್ವಚ್ಛತೆಗೆ ಬಳಸಿಕೊಳ್ಳುತ್ತಿದ್ದಾರೆ ಎಂಬ ಶಿಬಿರಾರ್ಥಿಯೊಬ್ಬರ ಪ್ರಶ್ನೆಗೆ ಉತ್ತರಿಸಿದ ನ್ಯಾ.ನಾಗಮೋಹನದಾಸ್ ಅವರು, ಜಾತ್ಯಾತೀತ ಮತ್ತು ಧರ್ಮವೆಂಬುದು ಬೇರೆ. ಸಾಮಾಜಿಕ ನ್ಯಾಯ ಮತ್ತು ಅಸ್ಪೃಶ್ಯತೆ ಬೇರೆ ಬೇರೆ. ಇದು ಅಸ್ಪೃಶ್ಯತೆ ಪ್ರಶ್ನೆಯಾಗಿದ್ದು, ಅಸ್ಪೃಶ್ಯತೆಯನ್ನು ತೊಲಗಿಸುವ ಪ್ರಯತ್ನ ಮಾಡಿದ್ದೇವೆ. ಆದರೆ, ಇನ್ನೂ ಅಸ್ಪೃಶ್ಯತೆ ಇದೆ. ಜೈಲಿನಲ್ಲಿರುವ ಕೈದಿಗಳಲ್ಲಿಯೂ ಅಸ್ಪೃಶ್ಯತೆ ಇದೆ. ಕಸ ಗುಡಿಸುವುದು ಒಬ್ಬರಿಗೆ, ಅಡುಗೆ ಮಾಡುವುದು ಮತ್ತೊಬ್ಬರಿಗೆ, ಇನ್ನೂ ಕೆಲವರು ಏನೂ ಮಾಡದಿದ್ದರೂ ಎಲ್ಲವೂ ಅವರ ಬಳಿಗೆ ಬರುತ್ತೆ ಇದು ಜೈಲಿನ ವ್ಯವಸ್ಥೆ. ಅದರಂತೆ ನಮ್ಮ ಶಿಕ್ಷಣ ವ್ಯವಸ್ಥೆಯಲ್ಲೂ ಸಣ್ಣ ಪ್ರಮಾಣದ ಅಸ್ಪೃಶ್ಯತೆ ಇದೆ. ಕಾರಣ ಅಲ್ಲಿಯೂ ಮೂಲಭೂತವಾದಿಗಳು, ಕೋಮುವಾದಿಗಳಿದ್ದಾರೆ. ಇಂತಹ ಊರಿನಲ್ಲಿ, ಇಂತಹ ಶಾಲೆಯಲ್ಲಿ ಅಸ್ಪೃಶ್ಯತೆ ಆಚರಣೆ ನಡೆಯುತ್ತಿದೆ ಎಂಬುದನ್ನು ನಮ್ಮ ಗಮನಕ್ಕೆ ತಂದರೆ, ಸರ್ಕಾರದ ಗಮನಕ್ಕೆ ತರುವ ಪ್ರಯತ್ನ ಮಾಡಲಾಗುವುದು ಎಂದರು.

ಮೈಸೂರು ಮಿತ್ರ

ಮಿತಿಮೀರಿದ ಕ್ರಿಮಿನಾಶಕ ಬಳಕೆಯಿಂದ ಮಣ್ಣಿನ ಫಲವತ್ತತೆ ಕುಂಠಿತ: ಚಂದನಗೌಡ

ಮದ್ದೂರು: ಮಿತಿಮೀರಿದ ಕ್ರಿಮಿನಾಶಕ ಹಾಗೂ ರಾಸಾಯನಿಕ ಗೊಬ್ಬರಗಳ ಬಳಕೆ ಹಿನ್ನೆಲೆಯಲ್ಲಿ ದಿನಕಳೆದಂತೆ ಮಣ್ಣಿನ ಫಲವತ್ತತೆ ಕುಂಠಿತವಾಗಿ ಪರಿಸರದ ಜತೆಗೆ ಎಲ್ಲಾ ವಿಭಾಗಗಳಲ್ಲೂ ದುಷ್ಪರಿಣಾಮ ಉಂಟಾಗುತ್ತಿದ್ದು, ಜೈವಿಕ ಅಸಮತೋಲನಕ್ಕೆ ಎಡೆ ಮಾಡಿಕೊಟ್ಟಿದೆ ಎಂದು ಕರ್ನಾಟಕ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಭೂಮಿಪುತ್ರ ಸಿ.ಚಂದನಗೌಡ ಆತಂಕ ವ್ಯಕ್ತಪಡಿಸಿದರು.

ಮದ್ದೂರು ತಾಲೂಕಿನ ಸೋಂಪುರ ಗ್ರಾಮದ ಅಂಬರೀಶ್ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘ ತಾಲೂಕು ಸಮಿತಿಯಿಂದ ಆಯೋಜಿಸಿದ್ದ ನೂತನ ಪದಾಧಿಕಾರಿಗಳ ನೇಮಕ ಮತ್ತು ರೈತ ಕಲ್ಯಾಣ ಸಂಘ ಉದ್ಘಾಟನೆ ಹಾಗೂ ಮಣ್ಣು ರಕ್ಷಿಸಿ ಅಭಿಯಾನ, ಚಿಂತನ ಮಂಥನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸಂಘಟನೆಯ ರಾಜ್ಯ ಮಹಿಳಾ ಅಧ್ಯಕ್ಷೆ ಉಷಾಜಯಶೀಲ ಮಾತನಾಡಿ, ರೈತರು ಆತ್ಮಾವಲೋಕನ ನಡೆಸುವ ಮೂಲಕ ತಮ್ಮ ಬದುಕನ್ನು ಕಟ್ಟಿಕೊಳ್ಳಲು ಹೆಣಗಾಡುತ್ತಿರುವ ಸಂದರ್ಭದಲ್ಲಿ ಸರಕಾರಗಳು ರೈತರ ನೆರವಿಗೆ ಧಾವಿಸಿ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಬೇಕೆಂದು ಒತ್ತಾಯಿಸಿದರು.

ಸೇರ್ಪಡೆ: ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ನೂತನ ಪದಾಧಿಕಾರಿಗಳನ್ನು ಮತ್ತು ಸಂಘಟನೆಗೆ ಸೇರ್ಪಡೆಗೊಂಡ ಕಾರ್ಯಕರ್ತರನ್ನು ಅಭಿನಂದಿಸಿ, ಗೌರವಿಸಲಾಯಿತು.

ಈ ವೇಳೆ ಸಂಘಟನೆಯ ಗೌರವಾಧ್ಯಕ್ಷ ಹೇಮಂತ್‌ಗೌಡ, ಕಾರ್ಯದರ್ಶಿ ಹರೀಶ್, ಜಿಲಾಧ್ಯಕ್ಷ ಅನಿಲ್‌ಕುಮಾರ್, ತಾಲೂಕು ಅಧ್ಯಕ್ಷ ಹುಲಿಗೆರೆಪುರ ಮಹದೇವು, ಪದಾಧಿಕಾರಿಗಳಾದ ಯೋಗೇಶ್, ಶಂಕರ್, ರವಿಗೌಡ್ರು ಉಮೇಶ್, ನಾಗರಾಜು, ನಾರಾಯಣ್, ಮಹದೇವಸ್ವಾಮಿ ಇತರರು ಹಾಜರಿದ್ದರು.



ಮದ್ದೂರು ತಾಲೂಕಿನ ಸೋಂಪುರ ಗ್ರಾಮದ ಅಂಬರೀಶ್ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘ ತಾಲೂಕು ಸಮಿತಿಯಿಂದ ಆಯೋಜಿಸಿದ್ದ ನೂತನ ಪದಾಧಿಕಾರಿಗಳ ನೇಮಕ ಮತ್ತು ರೈತ ಕಲ್ಯಾಣ ಸಂಘ ಉದ್ಘಾಟನೆ ನೆರವೇರಿಸಲಾಯಿತು.

ಮನೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ಮಾಜಿ ಸಿಎಂ ಬಿಎಸ್‌ವೈ



ಕಾರ್ತಿಕ ಮಾಸದ ಅಮವಾಸ್ಯೆ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ತಮ್ಮ ಮನೆ ದೇವರು ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ದೇಗುಲಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಕೆ.ಆರ್.ಪೇಟೆ: ಕಾರ್ತಿಕ ಮಾಸದ ಅಮಾವಾಸ್ಯೆ ಹಿನ್ನೆಲೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ತಮ್ಮ ಮನೆ ದೇವರು ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ದೇಗುಲಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಕೆ.ಆರ್.ಪೇಟೆ ತಾಲೂಕಿನ ಬೂಕನಕೆರೆ ಹೋಬಳಿ ಕಾಪನಹಳ್ಳಿ ಗವಿಮಠದ ಶ್ರೀ ಸ್ವತಂತ್ರ ಸಿದ್ದಲಿಂಗೇಶ್ವರ ದೇವಾಲಯದಲ್ಲಿ ಗವಿಮಠದ ಪೀಠಾಧ್ಯಕ್ಷ ಶ್ರೀ ಚನ್ನವೀರ ಸ್ವಾಮೀಜಿಗಳ ನೇತೃತ್ವದಲ್ಲಿ ಮೂರು ಸಾವಿರ ಸೌತೆಕಾಯಿ ಹಾಗೂ ವಿವಿಧ ಅಲಂಕಾರಿಕ ಹೂವುಗಳನ್ನು ಬಳಸಿ ವಿಶೇಷ ಅಲಂಕಾರ ಮಾಡಲಾಗಿತ್ತು.

ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ತಮ್ಮ ಮನೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಮಾತನಾಡಿ, ನಾಡಿನ ಜನತೆಗೆ ದೇವರು ಸುಭಿಕ್ಷೆಯನ್ನು ಕರುಣಿಸಿ ಉತ್ತಮ ಮಳೆ ಬೆಳೆಯಾಗಿ ರೈತಾಪಿ ವರ್ಗ ಸಂತೃಪ್ತಿಯಿಂದ ಇರಲಿ, ಭಗವಂತ ಎಲ್ಲರಿಗೂ ಶಾಂತಿ ಸಹಬಾಳ್ವೆಯನ್ನು ಕರುಣಿಸಲಿ ಎಂದು ತಿಳಿಸಿದರು. ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕಿಯಿಸಿದ ಮಾಜಿ ಸಿಎಂ, ನಾನು ಮನೆ ದೇವರ ವಿಶೇಷ ಪೂಜೆಯನ್ನು ಸಲ್ಲಿಸಲು ಬಂದಿದ್ದೇನೆ ಯಾವುದೇ ರಾಜಕೀಯ, ಇತರೆ ವಿಷಯಗಳನ್ನು ಚರ್ಚೆ ಮಾಡಲು ಸೂಕ್ತ ಸಮಯ ಅಲ್ಲ ಎಂದರು.

ಕಳೆದ 50 ವರ್ಷಗಳಿಂದಲೂ ಒಂದು ವರ್ಷವೂ ತಪ್ಪದೆ ಬಿ.ಎಸ್.ಯಡಿಯೂರಪ್ಪನವರು ಮನೆದೇವರಿಗೆ ಪೂಜೆ ಸಲ್ಲಿಸುತ್ತಾ ಬಂದಿರುವುದು ವಿಶೇಷ.

ಈ ವೇಳೆ ಶಾಸಕ ಹೆಚ್.ಟಿ.ಮಂಜು, ಸಮಾಜ ಸೇವಕರಾದ ವಿಜಯರಾಮೇಗೌಡ, ಮಲ್ಲಿಕಾರ್ಜುನ ಇತರರು ಉಪಸ್ಥಿತರಿದ್ದರು.

ಸಾಸಲು ಮುಜರಾಯಿ ದೇಗುಲದ ಹುಂಡಿಯಲ್ಲಿ 12,16,391ರೂ. ಸಂಗ್ರಹ

ಕಿಕ್ಕೇರಿ: ಹೋಬಳಿಯ ಸಾಸಲು ಗ್ರಾಮದಲ್ಲಿ ಕಾರ್ತಿಕ ಮಾಸದ ಕಡೆ ಸೋಮವಾರದಲ್ಲಿ ಭಕ್ತರು ದೇಗುಲದ ಹುಂಡಿಗೆ ಹಾಕಲಾಗಿದ್ದ ಕಾಣಿಕೆಯನ್ನು ಎಣಿಕೆ ನಡೆಸಲಾಯಿತು.

ಮುಜರಾಯಿ ಇಲಾಖೆಯ ಸೋಮೇಶ್ವರ, ಮುಜರಾಯಿ ಅಧಿಕಾರಿ ತಹಶೀಲ್ದಾರ್ ಅಶೋಕ್ ಮಾರ್ಗದರ್ಶನದಲ್ಲಿ ಉಪತಹಸೀಲ್ದಾರ್ ವೀಣಾ ನೇತೃತ್ವದಲ್ಲಿ ದೇಗುಲ ಆವರಣದಲ್ಲಿ ಎಣಿಕಾ ಕಾರ್ಯ ನಡೆಯಿತು. ಹುಂಡಿ ಹಣ ಕಳವು ಹಿನ್ನೆಲೆಯಲ್ಲಿ ಕಾರ್ತಿಕ ಮಾಸದಲ್ಲಿ ಪ್ರತಿ ವಾರ ಎಣಿಕೆ ಕಾರ್ಯ ನಡೆಯಲಾಗಿದೆ. ಹುಂಡಿ ಎಣಿಕೆಯಲ್ಲಿ ಎರಡು ದೇಗುಲಗಳಿಂದ ಒಟ್ಟು 12,16,391ರೂ. ಕಾಣಿಕೆ ರೂಪದಲ್ಲಿ ಹಣ ಸಂಗ್ರಹವಾಗಿದೆ. ಇದರ ಜೊತೆಯಲ್ಲಿ ಬೆಳ್ಳಿಯ ನಾಗರಸೆಡೆ, ತೊಟ್ಟಿಲು, ಕಣ್ಣು ಮತ್ತಿತರ ಆಕೃತಿಯ ವಸ್ತುಗಳನ್ನು ಕಾಣಿಕೆ ರೂಪದಲ್ಲಿ ಭಕ್ತರು ಹುಂಡಿಯಲ್ಲಿ ಸಮರ್ಪಿಸಿದ್ದರು.

ಈ ವರ್ಷದ ಒಟ್ಟು ಕಾರ್ತಿಕ ಮಾಸದ 4ವಾರಗಳಿಂದ 31,84,914ರೂ. ಸಂಗ್ರಹವಾಗಿದ್ದು ಮುಜರಾಯಿ ಖಜಾನೆಗೆ ಅಧಿಕ ವರಮಾನ ನೀಡಿದೆ. ಒಟ್ಟು 22ಹುಂಡಿಗಳನ್ನು ಕಂದಾಯ ಇಲಾಖೆಯವರು ಬೆಳಗ್ಗಿನಿಂದ ಸಂಜೆಯವರೆಗೆ ಎಣಿಕೆ ಮಾಡಿದರು.

ಕಾಣಿಕೆ ಹಣವನ್ನು ಕೆ.ಆರ್.ಪೇಟೆ ಬ್ಯಾಂಕ್ ಆಫ್ ಬರೋಡಾದ ದೇಗುಲದ ಮುಜರಾಯಿ ಖಾತೆಗೆ ಜಮಾ ಮಾಡಲಾಯಿತು.

ಉಪತಹಸೀಲ್ದಾರ್ ವೀಣಾ, ರಾಜಸ್ವ ನಿರೀಕ್ಷಕ ಡಿ.ಆರ್.ನರೇಂದ್ರ, ಗ್ರಾಮ ಆಡಳಿತಾಧಿಕಾರಿ ಬಿ.ಎಂ.ಪ್ರಸನ್ನ, ಸೋಮಾಚಾರ್, ತಿಪ್ಪೇಶ್, ಸುನೀಲ್‌ಗಾಣಿಗೇರ್, ಹರ್ಷಿತಾ, ವನಜಾಕ್ಷಿ, ಮುಜರಾಯಿ ಸಹಾಯಕಿ ಪೂರ್ಣಿಮಾ, ಗ್ರಾಮ ಸಹಾಯಕರು, ಬ್ಯಾಂಕ್ ಆಫ್ ಬರೋಡಾ ಸಿಬ್ಬಂದಿ, ಗ್ರಾಮ ಮುಖಂಡರು ಭಾಗವಹಿಸಿದ್ದರು.



ಸಾಸಲು ಗ್ರಾಮದಲ್ಲಿನ ಸೋಮೇಶ್ವರ, ಶಂಭುಲಿಂಗೇಶ್ವರ ಹುಂಡಿ ಎಣಿಕೆ ನಡೆಯಿತು.

5 ವರ್ಷಗಳ ಅವಧಿಗೆ ಚುನಾವಣೆ

ಮಂಡ್ಯ, ಡಿ.1– ಕರ್ನಾಟಕ ಪ್ರದೇಶ ಕೃಷಿಕ ಸಮಾಜವು ತಾಲೂಕು ಕೃಷಿಕ ಸಮಾಜದ ಕಾರ್ಯಕಾರಿ ಸಮಿತಿಯ 2025–26 ರಿಂದ 2029–30 ನೇ ಸಾಲಿನ 5 ವರ್ಷಗಳ ಅವಧಿಗೆ ಚುನಾವಣೆಯನ್ನು ಡಿ.15 ರಂದು ಭಾನುವಾರ ಬೆಳಿಗ್ಗೆ 8 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಮಂಡ್ಯ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಏರ್ಪಡಿಸಲಾಗಿರುತ್ತದೆ ಎಂದು ಮಂಡ್ಯ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕ, ಲೇಖನ ಸಾಮಗ್ರಿ ವಿತರಣೆ



ಕಿಕ್ಕೇರಿ ಸಮೀಪದ ಮಂದಗೆರೆಯ ಹೇಮಾವತಿ ಪ್ರೌಢಶಾಲೆ ಮಕ್ಕಳಿಗೆ ಬೆಂಗಳೂರು ಚಂದಾಪುರ ಘಟಕದ ರಾಜಲಾಂಛನ ಯುಕ್ತಿ ಸಂಸ್ಥಾನದಿಂದ ಶನಿವಾರ ಉಚಿತವಾಗಿ ಪಠ್ಯ ಚಟುವಟಿಕೆಗೆ ಅಗತ್ಯವಾದ ಪರಿಕರಗಳನ್ನು ವಿತರಿಸಲಾಯಿತು. ಎಚ್.ಎ. ಹೊನ್ನೇನಹಳ್ಳಿ ಶೇಖರ್, ಸೌಮ್ಯ ಶಹಪುರಕರ್, ನಯನ, ಎಚ್.ಎ. ಶ್ರೀಧರ್, ಕೆ.ಜಿ. ಬಸವರಾಜು, ಮಂಜುನಾಥ್, ಮೋಹನಬಾಬು, ಮುರುಳಿ ಉಪಸ್ಥಿತರಿದ್ದರು.

ಕೆ.ಆರ್.ಪೇಟೆ ತಾಲೂಕಿನ ಗಡಿಗ್ರಾಮಕ್ಕೆ ಲಗ್ಗೆ ಇಟ್ಟ ಗಜಪಡೆ



ಬಸ್ತಿ ಹೊಸಕೋಟೆ ಗ್ರಾಮದ ಅಂಚಿನಲ್ಲಿರುವ ಕೆಆರ್‌ಎಸ್ ಹಿನ್ನೀರಿನಲ್ಲಿ ಬೀಡು ಬಿಟ್ಟಿರುವ ಆನೆಗಳು.

ಕೆ.ಆರ್.ಪೇಟೆ: ತಾಲೂಕಿನ ಬೂಕನಕೆರೆ ಹೋಬಳಿಯ ಗಡಿ ಗ್ರಾಮವಾದ ಬಸ್ತಿ ಹೊಸಕೋಟೆ ಗ್ರಾಮಕ್ಕೆ ಎರಡು ಆನೆಗಳು ಲಗ್ಗೆ ಇಟ್ಟಿದ್ದು, ಗ್ರಾಮಸ್ಥರು ಆತಂಕಗೊಂಡಿದ್ದಾರೆ.

ಕೃಷ್ಣರಾಜ ಸಾಗರ ಹಿನ್ನೀರಿನ ಭಾಗದಿಂದ ಬಂದಿರುವ ಗಜಪಡೆಗಳು ಗ್ರಾಮದಲ್ಲಿ ಹರಿಯುತ್ತಿರುವ ಕೆಆರ್‌ಎಸ್ ಹಿನ್ನೀರಿನಲ್ಲಿ ಸ್ವಚ್ಛಂದವಾಗಿ ಆಟವಾಡುತ್ತಿದ್ದವು. ಇದನ್ನು ಕಂಡು ಆತಂಕಗೊಂಡಿರುವ ಸುತ್ತಮುತ್ತಲ ಗ್ರಾಮಸ್ಥರು ಆನೆಗಳನ್ನು ಕಾಡಿಗಟ್ಟಲು ಅರಣ್ಯ ಇಲಾಖೆಯನ್ನು ಒತ್ತಾಯಿಸಿದ್ದಾರೆ. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕೆಆರ್‌ಎಸ್ ಹಿನ್ನೀರಿನಲ್ಲಿ ಬೀಡು ಬಿಟ್ಟಿರುವ ಆನೆಗಳನ್ನು ಕಾಡಿಗೆ ಅಟ್ಟಲು ಹರಸಾಹಸ ಪಡುತ್ತಿದ್ದಾರೆ.

ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥ ಸಂಚಲನ



ನಾಗಮಂಗಲ: ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸೇವಕರು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪಥ ಸಂಚಲನ ನಡೆಸಿದರು.

ಸೌಮ್ಯಕೇಶವ ಸ್ವಾಮಿ ದೇವಾಲಯ ಮುಂಭಾಗದಿಂದ ಹೊರಟ ಪಥಸಂಚಲನಕ್ಕೆ ಎಲ್ಲ ಬೀದಿಗಳಲ್ಲಿ ಹಿಂದೂ ಬಾಂಧವರು ಪುಷ್ಪಾರ್ಚನೆ ಮಾಡುವ ಮೂಲಕ ಪಥ ಸಂಚಲನದ ಸ್ವಯಂಸೇವಕರನ್ನು ಸ್ವಾಗತಿಸಿ ದರು. ನಂತರ ಕೇಶವ ಸ್ವಾಮಿ ದೇವಸ್ಥಾನ ಮುಂಭಾಗ ಎಲ್ಲರೂ ಸೇರಿ "ರಕ್ತವು ಕೂಗಿ ಹೇಳುತ್ತಿದೆ, ಹಿಂದೂ ಹಿಂದೂ ಎನ್ನುತ್ತಿದೆ.... ಹಿಂದುತ್ವದ ಅಭಿಮಾನವು ಇರದ ರಕ್ತವೂ ರಕ್ತವೇ ಅಲ್ಲ... ಜೈ ಶ್ರೀ ರಾಮ್ ಜೈ ಶ್ರೀ ರಾಮ್" ಎಂದು ಘೋಷಣೆಗಳನ್ನು ವಿಶ್ವ ಹಿಂದೂ ಪರಿಷತ್, ಬಜರಂಗದಳ ಹಾಗೂ ಹಿಂದೂ ಸಂಘಟನೆಯ ಕಾರ್ಯಕರ್ತರು, ಸಾರ್ವಜನಿಕರು ಭಾಗವಹಿಸಿ ಘೋಷಣೆಯನ್ನು ಮೊಳಗಿಸಿದರು.

ಒಂದನೇ ಪುಟದಿಂದ

ಹಲವರ ಪ್ರಾಣ ಹಾನಿ ಖಚಿತ

ಮುಗಿಸುತ್ತೇನೆ ಎಂದು ಎಷ್ಟೋ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಾಗೆಂದ ಮಾತ್ರಕ್ಕೆ ಕಾಂಗ್ರೆಸ್‌ನಿಂದ ಅವರನ್ನು ಹೊರಗೆ ಹಾಕಲಾಗಿದೆಯೇ ಎಂದು ಕೇಳಿದರು. ಸರ್ಕಾರ ಈ ಕೂಡಲೇ ಸ್ವಾಮೀಜಿ ವಿರುದ್ಧ ದಾಖಲಿಸಿರುವ ಎಫ್‌ಐಆರ್ ವಾಪಾಸು ಪಡೆಯಬೇಕು ಎಂದು ವಿಶ್ವನಾಥ್ ಆಗ್ರಹಿಸಿದರು. ಬಿಜೆಪಿಯ ಆಂತರಿಕ ಕಲಹದ ಬಗ್ಗೆ ಕಿಡಿಕಾರಿದ ವಿಶ್ವನಾಥ್, ಇದು ಜನ ಮೆಚ್ಚುವಂತದ್ದಲ್ಲ. ವೈಚಾರಿಕತೆ ಹಾಗೂ ನೈತಿಕತೆ ಎಂಬುವುದು ಬಿಜೆಪಿಗೂ ಇಲ್ಲ, ಕಾಂಗ್ರೆಸ್‌ಗೂ ಇಲ್ಲ ಎಂದು ಟೀಕಿಸಿದರು.

ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಸಂಬಂಧ ಸಂಸದೀಯ ಜಂಟಿ ಸಮಿತಿ ರಚನೆ ಮಾಡಿದೆ. ಈ ಬಗ್ಗೆ ಕೇಂದ್ರ ಸಚಿವರು ಸೇರಿದಂತೆ ಬಿಜೆಪಿ ನಾಯಕರು ಜನರಿಗೆ ತಿಳಿ ಹೇಳಬೇಕು. ಇದು ಬಿಟ್ಟು ಇವರಿವರೇ ಕಚ್ಚಾಡುವುದಲ್ಲ ಎಂದರು.

ವಕ್ಫ್ ಆಸ್ತಿಯನ್ನು ಬಲಿಷ್ಟ ಮುಸ್ಲಿಂರು ನುಂಗುತ್ತಿದ್ದಾರೆ. ಬಡ ಮುಸ್ಲಿಂರು ವಕ್ಫ್ ಆಸ್ತಿಯಿಂದ ಯಾವುದೇ ಪ್ರಯೋಜನ ಪಡೆಯುತ್ತಿಲ್ಲ. ರಾಜ್ಯ ಕಾಂಗ್ರೆಸ್ ಸರ್ಕಾರ ಶೇಕಡ ನೂರರಷ್ಟು ಮುಸ್ಲಿಂ ಮತ ಪಡೆದು ಅಧಿಕಾರಕ್ಕೆ ಬಂದಿದೆ. ಆದರೆ ಅವರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿಲ್ಲ ಎಂದು ವಿಶ್ವನಾಥ್ ಆಪಾದಿಸಿದರು.

ಐಪಿಎಸ್ ಅಧಿಕಾರಿ ದುರ್ಮರಣ

ಹಾಸನ ತಲುಪಬೇಕು ಎನ್ನುವಷ್ಟರಲ್ಲಿ ಕಿತ್ತಾನೆಗಡಿ ಬಳಿ ಜೀಪ್‌ನ ಟಯರ್ ಸ್ಫೋಟಗೊಂಡಿದೆ. ಈ ವೇಳೆ ವೇಗವಾಗಿ ಚಲಿಸುತ್ತಿದ್ದ ಜೀಪ್ ಚಾಲಕನ ನಿಯಂತ್ರಣ ತಪ್ಪಿ ಏಕಾಏಕಿ ಪಲ್ಟಿಯಾಗಿದೆ. ಪಲ್ಟಿಯಾದ ರಭಸಕ್ಕೆ ಜೀಪ್ ನಜ್ಜುಗುಜ್ಜಾಗಿದ್ದು, ಐಪಿಎಸ್ ಅಧಿಕಾರಿ ತಲೆಗೆ ತೀವ್ರ ಪೆಟ್ಟಾಗಿ, ರಕ್ತಸ್ರಾವವಾಗಿತ್ತು. ಅಪಘಾತದಲ್ಲಿ ಚಾಲಕ ಮಂಜೇಗೌಡ ಎಂಬವರಿಗೂ ಗಾಯಗಳಾಗಿವೆ. ಇದನ್ನು ಗಮನಿಸಿದ ಸ್ಥಳೀಯರು ಕೂಡಲೇ ಅಧಿಕಾರಿ ಮತ್ತು ಚಾಲಕನನ್ನು 108 ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ರವಾನಿಸಿದ್ದಾರೆ. ಆದರೆ ಚಿಕಿತ್ಸೆ ಫಲಿಸದೆ ಐಪಿಎಸ್ ಅಧಿಕಾರಿ ಸಾವನ್ನಪ್ಪಿದ್ದಾರೆ.

ನಮ್ಮ ಹತ್ಯೆಗೆ ಸಂಚು ರೂಪಿಸಲಾಗಿದೆ

ಸಂಚು ರೂಪಿಸಿ ರಬ್ಬರ್‌ಸ್ಟ್ಯಾಂಪ್ ಮತ್ತು ಕಾರ್ಪೊರೇಷನ್ ಎಂಡಿ ಮತ್ತು ಅಕೌಂಟ್ಸ್ ಅಧಿಕಾರಿಯ ಸಹಿಗಳನ್ನು ಒಳಗೊಂಡ ಸೀಲುಗಳನ್ನು ಸೃಷ್ಟಿಸಿದ್ದು, ಇತರ ಆರೋಪಿಗಳ ನೆರವಿನೊಂದಿಗೆ ನಕಲಿ ಸಹಿ ಮತ್ತು ದಾಖಲೆಗಳನ್ನು ಸೃಷ್ಟಿಸಿ ಪಾಲಿಕೆಗೆ 89.62 ಕೋಟಿ ರೂ.ಗಳ ಆರ್ಥಿಕ ವಂಚನೆ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ತನಿಖೆ ವೇಳೆ ಅವರ ಬಳಿ 8.48 ಕೋಟಿ ನಗದು, 15 ಕೆಜಿ ಚಿನ್ನ, 3.4 ಕೋಟಿ ಮೌಲ್ಯದ ಅಪಾರ್ಟ್‌ಮೆಂಟ್, 3.31 ಕೋಟಿ ಮೌಲ್ಯದ ಕಾರು, 1.2 ಕೋಟಿ ಮೌಲ್ಯದ ಮತ್ತೊಂದು ಕಾರು ಪತ್ತೆಯಾಗಿದೆ. ಉಳಿದ ಮೊತ್ತವನ್ನು ಮಧ್ಯವರ್ತಿಗಳು ಮತ್ತು ಏಜೆಂಟರು ಸೇರಿದಂತೆ ಇತರ ಆರೋಪಿಗಳಿಗೆ ಹಂಚಿರುವುದು ತಿಳಿದುಬಂದಿದೆ. ಆರೋಪಿಗೆ ಜಾಮೀನು ನೀಡಿದ್ದೇ ಆದರೆ, ಇದೇ ರೀತಿ ಹಲವು ಅಪರಾಧಗಳಲ್ಲಿ ಭಾಗಿಯಾಗುವ ಸಾಧ್ಯತೆಗಳಿವೆ. ಅಲ್ಲದೆ, ಆರೋಪಿಯು ಪ್ರಭಾವಿ ವ್ಯಕ್ತಿಯಾಗಿರುವುದರಿಂದ ಪರಾರಿಯಾಗುವ ಸಾಧ್ಯತೆಯಿದೆ, ಪ್ರಾಸಿಕ್ಯೂಷನ್ ಸಾಕ್ಷಿಗಳಿಗೆ ಬೆದರಿಕೆ ಹಾಕಬಹುದು. ಸಾಕ್ಷ್ಯವನ್ನು ನಾಶಪಡಿಸುವ ಸಾಧ್ಯತೆಗಳಿವೆ ಎಂದು ಸಿಐಡಿ ವಾದಿಸಿದೆ. ವಾದ–ಪ್ರತಿವಾದ ಆಲಿಸಿದ ನ್ಯಾಯಾಲಯವು. ಆರೋಪಿಗಳಿಗೆ ನಿಜವಾಗಿಯೂ ಜೈಲಿನೊಳಗೆ ಜೀವ ಬೆದರಿಕೆಗಳಿದ್ದರೆ, ರೈಸನ್ ಪ್ರಾಧಿಕಾರವು ಈ ವಿಷಯವನ್ನು ಪರಿಶೀಲಿಸಬೇಕು ಮತ್ತು ಅವರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಹೇಳಿ ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ.

ಹಾಸನದಲ್ಲಿ ಸಮಾವೇಶ

ನಾಯಕರಿಗೂ ಆಹ್ವಾನ ನೀಡಲಾಗುವುದು. ಸಮಾನತೆ, ಸಂವಿಧಾನದ ಬಗ್ಗೆ ಗೌರವ ಹೊಂದಿರುವವರು, ಸ್ವಾಭಿಮಾನಿಗಳಿಗೆ ಈ ಸಮಾವೇಶದಲ್ಲಿ ಭಾಗವಹಿಸುವಂತೆ ಮನವಿ ಮಾಡುತ್ತೇನೆ. ಸಧ್ಯದಲ್ಲೇ ನಾನು ಹಾಗೂ ಕೆಪಿಸಿಸಿ ತಂಡ ಸಮಾವೇಶ ನಡೆಯುವ ಸ್ಥಳಕ್ಕೆ ಭೇಟಿ ನೀಡಿ ತಯಾರಿಯನ್ನು ಪರಿಶೀಲನೆ ಮಾಡುತ್ತೇವೆ ಎಂದು ತಿಳಿಸಿದ್ದಾರೆ. ಜನರ ಕಲ್ಯಾಣ, ಸಂವಿಧಾನ ರಕ್ಷಣೆ, ಸ್ವಾಭಿಮಾನ ರಕ್ಷಣೆ, ಸರ್ಕಾರದ ವಿರುದ್ಧ ಮಾಡುತ್ತಿರುವ ಸುಳ್ಳು ಆರೋಪಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ಸಮಾವೇಶ ಮಾಡಲಾಗುತ್ತಿದೆ. ಸರ್ಕಾರದ ವಿರುದ್ಧ ನಡೆಯುತ್ತಿರುವ ಅಪಪ್ರಚಾರಕ್ಕೆ ಜನ ಈಗಾಗಲೇ ತೀರ್ಪು ಕೊಟ್ಟಿದ್ದಾರೆ. ಎಐಸಿಸಿ ನಾಯಕರ ನಿರ್ದೇಶನದಂತೆ ಮುಂದಿನ ಎರಡು ತಿಂಗಳ ಕಾಲ ಒಂದಲ್ಲಾ ಒಂದು ರೀತಿ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಮೂರು ಕ್ಷೇತ್ರಗಳ ಉಪ ಚುನಾವಣೆಯಲ್ಲಿನ ಯಶಸ್ಸು ಮುಂದುವರೆಸಿಕೊಂಡು ಹೋಗಲು ಪಕ್ಷ ಸಂಘಟನೆ ಮಾಡಲಾಗುವುದು. ಚುನಾವಣೆ ಬಂದಾಗ ಸಿದ್ಧತೆ ಮಾಡಿಕೊಳ್ಳುವುದಲ್ಲ. ಚುನಾವಣೆ ಮುಗಿದ ಮರು ದಿನದಿಂದಲೇ ಮುಂದಿನ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಬೇಕು. ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ಜನರಿಗೆ ತಲುಪಿಸಬೇಕು ಎಂದಿದ್ದಾರೆ.

ಕುಮಾರಸ್ವಾಮಿ ಇರಲಿಲ್ಲ

ಈಗ ಇಡೀ ರಾಜ್ಯದ ಜನರಿಗೆ ಕೃತಜ್ಞತೆ ಹೇಳಲು ಕಾಂಗ್ರೆಸ್ ಪಕ್ಷ ಮತ್ತು ಸ್ವಾಭಿಮಾನಿಗಳ ಒಕ್ಕೂಟದಿಂದ ಸಮಾವೇಶ ಏರ್ಪಡಿಸಲಾಗಿದೆ. ಕಾಂಗ್ರೆಸ್ ಪಕ್ಷ ಮತ್ತು ಸ್ವಾಭಿಮಾನಿಗಳ ಜಂಟಿ ಆಶ್ರಯದಲ್ಲಿ ನಡೆಯುತ್ತಿದೆ ಎಂದು ತಿಳಿಸಿದರು. ಇದಕ್ಕೆ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನೂ ಆಹ್ವಾನಿಸಲಾಗಿದೆ. ಪಕ್ಷವು ಇದರಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದೆ ಎಂದರು.

ಪಕ್ಷಕ್ಕೆ ಒಪ್ಪಿಸಿದ್ದೇನೆ

ಸಹಕಾರ ನೀಡಬೇಕಾಗಿದೆ. ಜೆಡಿಎಸ್ ಪಕ್ಷ ಎಂದಿಗೂ ಹಿಂದಕ್ಕೆ ಬಿದ್ದಿಲ್ಲ. ದೇವೇಗೌಡರು ಮುಖ್ಯಮಂತ್ರಿ ಆದರು, ನಂತರ ಪ್ರಧಾನಿ ಆದರು. ಈಗ 2023ರ ಚುನಾವಣೆಯಲ್ಲಿ ಕೇವಲ 18 ಸ್ಥಾನಗಳನ್ನು ಗೆದ್ದಿದ್ದರೂ ನಾನು ಕೇಂದ್ರ ಸಚಿವನಾಗಿದ್ದೇನೆ ಎಂದು ಹೇಳಿದರು. ಪಕ್ಷದ ಏಕತೆಯ ಮಹತ್ವವನ್ನು ಒತ್ತಿ ಹೇಳಿದ ಕುಮಾರಸ್ವಾಮಿ, ಪಕ್ಷದ ಅಸಮಾಧಾನಗಳಿದ್ದರೆ, ಅವುಗಳನ್ನು ಬಗೆಹರಿಸಿಕೊಳ್ಳಬೇಕು. ನಮ್ಮ ಪಕ್ಷವು ಕಾರ್ಯಕರ್ತರಿಗೋಸ್ಕರ ಇರುವ ಪಕ್ಷ ಜಾತಿ ರಾಜಕಾರಣದಲ್ಲಿ ನಮಗೆ ನಂಬಿಕೆ ಇಲ್ಲ. ಎಲ್ಲ ಸಮುದಾಯಗಳನ್ನು ನಮ್ಮೊಂದಿಗೆ ಕೊಂಡೊಯ್ಯಲು ಬದ್ಧರಾಗಿದ್ದೇವೆ. ನಾವು ಒಗ್ಗಟ್ಟಿನಿಂದ ಇದ್ದರೆ, ನಮ್ಮ ಪಕ್ಷವನ್ನು ಯಾವುದೇ ಶಕ್ತಿಗಳು ಅಂತ್ಯಗೊಳಿಸಲಾರವು ಎಂದು ಹೇಳಿದರು. ಸಭೆಯಲ್ಲಿ ಬಂಡೆಪ್ಪ ಖಾಶೆಂಪುರ್, ಹೆಚ್.ಕೆ.ಕುಮಾರಸ್ವಾಮಿ, ಸಾ.ರಾ.ಮಹೇಶ್, ಸುರೇಶ ಬಾಬು, ನಿಖಿಲ್ ಕುಮಾರಸ್ವಾಮಿ, ಬಾಲಕೃಷ್ಣ, ಶಾರದಾ ಪೂರ್ಯ ನಾಯಕ್, ಲೀಲಾದೇವಿ ಪ್ರಸಾದ್ ಸೇರಿದಂತೆ ಹಲವು ಪ್ರಮುಖ ನಾಯಕರು ಪಾಲ್ಗೊಂಡರು.

ದಕ್ಷ ಮಾಲಗತ್ತಿಗೆ ಪಿಹೆಚ್.ಡಿ



ಮೈಸೂರು: ಡಾ.ಎಸ್.ಜೆ. ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ದಕ್ಷ ಮಾಲಗತ್ತಿ ಅವರು ನಿರ್ವಹಣೆ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಹೆಚ್‌ಐವಿ ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕರು ಕೈಜೋಡಿಸಬೇಕು

ಜಿಲ್ಲಾ ನ್ಯಾಯಾಧೀಶರಾದ ದಿನೇಶ್ ಸಲಹೆ



ವಿಶ್ವ ಏಡ್ಸ್ ದಿನದ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಜಾಥಗೆ ಜಿಲ್ಲಾ ನ್ಯಾಯಾಧೀಶರಾದ ದಿನೇಶ್ ಅವರು ಚಾಲನೆ ನೀಡಿದರು.

ಮೈಸೂರು, ಡಿ.1(ಎಂಟಿವೈ)– ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಹೆಚ್‌ಐವಿ ಸೋಂಕು ಹರಡದಂತೆ ನಿಯಂತ್ರಣ ಮಾಡಲು ಆರೋಗ್ಯ ಇಲಾಖೆಯೊಂದಿಗೆ ಸಾರ್ವಜನಿಕರು ಕೈಜೋಡಿಸಬೇಕು ಎಂದು ಜಿಲ್ಲಾ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಿನೇಶ್ ಸಲಹೆ ನೀಡಿದ್ದಾರೆ.

ಮೈಸೂರು ಅರಮನೆಯ ಕೋಟೆ ಆಂಜನೇಯಸ್ವಾಮಿ ದೇವಾಲಯದ ಮುಂಭಾಗ ಭಾನುವಾರ 'ವಿಶ್ವ ಏಡ್ಸ್' ದಿನದ ಅಂಗವಾಗಿ ಭಾನುವಾರ ಜಿಲ್ಲಾಡಳಿತ, ಜಿ.ಪಂ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯ, ಎಂಎಂಸಿ ಮತ್ತು ಆರ್‌ಐ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ಏಡ್ಸ್ ಕುರಿತ ಜಾಗೃತಿ ಜಾಥ'ಗೆ ಚಾಲನೆ ನೀಡಿದ ಮಾತನಾಡಿದ ಅವರು, ಈ ಹಿಂದೆ ಏಡ್ಸ್ ಕುರಿತು ಜನರಲ್ಲಿ ಅರಿವು ಕಡಿಮೆ ಇತ್ತು. ಹಾಗಾಗಿ ಸೋಂಕು ಹರಡುತ್ತಿತ್ತು. ಆದರೆ, ಇತ್ತೀಚಿನ ವರ್ಷಗಳಲ್ಲಿ ಏಡ್ಸ್ ಕುರಿತಂತೆ ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಹೆಚ್ಚಾಗಿ ನಡೆಯುತ್ತಿರುವುದರಿಂದ ಸೋಂಕು ಹರಡುವಿಕೆ ನಿಯಂತ್ರಣದಲ್ಲಿದೆ. ದೇಶದಲ್ಲಿಯೂ ಸೋಂಕು ಹರಡುವಿಕೆ ಕಡಿವಾಣ ಹಾಕಲು ಆರೋಗ್ಯ ಇಲಾಖೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು.

ಈ ಸಾಲಿನಲ್ಲಿ ವಿಶ್ವ ಏಡ್ಸ್ ದಿನವನ್ನು 'ನನ್ನ ಆರೋಗ್ಯ ನನ್ನ ಹಕ್ಕು' ಘೋಷಣೆಯೊಂದಿಗೆ ಆಚರಿಸಲಾಗುತ್ತಿದೆ. ಪರಿಣಾಮಕಾರಿಯಾದ ಕಾರ್ಯಕ್ರಮಗಳ ಮೂಲಕ 2030ರ ವೇಳೆಗೆ ಏಡ್ಸ್ ಪ್ರಕರಣಗಳನ್ನು ಶೂನ್ಯಕ್ಕೆ ತರುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕಾರ್ಯೋನ್ಮುಖವಾಗಿದೆ. ಇದಕ್ಕೆ ಸಂಘ–ಸಂಸ್ಥೆಗಳ, ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಅಲ್ಲದೆ, ಶಾಲಾ–ಕಾಲೇಜುಗಳಲ್ಲೂ ಏಡ್ಸ್ ಕುರಿತು ಅರಿವು ಮೂಡಿಸಬೇಕು ಎಂದರು.

ಡಿಹೆಚ್‌ಓ ಡಾ.ಪಿ.ಸಿ. ಕುಮಾರಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಏಡ್ಸ್ ಸೋಂಕು ಹರಡದಂತೆ ಜಾಗೃತಿ ಮೂಡಿಸ ಲಾಗುತ್ತಿದೆ. ಅಲ್ಲದೆ, ಸೋಂಕಿತರಿಗೆ ಅಗತ್ಯ ಚಿಕಿತ್ಸಾ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ಹೆಚ್‌ಐವಿ ಸೋಂಕು ಹರಡುವಿಕೆ ತಡೆಯಲು ಜಾಗೃತಿ ಕಾರ್ಯಕ್ರಮಗಳು ಪರಿಣಾಮಕಾರಿಯಾಗಿ ನಡೆಸುತ್ತಿರುವುದರಿಂದ ಸೋಂಕಿತರ ಸಂಖ್ಯೆ ಕ್ಷೀಣಿಸುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ.ಜಯಂತ್, ಜಿಲ್ಲಾ ಮೇಲ್ವಿಚಾರಕರಾದ ಎಸ್.ಸವಿತಾ, ಶ್ರೀಧರ್ ಹೆಚ್, ಮಧುಕುಮಾರ್, ಆಪ್ತ ಸಮಾಲೋಚಕರು, ಆರೋಗ್ಯ ಶಿಕ್ಷಣಾಧಿಕಾರಿಗಳು, ವಿವಿಧ ನರ್ಸಿಂಗ್ ಕಾಲೇಜುಗಳ ಪ್ರಾಂಶುಪಾಲರು, ನರ್ಸಿಂಗ್ ವಿದ್ಯಾರ್ಥಿಗಳು, ವಿವಿಧ ಸ್ವಯಂ ಸೇವಾ ಸಂಸ್ಥೆಗಳ ಮುಖಂಡರು ಉಪಸ್ಥಿತರಿದ್ದರು.


ಕೋಟೆ ಆಂಜನೇಯಸ್ವಾಮಿ ದೇವಾಲಯ ಮುಂಭಾಗದಿಂದ ಆರಂಭವಾದ ಜಾಗೃತಿ ಜಾಥ ದೊಡ್ಡಗಡಿಯಾರ ವೃತ್ತದ ಮೂಲಕ ನಜ್ಜರ್‌ಬಾದ್‌ನಲ್ಲಿರುವ ನಾಗಮ್ಮ ಹೆರಿಗೆ ಆಸ್ಪತ್ರೆ ಆವರಣದಲ್ಲಿರುವ ವೈದ್ಯರ ಭವನ ತಲುಪಿತು. ಅಲ್ಲಿ ಬೀದಿ ನಾಟಕ ಪ್ರದರ್ಶಿಸಿ ಏಡ್ಸ್ ನಿಯಂತ್ರಣದ ಬಗ್ಗೆ ಜಾಗೃತಿ ಮೂಡಿಸಲಾಯಿತು.



ಹೆಚ್‌ಐವಿ ಜಾಗೃತಿ ಘೋಷಣಾ ಫಲಕ ಹಿಡಿದು ಸಾಗಿದ ವಿದ್ಯಾರ್ಥಿಗಳನ್ನು ಕಾಣಬಹುದು.

ಮೈಸೂರು ಮಿತ್ರ

ಮಕ್ಕಳ ಸಾಹಿತ್ಯ ಹಬ್ಬದಲ್ಲಿ ಚಿಣ್ಣರ ಕಲರವ



ಮೈಸೂರು ಚಿಲ್ಡ್ರನ್ ಲಿಟರೇಚರ್ ಫೆಸ್ಟಿವಲ್‌ನ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಚಿತ್ರದಲ್ಲಿ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಶಿಲ್ಪಿ ಅರುಣ್ ಯೋಗಿರಾಜ್, ಮೈಸೂರು ಲಿಟರರಿ ಫೋರಂ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷೆ ಶುಭಾ ಸಂಜಯ್ ಅರಸ್ ಇನ್ನಿತರರಿದ್ದಾರೆ.

ಮೈಸೂರು,ಡಿ.1(ಎಂಕೆ)–ಮುದ್ದು ಮಕ್ಕಳ ಚಮತ್ಕಾರ ಬುದ್ಧಿವಂತಿಕೆ, ಶಕ್ತಿ–ಸಾಮರ್ಥ್ಯ, ಕೌಶಲ ಪ್ರದರ್ಶನಕ್ಕೆ ಮೈಸೂರು ಮಕ್ಕಳ ಸಾಹಿತ್ಯ ಹಬ್ಬ(ಮೈಸೂರು ಚಿಲ್ಡ್ರನ್ ಲಿಟರೇಚರ್ ಫೆಸ್ಟಿವಲ್) ವೇದಿಕೆಯಾಯಿತು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಖಾಸಗಿ ಹೋಟೆಲ್‌ನಲ್ಲಿ ಮೈಸೂರು ಲಿಟರರಿ ಫೋರಂ ಚಾರಿಟಬಲ್ ಟ್ರಸ್ಟ್ ಮತ್ತು ಮೈಸೂರು ಬುಕ್ ಕ್ಲಬ್ಸ್ ವತಿಯಿಂದ ಆಯೋಜಿಸಿದ್ದ ಮಕ್ಕಳ ಸಾಹಿತ್ಯ ಹಬ್ಬದಲ್ಲಿ ಪುಟಾಣಿಗಳ ಕಲರವ ಮನೆ ಮಾಡಿತ್ತು. ಕಥೆಗಳಿಗೆ ಅನುಗುಣವಾಗಿ ಕಲ್ಪನೆಗೆ ಜಾರಿದ ಚಿಣ್ಣರು, ಹತ್ತಾರು ಪ್ರಶ್ನೆಗಳಿಗೆ ಚಟಪಟನೆ ಉತ್ತರಿಸಿ ಸೈ ಎನಿಸಿಕೊಂಡರು. ಇಡೀ ಕಾರ್ಯಕ್ರಮವನ್ನು ಆವರಿಸಿದ್ದ ಮಕ್ಕಳು, ನಿರೂಪಣೆ ಮಾತ್ರವಲ್ಲದೆ ಮಳಿಗೆಗಳನ್ನು ನಿರ್ವಹಿಸಿ ಕೌಶಲತೆ ತೋರಿದರು. ಸಾಹಿತಿಗಳಾದ ಮುಂಬೈನ ಶಮಾ ಥಾಕ್ರೆ ಮತ್ತು ಶಾರನ್ ದೇವ್, ಚೆನ್ನೈನ ಶ್ರೀವಲ್ಲಿ ಶ್ರೀನಿವಾಸನ್, ಬೆಂಗಳೂರಿನ ರಮ್ಯ ಶ್ರೀನಿಧಿ ಮತ್ತು ಶ್ರೇಯಾ ನಾರಾಯಣನ್ ಹಾಗೂ ಮೈಸೂರಿನ ಅನುಪಮಾ ಕೆ.ಬೆಂಚಿನ ಮರಡಿ ಮತ್ತು ಗಣೇಶ್ ವೆಂಕಟೇಶ್ ಅವರೊಂದಿಗೆ ಸಾಹಿತ್ಯ ಸೊಬಗಲ್ಲಿ ಮಿಂದೆದ್ದ ಪುಟಾಣಿಗಳು, ಮೈಸೂರಿನ ಅರುಣ್ ಅರಸ್, ನಮ್ರತಾ ಅರಸ್ ಅವರ ಚಿಟ್ಟೆಗಳ ಜೀವನ ಚರಿತ್ರೆ ಬಗ್ಗೆ ಮತ್ತು ಚಾಂದಿನಿ ಚಾಬ್ರಾ ಅವರು ಹೇಳಿದ ಕಥೆಗಳನ್ನು ಆಲಿಸಿ ಆನಂದಿಸಿದರು. ಹಾಗೆಯೇ ಚಿತ್ರಕಾರರಾದ ವನ್ಯಾ ಜೋಸೆಫ್, ಸೆಂಥಿಲ್ ಅವರ ಚಿತ್ರ ರಚನೆ, ನೀಮಾ ಮಾಂಜ್ರೇಕರ್, ಪೂಜಾ ತೋಶ್ನಿವಾಲ್ ಮತ್ತು ರೂಪಾ ಶಿವ ಪ್ರಕಾಶ್ ಅವರ ನೃತ್ಯ, ಕುತೂಹಲಕಾರಿ ಕಥೆಗಳು, ಸುಮಾ ರಾಜ್‌ಕುಮಾರ್ ಅವರ ಮಾತನಾಡುವ ಗೊಂಬೆ ಮಕ್ಕಳ ಗಮನ ಸೆಳೆಯಿತು.

ಕಥೆಗಳು ಪ್ರೇರಣೆ: ಮಕ್ಕಳ ಸಾಹಿತ್ಯ ಸಂಭ್ರಮವನ್ನು ಉದ್ಘಾಟಿಸಿದ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಮಾತನಾಡಿ, ಕಥೆಗಳು ನಮ್ಮ ಜೀವನದಲ್ಲಿ ತುಂಬಾ ಪರಿಣಾಮ ಬೀರುತ್ತವೆ. ಅದರಲ್ಲೂ ನಮ್ಮ ತಂದೆ, ಪೂರ್ವಜರ ಶ್ರಮದ ಕಥೆಗಳು ನಮ್ಮನ್ನು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಪ್ರೇರೇಪಣೆ ನೀಡುತ್ತದೆ. ಕಲಿಕೆಗೆ ಸದಾ ಮುಕ್ತರಾಗಿರಬೇಕು ಎಂಬುದನ್ನು ಕಲಿಸುತ್ತದೆ ಎಂದು ತಮ್ಮ ಬದುಕಿನ ಘಟನೆಗಳನ್ನು ತಿಳಿಸಿದರು.

ಏಕಾಗ್ರತೆ ಪುಸ್ತಕಗಳು ಸಹಕಾರಿ: ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಮಾತನಾಡಿ, ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸುವುದು ಅತ್ಯಂತ ಮುಖ್ಯ. ಇಂದು ಹಲವು ಪ್ರಲೋಭನೆಗಳು ನಮ್ಮನ್ನು ವಿಚಲಿತ ಮಾಡುತ್ತಿದ್ದು, ಏಕಾಗ್ರತೆ ಹೊಂದಲು ಪುಸ್ತಕಗಳು ಸಹಕರಿಸುತ್ತವೆ ಎಂದು ಹೇಳಿದರು.

ಬಹುಮಾನ ವಿತರಣೆ: ಸಣ್ಣಕಥಾ ಸ್ಪರ್ಧೆ, ಜಿಲ್ಲಾ ಮಟ್ಟದ ಸಾಮಾನ್ಯ ಜ್ಞಾನ ರಸಪ್ರಶ್ನೆ ವಿಜೇತರಿಗೆ ಬಹು ಮಾನಗಳನ್ನು ಪ್ರದಾನ ಮಾಡಲಾಯಿತು. ಮೈಸೂರು ಲಿಟರರಿ ಫೋರಂ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷೆ ಶುಭಾ ಸಂಜಯ್ ಅರಸ್, ಟ್ರಸ್ಟ್ ಕಾರ್ಯದರ್ಶಿ ಥಂಕಮ್ ಪಣಕಲ್, ವಿನಯ ಪ್ರಭಾವತಿ ಉಪಸ್ಥಿತರಿದ್ದರು.

ಕಥಾಲೋಕವೇ ಅದ್ಭುತ...!

"ನಾವು ಕಥೆಗಳನ್ನು ಕೇಳುತ್ತಾ ಬೆಳೆಯುತ್ತೇವೆ. ನಮ್ಮದೇ ಆದ ಕಥೆಗಳನ್ನು ಸೃಷ್ಟಿಸಿ, ನಾಯಕರಾಗಿ ಕಲ್ಪನೆ ಮಾಡುತ್ತೇವೆ. ಕಥಾಲೋಕ ಒಂದು ಅದ್ಭುತ ಪ್ರಪಂಚವಾಗಿದ್ದು, ಅದರೊಂದಿಗೆ ಹೆಚ್ಚು ಸಂಪರ್ಕವನ್ನು ಬೆಳೆಸಿಕೊಳ್ಳಬೇಕು. ಪ್ರತಿ ತಿಂಗಳೂ ಒಂದು ಹೊಸ ಪುಸ್ತಕ ಓದುವುದನ್ನು, ದಿನವೂ ಒಂದು ಹೊಸ ಪದ ಕಲಿಯುವುದನ್ನು ರೂಢಿಸಿಕೊಳ್ಳಿ, ಇದು ನಮ್ಮಲ್ಲಿ ಶಿಸ್ತುಬದ್ಧ ಜೀವನ ರೂಪುಗೊಳ್ಳಲು ಸಹಕರಿಸುತ್ತದೆ. **–ಸೀಮಾ ಲಾಟ್ಕರ್, ನಗರ ಪೊಲೀಸ್ ಆಯುಕ್ತೆ**

ಸಿಎಂ ಕುರ್ಚಿಗಾಗಿ ಸಾವಿರಾರು ಕೋಟಿ ವಹಿವಾಟು

ಯತ್ನಾಳ್ ಸಾಕ್ಷಿ ಕೊಟ್ಟರೆ ತನಿಖೆ ನಡೆಸುತ್ತೇವೆ




ಮೈಸೂರು, ಡಿ.1(ಎಂಟಿವೈ)– ಮುಖ್ಯಮಂತ್ರಿ ಕುರ್ಚಿಗಾಗಿ ಬಿಜೆಪಿಯಲ್ಲಿ ಸಾವಿರಾರು ಕೋಟಿ ವಹಿವಾಟು ಆಗಿತ್ತು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೀಡಿರುವ ಹೇಳಿಕೆಗೆ ಸಾಕ್ಷಿ ಕೊಟ್ಟರೆ ತನಿಖೆ ಮಾಡಿಸುತ್ತೇವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸಿಎಂ ಕುರ್ಚಿ ಪಡೆಯಲು ಸಾವಿರ ಕೋಟಿ ರೂ. ವಹಿವಾಟು ನಡೆಸಲು ಸಜ್ಜಾಗಿದ್ದಾರೆ ಎಂಬ ಹೇಳಿಕೆಯನ್ನು ಸಾಬೀತುಪಡಿಸಲು ಯತ್ನಾಳ್ ಅವರಿಗೆ ಮಾತ್ರ ಸಾಧ್ಯ. ಅವರು ಮೊದಲು ಸಾಕ್ಷಿ ಕೊಟ್ಟರೆ, ಯಾವ ತನಿಖಾ ಸಂಸ್ಥೆಯಿಂದ ತನಿಖೆ ಮಾಡಿಸಬೇಕು ಎಂದು ನಿರ್ಧರಿಸುತ್ತೇವೆ ಎಂದರು.

ಒಕ್ಕಲಿಗ ಮಹಾಸಂಸ್ಥಾನದ ಸ್ವಾಮೀಜಿ ಮೇಲೆ ಎಫ್‌ಐಆರ್ ದಾಖಲಿಸಿರುವುದಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಈ ನೆಲದಲ್ಲಿ ಕಾನೂನು ಎಲ್ಲರಿಗೂ ಒಂದೇ. ಸಾಮಾನ್ಯರಿಗೊಂದು ಕಾನೂನು, ಪ್ರಭಾವಿಗಳಿಗೊಂದು ಕಾನೂನು ಇಲ್ಲ. ಕಾನೂನಿನಡಿಯಲ್ಲಿ ಯಾವುದು ತಪ್ಪಾಗಿರುತ್ತದೆ ಅದರ ಮೇಲೆ ಕ್ರಮ ಆಗುತ್ತದೆ. ಈ ವಿಚಾರದಲ್ಲಿ ರಾಜಕೀಯದ ಪ್ರಶ್ನೆ ಬರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಪಕ್ಷಕ್ಕೆ ಸ್ವಾಗತ: ಕಾಂಗ್ರೆಸ್ ಪಕ್ಷದ ಸಿದ್ಧಾಂತವನ್ನು ಒಪ್ಪಿ ಬೇರೆ ಪಕ್ಷದಿಂದ ಬರುವವರಿಗೆ ಕಾಂಗ್ರೆಸ್ ಬಾಗಿಲು ಸದಾ ತೆರೆದಿರುತ್ತದೆ. ಕಾಂಗ್ರೆಸ್ ಪಕ್ಷ ಅಲ್ಲ, ಕಾಂಗ್ರೆಸ್ ಒಂದು ಚಳುವಳಿ. ಹೀಗಾಗಿ ಬರುವವರಿಗೆ ಸ್ವಾಗತ ಕೋರುತ್ತೇವೆ. ಈಗ ಬೇರೆ ಪಕ್ಷದಿಂದ ಬರುವವರು ನನಗೆ ಕಾಣುತ್ತಿಲ್ಲ ಎಂದರು.

ನಿಖಿಲ್ ಕುಮಾರಸ್ವಾಮಿ ನೋಡಿದರೆ ಪಾಪ ಎನಿಸುತ್ತದೆ



ಮೈಸೂರು, ಡಿ.1(ಎಂಟಿವೈ)– ಸತತ ಮೂರು ಸೋಲು ಕಂಡಿರುವ ನಿಖಿಲ್ ಕುಮಾರಸ್ವಾಮಿ ನೋಡಿದರೆ ನಮಗೆ ಪಾಪ ಎನಿಸುತ್ತದೆ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಂಡರೆ ನಮಗೆ ಯಾವ ಭಯವೂ ಇಲ್ಲ ಎಂದು ಸಚಿವ ಕೆ.ವೆಂಕಟೇಶ್ ತಿರುಗೇಟು ನೀಡಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಇತ್ತೀಚೆಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಂಡರೆ ಕನಸಿನಲ್ಲಿ ಭಯ ಎಂದು ಹೇಳಿಕೆ ನೀಡಿದ್ದಾರೆ. ಕುಮಾರಸ್ವಾಮಿ ಕಂಡರೆ ನಾವೇಕೆ ಭಯ ಪಡಬೇಕು. ಕುಮಾರಸ್ವಾಮಿ ಮಗ ನಿಖಿಲ್ ನೋಡಿದರೆ ಪಾಪ ಎನ್ನಿಸುತ್ತದೆ. ಮೂರು ಬಾರಿ ಸೋತಿದ್ದಾರೆ, ಮೂರು ಬಾರಿ ಸೋಲಿಸಿರುವುದು ನೋಡಿದರೆ ಬೇಸರ ಆಗುತ್ತದೆ. ಹೀಗಿರುವಾಗ ಕುಮಾರಸ್ವಾಮಿ ನೋಡಿದರೆ ನಮಗೇಕೆ ಭಯವಾಗಲು ಸಾಧ್ಯ ಎಂದರು.

ಒಕ್ಕಲಿಗ ಮಠದ ಚಂದ್ರಶೇಖರ್ ಸ್ವಾಮೀಜಿ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಸ್ವಾಮೀಜಿ ಅವರು ತಿಳುವಳಿಕೆಯಿಂದ ಮಾತನಾಡಿದ್ದಾರೋ ಅಥವಾ ತಿಳುವಳಿಕೆ ಇಲ್ಲದೇ ಮಾತನಾಡಿದ್ದಾರೋ ಗೊತ್ತಿಲ್ಲ. ಸ್ವಾಮೀಜಿ ತಿಳಿಯದೇ ಮಾತನಾಡಿದ್ದೇನೆ ಎಂದು ಕ್ಷಮೆಯಾಚಿಸಿದ್ದಾರೆ. ಇಲ್ಲಿಗೆ ಈ ವಿಷಯ ಮುಗಿದಿದೆ ಎಂದು ಸಚಿವ ಕೆ.ವೆಂಕಟೇಶ್ ಹೇಳಿದರು.

ಕನ್ನಡ ರಾಜ್ಯೋತ್ಸವ, ಕನಕ ಜಯಂತಿ



ಸರ್.ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕನ್ನಡ ರಾಜ್ಯೋತ್ಸವ ಮತ್ತು ಕನಕ ಜಯಂತಿ ಆಚರಿಸಲಾಯಿತು. ಈ ವೇಳೆ ಅಧ್ಯಕ್ಷ ಜಯನಗರ ಮಹೇಶ್, ಕಾರ್ಯದರ್ಶಿ ರವಿಕುಮಾರ್, ಉಪಾಧ್ಯಕ್ಷ ಸುರೇಶ್‌ಕುಮಾರ್, ಜಂಟಿ ಕಾರ್ಯದರ್ಶಿ ಪಳನಿ, ನಿರ್ದೇಶಕರಾದ ಚಂದ್ರೇಗೌಡ, ಶಿವರಾಜ್, ರುದ್ರಸ್ವಾಮಿ, ಸಂತೋಷ್‌ಕುಮಾರ್, ಕುಮಾರ್, ಮಾ.ಜಾ.ಹುಸೇನ್, ಸದಸ್ಯರಾದ ಮಹದೇವು, ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ಕನಕದಾಸ ಜಯಂತಿ



ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಭಕ್ತ ಕನಕದಾಸ ಜಯಂತಿ ಹಾಗೂ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು. ಬ್ಯಾಂಕ್ ಅಧ್ಯಕ್ಷೆ ಪಿ.ರಾಜೇಶ್ವರಿ, ಉಪಾಧ್ಯಕ್ಷೆ ಪಿ.ಸವಿತಾ, ನಿರ್ದೇಶಕರಾದ ಎಸ್‌ಬಿಎಂ ಮಂಜು, ರಾಜಕೀಯ ರವಿಕುಮಾರ್, ಜೆ.ಯೋಗೇಶ್, ಹೆಚ್.ಹರೀಶ್ ಕುಮಾರ್, ಕೆ.ಉಮಾಶಂಕರ್, ಎಸ್ ಅರವಿಂದ, ಎ.ಮಂಚಪ್ಪ, ಪಡುವಾರಹಳ್ಳಿ ಎಂ.ರಾಮಕೃಷ್ಣ, ಸಿ.ರೇವಣ್ಣ, ಎಸ್.ಆರ್.ರವಿಕುಮಾರ್, ಕಾರ್ಯದರ್ಶಿ ಕೆ.ಹರ್ಷಿತ್‌ಗೌಡ, ಮುಕ್ತ, ಗಾಯಿತ್ರಿ ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ ವೈವಿಧ್ಯಮಯ ನೃತ್ಯ ತರಬೇತಿ ಶಿಬಿರ



ಮೈಸೂರು ಕಲಾಧಾರೆ ಕಲ್ಚರಲ್ ಟ್ರಸ್ಟ್‌ನಿಂದ ಮಕ್ಕಳ ದಿನಾಚರಣೆ ಹಾಗೂ 'ವೈವಿಧ್ಯಮಯ ನೃತ್ಯ ತರಬೇತಿ ಶಿಬಿರ' ಆಯೋಜಿಸಲಾಗಿತ್ತು.

ಮೈಸೂರು,ಡಿ.1–ಮೈಸೂರು ಕಲಾಧಾರೆ ಕಲ್ಚರಲ್ ಟ್ರಸ್ಟ್ ವತಿಯಿಂದ ಮಕ್ಕಳ ದಿನಾಚರಣೆ ಹಾಗೂ ಸುವರ್ಣ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ 'ವೈವಿಧ್ಯಮಯ ನೃತ್ಯ ತರಬೇತಿ ಶಿಬಿರ'ವನ್ನು ಕಲಾಧಾರೆ ಸಂಸ್ಥೆ ಆವರಣದಲ್ಲಿ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ದೀಪಕ್ ಉದ್ಘಾಟಿಸಿದರು.

ನಂತರ ಮಾತನಾಡಿ, ಬೇಗ ಹೆಸರು ಮಾಡಬೇಕು, ಜನಪ್ರಿಯರಾಗಬೇಕು. ಇದು ಕಷ್ಟದ ಕೆಲಸ. ಇವತ್ತಿನ ಜಗತ್ತಿನ ಮಕ್ಕಳಿಗೆ ತಂತ್ರಜ್ಞಾನದ ಅರಿವಿರಬೇಕು. ಸಾಂಸ್ಕೃತಿಕತೆಯ ಅರಿವು, ಇತಿಹಾಸದ ಅರಿವು, ಭವಿಷ್ಯದ ಪ್ರಜ್ಞೆ ಇರಬೇಕು, ಮಕ್ಕಳ ಮಾನಸಿಕ ಸ್ಥಿತಿಗಳನ್ನು, ಬೇರೆ ಮಕ್ಕಳ ಜೊತೆ ಹೋಲಿಕೆ ಮಾಡಬೇಡಿ, ನಿಮ್ಮ ಮಕ್ಕಳ ಸಾಮರ್ಥ್ಯ ಏನಿದೆಯೋ ಅದನ್ನು ತಂದೆ ತಾಯಿಗಳು ಗಮನಿಸಿ ಗುರುತಿಸುವ ಕೆಲಸ ಮಾಡಿ ಯಶಸ್ವಿಯಾಗಿಸುವ ಕೆಲಸ ಮಾಡಬೇಕು ಹಾಗೂ ಹಲವಾರು ಸ್ಫೂರ್ತಿದಾಯಕ ವಿಷಯಗಳ ಬಗ್ಗೆ ಮಕ್ಕಳು ಹಾಗೂ ಪೋಷಕರಿಗೆ ಕಿವಿಮಾತು ಹೇಳಿದರು.

ವಾಣಿಜ್ಯ ತೆರಿಗೆ ಇಲಾಖೆ ಉಪ ಆಯುಕ್ತ ಹಸೀಬುಲ್ಲಾ ಬೇಗ್, ಕಷ್ಟಪಡದೆ ಏನೂ ಸಿಗದು ಎಂದು ಭಗವದ್ಗೀತೆಯ ಶ್ಲೋಕದ ಮೂಲಕ ಮಾತನಾಡಿ, ಪ್ರಯತ್ನ ನಮ್ಮದು, ಪ್ರಯತ್ನಕ್ಕೆ ಪ್ರತಿಫಲ ಶ್ರಮಕ್ಕೆ ಬಿಟ್ಟಿದ್ದು, ಮಕ್ಕಳು ಮೊಬೈಲ್‌ನಲ್ಲಿ ಜಾಸ್ತಿ ಸಮಯ ಕಳೆಯುತ್ತಿದ್ದಾರೆ. ಈಗ ಎಲ್ಲಾ ಸುಲಭವಾಗಿ ಸೌಲಭ್ಯಗಳು ಇವೆ. ಹಳ್ಳಿಯ ವಾತಾವರಣ ಹಾಗೂ ಈಗಿನ ನಾಗರಿಕತೆಯ ವಿಸ್ತಾರವಾಗಿ ಮಕ್ಕಳಿಗೆ ಮನಮುಟ್ಟುವಂತೆ ತಿಳಿಸಿದರು. ಸಮಾಜ ಚಿಂತಕಿ ಸವಿತಾ ಪ.ಮಲ್ಲೇಶ್, ಜ್ಯೋತಿ ಚಾಮರಾಜ್, ಕಾರ್ಯದರ್ಶಿ, ಸಂಸ್ಥೆ ನಿರ್ದೇಶಕರು, ವಿದ್ಯಾರ್ಥಿಗಳು, ಪೋಷಕರು ಇದ್ದರು.

ಮರಿತಿಬ್ಬೇಗೌಡರಿಗೆ ಉಪನ್ಯಾಸಕರಿಂದ ಅಭಿನಂದನೆ



ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ 2013ನೇ ಸಾಲಿನಲ್ಲಿ ನೇಮಕಗೊಂಡ ಉಪನ್ಯಾಸಕರು ಬಿ.ಇಡಿ ಪದವಿ ಪಡೆದ ಅವಧಿಯನ್ನು ಕರ್ತವ್ಯ ಅವಧಿಯೆಂದು ಪರಿಗಣಿಸಲು ಶ್ರಮಿಸಿದ ವಿಧಾನಪರಿಷತ್ ಮಾಜಿ ಉಪಸಭಾಪತಿ ಮರಿತಿಬ್ಬೇಗೌಡ ಅವರನ್ನು ಫಲಾನುಭವಿ ಉಪನ್ಯಾಸಕರು ಮಂಡ್ಯ ಜಿಲ್ಲಾ ಬಳಗದ ಸಭಾಂಗಣದಲ್ಲಿ ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಮುಖಂಡರಾದ ಜಯರಾಮ ಕಿಲಾರ, ಪ್ರೊ.ಶಂಕರೇಗೌಡ, ಎಂ.ಆರ್.ಪ್ರಕಾಶ್, ಎ.ಸಿ.ಮಂಜೇಗೌಡ, ಮಂಡ್ಯ ಕೃಷ್ಣೇಗೌಡ, ಉಪನ್ಯಾಸಕರಾದ ಡಾ.ಹೆಚ್.ಆರ್.ಹರ್ಷವರ್ಧನ, ಸಿ.ಪಿ.ಸಂಜಯ, ಶುಭಕರ, ಹರೀಶ್, ವೆಂಕಟೇಶ್, ರಾಘವೇಂದ್ರ ಮತ್ತಿತರರಿದ್ದರು.

2024ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ಪುಸ್ತಕಗಳನ್ನು ನೋಂದಾಯಿಸಿಕೊಳ್ಳುವಂತೆ ಸೂಚನೆ

ಮೈಸೂರು,ಡಿ.1– 2024ರಲ್ಲಿ ಕರ್ನಾಟಕದಲ್ಲಿ ಪ್ರಥಮ ಮುದ್ರಣಗೊಂಡು ಪ್ರಕಟಗೊಳ್ಳುವ ಯಾವುದೇ ಭಾಷೆಯ ಪುಸ್ತಕಗಳನ್ನು ಬೆಂಗಳೂರಿನ ಕಬ್ಬನ್ ಉದ್ಯಾನವನದಲ್ಲಿರುವ ರಾಜ್ಯ ಕೇಂದ್ರ ಗ್ರಂಥಾಲಯದಲ್ಲಿ ಜ.1, 2025 ರ ಸಂಜೆ 5.30 ಒಳಗಾಗಿ ನೋಂದಾಯಿಸಿಕೊಳ್ಳಬೇಕಾಗಿದ್ದು, ಸದರಿ ಪುಸ್ತಕಗಳನ್ನು ಮಾತ್ರ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಪರಿಗಣಿಸಲಾಗುತ್ತದೆ.

2024ರಲ್ಲಿ ಹೊರ ರಾಜ್ಯಗಳಲ್ಲಿ ಮುದ್ರಣಗೊಂಡು ಪ್ರಕಟವಾಗುವ ಆಂಗ್ಲ, ಹಿಂದಿ ಅಥವಾ ಯಾವುದೇ ಭಾಷೆಯ ಪುಸ್ತಕಗಳನ್ನು ಆಯಾ ರಾಜ್ಯ ಕೇಂದ್ರ ಗ್ರಂಥಾಲಯಗಳಲ್ಲಿ ಅಥವಾ ಕೇಂದ್ರ, ಆಯಾ ರಾಜ್ಯ ಸರ್ಕಾರಗಳಿಂದ ಅಧಿಸೂಚಿಸಲ್ಪಟ್ಟ ಅಧಿಕೃತ ಪುಸ್ತಕ ನೋಂದಣಿ ಕೇಂದ್ರಗಳಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಸಿ, ಪ್ರಮಾಣ ಪತ್ರದ ನಕಲು ಪತ್ರದ ಪ್ರತಿಯೊಂದಿಗೆ ಮತ್ತು ಸದರಿ ಪುಸ್ತಕದ 1 ಪ್ರತಿಯನ್ನು ಜ.2ರ ಸಂಜೆ 5.30ರೊಳಗೆ ಆಯ್ಕೆಗಾಗಿ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ಸಲ್ಲಿಸಬೇಕು. ಸಾಹಿತ್ಯ, ಮಕ್ಕಳ ಸಾಹಿತ್ಯ, ಕಲೆ ಮತ್ತು ವಿಜ್ಞಾನ ಪ್ರಕಾರಗಳ ಯಾವುದೇ ಭಾಷೆಯ ಪುಸ್ತಕಗಳನ್ನು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಗೆ ಸಲ್ಲಿಸಬಹುದು.

ಸ್ಪರ್ಧಾತ್ಮಕ, ಪಠ್ಯ, ಪರಾಮರ್ಶನ, ಸಾಂದರ್ಭಿಕ ಮತ್ತು ಅಭಿನಂದನ ಗ್ರಂಥಗಳನ್ನು ಸ್ಥಳೀಯ ಓದುಗರ ಬೇಡಿಕೆಗೆ ಅನುಗುಣವಾಗಿ ಆಯಾ ಪ್ರಾಧಿಕಾರಗಳ ಅಧಿಕಾರಿಗಳ, ಪ್ರಾಧಿಕಾರಗಳ ವಿವೇಚನಾ ಕೋಟಾದಡಿ ನಿಯಮಾನುಸಾರ ಬೆಲೆ ನಿಗದಿಪಡಿಸಿಕೊಂಡು ನೇರವಾಗಿ ಖರೀದಿಸಲು ಆಯ್ಕೆ ಸಮಿತಿ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ. ಅರ್ಜಿ ನಮೂನೆ ಹಾಗೂ ಮಾಹಿತಿಗೆ www.dpl.karnataka.gov.in ಮತ್ತು ರಾಜ್ಯದ ಎಲ್ಲಾ ಜಿಲ್ಲಾ, ನಗರ ಕೇಂದ್ರ ಗ್ರಂಥಾಲಯಗಳ ಉಪನಿರ್ದೇಶಕರು, ಮುಖ್ಯ ಗ್ರಂಥಾಲಯಾಧಿಕಾರಿ ಕಚೇರಿಗಳಲ್ಲಿ ಪಡೆಯಬಹುದು. ಮಾಹಿತಿಗೆ ದೂ.ಸಂ: 080–22864990, 22867358 ಸಂಪರ್ಕಿಸಬಹುದು.

ತಂತ್ರಜ್ಞಾನದ ಆವಿಷ್ಕಾರದಿಂದ ಗ್ರಂಥಾಲಯದ ಸ್ವರೂಪ ಬದಲು

ಮೈಸೂರು ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ನಾಗರಾಜ ಅಭಿಮತ



2024–25ನೇ ಮೈಸೂರು ವಿವಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿದ್ಯಾರ್ಥಿಗಳ ಸಂಘ(ಮುಲಿಸಾ)ದ ಕಾರ್ಯಚಟುವಟಿಕೆಗಳಿಗೆ ಮೈಸೂರು ವಿವಿ ಕುಲಸಚಿವ(ಪರೀಕ್ಷಾಂಗ) ಪ್ರೊ.ಎನ್.ನಾಗರಾಜ ಚಾಲನೆ ನೀಡಿದರು.

ಮೈಸೂರು,ಡಿ.1(ಎಸ್‌ಪಿಎನ್)– ಜಗತ್ತಿನಲ್ಲಿ ತಂತ್ರಜ್ಞಾನದ ಆವಿಷ್ಕಾರದಿಂದಾಗಿ, ಗ್ರಂಥಾಲಯದ ಸ್ವರೂಪ ಮತ್ತು ಲಕ್ಷಣ ಬದಲಾಗುತ್ತಿದೆ. ಈ ಬದಲಾವಣೆಗೆ ತಕ್ಕಂತೆ ವಿದ್ಯಾರ್ಥಿಗಳ ಅಧ್ಯಯನ ಅಗತ್ಯ ಎಂದು ಮೈಸೂರು ವಿವಿ ಕುಲಸಚಿವ (ಪರೀಕ್ಷಾಂಗ) ಪ್ರೊ.ಎನ್.ನಾಗರಾಜ ಪ್ರತಿಪಾದಿಸಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಆವರಣದ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗದ ಡಾ.ಎಸ್.ಆರ್.ರಂಗನಾಥನ್ ಸಭಾಂಗಣದಲ್ಲಿ 2024–25ನೇ ಮೈಸೂರು ವಿವಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿದ್ಯಾರ್ಥಿಗಳ ಸಂಘ(ಮುಲಿಸಾ)ದ ಕಾರ್ಯಚಟುವಟಿಕೆಗಳಿಗೆ ಚಾಲನೆ ನೀಡಿ ಮಾತನಾಡಿದರು.

ಪ್ರಸ್ತುತ ಗ್ರಂಥಾಲಯ ಕೋರ್ಸ್ ಅಧ್ಯಯನದಿಂದ ಹೆಚ್ಚಿನ ಉದ್ಯೋಗಾವಕಾಶಗಳಿಲ್ಲ ಎಂಬ ಆರೋಪವಿದೆ. ಆದರೆ, ಜಾಗತಿಕವಾಗಿ ಮಾಹಿತಿ ಕ್ಷೇತ್ರದಲ್ಲಿ ಗ್ರಂಥಾಲಯ ವಿಷಯ ಅತ್ಯವಶ್ಯಕವಾಗಿ ಬೇಕಿದೆ. ಗ್ರಂಥಾಲಯ ಎಲ್ಲಾ ಎಂಎನ್‌ಸಿ ಕಂಪನಿಗಳಲ್ಲೂ ಇದೀಗ ಕಡ್ಡಾಯವಾಗುತ್ತಿದೆ. ಹಾಗಾಗಿ ಉದ್ಯೋಗಾವಕಾಶಗಳು ಸಾಕಷ್ಟಿವೆ. ಇದಕ್ಕೆ ಬೇಕಾದ ಕಲಿಕೆಗೆ ವಿದ್ಯಾರ್ಥಿಗಳು ಹೊಂದಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ವೇಗವಾಗಿ ಬೆಳೆಯುವ ತಂತ್ರಜ್ಞಾನ ಕ್ಷೇತ್ರಕ್ಕೆ ಮಾಹಿತಿ ಸಂಗ್ರಹ ಭಂಡಾರದ ಅಗತ್ಯವಿದೆ. ಇದನ್ನು ಶೇಖರಿಸಲು ಎಲ್ಲರಿಗೂ ಸಾಧ್ಯವಿಲ್ಲ. ಈ ಕಾರ್ಯಕ್ಕೆ ಗ್ರಂಥಾಲಯ ಕೋರ್ಸ್ ಅಧ್ಯಯನ ಮಾಡಿರುವವರೇ ಬೇಕಾಗಿದೆ. ಹಾಗಾಗಿ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಈಗಿನಿಂದಲೇ ಅಧ್ಯಯನ ನಡೆಸುವಂತೆ ಅವರು ಸಲಹೆ ನೀಡಿದರು.

ರಾಜ್ಯ ಸರ್ಕಾರ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಗ್ರಂಥಾಲಯ ಸ್ಥಾಪನೆ ಕಡ್ಡಾಯಗೊಳಿಸಿದೆ. ಇದೀಗ ಪ್ರತಿ ನಗರ, ಪಟ್ಟಣಗಳಲ್ಲಿ ಇಂತಿಷ್ಟು ಗ್ರಂಥಾಲಯ ಸ್ಥಾಪನೆಗೆ ಸಾರ್ವಜನಿಕರಿಂದಲೂ ಬೇಡಿಕೆಯಿದೆ. ಹಾಗಾಗಿ ಈ ವಿಷಯದ ಅಧ್ಯಯನದಿಂದ ಉದ್ಯೋಗ ಲಭ್ಯವಿಲ್ಲ ಎಂಬ ಹಿಂಜರಿಕೆ ವಿದ್ಯಾರ್ಥಿಗಳಿಗೆ ಬೇಡ ಎಂದು ಧೈರ್ಯ ತುಂಬಿದರು.

ವೇದಿಕೆಯಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿವಿ ಗ್ರಂಥಪಾಲಕ ಡಾ.ಕೆ. ಪ್ರಕಾಶ್, ಮೈಸೂರು ವಿವಿ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿದ್ಯಾರ್ಥಿಗಳ ಸಂಘ (ಮುಲಿಸಾ)ದ ಅಧ್ಯಕ್ಷ ಪ್ರೊ.ಎಂ.ಚಂದ್ರಶೇಖರ್, ಶಿಕ್ಷಣ ಸಲಹೆಗಾರ ಪ್ರೊ.ಎಚ್.ಆದಿತ್ಯಕುಮಾರಿ, ಕಾರ್ಯದರ್ಶಿ ವಿ.ಜಿ.ಅರುಣ್, ಡಾ.ನಿವೇದಿತಾ, ಡಾ.ಸುನಿಲ್‌ಕುಮಾರ್, ವಿದ್ಯಾರ್ಥಿಗಳಾದ ಶಾಶ್ವತಿ, ಕಾವ್ಯ, ಅನಿತಾ, ನಿಸರ್ಗ ಸೇರಿದಂತೆ ಇತರರಿದ್ದರು. ಇದಕ್ಕೂ ಮುನ್ನ ಹಳೆಯ ವಿದ್ಯಾರ್ಥಿ ಡಾ.ಎನ್.ಚೌಡಪ್ಪ ನಿಧನಕ್ಕೆ ಸಂತಾಪ ಸೂಚಿಸಲಾಯಿತು.

ದೇಶ - ವಿದೇಶ

ಇರಾಕ್‌ನಲ್ಲಿ ವೈಮಾನಿಕ ದಾಳಿ: ಐವರು ಐಎಸ್ ಉಗ್ರರ ಹತ್ಯೆ



ಬಾಗ್ದಾದ್: ಉತ್ತರ ಇರಾಕಿನ ಕಿರ್ಕುಕ್ ಪ್ರಾಂತ್ಯದಲ್ಲಿ ನಡೆದ ವೈಮಾನಿಕ ದಾಳಿಯಲ್ಲಿ ಐವರು ಇಸ್ಲಾಮಿಕ್ ಸ್ಟೇಟ್ (ಐಎಸ್) ಉಗ್ರರು ಹತ್ಯೆಯಾಗಿದ್ದಾರೆ ಎಂದು ಇರಾಕ್ ಮಿಲಿಟರಿ ತಿಳಿಸಿದೆ. ಗುಪ್ತಚರ ವರದಿಗಳ ಪ್ರಕಾರ, ಇರಾಕಿ ಪಡೆಗಳು ಶುಕ್ರವಾರ ಕಿರ್ಕುಕ್ ಪ್ರಾಂತ್ಯದ ಆಗ್ನೇಯ ಭಾಗದಲ್ಲಿರುವ ಹ್ಯಾಮ್ರಿನ್ ಪರ್ವತ ಶ್ರೇಣಿಯಲ್ಲಿನ ಉಗ್ರರ ಅಡಗುತಾಣಗಳ ಮೇಲೆ ವೈಮಾನಿಕ ದಾಳಿ ನಡೆಸಿವೆ ಎಂದು ಇರಾಕಿನ ಜಂಟಿ ಕಾರ್ಯಾಚರಣೆ ಕಮಾಂಡ್‌ನ ಮಾಧ್ಯಮ ಘಟಕ ಹೇಳಿರುವುದಾಗಿ Xinhua ಸುದ್ದಿಸಂಸ್ಥೆ ವರದಿ ಮಾಡಿದೆ.

ಇರಾಕ್ ಸೇನೆ ಮತ್ತು ಗುಪ್ತಚರ ದಳದ ಜಂಟಿ ಪಡೆ ಎರಡು ಅಡಗುತಾಣಗಳನ್ನು ಶೋಧಿಸಿದ್ದು, ಐವರು ಉಗ್ರರ ಶವಗಳನ್ನು ಪತ್ತೆ ಮಾಡಿದೆ. ಅಡಗುತಾಣಗಳಲ್ಲಿ ಶಸ್ತ್ರಾಸ್ತ್ರಗಳು, ಮದ್ದುಗುಂಡುಗಳು, ಸ್ಫೋಟಕಗಳು, ಲಾಜಿಸ್ಟಿಕಲ್ ವಸ್ತುಗಳು ಮತ್ತು ಸಂವಹನ ಸಾಧನಗಳನ್ನು ಸಹ ಪತ್ತೆ ಮಾಡಿದೆ. 2017ರಲ್ಲಿ ಐಎಸ್ ಸೋಲಿನ ನಂತರ ಇರಾಕ್‌ನಲ್ಲಿ ಭದ್ರತಾ ಪರಿಸ್ಥಿತಿ ಸುಧಾರಿಸಿದೆ. ಆದಾಗ್ಯೂ, ಐಎಸ್ ಉಗ್ರರು ನಗರ ಕೇಂದ್ರಗಳು, ಮರುಭೂಮಿಗಳು ಮತ್ತು ಒರಟಾದ ಪ್ರದೇಶಗಳಿಗೆ ನುಸುಳುತ್ತಲೇ ಇದ್ದು, ಭದ್ರತಾ ಪಡೆಗಳು, ನಾಗರಿಕರ ವಿರುದ್ಧ ಆಗಾಗ್ಗೆ ಗೆರಿಲ್ಲಾ ದಾಳಿ ನಡೆಸುತ್ತಿರುತ್ತಾರೆ.

ಸುಲಿಗೆ ಪ್ರಕರಣ: ಆಮ್ ಆದ್ಮಿ ಶಾಸಕ ಬಂಧನ



ನವದೆಹಲಿ: ವರ್ಷಗಳ ಹಳೆಯ ಸುಲಿಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿಯ ಆಪ್ ಶಾಸಕ ನರೇಶ್ ಬಲ್ಯಾನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಇದರೊಂದಿಗೆ ಪ್ರಸ್ತುತ ವಿದೇಶದಲ್ಲಿ ನೆಲೆಸಿರುವ ನಂದು ಎಂಬ ದರೋಡೆಕೋರ ಕಪಿಲ್ ಸಾಂಗ್ವಾನ್ ಜೊತೆ ಇವರು ನಂಟು ಹೊಂದಿದ್ದಾರೆ ಎಂದು ಆರೋಪಿಸಲಾಗಿದೆ. ಎಎಪಿ ಶಾಸಕ ಬಲ್ಯಾನ್ ಅವರನ್ನು ಮೊದಲು ದೆಹಲಿ ಪೊಲೀಸರ ಕ್ರೈಂ ಬ್ರಾಂಚ್ ಘಟಕವು ವಿಚಾರಣೆಗಾಗಿ ವಶಕ್ಕೆ ತೆಗೆದುಕೊಂಡಿದ್ದು, ನಂತರ ಬಂಧಿಸಲಾಗಿದೆ. ಪ್ರಾಥಮಿಕ ವಿಚಾರಣೆ ವೇಳೆ ಬಲ್ಯನ್ ಸಹಕರಿಸದ ಕಾರಣ ಅವರನ್ನು ಬಂಧಿಸಲಾಗಿದೆ.ಎಎಪಿ ಶಾಸಕರನ್ನು ನಾಳೆ ದೆಹಲಿ ನ್ಯಾಯಾಲಯದ ಮುಂದೆ ಹಾಜರುಪಡಿಸುವ ಸಾಧ್ಯತೆಯಿದೆ. ಉತ್ತಮ್ ನಗರದ ಎಎಪಿ ಶಾಸಕರು ದೆಹಲಿಯ ಬಿಲ್ಡರ್ ಮತ್ತು ಇತರ ಜನರಿಂದ ಬೆದರಿಕೆ ಮತ್ತು ಸುಲಿಗೆ ಮಾಡುವಂತೆ ದರೋಡೆಕೋರ ನಂದುಗೆ ಸೂಚನೆ ನೀಡುತ್ತಿರುವ ಆಡಿಯೋ ಕ್ಲಿಪ್ ಅನ್ನು ಬಿಜೆಪಿ ಬಿಡುಗಡೆ ಮಾಡಿದ ಗಂಟೆಗಳ ನಂತರ ಬಂಧನ ನಡೆದಿದೆ. ಬಿಜೆಪಿ ರಾಷ್ಟ್ರೀಯ ವಕ್ತಾರ ಗೌರವ್ ಭಾಟಿಯಾ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಾ, ಎಎಪಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಅವರ ಅನುಮೋದನೆಯೊಂದಿಗೆ ಬಲ್ಯಾನ್ ಅಪರಾಧ ಚಟುವಟಿಕೆಗಳಲ್ಲಿ ತೊಡಗಿದ್ದಾರೆ ಎಂದು ಆರೋಪಿಸಿದರು.

ಬಾಂಗ್ಲಾದಲ್ಲಿ ತ್ರಿವರ್ಣ ಧ್ವಜ, ಇಸ್ಕಾನ್ ಲಾಂಛನಕ್ಕೆ ಅಪಮಾನಿಸಲು ವಿದ್ಯಾರ್ಥಿಗಳಿಗೆ ಒತ್ತಾಯ

ಢಾಕಾ: ಸಂಘರ್ಷ ಪೀಡಿತ ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ತಾರಕಕ್ಕೇರಿದ್ದು, ತ್ರಿವರ್ಣ ಧ್ವಜ, ಇಸ್ಕಾನ್ ಲಾಂಛನಕ್ಕೆ ಅಪಮಾನಿಸಲು ವಿದ್ಯಾರ್ಥಿಗಳಿಗೆ ಒತ್ತಾಯಿಸಲಾಗುತ್ತಿದೆ. ಭಾರತ ಮತ್ತು ಬಾಂಗ್ಲಾದೇಶದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಬಾಂಗ್ಲಾದೇಶದ ಕೆಲವು ಶಿಕ್ಷಣ ಸಂಸ್ಥೆಗಳು ನೆಲದ ಮೇಲೆ ಭಾರತೀಯ ತ್ರಿವರ್ಣ ಧ್ವಜವನ್ನು ಚಿತ್ರಿಸಿ ವಿದ್ಯಾರ್ಥಿಗಳಿಗೆ ಅವುಗಳ ಮೇಲೆ ತುಳಿದು ನಡೆಯುವಂತೆ ಒತ್ತಾಯಿಸುತ್ತಿವೆ. ಇಸ್ಕಾನ್ ಲಾಂಛನ ಮತ್ತು ಇಸ್ರೇಲಿ ಧ್ವಜವನ್ನು ಸಹ ಅಪವಿತ್ರಗೊಳಿಸಲು ವಿದ್ಯಾರ್ಥಿಗಳನ್ನು ಒತ್ತಾಯಿಸಲಾಗುತ್ತಿದೆ. ಸಂಸ್ಥೆಗಳಲ್ಲಿ ಬೊಗುರಾ ಪಾಲಿ ಟೆಕ್ನಿಕ್ ಇನ್‌ಸ್ಟಿಟ್ಯೂಟ್, ಬಾಂಗ್ಲಾದೇಶ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (BUET), ಢಾಕಾ ವಿಶ್ವವಿದ್ಯಾಲಯ (ಗಣಿತ್ ಭವನ) ಮತ್ತು ನೊಖಾಲಿ ವಿಜ್ಞಾನ ಮತ್ತು ತಂತ್ರಜ್ಞಾನ ವಿವಿಗಳಲ್ಲಿ ಇಂತಹ ಕೃತ್ಯಗಳು ವರದಿಯಾಗಿವೆ. ಬಾಂಗ್ಲಾದೇಶದ ಕೆಲವು ಶಿಕ್ಷಣ ಸಂಸ್ಥೆಗಳು ಭಾರತೀಯ ತ್ರಿವರ್ಣ ಧ್ವಜವನ್ನು ಅಪವಿತ್ರಗೊಳಿಸುವುದನ್ನು ನೋಡಿದವು. ಅದನ್ನು ನೆಲದ ಮೇಲೆ ಚಿತ್ರಿಸಿ ವಿದ್ಯಾರ್ಥಿಗಳು ಅವುಗಳ ಮೇಲೆ ನಡೆಯಲು ಒತ್ತಾಯಿಸಲಾಯಿತು ಎಂದು ಪ್ರೊಫೆಸರ್ ನಜ್ಮುಲ್ ಅಹ್ಸಾನ್ ಕಲೀಮುಲ್ಲಾ ಅವರು ಮಾಧ್ಯಮಕ್ಕೆ ತಿಳಿಸಿದ್ದಾರೆ.

ರಾಜಸ್ಥಾನದಲ್ಲಿ ನಿರ್ಮಾಣ ಹಂತದ ಸುರಂಗ ಕುಸಿತ, ಕಾರ್ಮಿಕ ಸಾವು, ಇಬ್ಬರಿಗೆ ಗಾಯ



ಕೋಟಾ: ನಿರ್ಮಾಣ ಹಂತದ ಸುರಂಗದ ಒಂದು ಭಾಗ ಕುಸಿದು ಕಾರ್ಮಿಕರೊಬ್ಬರು ಸಾವನ್ನಪ್ಪಿರುವ ಘಟನೆ ರಾಜಸ್ಥಾನದ ಕೋಟಾ ಜಿಲ್ಲೆಯಲ್ಲಿ ನಡೆದಿದೆ. ಘಟನೆಯಲ್ಲಿ ಇಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ದೆಹಲಿ–ಮುಂಬೈ ಎಕ್ಸ್‌ಪ್ರೆಸ್‌ವೇ ಸುರಂಗ ಮಾರ್ಗ ಇದಾಗಿದ್ದು, ರಾಮಗಂಜ್ ಮಂಡಿಯ ಮೋದಕ್ ಪ್ರದೇಶದಲ್ಲಿ ಶನಿವಾರ ರಾತ್ರಿ ಅದರ ಒಂದು ಭಾಗ ಕುಸಿದಿದೆ ಎಂದು ಕೋಟಾ ಗ್ರಾಮಾಂತರ ಪೊಲೀಸ್ ವರಿಷ್ಠಾಧಿಕಾರಿ ಸುಜಿತ್ ಶಂಕರ್ ಮಾಹಿತಿ ನೀಡಿದರು.

ಮೃತ ಕಾರ್ಮಿಕನನ್ನು ಶಂಶೇರ್ ಸಿಂಗ್ (33) ಗುರುತಿಸಲಾಗಿದ್ದು, ಅವಶೇಷಗಳಡಿ ಸಿಲುಕಿದ್ದ ಕಾರ್ಮಿಕರನ್ನು ರಕ್ಷಿಸಿ ಆಸ್ಪತ್ರೆಗೆ ಸಾಗಿಸಲಾಗಿದೆ. ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಶಂಕರ್ ತಿಳಿಸಿದ್ದಾರೆ. ಘಟನೆಯ ನಂತರ ಪೊಲೀಸರು ಮತ್ತು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿದ್ದಾರೆ.

ಇಸ್ಕಾನ್‌ಗೆ ಸೇರಿದ 17 ಮಂದಿಯ ಬ್ಯಾಂಕ್ ಖಾತೆಗಳ ಮೇಲೆ ಬಾಂಗ್ಲಾದೇಶ ನಿರ್ಬಂಧ



ಢಾಕಾ: ಬಾಂಗ್ಲಾದೇಶದಲ್ಲಿ ಇಸ್ಕಾನ್‌ಗೆ ಸಂಬಂಧಿಸಿದ 17 ಮಂದಿಯ ಬ್ಯಾಂಕ್ ಖಾತೆಗಳನ್ನು 30 ದಿನಗಳ ಕಾಲ ನಿರ್ಬಂಧಿಸುವಂತೆ ಬಾಂಗ್ಲಾದೇಶ ಸರ್ಕಾರದ ಅಧಿಕಾರಿಗಳು ಆದೇಶ ನೀಡಿದ್ದಾರೆ. ದೇಶದ್ರೋಹ ಆರೋಪದಡಿ ಕೆಲವು ದಿನಗಳ ಹಿಂದೆ ಬಂಧಿತರಾದ ಸಂಸ್ಥೆಯ ಮಾಜಿ ಸದಸ್ಯ ಚಿನ್ಮಯ ಕೃಷ್ಣದಾಸ್ ಅವರ ಖಾತೆಯೂ ಸೇರಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ವಿಭಿನ್ನ ಬ್ಯಾಂಕುಗಳು ಮತ್ತು ಹಣಕಾಸು ಸಂಸ್ಥೆಗಳಿಗೆ ಈ ಸಂಬಂಧ ನಿರ್ದೇಶನಗಳನ್ನು ಹೊರಡಿಸಿರುವ ಬಾಂಗ್ಲಾದೇಶ ಹಣಕಾಸು ಗುಪ್ತಚರ ಘಟಕ (ಬಿಎಫ್‌ಐಯು) ಅವರ ಖಾತೆಗಳಿಂದ ಎಲ್ಲ ರೀತಿಯ ವಹಿವಾಟುಗಳನ್ನು ಒಂದು ತಿಂಗಳ ಕಾಲ ಅಮಾನತುಗೊಳಿಸಿದೆ. ಬಾಂಗ್ಲಾದೇಶ ಕೇಂದ್ರ ಬ್ಯಾಂಕ್ ಅಡಿಯಲ್ಲಿ ಕಾರ್ಯ ನಿರ್ವಹಿಸುವ ಹಣಕಾಸು ಗುಪ್ತಚರ ಸಂಸ್ಥೆ, ಈ 17 ವ್ಯಕ್ತಿಗಳ ಮಾಲೀಕತ್ವದ ಎಲ್ಲ ವ್ಯವಹಾರ ವಹಿವಾಟುಗಳಿಗೆ ಸಂಬಂಧಿಸಿದ ಖಾತೆಗಳ ಇತ್ತೀಚಿನ ಸ್ಟೇಟ್‌ಮೆಂಟ್ ಸೇರಿದಂತೆ ಎಲ್ಲ ಮಾಹಿತಿಗಳನ್ನು ಕಾರ್ಯಾಚರಣೆ ಮೂರು ದಿನಗಳ ಒಳಗೆ ಕಳುಹಿಸುವಂತೆ ಸೂಚಿಸಿದೆ.

ಮೈಸೂರು ಮಿತ್ರ ಸೋಮವಾರ 2 ಡಿಸೆಂಬರ್ 2024

ಜನಸಂಖ್ಯಾ ಆಧಾರದ ಮೇಲೆ ಪೊಲೀಸರ ನೇಮಕ

● ಸಚಿವ ಎನ್.ಎಸ್.ಭೋಸ್‌ರಾಜು ಹೇಳಿಕೆ ● ಸುಂಟಿಕೊಪ್ಪದಲ್ಲಿ ಪೊಲೀಸ್ ವಸತಿಗೃಹ ನಿರ್ಮಾಣಕ್ಕೆ ಚಾಲನೆ



ಸುಂಟಿಕೊಪ್ಪ ಠಾಣೆ ಸಮೀಪ ಪೊಲೀಸ್ ವಸತಿಗೃಹ ನಿರ್ಮಾಣ ಕಾಮಗಾರಿಗೆ ಸಚಿವ ಎನ್.ಎಸ್.ಭೋಸ್‌ರಾಜು ಭೂಮಿಪೂಜೆ ನೆರವೇರಿಸಿದರು.

ಸುಂಟಿಕೊಪ್ಪ, ಡಿ.1–ರಾಜ್ಯದ ಜನಸಂಖ್ಯಾ ಆಧಾರದ ಮೇಲೆ ಪೊಲೀಸ್ ಸಿಬ್ಬಂದಿ ನೇಮಕಾತಿ ಆಗಬೇಕಿದ್ದು, ಸರ್ಕಾರ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸ್‌ರಾಜು ಹೇಳಿದರು.

ಪಟ್ಟಣದ ಪೊಲೀಸ್ ಠಾಣೆ ಸಮೀಪ ರಾಜ್ಯ ಪೊಲೀಸ್ ವಸತಿಗೃಹ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ವತಿಯಿಂದ ನಿರ್ಮಿಸುತ್ತಿರುವ 3.64 ಕೋಟಿ ರೂ. ವೆಚ್ಚದ ಪೊಲೀಸ್ ವಸತಿಗೃಹ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಬೇಕಾದರೆ ಅದಕ್ಕೆ ಜನರ ಸಹಕಾರ ಅತಿಮುಖ್ಯ. ಕೊಡಗಿನ ಪೊಲೀಸ್ ಅಧಿಕಾರಿಗಳು ಕೂಡ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಸಾಮಾನ್ಯ ಜನತೆ ನೆಮ್ಮದಿಯಿಂದ ಬದುಕುವಂತಾಗಿದೆ ಎಂದರು.

ಜಿಲ್ಲೆಗೆ ಪ್ರವಾಸಿಗಾರ ಸಂಖ್ಯೆ ಹೆಚ್ಚಾಗಿ ಬರುತ್ತಿದ್ದು, ಕಿಡಿಗೇಡಿಗಳು ಬರುವ ಸಾಧ್ಯತೆಯೂ ಇರುತ್ತದೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೊಲೀಸರು ಬದ್ಧತೆಯಿಂದ ಕಾರ್ಯನಿರ್ವಹಿಸಿ, ಪ್ರಕರಣ ಭೇದಿಸುವ ಮೂಲಕ ತ್ವರಿತವಾಗಿ ಬಗೆಹರಿಸುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ ಎಂದರು.

ಶಾಸಕ ಡಾ.ಮಂತರ್‌ಗೌಡ ಮಾತನಾಡಿ, ವಸತಿಗೃಹಗಳಿಲ್ಲದೆ ಪೊಲೀಸ್ ಸಿಬ್ಬಂದಿಗೆ ಸಮಸ್ಯೆ ಉಂಟಾಗಿರುವುದು ಗಮನದಲ್ಲಿದೆ. ಸುಂಟಿಕೊಪ್ಪ ಪಟ್ಟಣದ ನಡುವೆ ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವ ಕಾರಣ ಅಪರಾಧ, ಅವಘಡಗಳು ಹೆಚ್ಚಿರುತ್ತವೆ. ಪೊಲೀಸ್ ವಸತಿಗೃಹ ನಿರ್ಮಾಣದಿಂದ ಸಹಾಯಕವಾಗುತ್ತದೆ. ನಿರ್ಮಾಣದ ಜವಾಬ್ದಾರಿ ಹೊತ್ತವರು ತ್ವರಿತವಾಗಿ ಕಾಮಗಾರಿ ಮುಗಿಸಬೇಕು. ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಆದ್ಯತೆ ನೀಡಬೇಕೆಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾತನಾಡಿ, ಜಿಲ್ಲೆಯಲ್ಲಿ ಶೇ.43 ಪೊಲೀಸ್ ಸಿಬ್ಬಂದಿಗೆ ಮಾತ್ರ ವಸತಿ ಇದೆ. ತುರ್ತು ಸಂದರ್ಭಗಳಲ್ಲಿ ಪೊಲೀಸರು ಹೊರ ಊರುಗಳಿಂದ ಕರ್ತವ್ಯಕ್ಕೆ ಆಗಮಿಸುವ ಸಂದರ್ಭ ಅಪಘಾತಗಳು ಸಂಭವಿಸಿ ಜೀವ ಕಳೆದಕೊಂಡಿರುವ ಹಲವು ಘಟನೆಗಳು ನಡೆದಿವೆ. ಸುಂಟಿಕೊಪ್ಪದಲ್ಲಿ ಮೊದಲ ಹಂತದಲ್ಲಿ 12 ವಸತಿಗೃಹ ನಿರ್ಮಾಣವಾಗಲಿದೆ. ಮಡಿಕೇರಿಯಲ್ಲಿ 192 ವಸತಿ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದರು.

ಪೊಲೀಸ್ ಇಲಾಖೆ ಕಾರ್ಯ ವೈಖರಿಯನ್ನು ಶ್ಲಾಘಿಸುವುದರಿಂದ ನಮ್ಮ ಹುರುಪು ಹೆಚ್ಚಾಗುತ್ತದೆ. ಎಲ್ಲರ ಸಹಕಾರ ದೊರೆತರೆ ಪೊಲೀಸ್ ಇಲಾಖೆ ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಲಿದೆ. ಜಿಲ್ಲೆಯಲ್ಲಿ ಯಾವುದೇ ರಾಜಕೀಯ ಒತ್ತಡಗಳಿಲ್ಲ ಎಂದರು. ಉಪವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಕಾಂಗ್ರೆಸ್ ಪ್ರಮುಖರಾದ ಕೆ.ಪಿ.ಚಂದ್ರಕಲಾ, ಹಿರಿಯ ವಕೀಲ ಚಂದ್ರಮೌಳಿ, ಗ್ರಾಪಂ ಉಪಾಧ್ಯಕ್ಷೆ ಶಿವಮ್ಮ ಮಹೇಶ್, ಪಿ.ಎಂ.ಲತೀಫ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ವಿ.ಪಿ.ಶಶಿಧರ್, ತಾಪಂ ಮಾಜಿ ಅಧ್ಯಕ್ಷೆ ಗೀತಾ ಬಸಪ್ಪ ಗ್ರಾಪಂ ಸದಸ್ಯರಾದ ರಫೀಕ್‌ಖಾನ್, ಶಬ್ಬಿರ್, ಪಿ.ಎಫ್.ಸಬಾಸ್ಟೀನ್, ಪ್ರಸಾದ್ ಕುಟ್ಟಪ್ಪ, ಆಲಿಕುಟ್ಟಿ ಮತ್ತಿತರರು ಉಪಸ್ಥಿತರಿದ್ದರು.

ಕಾಫಿ ತೋಟದಲ್ಲಿದ್ದ ಆನೆಗಳನ್ನು ಕಾಡಿಗಟ್ಟಿದ ಅರಣ್ಯ ಇಲಾಖೆ ಸಿಬ್ಬಂದಿ



ಕಾಫಿ ತೋಟಗಳಲ್ಲಿ ಬೀಡುಬಿಟ್ಟಿದ್ದ ಕಾಡಾನೆಗಳು ಕಾಡಿನತ್ತ ತೆರಳುತ್ತಿರುವುದು.

ಸಿದ್ದಾಪುರ, ಡಿ.1–ಬಾಡಗ ಬಾಣಂಗಾಲ ವ್ಯಾಪ್ತಿಯ ಕಾಫಿ ತೋಟಗಳಲ್ಲಿ ಬಿಡುಬಿಟ್ಟು ಫಸಲು ನಾಶ ಪಡಿಸುವ ಮೂಲಕ ಕಾರ್ಮಿಕರು ಹಾಗೂ ಬೆಳೆಗಾರರಲ್ಲಿ ಆತಂಕ ಸೃಷ್ಟಿಸುತ್ತಿದ್ದ 9 ಕಾಡಾನೆಗಳನ್ನು ಕಾಡಿಗಟ್ಟುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿದ್ದಾರೆ.

ಈ ಭಾಗದ ಕಾಫಿ ತೋಟಗಳಲ್ಲಿ ಬಿಡುಬಿಟ್ಟಿದ್ದ ಕಾಡಾನೆಗಳು ಫಸಲುಗಳನ್ನು ತಿಂದು, ತುಳಿದು ನಾಶಗೊಳಿಸಿ, ಹಾಡಹಗಲಿನಲ್ಲೇ ರಾಜಾರೋಷವಾಗಿ ತಿರುಗಾಡುತ್ತಿದ್ದವು. ಇದರಿಂದ ಕಾರ್ಮಿಕರು ಕೆಲಸಕ್ಕೆ ತೆರಳಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ಶಾಲಾ–ಕಾಲೇಜು ವಿದ್ಯಾರ್ಥಿಗಳು ತರಗತಿಗಳಿಗೆ ತೆರಳಲು ಭಯ ಪಡುವಂತಾಗಿತ್ತು.

ಆನೆಗಳನ್ನು ಕಾಡಿಗಟ್ಟಬೇಕೆಂದು ಸ್ಥಳೀಯರು ಒತ್ತಾಯಿಸಿದ ಹಿನ್ನೆಲೆಯಲ್ಲಿ ಅರಣ್ಯ ಸಿಬ್ಬಂದಿ ಬಾಡಗ ಬಾಣಂಗಾಲ ವ್ಯಾಪ್ತಿಯ ಕಾಫಿ ತೋಟಗಳಲ್ಲಿ ಮೂರು ಮರಿಯೊಂದಿಗೆ ಒಂಭತ್ತು ಕಾಡಾನೆಗಳನ್ನು ಮಾರ್ಗೊಳ್ಳಿ ಘಟ್ಟತಳ ಮಾರ್ಗವಾಗಿ ದುಬಾರೆ ಅರಣ್ಯಕ್ಕೆ ಅಟ್ಟುವಲ್ಲಿ ಯಶಸ್ವಿಯಾದರು.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗೋಪಾಲ್ ನಿರ್ದೇಶನದ ಮೇರೆಗೆ ವಲಯ ಅರಣ್ಯಾಧಿಕಾರಿ ಗಂಗಾಧರ್ ನೇತೃತ್ವದಲ್ಲಿ ಚೆನ್ನಂಗಿ ಉಪವಲಯ ಅರಣ್ಯಾಧಿಕಾರಿ ಪಿ.ಟಿ.ಶಶಿ, ಇಟಿಎಫ್ ಉಪ ವಲಯ ಅರಣ್ಯಾಧಿಕಾರಿ ದೇವರಾಜ್, ದುಬಾರೆ ಉಪವಲಯಣ್ಯಾಧಿಕಾರಿ ಕೆ.ಪಿ.ರಂಜನ್, ಗಸ್ತು ಅರಣ್ಯ ಪಾಲಕ ರಾಜೇಶ್, ಆರ್‌ಆರ್‌ಟಿ ಹಾಗೂ ಇಟಿಎಫ್ ಸಿಬ್ಬಂದಿ ಶಂಕರ, ಭರತ್, ರಂಜಿತ್, ರೋಶನ್, ಪ್ರದೀಪ್, ಮುತ್ತಣ್ಣ, ಸುಂದರ, ದಿನು, ಧನು, ಸಚಿನ್, ಪೊನ್ನಣ್ಣ, ಕೃಷ್ಣಪ್ಪ, ಸಂಜು, ಶಿವು, ಚಾಲಕರಾದ ಗಗನ್, ರೋಹಿತ್ ಮತ್ತು ಪೊಲೀಸ್, ವನ್ಯಜೀವಿ ವಲಯ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ರಸ್ತೆ ಸರಿಪಡಿಸುವಂತೆ ಆಗ್ರಹಿಸಿ ಸಿಪಿಐಯಿಂದ ಪುರಸಭೆ ಅಧ್ಯಕ್ಷರಿಗೆ ಮನವಿ ಸಲ್ಲಿಕೆ



ವಿರಾಜಪೇಟೆ ಪಟ್ಟಣ ವ್ಯಾಪ್ತಿಯ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಒತ್ತಾಯಿಸಿ ಸಿಪಿಐ (ಎಂ) ಕಾರ್ಯಕರ್ತರು ಪುರಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ ಅವರಿಗೆ ಮನವಿ ಸಲ್ಲಿಸಿದರು.

ವಿರಾಜಪೇಟೆ, ಡಿ.1–ಪುರಸಭೆ ವ್ಯಾಪ್ತಿಯ ಗುಂಡಿ ಬಿದ್ದ ರಸ್ತೆಗಳನ್ನು ಸರಿಪಡಿಸುವಂತೆ ಒತ್ತಾಯಿಸಿ ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ವತಿಯಿಂದ ಪುರಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ ಅವರಿಗೆ ಮನವಿ ಸಲ್ಲಿಸಲಾಯಿತು.

ಪುರಸಭೆ ವ್ಯಾಪ್ತಿಯ ಎಲ್ಲಾ ರಸ್ತೆಗಳು ಗುಂಡಿಗಳಾಗಿದ್ದು, ವಾಹನ ಸವಾರರು ಸಂಚಾರಿಸಲು ಸಾಧ್ಯವಾಗುತ್ತಿಲ್ಲ. ಜೊತೆಗೆ ಫುಟ್‌ಪಾತ್‌ಗಳಲ್ಲಿ ಅಂಗಡಿಗಳ ಸಾಮಗ್ರಿಗಳನ್ನು ಇಡುವುದರಿಂದ ಪಾದಚಾರಿಗಳು ಮುಖ್ಯ ರಸ್ತೆಯೇ ನಡೆದು ಹೋಗುವಂತಾಗಿದೆ. ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸಿ, ಸಾರ್ವಜನಿಕರು, ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಆಗ್ರಹಿಸಲಾಯಿತು.

ನ್ಯಾಯಾಲಯದಲ್ಲಿರುವ ವ್ಯಾಜ್ಯವನ್ನು ಇತ್ಯರ್ಥಪಡಿಸಿ ಶೀಘ್ರ ಪಟ್ಟಣದ ರಸ್ತೆ ಅಗಲೀಕರಣಗೊಳಿಸಲು ಮುಂದಾಗಬೇಕು. ಪುರಸಭೆ ವ್ಯಾಪ್ತಿಯ ಚರಂಡಿಗಳಲ್ಲಿ ಕಸಗಳು ತುಂಬಿರುವುದರಿಂದ ನೀರು ಸರಾಗವಾಗಿ ಹರಿಯುತ್ತಿಲ್ಲ. ತೋಡು, ಕಾಲುವೆಗಳ ಮೇಲೆ ಕೆಲವರು ಸ್ಲ್ಯಾಬ್ ಹಾಕಿ ಕಟ್ಟಡ, ವಾಹನ ಪಾರ್ಕಿಂಗ್, ಅಂಗಡಿ ನಡೆಸುತ್ತಿದ್ದಾರೆ. ಆದ್ದರಿಂದ ಅತಿಕ್ರಮ ತೋಡು, ಕಾಲುವೆ ಜಾಗವನ್ನು ತೆರವುಗೊಳಿಸಬೇಕು. ಮುಖ್ಯ ರಸ್ತೆಯಲ್ಲಿ ವಾಹನ ಸವಾರರಿಗೆ ಸಮಸ್ಯೆಯಾಗಿರುವ ಬಿಡಾಡಿ ದನಗಳ ಹಾವಳಿ ನಿಯಂತ್ರಿಸಬೇಕು ಎಂದು ಪಕ್ಷದ ಕಾರ್ಯಕರ್ತರು ಒತ್ತಾಯಿಸಿದರು.

ಪಟ್ಟಣ ವ್ಯಾಪ್ತಿಯ ಪಾಳು ಬಾವಿಗಳನ್ನು ದುರಸ್ತಿಪಡಿಸಿ, ಜನರಿಗೆ ನೀರು ಒದಗಿಸಬೇಕು. ಲಕ್ಷಾಂತರ ರೂ. ಖರ್ಚು ಮಾಡಿ ಅಳವಡಿಸಿರುವ ಹೈಮಾಸ್ಕ್ ದೀಪಗಳು ಉರಿಯುತ್ತಿಲ್ಲ. ಪಟ್ಟಣದ ಮುಖ್ಯರಸ್ತೆಯಲ್ಲಿ ಕೆಲವರು ಬೆಳಗ್ಗೆ ವಾಹನಗಳನ್ನು ನಿಲ್ಲಿಸಿ ಹೋದರೆ, ರಾತ್ರಿಯಾದರು ವಾಹನಗಳು ಅಲ್ಲೇ ಇರುತ್ತವೆ. ಈ ಎಲ್ಲಾ ಸಮಸ್ಯೆಗಳನ್ನು ಸರಿಪಡಿಸಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಪುರಸಭೆ ಅಧ್ಯಕ್ಷೆ ಎಂ.ಕೆ.ದೇಚಮ್ಮ, ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಭರವಸೆ ನೀಡಿದರು. ಇದೇ ವೇಳೆ ಸಿಪಿಐ (ಎಂ)ನ ಎ.ಸಿ.ಸಾಬು, ನಗರ ಕಾರ್ಯದರ್ಶಿ ಕೆ.ಎಸ್.ರಮೇಶ್ ಶಾಜಿ, ಪದ್ಮನಿ, ಸಿ.ಎ.ಹಮೀದ್, ಕೆ.ಕೆ.ಹರಿದಾಸ್, ಖಾಲೀದ್, ಕೆ.ಖಾಸಿಂ, ರತೀಶ್ ಹಾಜರಿದ್ದರು.



ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಭಜನೆ...

ಮಡಿಕೇರಿ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ರಾಮಾಂಜನೇಯ ಭಜನಾ ಮಂಡಳಿಯ 34ನೇ ವಾರ್ಷಿಕೋತ್ಸವ ಪ್ರಯುಕ್ತ ಭಾನುವಾರ ವಿವಿಧ ಮಂಡಳಿಗಳಿಂದ ಅಖಂಡ ಏಕಾಹ ಭಜನೆ ಕಾರ್ಯಕ್ರಮ ನಡೆಯಿತು.

ಗಾಂಜಾ ಮಾರುತ್ತಿದ್ದವನ ಬಂಧನ



ವಿರಾಜಪೇಟೆ: ಗಾಂಜಾ ಮಾರುತ್ತಿದ್ದ ಆರೋಪಿಯನ್ನು ಬಂಧಿಸಿರುವ ವಿರಾಜಪೇಟೆ ನಗರ ಠಾಣೆ ಪೊಲೀಸರು 1 ಕೆಜಿ 88 ಗ್ರಾಂ ಗಾಂಜಾ ವಶಪಡಿಸಿಕೊಂಡಿದ್ದಾರೆ. ಪಟ್ಟಣದ ನೆಹರು ನಗರ ನಿವಾಸಿ ಅಲಿಂ ಮೊಮ್ಮ ಅಹಮದ್ (41) ಬಂಧಿತ ಆರೋಪಿ.

ಈತ ವಿರಾಜಪೇಟೆ–ಸಿದ್ದಾಪುರ ರಸ್ತೆಯ ಮಗ್ಗುಲ ಜಂಕ್ಷನ್ ಬಳಿ ಗಾಂಜಾ ಮಾರುತ್ತಿದ್ದ. ಇದೇ ವೇಳೆ ದಾಳಿ ನಡೆಸಿ ಪೊಲೀಸರು ಮೊಮ್ಮ ಅಹಮದ್‌ನನ್ನು ಬಂಧಿಸಿದ್ದಾರೆ.

ಸೋಮವಾರಪೇಟೆ ಡಿವೈಎಸ್‌ಪಿ ಆರ್.ವಿ.ಗಂಗಾಧರಪ್ಪ, ವಿರಾಜಪೇಟೆ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ, ಠಾಣಾಧಿಕಾರಿ ಪ್ರಮೋದ್ ಮತ್ತು ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಯೂಚೀರಿಯೂ ವಿದ್ಯಾರ್ಥಿಗಳು ಕರಾಟೆಯಲ್ಲಿ ಗೆಲುವು



ಮೈಸೂರಿನ ಚಾಮುಂಡಿ ವಿಹಾರ ಒಳ ಕ್ರೀಡಾಂಗಣದಲ್ಲಿ ನಡೆದ ಗೋಜೂರಿಯೋ ಕರಾಟೆ ಪಂದ್ಯಾವಳಿಯಲ್ಲಿ ವಿರಾಜಪೇಟೆ ಯೂಚೀರಿಯೂ ಕರಾಟೆ ವಿದ್ಯಾರ್ಥಿಗಳು ಬಹುಮಾನ ಗಳಿಸಿದರು. ಕರಾಟೆ ಮುಖ್ಯ ತರಬೇತುದಾರ ಶಿಯಾನ್ ಶಿವಪ್ಪ, ಕರಾಟೆ ವಿದ್ಯಾರ್ಥಿಗಳಾದ ಶಶಾಂಕ್, ಯಶ್ವಂತ್, ವಿಬಿನ್ ಉತ್ತಪ್ಪ, ಅಮಿನ್ ಆಸೇನ್, ಗೋಕುಲ್, ಲಕ್ಷ್ಮೀಕಾಂತ್, ದಿಪಾನ್ವಿತಾ, ಲೇಕ್ಷನಾ, ಹಿತಾ, ಅನ್‌ಸಿಲ್, ವಿಷ್ಣು, ಜಯಶ್ರೀ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದರು.

ಲಾಟರಿ ಮೂಲಕ ಒಲಿದ ಅಧ್ಯಕ್ಷ ಗಾದಿ

ಕಾಗಲವಾಡಿ ಗ್ರಾಪಂ ಅಧ್ಯಕ್ಷರಾಗಿ ಭದ್ರಮ್ಮ, ಉಪಾಧ್ಯಕ್ಷರಾಗಿ ಕೆ.ಎಂ.ಶಾಂತಿ ಆಯ್ಕೆ



ಕಾಗಲವಾಡಿ ಗ್ರಾಪಂ ಅಧ್ಯಕ್ಷೆ ಭದ್ರಮ್ಮ ರವಿ ಹಾಗೂ ಉಪಾಧ್ಯಕ್ಷೆ ಕೆ.ಎಂ.ಶಾಂತಿ ಅವರನ್ನು ಬಿಜೆಪಿ ಕಾರ್ಯಕರ್ತರು ಅಭಿನಂದಿಸಿದರು.

ಚಾಮರಾಜನಗರ, ಡಿ.1–ತಾಲೂಕಿನ ಕಾಗಲವಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾಗಿ ಬಿಜೆಪಿ ಬೆಂಬಲಿತರಾದ ಭದ್ರಮ್ಮ ರವಿ ಹಾಗೂ ಉಪಾಧ್ಯಕ್ಷರಾಗಿ ಕೆ.ಎಂ.ಶಾಂತಿ ಆಯ್ಕೆಯಾದರು.

ಗ್ರಾಪಂ ಕಚೇರಿಯಲ್ಲಿ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. 18 ಸದಸ್ಯ ಬಲವುಳ್ಳ ಗ್ರಾಪಂನಲ್ಲಿ 10 ಬಿಜೆಪಿ ಬೆಂಬಲಿತ ಸದಸ್ಯರು ಹಾಗೂ 8 ಕಾಂಗ್ರೆಸ್ ಬೆಂಬಲಿತ ಸದಸ್ಯರು ಇದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಬಿಜೆಪಿ ಹಾಗೂ ಕಾಂಗ್ರೆಸ್ ಬೆಂಬಲಿತರಿಗೆ ಸಮಮತ ಬಂದಿದ್ದರಿಂದ ಲಾಟರಿ ಮೂಲಕ ಆಯ್ಕೆ ಮಾಡಲಾಯಿತು. ಎಲ್ಲರ ಒಪ್ಪಿಗೆಯಂತೆ ಮಗುವಿನಿಂದ ಲಾಟರಿ ಎತ್ತಿಸಲಾಯಿತು. ಈ ವೇಳೆ ಬಿಜೆಪಿ ಬೆಂಬಲಿತರಾದ ಭದ್ರಮ್ಮ ರವಿ ಅವರಿಗೆ ಅಧ್ಯಕ್ಷ ಸ್ಥಾನ ಒಲಿಯಿತು. ನಂತರ ಚುನಾವಣಾಧಿಕಾರಿ ಜನಾರ್ಧನ ಅಧ್ಯಕ್ಷರ ಆಯ್ಕೆ ಘೋಷಿಸಿದರು. ಉಪಾಧ್ಯಕ್ಷರಾಗಿ ಕೆ.ಎಂ.ಶಾಂತಿ 10 ಮತಗಳನ್ನು ಪಡೆದು ಆಯ್ಕೆಯಾದರು. ಪಿಡಿಓ ಮಹದೇವಪ್ಪ, ಗ್ರಾಪಂ ಸಿಬ್ಬಂದಿ ಇದ್ದರು.

ವಿಜಯೋತ್ಸವ: ಇದೇ ವೇಳೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಸದಸ್ಯರು, ಪಕ್ಷದ ಕಾರ್ಯಕರ್ತರು ಸನ್ಮಾನಿಸಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು.

ಗ್ರಾಪಂ ಸದಸ್ಯರಾದ ಗೀತಾ, ಮಹದೇವಸ್ವಾಮಿ, ಜ್ಯೋತಿ, ಪ್ರವೀಣ್, ಮೇಘಾ ಭಾಗ್ಯಮ್ಮ, ಫಾಜಿಲ್ ಪಾಷ, ಶಾರದಮ್ಮ, ನಾರಾಯಣಸ್ವಾಮಿ, ಲಕ್ಷ್ಮೀ, ಗಣೇಶ್, ಶಿವಮ್ಮ ಸುರೇಶ್, ಮಮತಾ, ಶಿವಪಾದ, ಎಸ್.ಮಹದೇವಸ್ವಾಮಿ, ಬಸವರಾಜು, ಮುಖಂಡರಾದ ಅಮ್ಮನಪುರ ಸಿದ್ದರಾಜು, ಜಗದೀಶ್, ಕೆ.ಬಿ.ಸ್ವಾಮಿ, ಚಿನ್ನಮುತ್ತು, ಸೋಮಣ್ಣ, ಕೆ.ಎಂ.ಮಾದಶೆಟ್ಟಿ, ಶಿವಸ್ವಾಮಿ, ಜಗದೀಶ್, ಮಹೇಶ್, ಕುಮಾರಸ್ವಾಮಿ, ಸತ್ಯ, ಸುರೇಶ್, ಚಿಕ್ಕಸ್ವಾಮಿ, ಮರಿಸಿದ್ದಯ್ಯ, ಪ್ರಮೋದ್, ರಂಗಶೆಟ್ಟಿ, ಬಿ.ಮಹೇಶ್, ಎಸ್.ಮಹೇಶ್, ರಂಗಶೆಟ್ಟಿ, ಯ.ಮಾರಾಚ, ರಾಮಸ್ವಾಮಿ, ನಂದೀಶ್, ಗುರುಸ್ವಾಮಿ ಯಜಮಾನ್ರು ಪುಟ್ಟರಾಮ, ಶೇಖರಾಜು ಇತರರಿದ್ದರು.

ಸಮರ್ಪಕವಾಗಿ ಕಸ ವಿಲೇವಾರಿಗೊಳಿಸಿ

ಎಲ್ಲಾ ವಾರ್ಡ್‌ಗಳಿಗೆ ಭೇಟಿ ನೀಡುವಂತೆ ಅಧ್ಯಕ್ಷರು, ಪೌರಾಯುಕ್ತರಿಗೆ ಸದಸ್ಯರ ಒತ್ತಾಯ



ಚಾಮರಾಜನಗರ ನಗರಸಭೆ ಕಚೇರಿಯಲ್ಲಿ ನಡೆದ ಸಭೆಯಲ್ಲಿ ನಗರಸಭೆ ಕಾರ್ಯವೈಖರಿ ವಿರುದ್ಧ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

> ಸೋಮವಾರದಿಂದಲೇ ನಗರಸಭೆ ಎಲ್ಲಾ ವಾರ್ಡ್‌ಗಳಿಗೆ ಭೇಟಿ ನೀಡಿ, ಸಮಸ್ಯೆ ಆಲಿಸಲಾಗುವುದು.
>
> –ಸುರೇಶ್, ನಗರಸಭೆ ಅಧ್ಯಕ್ಷ

ಚಾಮರಾಜನಗರ, ಡಿ.1–ನಗರಸಭೆಯ ಎಲ್ಲಾ 31 ವಾರ್ಡ್‌ಗಳಲ್ಲೂ ಸಮರ್ಪಕವಾಗಿ ಕಸ ವಿಲೇವಾರಿ ಮಾಡುತ್ತಿಲ್ಲ. ಜೊತೆಗೆ ಚರಂಡಿಯಲ್ಲಿ ಹೂಳು ತೆರವುಗೊಳಿಸುತ್ತಿಲ್ಲ ಎಂದು ನಗರಸಭೆ ಸದಸ್ಯರು ದೂರಿದರು.

ನಗರಸಭೆ ಕಚೇರಿಯಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ನಗರಸಭೆ ಕಾರ್ಯವೈಖರಿ ವಿರುದ್ಧ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು. 17ನೇ ವಾರ್ಡ್ ಸದಸ್ಯ ಬಸವಣ್ಣ ಮಾತನಾಡಿ, 15 ದಿನವಾದರೂ ವಾರ್ಡ್‌ಗಳಲ್ಲಿ ಸಂಗ್ರಹವಾಗುವ ಕಸವಿಲೇವಾರಿಗೆ ಆಟೋಗಳೇ ಬರುತ್ತಿಲ್ಲ. ಆರೋಗ್ಯ ನಿರೀಕ್ಷಕರು ದೂರವಾಣಿಗೆ ಸ್ಪಂದಿಸುವುದಿಲ್ಲ. ಅವರು ಕೆಲವೇ ವಾರ್ಡ್‌ಗಳಿಗೆ ಸೀಮಿತವಾಗಿದ್ದಾರೆ. ವಾರ್ಡ್ ವ್ಯಾಪ್ತಿಗೆ ಬರುವ ಪುಟ್ಟಮ್ಮಣ್ಣಿ ಪಾರ್ಕ್ 25 ವರ್ಷದಿಂದ ಅಭಿವೃದ್ಧಿಯಾಗಿಲ್ಲ ಎಂದು ದೂರಿದರು.

ನಮ್ಮ ವಾರ್ಡ್‌ಗಳ ಕಸ ವಿಲೇವಾರಿಗೆ ಕೂಡಲೇ ಆಟೋ ಕಳುಹಿಸಲು ಕ್ರಮ ವಹಿಸಬೇಕು. ಇಲ್ಲದಿದ್ದರೆ ನಾವೇ ಚಂದಾ ಹಾಕಿ ಆಟೋ ಖರೀದಿಸುತ್ತೇವೆ ಎಂದು ಎಸ್‌ಡಿಪಿಐ ಸದಸ್ಯರು ಎಚ್ಚರಿಸಿದರು. ಹಿರಿಯ ಸದಸ್ಯೆ ಚಿನ್ನಮ್ಮ ಮಾತನಾಡಿ, 13, 14ನೇ ವಾರ್ಡ್‌ನಲ್ಲಿ ಕಸದ ಸಮಸ್ಯೆ ವಿಪರೀತವಾಗಿದೆ. ಕೂಡಲೇ ಎಲ್ಲಾ ವಾರ್ಡ್‌ಗಳಿಗೆ ಕಸ ಸಂಗ್ರಹಣೆಗೆ ವಾಹನ ಖರೀದಿಸಬೇಕು ಎಂದು ಆಗ್ರಹಿಸಿದರು.

ನಂತರ ಪೌರಾಯುಕ್ತ ಎಸ್.ವಿ.ರಾಮದಾಸ್ ಮಾತನಾಡಿ, ನಗರಸಭೆಯಲ್ಲಿ 21 ಕಸ ಸಂಗ್ರಹಣೆ ವಾಹನಗಳಿವೆ. ಕೆಲವು ದುರಸ್ತಿಯಲ್ಲಿವೆ. ಜಿಲ್ಲಾಡಳಿತದಿಂದ 5 ವಾಹನಗಳು ನಗರಸಭೆಗೆ ಮಂಜೂರಾಗಿದ್ದು, ಕಸ ವಿಲೇವಾರಿಗೆ ಸಮಸ್ಯೆಯಾಗದಂತೆ ವಾಹನಗಳನ್ನು ನಿಯೋಜಿಸಲಾಗುವುದು ಎಂದರು.

ಬಳಿಕ ಬಿಜೆಪಿ ಸದಸ್ಯ ಶಿವರಾಜು ಮಾತನಾಡಿ, ನಗರಸಭೆ ವ್ಯಾಪ್ತಿಯ ಎಷ್ಟು ಅಂಗಡಿ ಮಳಿಗೆಗಳಿಗೆ ಪರವಾನಗಿ ನೀಡಲಾಗಿದೆ. ಪರವಾನಗಿ ಪಡೆಯದೇ ನಡೆಸುವ ಅಂಗಡಿಗೆಗಳು ಎಷ್ಟಿವೆ. 8 ಅಂಗಡಿಗಳಿಗೆ 28 ಸಾವಿರ ರೂ. ದಂಡ ವಸೂಲಿ ಮಾಡಿದ್ದೀರಿ, ಇದರಿಂದ ನಗರಸಭೆಗೆ ಹೇಗೆ ಆದಾಯ ಬರುತ್ತದೆ. ಕರ ವಸೂಲಿ ಚಿಕ್ಕ ಅಂಗಡಿಬೀದಿ, ದೊಡ್ಡಂಗಡಿ ಬೀದಿಗೆ ಸೀಮಿತವಾಗಿದೆ ಎಂದು ಆರೋಪಿಸಿದರು.

ಬಿಜೆಪಿ ಮತ್ತೊಬ್ಬ ಸದಸ್ಯ ಸುದರ್ಶನ ಗೌಡ ಮಾತನಾಡಿ, ನಗರದ ಡಿವಿಯೇಷನ್ ರಸ್ತೆ, ಬಿ.ರಾಚಯ್ಯ ಜೋಡಿರಸ್ತೆಯಲ್ಲಿ ನೀರು ಸರಬರಾಜಾದ ವೇಳೆ ರಸ್ತೆಯಲ್ಲಿ ನೀರು ಸೋರಿಕೆಯಾಗುತ್ತಿದೆ. ಇದರ ಬಗ್ಗೆ ನಗರಸಭೆ ಆಡಳಿತ ಸೂಕ್ತ ಕ್ರಮ ವಹಿಸಿಲ್ಲ ಎಂದು ದೂರಿದರು.

26ನೇ ವಾರ್ಡ್‌ನ ಸದಸ್ಯೆ ಕುಮುದಾ ಮಾತನಾಡಿ, ಬುದ್ಧ ನಗರ ಹಾಗೂ ವಿವೇಕ ನಗರದಲ್ಲಿ ಕಸ ವಿಲೇವಾರಿಗೆ ಆಟೋಗಳೇ ಬರುವುದಿಲ್ಲ. ಕುಡಿಯುವ ನೀರು ಸಮರ್ಪಕವಾಗಿಲ್ಲ. ಸ್ವಚ್ಛತಾ ಕಾರ್ಯ ಸೇರಿದಂತೆ ನೀರು ಸರಬರಾಜು ನಿರ್ವಹಣೆಗೆ ಅಧಿಕಾರಿಗಳು ಒತ್ತು ನೀಡಬೇಕು ಎಂದು ಆಗ್ರಹಿಸಿದರು. ಸಭೆಯಲ್ಲಿ ಉಪಾಧ್ಯಕ್ಷೆ ಮಮತಾ, ಸದಸ್ಯರು, ಸಿಬ್ಬಂದಿ ಹಾಜರಿದ್ದರು.

ಸ್ವಾಭಿಮಾನಿ ಸಮಾವೇಶಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ



ಚಾ.ನಗರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸ್ವಾಭಿಮಾನಿ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಬಿ.ಕೆ.ರವಿಕುಮಾರ್ ಮಾತನಾಡಿದರು.

ಚಾಮರಾಜನಗರ, ಡಿ.1–ಹಾಸನದಲ್ಲಿ ಡಿ.5ರಂದು ನಡೆಯುವ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸ್ವಾಭಿಮಾನಿ ಸಮಾವೇಶಕ್ಕೆ ಚಾಮರಾಜನಗರ ವಿಧಾನ ಸಭಾ ಕ್ಷೇತ್ರದಿಂದ ಸುಮಾರು 5 ಸಾವಿರಕ್ಕೂ ಹೆಚ್ಚಿನ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಭಾಗವಹಿಸದ್ದಾರೆ ಎಂದು ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಒಂದೂವರೆ ವರ್ಷದ ಅವಧಿಯಲ್ಲಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಜನಪರ ಯೋಜನೆಗಳನ್ನು ಕೈಗೊಂಡಿದೆ. ಸಿದ್ದರಾಮಯ್ಯ ಏಳಿಗೆಯನ್ನು ಸಹಿಸದ ವಿರೋಧ ಪಕ್ಷಗಳು ಅವರ ವರ್ಚಸ್ಸಿಗೆ ಧಕ್ಕೆ ಉಂಟು ಮಾಡುವ ಸಲುವಾಗಿ ವಾಲ್ಮೀಕಿ ನಿಗಮ, ಮುಡಾ ಹಗರಣದ ಹೆಸರಿನಲ್ಲಿ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನವನ್ನು ನಿರಂತರವಾಗಿ ಮಾಡುತ್ತಿವೆ. ಇದರ ವಿರುದ್ಧ ಸ್ವಾಭಿಮಾನಿ ಸಮಾವೇಶದ ಮೂಲಕ ತಕ್ಕ ಉತ್ತರ ನೀಡಲಾಗುವುದು ಎಂದು ತಿಳಿಸಿದರು.

ಚಾಮರಾಜನಗರ ಕ್ಷೇತ್ರದಿಂದ ಶಾಸಕ ಸಿ.ಪುಟ್ಟರಂಗಶೆಟ್ಟಿ ನೇತೃತ್ವದಲ್ಲಿ ಹೆಚ್ಚಿನ ಕಾರ್ಯಕರ್ತರು, ಅಭಿಮಾನಿಗಳು ಸಮಾವೇಶದಲ್ಲಿ ಭಾಗವಹಿಸಬೇಕು. ಕ್ಷೇತ್ರಕ್ಕೆ 100 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಕ್ಷೇತ್ರದ 26 ಗ್ರಾಮ ಪಂಚಾಯಿತಿ, ನಗರಸಭೆ ಸೇರಿದಂತೆ ಪ್ರತಿ ಗ್ರಾಮಗಳಿಂದ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ಸಮಾವೇಶ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ ಮಾತನಾಡಿದರು. ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್.ಮಹದೇವ್, ಎಂ.ಶಿವಮೂರ್ತಿ, ಜಿಪಂ ಮಾಜಿ ಸದಸ್ಯ ರಮೇಶ್, ಚುಡಾ ಮಾಜಿ ಅಧ್ಯಕ್ಷ ಸೈಯದ್ ರಫಿ, ಚುಡಾ ಸದಸ್ಯರಾದ ಪುಟ್ಟಸ್ವಾಮಿ, ಎಸ್.ರಾಜು, ದ್ವಾರಕಿ, ಬಸವನಪುರ ರಾಜಶೇಖರ್, ನಗರಸಭಾ ಸದಸ್ಯ ಚಿನ್ನಮ್ಮ, ಪದ್ಮ ಪುರುಷೋತ್ತಮ್, ಕಾವೇರಿ, ಕಾರ್ಯದರ್ಶಿ ನಾಗಬಸವಣ್ಣ, ಸೈಯದ್ ರಫಿ, ಹೆಚ್.ಎನ್.ಖಾನ್, ಗಣೇಶ್ ಪ್ರಸಾದ್, ಆಯೂಬ್‌ಖಾನ್, ಮೋಹನ್ ನಗು, ಬಸಪ್ಪನಪಾಳ್ಯ ನಟರಾಜು, ಅತೀಕ್ ಅಹಮದ್, ರವಿ ಬಿಸಲವಾಡಿ, ರವಿಗೌಡ ಹಾಜರಿದ್ದರು.

ಚಂದಕವಾಡಿಯಲ್ಲಿ ಕಣ್ಣಿನ ತಪಾಸಣೆ...



ಚಾಮರಾಜನಗರ ತಾಲೂಕಿನ ಚಂದಕವಾಡಿ ಗ್ರಾಮದಲ್ಲಿ ಶ್ರೀ ಶನೇಶ್ವರಸ್ವಾಮಿ ದೇವಸ್ಥಾನ ಹಾಗೂ ಕೊಯಮತ್ತೂರಿನ ಅರವಿಂದ ಕಣ್ಣಿನ ಆಸ್ಪತ್ರೆ ವತಿಯಿಂದ ಆಯೋಜಿಸಿದ್ದ ಉಚಿತ ಶಿಬಿರದಲ್ಲಿ ಕಣ್ಣಿನ ತಪಾಸಣೆ ನಡೆಸಲಾಯಿತು. ದೇವಸ್ಥಾನ ಸಮಿತಿ ಅಧ್ಯಕ್ಷ ಸಿ.ಎಲ್.ರಂಗರಾಮು, ಅರವಿಂದ ಆಸ್ಪತ್ರೆ ವೈದ್ಯರಾದ ನಂದಿನಿ, ಶ್ರೀಲೇಖ, ವಿಜಯಕಾಂತ್, ದೇವಸ್ಥಾನ ಸಿಬ್ಬಂದಿ ಉಮಾಪತಿ, ನಾಗೇಂದ್ರ, ಶಂಕರ, ಶಿವು ಇದ್ದರು.

ಅರ್ಜುನ್ ಜನ್ಯ ಗಾನಸುಧೆಗೆ ಪ್ರೇಕ್ಷಕರು ಫಿದಾ



ಕೊಳ್ಳೇಗಾಲದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಅರ್ಜುನ್ ಜನ್ಯ ಹಾಗೂ ಜಸ್ಕರನ್ ಸಿಂಗ್ ಗಾನಸುಧೆ.

ಕೊಳ್ಳೇಗಾಲ, ಡಿ.1–ಹೆಚ್.ಕೃಷ್ಣಸ್ವಾಮಿ ಮೆಮೋರಿಯಲ್ ಟ್ರಸ್ಟ್ ಹಾಗೂ ರೋಟರಿ ಮಿಡ್‌ಟೌನ್ ವತಿಯಿಂದ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ 'ನಮ್ಮೂರ ಕನ್ನಡ ಹಬ್ಬ' ಸಂಗೀತ ಕಾರ್ಯಕ್ರಮದಲ್ಲಿ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ, ಗಾಯಕರಾದ ಅನುರಾಧ ಭಟ್, ಇಂದು ನಾಗರಾಜು, ಜಸ್ಕರನ್ ಸಿಂಗ್, ಸುನೀಲ್ ಗುಜಗೊಂಡ, ವ್ಯಾಸರಾಜ್ ಗಾನಸುಧೆಗೆ ಪ್ರೇಕ್ಷಕರು ಕುಣಿದು ಕುಪ್ಪಳಿಸಿದರು.

ಪಟ್ಟಣದ ಸರ್ಕಾರಿ ಎಂಜಿಎಸ್‌ವಿ ಕಾಲೇಜು ಮೈದಾನದಲ್ಲಿ ನಡೆದ ಸಂಗೀತ ಕಾರ್ಯಕ್ರಮದಲ್ಲಿ ಅರ್ಜುನ್ ಜನ್ಯ ಮತ್ತು ಸಂಗಡಿಗರ ಸಂಗೀತಕ್ಕೆ ಫಿದಾ ಆಗುವ ಮೂಲಕ ಜನರು ತಲೆದೂಗಿದರು. ನಿರೀಕ್ಷೆಗೂ ಮೀರಿ ಪ್ರೇಕ್ಷಕರು ಆಗಮಿಸಿದ್ದರಿಂದ ನೂರಾರು ಜನ ನಿಂತುಕೊಂಡೇ ಕಾರ್ಯಕ್ರಮ ವೀಕ್ಷಿಸಿದರು. ಈ ವೇಳೆ ಜನರ ನಿಯಂತ್ರಣಕ್ಕೆ ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿತ್ತು. ಒಟ್ಟಾರೆ ಸಂಗೀತ ರಸ ಸಂಜೆಯಲ್ಲಿ ಪ್ರೇಕ್ಷಕರು ಸಂಭ್ರಮಿಸಿದರು.


ಇದೇ ವೇಳೆ ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ರಾಜ್ಯೋತ್ಸವ ಆಚರಣೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಸಂಗೀತ ಕಾರ್ಯಕ್ರಮ ಇದೊಂದು ಅರ್ಥಪೂರ್ಣ ಕನ್ನಡದ ಕಾರ್ಯಕ್ರಮವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾಲೂರು ಬೃಹನ್ ಮಠಾಧ್ಯಕ್ಷ ಶ್ರೀ ಡಾ.ಶಾಂತಮಲ್ಲಿಕಾರ್ಜುನಸ್ವಾಮಿಜಿ ಮಾತನಾಡಿದರು. ಇದೇ ವೇಳೆ ಪೊಲೀಸ್ ಮಹೇಶ್ ಹಾಗೂ ಅನೇಕರನ್ನು ಸನ್ಮಾನಿಸಲಾಯಿತು. ಮಾಜಿ ಶಾಸಕ ಜಿ.ಎನ್.ನಂಜುಂಡ ಸ್ವಾಮಿ, ನಗರಸಭೆ ಅಧ್ಯಕ್ಷೆ ರೇಖಾ ರಮೇಶ್, ಉಪಾಧ್ಯಕ್ಷ ಎ.ಪಿ.ಶಂಕರ್, ಮಾಜಿ ಉಪಾಧ್ಯಕ್ಷ ಜೆ.ಹರ್ಷ, ಎಚ್.ಕೆ.ಟ್ರಸ್ಟ್‌ನ ಅಧ್ಯಕ್ಷೆ ಪ್ರೇಮಲತಾ ಕೃಷ್ಣಸ್ವಾಮಿ, ಡಿವೈಎಸ್‌ಪಿ ಹೆಚ್.ಕೆ.ಮಹಾನಂದ್, ರೋಟರಿ ಮಿಡ್‌ಟೌನ್ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಎಂ.ಪ್ರಕಾಶ್, ಶಿವಾ ನಂದ್, ಪ್ರವೀಣ್ ಕುಮಾರ್, ನಟರಾಜ್ ಹಾಜರಿದ್ದರು.

ಪುರಾಣದ ಪಾತ್ರಗಳು ಮತ್ತು ವರ್ತಮಾನದ ಚಿತ್ರಗಳು ಕೃತಿ ಬಿಡುಗಡೆ

ಪರಕೀಯರು ತಿರುಚಿ ಬರೆದ ನಮ್ಮ ದೇಶದ ಇತಿಹಾಸವನ್ನೇ ನಾವು ಓದುತ್ತಿರುವುದು ದುರಂತ

ಅಂಕಣಕಾರ ಡಾ.ವಿ. ರಂಗನಾಥ್ ವಿಷಾದ



ಮೈಸೂರಿನ ಸರಸ್ವತಿಪುರಂನ ರೋಟರಿ ಪಶ್ಚಿಮ ಸಭಾಂಗಣದಲ್ಲಿ ಭಾನುವಾರ ಕೆ.ರಘುಶೆಟ್ಟಿ ಅವರ 'ಪುರಾಣದ ಪಾತ್ರಗಳು ಮತ್ತು ವರ್ತಮಾನದ ಚಿತ್ರಗಳು' ಪುಸ್ತಕ ಬಿಡುಗಡೆ ಮಾಡಲಾಯಿತು.

ಮೈಸೂರು,ಡಿ.1(ಪಿಎಂ)– ಪರಕೀಯರು ನಮ್ಮ ದೇಶದ ಇತಿಹಾಸವನ್ನು ತಮಗೆ ಬೇಕಾದಂತೆ ತಿರುಚಿ ದಾಖಲಿಸಿದ್ದು, ಅದನ್ನೇ ನಾವು ಓದುತ್ತಿರುವುದು ದುರಂತ ಎಂದು ನಿವೃತ್ತ ತಹಸೀಲ್ದಾರರೂ ಆದ ಅಂಕಣಕಾರ ಡಾ.ವಿ.ರಂಗನಾಥ್ ವಿಷಾದಿಸಿದರು.

ಮೈಸೂರಿನ ಸರಸ್ವತಿಪುರಂನ ರೋಟರಿ ಪಶ್ಚಿಮ ಸಭಾಂಗಣದಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್‌ನ ಕನ್ನಡ ಸಂಘ ಮತ್ತು ಪಿಂಚಣಿದಾರರ ಸಂಘದ ಜಂಟಿ ಆಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಕನ್ನಡ ಸಂಘದ ವಾರ್ಷಿಕೋತ್ಸವ ಹಾಗೂ 70 ವರ್ಷ ತುಂಬಿದ ಪಿಂಚಣಿದಾರರ ಸನ್ಮಾನ ಸಮಾರಂಭದಲ್ಲಿ ಕೆ.ರಘುಶೆಟ್ಟಿ ಅವರ 'ಪುರಾಣದ ಪಾತ್ರಗಳು ಮತ್ತು ವರ್ತಮಾನದ ಚಿತ್ರಗಳು' ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಕೆ.ರಘುಶೆಟ್ಟಿಯವರು ತಮ್ಮ ಈ ಪುಸ್ತಕದಲ್ಲಿ ದೇಶದಲ್ಲಿ ಘಟಿಸಿದ ನೈಜ ಸಂಗತಿಗಳನ್ನು ದಾಖಲಿಸಿದ್ದಾರೆ. ಇಲ್ಲಿನ ಲೇಖನಗಳಲ್ಲಿ ಸತ್ಯಸಂಗತಿಯನ್ನು ಅನಾವರಣ ಮಾಡಲಾಗಿದೆ. ನಮ್ಮ ದೇಶದ ಇತಿಹಾಸವನ್ನು ನಾವು ಬರೆದಿಲ್ಲ. ಬೇರೆಯವರು ತಮಗೆ ಬೇಕಾದಂತೆ ಬರೆದಿದ್ದು, ಅದನ್ನೇ ನಾವು ಓದುತ್ತಿದ್ದೇವೆ. ಅದರಲ್ಲಿ ಎಷ್ಟೋ ತಪ್ಪು, ಮೋಸ ಅಡಗಿದೆ. ದೇಶದ ಮೇಲೆ ದಾಳಿ ನಡೆಸಿದ ದಾಳಿಕೋರರನ್ನು ಹೀರೋಗಳನ್ನಾಗಿ ಮಾಡಲಾಗಿದೆ. ನಿಜವಾಗಿ ದೇಶದ ಸ್ವಾತಂತ್ರ್ಯಕ್ಕೆ ಹೋರಾಟ ಮಾಡಿದ ನೈಜ ಹೀರೋಗಳನ್ನು ಕಡೆಗಣಿಸಲಾಗಿದೆ ಎಂದು ತಿಳಿಸಿದರು.

ಇತ್ತೀಚಿಗೆ ಚಂದ್ರಶೇಖರ್ ಆಜಾದ್, ಸಾವರ್ಕರ್ ಪುಸ್ತಕಗಳು ಹೊರಬಂದು ನೈಜ ಸಂಗತಿಗಳನ್ನು ಹೊರ ಹಾಕಿವೆ. ದೊಡ್ಡ ನಾಯಕರು ಎಂದುಕೊಂಡವರ ಬಗ್ಗೆ ಒಂದೊಂದೆ ನೈಜ ಸಂಗತಿಗಳು ಬೆಳಕಿಗೆ ಬರುತ್ತಿವೆ. ಆ ಮೂಲಕ ಅವರು ಮಾಡಿದ ತಪ್ಪುಗಳನ್ನು ತಿಳಿದುಕೊಳ್ಳುವಂತಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಅವರ ತಪ್ಪುಗಳು ಕಥೆಗಳ ಮಾದರಿಯಲ್ಲಿ ಅನಾವರಣಗೊಳ್ಳುತ್ತಿವೆ ಎಂದರು.

ಈ ಪುಸ್ತಕ ಓದಿದರೆ ನಮ್ಮ ಇತಿಹಾಸ ರಚನೆಯಲ್ಲಿ ಎಷ್ಟು ಮೋಸ ನಡೆದಿದೆ ಎಂಬುದು ತಿಳಿದು ಬೇಸರ ಉಂಟಾಗುತ್ತದೆ. ಇನ್ನಾದರೂ ನಿಜವಾದ ಇತಿಹಾಸ ನಮಗೆ ಗೊತ್ತಾಗಬೇಕಿದೆ. ಪರಕೀಯ ಸಾಮ್ರಾಟರನ್ನು ಹೊಗಳುತ್ತೇವೆ. ಆದರೆ ನಮ್ಮ ಶಿವಾಜಿ, ಸಾವರ್ಕರ್ ಅವರನ್ನು ಹೊಗಳುವುದೇ ಇಲ್ಲ. ಏಕೆಂದರೆ ಅವರ ಬಗ್ಗೆ ನಮಗೆ ಗೊತ್ತೇ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸ್ವಾತಂತ್ರ್ಯ ಬಂದ ನಂತರವಾದರೂ ನಮ್ಮ ನೈಜ ಇತಿಹಾಸವನ್ನು ಬರೆಯಬಹುದಿತ್ತು. ಆದರೆ ಅದಾಗಲಿಲ್ಲ. ಏಕೆಂದರೆ ಆಗಿನ ಕೇಂದ್ರದಲ್ಲಿದ್ದ ಶಿಕ್ಷಣ ಮಂತ್ರಿಗಳು ಹಿಂದಿನದ್ದೇ ಮುಂದುವರೆಸುವ ಉತ್ಸಾಹ ತೋರಿದರು. ನಂತರದಲ್ಲಿ ಪಠ್ಯಗಳಲ್ಲಿ ಒಂದಿಷ್ಟು ಬದಲಾವಣೆ ಮಾಡಿ, ನೈಜ ಇತಿಹಾಸ ತಿಳಿಸಲು ಮುಂದಾದರೆ ಅದರ ವಿರುದ್ಧ ಪ್ರತಿಭಟನೆ ನಡೆಸಲಾಯಿತು. ಇದರಿಂದ ದಾಖಲಿಸಿದ್ದ ನೈಜ ಇತಿಹಾಸ ಹಿಂಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಯಿತು. ಇಂದಿಗೂ ನಮ್ಮ ನಿಜವಾದ ಇತಿಹಾಸ ನಮಗೆ ಗೊತ್ತಾಗುತ್ತಿಲ್ಲ ಎಂದರು.

ಜಮ್ಮು-ಕಾಶ್ಮೀರದ ವಿಶೇಷ ಸ್ಥಾನಮಾನ ಸಂಬಂಧದ ಸಂವಿಧಾನದ ಆರ್ಟಿಕಲ್ 370 ರದ್ದುಪಡಿಸಿದ ಬಗ್ಗೆ ಈ ಪುಸ್ತಕದಲ್ಲಿ ಲೇಖನ ಇದೆ. ಲೇಖನದಲ್ಲಿ ಆರ್ಟಿಕಲ್ 370ನೇ ರದ್ದುಪಡಿಸುವ ಕೇಂದ್ರ ಸರ್ಕಾರದ ಸೂಕ್ತ ನಿರ್ಧಾರ, ಅದಕ್ಕಾಗಿ ಕೈಗೊಂಡ ಜಾಣ್ಮೆಯ ನಡೆಗಳನ್ನು ಲೇಖಕರು ಉಲ್ಲೇಖಿಸಿದ್ದಾರೆ. 370ನೇ ವಿಧಿ ರದ್ದುಪಡಿಸುವ ವರೆಗೆ ಜಮ್ಮು ಕಾಶ್ಮೀರದಲ್ಲಿ ಏನು ನಡೆಯುತ್ತಿದೆ ಎಂಬುದೇ ದೇಶದ ಜನತೆಗೆ ಗೊತ್ತೇ ಆಗುತ್ತಿರಲಿಲ್ಲ. ಈ ವಿಧಿ ರದ್ದುಪಡಿಸಿದರೆ ಇಡೀ ದೇಶದಲ್ಲಿ ವಿರೋಧ ವ್ಯಕ್ತವಾಗಿ ಗಲಾಟೆ ಆಗುತ್ತದೆ ಎಂದು ಬಿಂಬಿಸಲಾಗಿತ್ತು. ಆದರೆ ಅಂತಹ ಯಾವುದೇ ಬೆಳವಣಿಗೆ ಆಗಲಿಲ್ಲ. ಮತ್ತೆ ಮರು ಜಾರಿಗೆ ಅವಕಾಶವಿಲ್ಲದಂತೆ ಬಿಗಿ ಕ್ರಮ ಕೈಗೊಳ್ಳಲಾಗಿದೆ ಎಂದರು.

ಕೃತಿ ಕರ್ತೃಗಳೂ ಆದ ಭಾರತೀಯ ಸ್ಟೇಟ್ ಬ್ಯಾಂಕ್ ನಿವೃತ್ತ ಉಪಪ್ರಧಾನ ವ್ಯವಸ್ಥಾಪಕ ಮತ್ತು ಕನ್ನಡ ಸಂಘದ ಅಧ್ಯಕ್ಷ ಕೆ.ರಘುಶೆಟ್ಟಿ, ಭಾರತೀಯ ಸ್ಟೇಟ್ ಬ್ಯಾಂಕ್‌ನ ಆಡಳಿತ ಕಚೇರಿಯ ಮಾನವ ಸಂಪನ್ಮೂಲ ವಿಭಾಗದ ಮುಖ್ಯ ವ್ಯವಸ್ಥಾಪಕ ಪ್ರವೀಣ್ ವಿ.ಗೋರೋಬಾಲ್, ಪಿಂಚಣಿದಾರರ ಸಂಘದ ಅಧ್ಯಕ್ಷ ಎಸ್.ಆನಂದಮೂರ್ತಿ, ಕಾರ್ಯದರ್ಶಿ ರಂಗನಾಥ್ ಮತ್ತಿತರರು ಹಾಜರಿದ್ದರು.

ಸರ್ಕಾರಿ ಶಾಲೆಗೆ ಗ್ರೀನ್ ಬೋರ್ಡ್‌ಗಳ ಕೊಡುಗೆ...



ಭಾರತೀಯ ಪ್ರಸಿದ್ಧ ವಿಜ್ಞಾನಿ ಡಾ.ಜಗದೀಶ್ ಚಂದ್ರ ಬೋಸ್ ಅವರ ಜನ್ಮದಿನದ ಅಂಗವಾಗಿ ಸಾಫ್ಟ್‌ವೇರ್ ಇಂಜಿನಿಯರ್ ದೀಪಕ್ ಅವರು ನಾಲ್ಕು ಗ್ರೀನ್ ಬೋರ್ಡ್‌ಗಳನ್ನು ಮೈಸೂರಿನ ನಜರ್‌ಬಾದ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಕೊಡುಗೆಯಾಗಿ ನೀಡಿದರು. ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷ ಪವಾರ್, ಶಿಕ್ಷಕರಾದ ಗುರುಪ್ರಸಾದ್, ರೂಪ, ಮೈಸೂರು ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವೆಂಕಟೇಶ್, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಹಿಂದೂಗಳ ರಕ್ಷಣೆಗೆ ಬಾಂಗ್ಲಾದೊಂದಿಗೆ ಮಾತುಕತೆ ನಡೆಸಿ

ಕೇಂದ್ರ ಸರ್ಕಾರಕ್ಕೆ ಇಸ್ಕಾನ್ ಬೆಂಗಳೂರು ಮನವಿ

ಬೆಂಗಳೂರು: ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಹಿಂದೂಗಳ ಮೇಲಿನ ಹಿಂಸಾಚಾರದ ಬಗ್ಗೆ ಇಸ್ಕಾನ್ ಬೆಂಗಳೂರು ಅಧ್ಯಕ್ಷ ಮಧು ಪಂಡಿತ್ ದಾಸ್ ಕಳವಳ ವ್ಯಕ್ತಪಡಿಸಿದ್ದು, ಅಲ್ಲಿನ ಅಲ್ಪಸಂಖ್ಯಾತರ ಹಕ್ಕುಗಳನ್ನು ರಕ್ಷಿಸಲು ನೆರೆಯ ದೇಶಗಳೊಂದಿಗೆ ಮಾತುಕತೆ ನಡೆಸಬೇಕು ಎಂದು ಕೇಂದ್ರವನ್ನು ಒತ್ತಾಯಿಸಿದ್ದಾರೆ.

ಬಾಂಗ್ಲಾದೇಶದಲ್ಲಿ ಕಿರುಕುಳಕ್ಕೊಳಗಾದ ಅಲ್ಪಸಂಖ್ಯಾತರ ಬಗ್ಗೆ ಒಗ್ಗಟ್ಟು ಪ್ರದರ್ಶಿಸಲು ಇಸ್ಕಾನ್ ದೇವಾಲಯ ಬಳಿ ಆಯೋಜಿಸಲಾದ ಶಾಂತಿಯುತ ಸಂಕೀರ್ತನೆಯಲ್ಲಿ ಮಾತನಾಡಿದ ದಾಸ್, ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ಹಿಂಸಾಚಾರದ ಬಗ್ಗೆ ವರದಿಗಳನ್ನು ನಾವು ನೋಡಿದ್ದೇವೆ ಅಲ್ಲಿನ ಪರಿಸ್ಥಿತಿಯ ಬಗ್ಗೆ ತೀವ್ರ ಕಳವಳ ಹೊಂದಿರುವುದಾಗಿ ತಿಳಿಸಿದರು.

ಚಿನ್ಮೋಯ್ ಕೃಷ್ಣ ಪ್ರಭು, ಇಸ್ಕಾನ್ ಭಕ್ತರು ಸೇರಿದಂತೆ ಮತ್ತಿತರ ಕಿರುಕುಳಕ್ಕೊಳಗಾದ ಅಲ್ಪಸಂಖ್ಯಾತ ಸಮುದಾಯಗಳ ಸುರಕ್ಷತೆಯನ್ನು ಬಾಂಗ್ಲಾದೇಶ ಸರ್ಕಾರ ಖಾತ್ರಿಪಡಿಸುತ್ತದೆ ಎಂಬ ವಿಶ್ವಾಸದಲ್ಲಿದ್ದೇವೆ. ಬಾಂಗ್ಲಾದೇಶ ಸನಾತನ ಜಾಗರಣ ಮಂಚ್‌ನ ವಕ್ತಾರ ಚಿನ್ಮೋಯ್ ಕೃಷ್ಣದಾಸ್ ಬ್ರಹ್ಮಚಾರಿ ಅವರನ್ನು ಢಾಕಾ ಪೊಲೀಸರು ಇತ್ತೀಚೆಗೆ ಬಂಧಿಸಿರುವುದು ಸೇರಿದಂತೆ ಇತ್ತೀಚಿನ ತಿಂಗಳುಗಳಲ್ಲಿ ಬಾಂಗ್ಲಾದೇಶದಲ್ಲಿ ಹಿಂದೂ ಸಮುದಾಯ ದಾಳಿಗೆ ಒಳಗಾಗುತ್ತಿರುವುದನ್ನು ಮಧು ಪಂಡಿತ್ ದಾಸ್ ಪ್ರಸ್ತಾಪಿಸಿದರು.

ಬಾಂಗ್ಲಾದಲ್ಲಿ ಹಿಂದೂ ದೇವಾಲಯಗಳನ್ನು ಗುರಿಯಾಗಿಸಲಾಗುತ್ತಿದೆ. ಸನಾತನ ಧರ್ಮದ ಅನುಯಾಯಿಗಳು ಗಂಭೀರ ದಾಳಿಗೆ ಒಳಗಾಗುತ್ತಿದ್ದಾರೆ. ಇದನ್ನು ನಿಲ್ಲಿಸಬೇಕಾಗಿದೆ ಎಂದು ಅವರು ಹೇಳಿದರು.

ನಿಧನ

ಅಯ್ಯಪ್ಪ ಎಂ.ಕೋದಂಡೇರ



ಮೈಸೂರು, ಡಿ.1–ಮೈಸೂರಿನ ಶಾರದಾದೇವಿ ನಗರದಲ್ಲಿರುವ ತಪೋವನ ಸೋಲ್ಲೈಸ್ ನಿವಾಸಿ ಅಯ್ಯಪ್ಪ ಎಂ.ಕೋದಂಡೇರ(95) ಅವರು ಇಂದು ಬೆಳಗ್ಗೆ ನಿಧನರಾದರು. ಮೃತರು ಪತ್ನಿ ನೀಲಮ್ಮ ಪುಚ್ಚಿಮಾಡ, ಪುತ್ರರಾದ ಲೋಕೇಶ್ ಮೇದಪ್ಪ ಉಮೇಶ್ ಚಂಗಪ್ಪ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಗೋಣಿಕೊಪ್ಪದ ಗೋಕುಲ ಎಸ್ಟೇಟ್‌ನಲ್ಲಿ ಅವರ ಅಂತ್ಯಕ್ರಿಯೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಜಗೋಪಾಲ ರಾವ್



ಮೈಸೂರು: ಮೈಸೂರಿನ ರಾಮಕೃಷ್ಣನಗರ 'ಹೆಚ್' ಬ್ಲಾಕ್ ನಿವಾಸಿ ರಾಜಗೋಪಾಲ ರಾವ್(79) ಅವರು ಇಂದು ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ರಾಮಕೃಷ್ಣನಗರದ ಸಾಲುಮರದ ತಿಮ್ಮಕ್ಕ ಪಾರ್ಕ್‌ನಲ್ಲಿ ನಿವಾಸಿಗಳಿಗೆ ಉಚಿತವಾಗಿ ಯೋಗ ಕಲಿಸುವ ಮೂಲಕ ಹೆಸರುವಾಸಿಯಾಗಿದ್ದರು. ರಾಮಕೃಷ್ಣನಗರ 'ಜಿ', 'ಹೆಚ್' ಬ್ಲಾಕ್ ಹಾಗೂ ಆರೋಗ್ಯನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ಸುರಭಿ ಮಹಿಳಾ ಸಮಾಜದ ಪದಾಧಿಕಾರಿಗಳು ಹಾಗೂ ಸದಸ್ಯರು ಶ್ರೀಯುತರಿಗೆ ಅಂತಿಮ ನಮನ ಸಲ್ಲಿಸಿದರು. ರಾಜಗೋಪಾಲ ರಾವ್ ಆಶಯದಂತೆ ಕುಟುಂಬ ವರ್ಗದವರು ಅವರ ದೇಹವನ್ನು ಜೆಎಸ್‌ಎಸ್ ಮೆಡಿಕಲ್ ಕಾಲೇಜಿಗೆ ದಾನ ಮಾಡಿದ್ದಾರೆ.

ಲಕ್ಷ್ಮೀ ಪರಮಶಿವಂ



ಮೈಸೂರು: ಮೈಸೂರು ಹೊರವಲಯದ ದೇವಯ್ಯನಹುಂಡಿ ಶ್ರೀರಾಂಪುರ ನಿವಾಸಿ ಶ್ರೀಮತಿ ಲಕ್ಷ್ಮೀ ಪರಮಶಿವಂ(85) ಅವರು ಭಾನುವಾರ ಮಧ್ಯಾಹ್ನ ನಿಧನರಾದರು. ಇವರು ಪುತ್ರ ರಾಧಾಕೃಷ್ಣ ರೈಲ್ವೆ, ಪುತ್ರಿ ಗಿರಿಜಾ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ದೇವಯ್ಯನಹುಂಡಿ ಸ್ಮಶಾನದಲ್ಲಿ ಸೋಮವಾರ ಬೆಳಗ್ಗೆ 9ಕ್ಕೆ ಅಂತ್ಯ ಸಂಸ್ಕಾರ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ

ತಂಬಾಕು ಬೆಳೆಗಾರರ ಸಮಸ್ಯೆ ಬಗೆಹರಿಸುತ್ತೇನೆ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ



ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಶಾಸಕ ಜಿ.ಡಿ.ಹರೀಶ್‌ಗೌಡ ನೇತೃತ್ವದ ರೈತ ಮುಖಂಡರ ನಿಯೋಗ ಭೇಟಿ ಮಾಡಿ ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಬಗೆಹರಿಸಲು ಒತ್ತಾಯಿಸಿ ಮನವಿ ಸಲ್ಲಿಸಿದರು.

ಹುಣಸೂರು, ಡಿ.1– ಹೊಗೆಸೊಪ್ಪಿಗೆ ಸೂಕ್ತ ದರ ಮತ್ತು ತಂಬಾಕು ಬೆಳೆಗಾರರು ಹಲವು ವರ್ಷಗಳಿಂದ ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿ ಕ್ರಮವಹಿಸುವುದಾಗಿ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದರು.

ಶಾಸಕ ಜಿ.ಡಿ.ಹರೀಶ್‌ಗೌಡರ ನೇತೃತ್ವದಲ್ಲಿ ಹುಣಸೂರು, ಹೆಚ್.ಡಿ.ಕೋಟೆ, ಪಿರಿಯಾಪಟ್ಟಣ, ಕೆ.ಆರ್.ನಗರ ಮತ್ತು ಅರಕಲಗೂಡು ತಾಲೂಕಿನ ರಾಮನಾಥಪುರದ ನೂರಕ್ಕೂ ಹೆಚ್ಚು ರೈತ ಮುಖಂಡರ ನಿಯೋಗ ಭಾನುವಾರ ಬೆಂಗಳೂರಿನ ಬಿಡದಿಯ ಸಚಿವರ ನಿವಾಸಕ್ಕೆ ಭೇಟಿ ನೀಡಿ ತಂಬಾಕು ಬೆಳೆಗಾರರ ಸಮಸ್ಯೆಗಳ ಸಂಬಂಧ ನೀಡಿದ ಮನವಿ ಸ್ವೀಕರಿಸಿ ಮಾತನಾಡಿದ ಅವರು, ಶಾಸಕ ಜಿ.ಡಿ.ಹರೀಶ್‌ಗೌಡ ತಂಬಾಕು ಬೆಳೆಗಾರರ ಸಮಸ್ಯೆಗಳ ಕುರಿತು ನನ್ನ ಗಮನ ಸೆಳೆದಿದ್ದಾರೆ. ಮೈಸೂರು ಭಾಗದ ಪ್ರಮುಖ ವಾಣಿಜ್ಯ ಬೆಳೆಯಾದ ತಂಬಾಕು ಅಂತಾರಾಷ್ಟ್ರೀಯ ಮಾರುಕಟ್ಟೆ ಹೊಂದಿರುವುದನ್ನು ಬಲ್ಲೆ. ಇದೀಗ ತಂಬಾಕು ಗುಣಮಟ್ಟದಲ್ಲಿನ ಕೊರತೆ ಇನ್ನಿತರ ಕಾರಣವೊಡ್ಡಿ ಸೂಕ್ತ ದರ ನೀಡುತ್ತಿಲ್ಲವೆನ್ನುವ ಮಾಹಿತಿ ಶಾಸಕರು ನೀಡಿದ್ದು ನಾನೂ ಗಮನಿಸುತ್ತಿದ್ದೇನೆ. ಶಾಸಕ ಜಿ.ಡಿ.ಹರೀಶ್‌ಗೌಡರ ಕಾಳಜಿ ಶ್ಲಾಘನೀಯ ಎಂದರು.

ದೆಹಲಿಗೆ ರೈತರ ನಿಯೋಗವನ್ನು ಕೊಂಡೊಯ್ದು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡೋಣ. ಅದಕ್ಕೆ ಬೇಕಾದ ವ್ಯವಸ್ಥೆ ಮಾಡುತ್ತೇವೆ. ತಂಬಾಕು ಮಾರುಕಟ್ಟೆಯಲ್ಲಿನ ಸಮಸ್ಯೆಗಳು, ಸೂಕ್ತ ಮತ್ತು ಲಾಭದಾಯಕ ದರ ದೊರಕುವಂತೆ ಮಾಡಲು ನಿಶ್ಚಿತವಾಗಿ ಕ್ರಮವಹಿಸುತ್ತೇನೆಂದು ನಿಯೋಗಕ್ಕೆ ಭರವಸೆ ನೀಡಿದರು.

ಶಾಸಕ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಸಮಸ್ಯೆಯ ಸಂಪೂರ್ಣ ಮಾಹಿತಿ ನೀಡಿದ್ದೇನೆ. ರೈತರ ಬವಣೆ ಕುರಿತು ತಿಳಿಸಿದ್ದೇನೆ. ಸಮಸ್ಯೆ ಆಳವನ್ನು ಅವರು ಅರಿತಿದ್ದಾರೆ. ಕುಮಾರಸ್ವಾಮಿಯವರ ಮಾರ್ಗದರ್ಶನದಂತೆ ದೆಹಲಿಗೆ ತೆರಳಿ ಕೇಂದ್ರ ವಾಣಿಜ್ಯ ಸಚಿವರೊಂದಿಗೆ ಚರ್ಚಿಸಿ ನ್ಯಾಯ ದೊರಕಿಸಿಕೊಡುವ ವಿಶ್ವಾಸ ನನಗಿದೆ ಎಂದರು.

ಖರೀದಿ ಕಂಪನಿಗಳು ಮತ್ತು ತಂಬಾಕು ಮಂಡಳಿ ಅಧಿಕಾರಿಗಳ ಸಭೆ ಆಯೋಜನೆಗೂ ಸಚಿವ ಕುಮಾರಸ್ವಾಮಿ ಒಪ್ಪಿದ್ದಾರೆ. ಖರೀದಿ ಕಂಪನಿಗಳು ಮತ್ತು ಅಧಿಕಾರಿ ವರ್ಗ ಶಾಮೀಲಾಗಿ ರೈತರಿಗೆ ಅನ್ಯಾಯವುಂಟು ಮಾಡುವಂತಹ ಯಾವುದೇ ಕ್ರಮವನ್ನು ನಾನು ವಿರೋಧಿಸುತ್ತೇನೆ. ಅಧಿಕಾರಿಗಳು ರೈತಪರ ನಿಲುವನ್ನೇ ಹೊಂದಿರಬೇಕು ಎಂದು ತಾಕೀತು ಮಾಡಿದರು.

ಕಳೆದ ಹಲವು ವರ್ಷಗಳಿಂದ ತಂಬಾಕು ಬೆಳೆಯುತ್ತಾ ಬಂದಿರುವ ರೈತರಿಗೆ ಭದ್ರತೆ ಇಲ್ಲದಾಗಿದೆ. ಬೆಲೆ ಸ್ಥಿರತೆ ಇಲ್ಲ. ಬೆಳೆಗಾರ ಮೂಕ ಪ್ರೇಕ್ಷಕನಂತಾಗಿದ್ದಾನೆ. ಸರ್ಕಾರಕ್ಕೆ ಕೋಟ್ಯಾಂತರ ರೂ. ವಿದೇಶಿ ವಿನಿಮಯ ತಂದುಕೊಡುವ ತಂಬಾಕು ಬೆಳೆಯುವ ರೈತನಿಗೆ ಕನಿಷ್ಠ ದರ ದಕ್ಕಿಸಿಕೊಳ್ಳಲಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕಡಿಮೆ ದರ್ಜೆ ತಂಬಾಕನ್ನೂ ಖರೀದಿ ಮಾಡಬೇಕು. ಹೊಗೆಸೊಪ್ಪು ಮಾರಾಟಕ್ಕೆ ಜಿಎಸ್‌ಟಿಯಿಂದ ವಿನಾಯಿತಿ ನೀಡಬೇಕು. ಮರಣ ಹೊಂದಿದ ತಂಬಾಕು ಬೆಳೆಗಾರರಿಗೆ 5 ಲಕ್ಷ ಪರಿಹಾರ ನೀಡಬೇಕು. ಹೊಗೆಸೊಪ್ಪು ಬೆಳೆಯನ್ನು ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ವ್ಯಾಪ್ತಿಗೆ ತರಬೇಕು. ರೈತರು ಉತ್ಪಾದಿಸುವ ತಂಬಾಕಿನ ಎಲ್ಲಾ ಗ್ರೇಡ್‌ಗಳ ಸೊಪ್ಪನ್ನು ಏಕಕಾಲದಲ್ಲಿ ಮಾರಾಟಕ್ಕೆ ಅವಕಾಶ ನೀಡಬೇಕು. ಅನಧಿಕೃತ ತಂಬಾಕು ಬೆಳೆಗಾರರನ್ನು ಅಧಿಕೃತ ಬೆಳೆಗಾರರೆಂದು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಜೆಡಿಎಸ್ ಯುವ ಮುಖಂಡ ನಿಖಿಲ್ ಕುಮಾರಸ್ವಾಮಿ, ನಿಯೋಗದಲ್ಲಿ ಮಾಜಿ ಶಾಸಕ ಕೆ.ಮಹದೇವ್, ರೈತ ಮುಖಂಡರಾದ ಶ್ರೀನಿವಾಸ್, ರೈತ ಸಂಘದ ಜಿಲ್ಲಾಧ್ಯಕ್ಷ ಕುಮಾರ್, ತಾಲೂಕು ಪ್ರಧಾನ ಕಾರ್ಯದರ್ಶಿ ರಾಮೇಗೌಡ, ನಂಜುಂಡೇಗೌಡ, ಸಿ.ಚಂದ್ರೇಗೌಡ, ಪ್ರಭಾಕರ್, ಶ್ರೀಧರ್, ಅಶೋಕ್, ಶ್ರೀಧರ್, ಬೆಟ್ಟೇಗೌಡ, ಸುರೇಶ್ ಇತರರಿದ್ದರು.

ಇಂದು ದೆಹಲಿಗೆ ನಿಯೋಗ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನಿರ್ದೇಶನದಂತೆ ಶಾಸಕ ಜಿ.ಡಿ.ಹರೀಶ್‌ಗೌಡರ ನೇತೃತ್ವದ ರೈತ ಮುಖಂಡರ ನಿಯೋಗ ಸೋಮವಾರ ದೆಹಲಿಗೆ ತೆರಳಲಿದ್ದು, ದೆಹಲಿಯಲ್ಲಿ ಕೇಂದ್ರ ವಾಣಿಜ್ಯ ಸಚಿವರೊಂದಿಗೆ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ನಿರ್ಧರಿಸಲಾಗಿದೆ ಎಂದು ಶಾಸಕರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಡಿ.6ಕ್ಕೆ ಅಂಬೇಡ್ಕರ್ ಪರಿನಿಬ್ಬಾಣ ದಿನಾಚರಣೆ



ಸಭೆಯಲ್ಲಿ ಎನ್.ಮಹೇಶ್ ಮಾತನಾಡಿದರು.

ತಿ.ನರಸೀಪುರ, ಡಿ.1– ಇದೇ ತಿಂಗಳ 6 ರಂದು ಬಿ.ಆರ್. ಅಂಬೇಡ್ಕರ್ ಅವರ ಪರಿನಿಬ್ಬಾಣ ದಿನವನ್ನು ಪಟ್ಟಣದಲ್ಲಿ ಆಚರಿಸಲಾಗುವುದು ಎಂದು ಡಾ.ಬಿ.ಆರ್. ಅಂಬೇಡ್ಕರ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎನ್.ಮಹೇಶ್ ತಿಳಿಸಿದರು.

ಪಟ್ಟಣದ ತ್ರಿವೇಣಿ ನಗರದ ಬುದ್ಧ ಮಂದಿರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಅವರನ್ನು ಗೌರವಿಸುವ ಪ್ರತಿಯೊಬ್ಬರೂ ಸಮಾನತೆ ಮತ್ತು ಕರುಣೆ ಸಂದೇಶವಿರುವ ಬೌದ್ಧ ಧರ್ಮವನ್ನು ಅನುಸರಿಸಿ ಬುದ್ಧ ಮಾರ್ಗದಲ್ಲಿ ನಡೆಯಬೇಕು. ಪ್ರಪಂಚದ ಎಲ್ಲಾ ಧರ್ಮಗಳನ್ನು ಅಧ್ಯಯನ ಮಾಡಿ ಭರತ ಖಂಡದ ಮೂಲ ಧರ್ಮ ಬುದ್ಧನ ಧಮ್ಮವನ್ನು ಅಂಬೇಡ್ಕರ್ ಸ್ವೀಕರಿಸಿದರು. ಅಂಬೇಡ್ಕರ್ ಅವರನ್ನು ಪ್ರೀತಿಸುವ, ಗೌರವಿಸುವ ನಾವು ಬುದ್ಧನ ಮಾರ್ಗವನ್ನು ಅನುಸರಿಸುವಲ್ಲಿ ಹಾಗೂ ಬೌದ್ಧ ಧರ್ಮ ಆಚರಣೆ ಮಾಡುವಲ್ಲಿ ಭಿನ್ನತೆ ತೋರಿಸುತ್ತೇವೆ. ಉತ್ತಮ ತತ್ವಗಳು, ಸಂದೇಶಗಳನ್ನು ನೀಡಿರುವ ಬುದ್ಧರ ಮಾರ್ಗದಲ್ಲಿ ನಡೆಯುವುದನ್ನು ಅನುಸರಿಸಬೇಕು ಎಂದರು. ಬೋಧಿರತ್ನ ಬಂತೇಜಿ ಮಾತನಾಡಿ, ಡಿ.6ರಂದು ಸಂಜೆ 5.30ಕ್ಕೆ ಬುದ್ಧ ಮಂದಿರದ ಆವರಣದಿಂದ ಮೆರವಣಿಗೆಯಲ್ಲಿ ಸಾಗೋಣ. ಎಲ್ಲಾ ಬಂಧು ಬಾಂಧವರು ಕೈಜೋಡಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿ ಎಂದರು.

ಈ ವೇಳೆ ತಾಲೂಕು ಅಂಬೇಡ್ಕರ್ ಅಭಿವೃದ್ಧಿ ಸಂಘದ ಅಧ್ಯಕ್ಷ ಕರೋಹಟ್ಟಿ ಮಹದೇವಯ್ಯ, ಯಜಮಾನರಾದ ಶಿವಮಲ್ಲು, ಶಿವರುದ್ರ, ತಾಪಂ ಮಾಜಿ ಸದಸ್ಯ ಬಸವರಾಜು, ನಳಂದ ಬುದ್ಧ ವಿಹಾರದ ಕಾರ್ಯದರ್ಶಿ ಪುಟ್ಟಸ್ವಾಮಿ, ಸೀನಪ್ಪ, ಮುಖಂಡರಾದ ಕೆಂಚಪ್ಪ, ಶ್ರೀಧರ್, ಡಿ.ಎಂ.ರಂಗಸ್ವಾಮಿ, ಪುಟ್ಟರಾಜು, ಶಿವಣ್ಣ, ಗ್ರಾಪಂ ಮಾಜಿ ಸದಸ್ಯ ಎಂ.ಮಿಥುನ್, ಮಲ್ಲರಾಜು, ಸಿದ್ದರಾಜು, ಮಹದೇವಸ್ವಾಮಿ, ಮತ್ತಿತರರಿದ್ದರು.

ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ

ಚುಂಚನಕಟ್ಟೆ ಜಲಪಾತೋತ್ಸವ ಸಂಪನ್ನ



ಜಲಪಾತೋತ್ಸವದಲ್ಲಿ ಕಲಾವಿದರು ನೃತ್ಯ ಮಾಡುತ್ತಿರುವುದು.

ಚುಂಚನಕಟ್ಟೆ, ಡಿ.1– ಸಾಲಿಗ್ರಾಮ ತಾಲೂಕಿನ ಚುಂಚನಕಟ್ಟೆಯಲ್ಲಿ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ನಡೆದ ಜಲಪಾತೋತ್ಸವ ವರ್ಣರಂಜಿತಾ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಭಾನುವಾರ ಸಮಾಪ್ತಿಗೊಂಡಿತು.

ಮೊದಲಿಗೆ ಮೈಸೂರಿನ ರಶ್ಮಿ ಮತ್ತು ತಂಡ ನಡೆಸಿಕೊಟ್ಟ ವಿವಿಧ ಜನಪದ ಹಾಡುಗಳ ಕಾರ್ಯಕ್ರಮ ನೆರೆದಿದ್ದವರ ಮನಸೂರೆಗೊಂಡಿತು. ಯು.ರಾಜೇಶ್ ತಂಡದವರು ಸಿ.ಅಶ್ವಥ್ ಅವರ ನೆನಪಿನಲ್ಲಿ ಕನ್ನಡವೇ ಸತ್ಯ ಕನ್ನಡವೇ ನಿತ್ಯ ಹೆಸರಿನಲ್ಲಿ ಅಶ್ವಥ್ ಅವರ ಕಂಠ ಸಿರಿಯಲ್ಲಿ ಮೂಡಿ ಬಂದಿದ್ದ ಹಾಡುಗಳನ್ನು ಹಾಡುವ ಮೂಲಕ ಜನತೆಯನ್ನು ಮಂತ್ರ ಮುಗ್ದರನ್ನಾಗಿಸಿತು. ಇನ್ನು ಕ್ರಾಂತಿ ಚಿತ್ರದ ಪುಷ್ಪವತಿ ಖ್ಯಾತಿಯ ನಿಮಿತಾ ರತ್ನಾಕರ್ ಮತ್ತು ಕಿರುತೆರೆ ನಟಿ ಅಗ್ನಿಸಾಕ್ಷಿಯ ಪ್ರಿಯಾಂಕಾ ತಂಡದವರು ನಡೆಸಿ ಕೊಟ್ಟ ಸ್ಯಾಂಡಲ್‌ವುಡ್ ನೈಟ್ಸ್ ಕಾರ್ಯಕ್ರಮದಲ್ಲಿ ಸುದೀಪ್ ಅಭಿನಯದ ವಿಕ್ರಾಂತ್ ರೋಣ ಮೂವಿಯ ರಾ.ರಾ. ರುಕ್ಕಮ್ಮ ಮತ್ತು ದರ್ಶನ್ ಅಭಿನಯದ ಕ್ರಾಂತಿ ಚಿತ್ರದ ಪುಷ್ಪವತಿ ಹಾಡಿನ ನೃತ್ಯ ನೋಡುಗರು ಹುಚ್ಚೆದ್ದು ಕುಣಿಯುವಂತೆ ಮಾಡಿತು. ಜೊತೆಗೆ ಖ್ಯಾತ ಸಂಗೀತ ನಿರ್ದೇಶಕ, ಗಾಯಕ ಮಣಿಕಾಂತ್ ಕದ್ರಿ ಮತ್ತು ಹಂಸಿಕಾ ಅಯ್ಯರ್ ತಂಡದವರು ನಡೆಸಿಕೊಟ್ಟ ಸಂಗೀತ ಸಂಜೆ ರಸ ಮಂಜರಿ ಕಾರ್ಯಕ್ರಮದಲ್ಲಿ ಮಣಿಕಾಂತ್ ಕದ್ರಿ ಅವರ ಸಂಗೀತ ಮತ್ತು ವಿವಿಧ ಹಾಡುಗಳ ಗಾಯನಕ್ಕೆ ನೆರೆದಿದ್ದ ಜನರು ಮನ ಸೋತರು.

ಕಾರ್ಯಕ್ರಮದಲ್ಲಿ ಶಾಸಕ ಡಿ.ರವಿಶಂಕರ್ ಮತ್ತು ಸುನೀತಾ ರವಿಶಂಕರ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಈ ವೇಳೆ ಕಾಂಗ್ರೆಸ್ ಮುಖಂಡ ದೊಡ್ಡಸ್ವಾಮೇಗೌಡ, ತಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಎಸಿ.ವಿಜಯಕುಮಾರ್, ತಹಸೀಲ್ದಾರ್‌ಗಳಾದ ಜೆ.ಸುರೇಂದ್ರ ಮೂರ್ತಿ, ನರಗುಂದ, ತಾಲೂಕು ಆರೋಗ್ಯಾಧಿಕಾರಿ ಡಾ.ನಟರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ಮುಖಂಡರಾದ ಮಾದು, ಹೆಚ್.ಜೆ.ರಮೇಶ್, ಗಿರೀಶ್, ಸಿ.ಬಿ.ಸಂತೋಷ್, ಹೆಬ್ಬಾಳು ಸೋಮಪ್ಪ ಸೇರಿದಂತೆ ಇನ್ನಿತರರು ಹಾಜರಿದ್ದರು.

ಮುನ್ನೆಚ್ಚರಿಕೆ ಕ್ರಮವಾಗಿ ಸಾಲಿಗ್ರಾಮ ಸಿಪಿಐ ಕೃಷ್ಣರಾಜು, ಕೆ.ಆರ್.ನಗರ ಠಾಣೆ ಸಿಪಿಐ ಶಿವಪ್ರಕಾಶ್, ಎಸ್‌ಐ ಚೇತನ್ ನೇತೃತ್ವದಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿತ್ತು

ಶಾಂತಿಪುರದಲ್ಲಿ ಹುಲಿ ದಾಳಿಯಿಂದ ರೈತ ಪಾರು

ಹುಲಿ ಸೆರೆಗೆ ಆಗ್ರಹಿಸಿ ರೊಚ್ಚಿಗೆದ್ದ ಗ್ರಾಮಸ್ಥರಿಂದ ಪ್ರತಿಭಟನೆ



ಹುಲಿ ಸೆರೆ ಹಿಡಿಯುವಂತೆ ರೈತರು, ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಹೆಚ್.ಡಿ.ಕೋಟೆ, ಡಿ.1– ಹುಲಿ ದಾಳಿಯಿಂದ ಕೂದಲೆಳೆ ಅಂತರದಲ್ಲಿ ರೈತ ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ಹೆಚ್.ಡಿ.ಕೋಟೆ ಪಟ್ಟಣದ ಸಮೀಪದ ಶಾಂತಿಪುರ ಗ್ರಾಮದಲ್ಲಿ ಭಾನುವಾರ ಬೆಳಗ್ಗೆ ನಡೆದಿದೆ.

ಗ್ರಾಮದ ನಿವಾಸಿ ಸಿದ್ದರಾಜು ಹುಲಿ ದಾಳಿಯಿಂದ ಪಾರಾದವರು. ಈತ ಎಂದಿನಂತೆ ಬೆಳಗ್ಗೆ ತಮ್ಮ ಜಮೀನಿನಲ್ಲಿ ಬೆಳೆಯಲಾಗಿದ್ದ ಫಸಲಿಗೆ ನೀರು ಹಾಯಿಸಲು ತೆರಳಿದ್ದ ವೇಳೆ ಹುಲಿ ಹಂದಿಯನ್ನು ಬೇಟೆಯಾಡಿ ತಿನ್ನುವುದನ್ನು ಗಮನಿಸಿದ್ದಾರೆ. ಈ ವೇಳೆ ಹುಲಿ ಏಕಾಏಕಿ ರೈತ ಸಿದ್ದರಾಜು ಅವರ ಮೇಲೆ ದಾಳಿ ನಡೆಸಿದ್ದು, ಸಿದ್ದರಾಜು ಗಾಬರಿಗೊಂಡು ಕಿರುಚಾಡಿದ್ದರಿಂದ ಅಕ್ಕಪಕ್ಕದ ಜಮೀನುಗಳಲ್ಲಿ ಕೆಲಸ ಮಾಡುತ್ತಿದ್ದ ರೈತರು ಸಹ ಕಿರುಚಿದ್ದರಿಂದ ಹುಲಿ ಸ್ಥಳದಿಂದ ಪರಾರಿಯಾಗಿದೆ.

ಪ್ರತಿಭಟನೆ: ಸಿದ್ದರಾಜು ಮೇಲೆ ಹುಲಿ ದಾಳಿ ನಡೆಸಿರುವ ವಿಷಯ ತಿಳಿದ ಗ್ರಾಮಸ್ಥರು ಹಾಗೂ ರೈತರು, ಹುಲಿ ಸೆರೆ ಹಿಡಿಯುವಂತೆ ಅರಣ್ಯಾಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಕಳೆದ 15 ದಿನಗಳ ಹಿಂದೆ ಹುಲಿ ಸೆರೆ ಹಿಡಿಯುವಂತೆ ಅರಣ್ಯ ಇಲಾಖೆ ಕಚೇರಿ ಎದುರು ಪ್ರತಿಭಟನೆ ಮಾಡಿದರೂ ಅಧಿಕಾರಿಗಳು ಹುಲಿ ಸೆರೆ ಹಿಡಿಯಲು ಹಿಂದೇಟು ಹಾಕುತ್ತಿದ್ದಾರೆ. ಇದೀಗ ಹುಲಿ ಮತ್ತೊಮ್ಮೆ ದಾಳಿ ನಡೆಸಿದೆ. ಇನ್ನಾದರೂ ಹುಲಿ ಸೆರೆ ಹಿಡಿಯಬೇಕು ಎಂದು ಒತ್ತಾಯಿಸಿ ಹುಣಸೂರು–ಬೇಗೂರು ಮುಖ್ಯರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ಸುಮಾರು 3 ಗಂಟೆಗಳ ಕಾಲ ರಸ್ತೆ ತಡೆ ನಡೆಸಿದ್ದರಿಂದ ರಸ್ತೆ ಸಂಚಾರ ಸ್ಥಗಿತಗೊಂಡು ವಾಹನ ಸವಾರರು ಪರದಾಡುವಂತಾಗಿತ್ತು. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಸಿಪಿಐ ಶಬ್ಬೀರ್ ಹುಸೇನ್ ಪ್ರತಿಭಟನೆ ಕೈ ಬಿಡುವಂತೆ ಪ್ರತಿಭಟನಾಕಾರರ ಮನವೊಲಿಸಿದರು. ಇದಕ್ಕೆ ಒಪ್ಪದಿದ್ದಾಗ ಪೊಲೀಸರು ಹಾಗೂ ರೈತರ ನಡುವೆ ಮಾತಿನ ಚಕಮಕಿ ನಡೆಯಿತು. ಇಷ್ಟೆಲ್ಲಾ ಘಟನೆ ನಡೆದರೂ ಸ್ಥಳಕ್ಕಾಗಮಿಸದ ಅರಣ್ಯ ಇಲಾಖೆ ಅಧಿಕಾರಿಗಳ ಧೋರಣೆ ಖಂಡಿಸಿ ರೈತರು, ಗ್ರಾಮಸ್ಥರು ಮತ್ತಷ್ಟು ಪ್ರತಿಭಟನೆ ನಡೆಸಿದರು.

ಅರಣ್ಯಾಧಿಕಾರಿಗಳು ಸ್ಥಳಕ್ಕಾಗಮಿಸಿಲ್ಲ. ಬದಲಿಗೆ ಚಿರತೆ ಕಾರ್ಯಪಡೆ ತಂಡದವರು ಚಿರತೆ ಹಿಡಿಯುವ ಬೋನನ್ನು ತಂದು ಹುಲಿ ಹಿಡಿಯುತ್ತೇವೆ ಎಂದು ಕಣ್ಣೊರೆಸುವ ಕೆಲಸ ಮಾಡುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಹುಲಿ ಸೆರೆ ಹಿಡಿಯುವ ಸಂಬಂಧ ನಾವು ಈಗಾಗಲೇ 2 ಬಾರಿ ಪ್ರತಿಭಟನೆ ನಡೆಸಿದ್ದೇವೆ. ನಮ್ಮ ಸಮಸ್ಯೆಯನ್ನು ಅರಣ್ಯ ಇಲಾಖೆ ಕೇಳುತ್ತಿಲ್ಲ ಶಾಸಕ ಅನಿಲ್ ಸಹ ಈ ಬಗ್ಗೆ ಕ್ರಮ ಕೈಗೊಂಡಿಲ್ಲ. ಅರಣ್ಯ ಇಲಾಖೆಯವರು ನಮ್ಮ ತಾಳ್ಮೆ ಪರೀಕ್ಷೆ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಹುಲಿ ಸೆರೆ ಹಿಡಿಯದಿದ್ದಲ್ಲಿ ತಾಲೂಕು ಆಡಳಿತ ಸೌಧದ ಎದುರು ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

> ಬೋಚಿಕಟ್ಟೆ, ಶಾಂತಿಪುರ, ಟೈಗರ್ ಬ್ಲಾಕ್, ಪಟ್ಟಣಕ್ಕೆ ಸೇರಿದ ಸ್ಟೇಡಿಯಂ ಬಡಾವಣೆ ಸಮೀಪದ ಜಮೀನುಗಳಲ್ಲಿ ಕಳೆದ ನಾಲ್ಕೈದು ತಿಂಗಳಿಂದ ಹುಲಿ ಕಾಣಿಸಿಕೊಂಡು 3 ಬಾರಿ ರೈತರ ಮೇಲೆ ದಾಳಿ ನಡೆಸಿದೆ. ರೈತರು ಸಾಕಿರುವ ಮೇಕೆ, ಹಸುಗಳನ್ನು ಕೊಂದು ಹಾಕುತ್ತಿದೆ. ಹುಲಿ ಸೆರೆ ಹಿಡಿಯುವಂತೆ ಹಲವು ಬಾರಿ ಮನವಿ ಮಾಡಿದರೂ, ಅರಣ್ಯ ಇಲಾಖೆ ನಿರ್ಲಕ್ಷ್ಯ ತೋರುತ್ತಿದೆ. ರೈತರು ಜಮೀನಿಗೆ ತೆರಳಲು ಭಯ ಪಡುತ್ತಿದ್ದಾರೆ. ರೈತರನ್ನು ಬಲಿ ತೆಗೆದುಕೊಂಡ ಮೇಲೆ ರೈತರಿಗೆ ಪರಿಹಾರದ ಚೆಕ್ ನೀಡಲು ಬರುತ್ತೀರಾ ಶಾಸಕ ಅನಿಲ್ ಅವರೇ ಸ್ವಜವಾಬ್ದಾರಿ ತೆಗೆದುಕೊಂಡು ಹುಲಿ ಸೆರೆ ಹಿಡಿಯುವಂತೆ ಸೂಚನೆ ನೀಡಿ.
>
> -ಸಿದ್ದರಾಜು, ಹುಲಿ ದಾಳಿಯಿಂದ ಪಾರಾದ ರೈತ.

ಈ ವೇಳೆ ಮತ್ತೆ ಸಿಪಿಐ ಶಬ್ಬೀರ್ ಹುಸೇನ್ ಅವರು ಹುಲಿ ಸೆರೆ ಹಿಡಿಯುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ಪ್ರತಿಭಟನೆ ಕೈ ಬಿಟ್ಟರು. ಪ್ರತಿಭಟನೆಯಲ್ಲಿ ಕುಮಾರ, ಗೋವಿಂದ, ರವಿ ನಾಯಕ, ಪಳನಿಸ್ವಾಮಿ, ಲೋಕೇಶ್, ಸಿದ್ದರಾಜು, ಸೋಮಣ್ಣ, ಇವಾನ್ ರಾಜ್, ಮಾದೇಶ್, ಸಿಗನಾಯಕ, ಶಿವಸೋಮಣ್ಣ, ರಘು, ವಿಜಿ, ರತ್ನಮ್ಮ, ರುಕ್ಮಿಣಮ್ಮ, ಚೌಡಮ್ಮ, ಜಯಮ್ಮ, ಭಾಗ್ಯಮ್ಮ, ರೈತರು ಭಾಗವಹಿಸಿದ್ದರು.

ರಾಜ್ಯಮಟ್ಟದ ನೃತ್ಯ ಸ್ಪರ್ಧೆ ಪೋಸ್ಟರ್ ಬಿಡುಗಡೆ



ರಾಜ್ಯಮಟ್ಟದ ನೃತ್ಯ ಸ್ಪರ್ಧೆಯ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

ತಿ.ನರಸೀಪುರ ಡಿ.1– ತಾಲೂಕಿನ ವಾಟಾಳು ಮಠದ ಶ್ರೀಗಳ 76ನೇ ಜನ್ಮ ವರ್ಧಂತೋತ್ಸವದ ಅಂಗವಾಗಿ ಪಟ್ಟಣದ ಶ್ರೀಶಾರದಾ ಡಾನ್ಸ್ ಅಕಾಡೆಮಿ ಹಮ್ಮಿಕೊಂಡಿರುವ 3ನೇ ವರ್ಷದ ರಾಜ್ಯಮಟ್ಟದ ನೃತ್ಯ ಸ್ಪರ್ಧೆಯ ಪೋಸ್ಟರ್‌ಗಳನ್ನು ವಾಟಾಳು ಮಠಾಧ್ಯಕ್ಷ ಡಾ.ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಬಿಡುಗಡೆಗೊಳಿಸಿದರು.

ವಾಟಾಳು ಸೂರ್ಯ ಸಿಂಹಾಸನ ಮಠದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಿ ಕಾರ್ಯಕ್ರಮಕ್ಕೆ ಶುಭ ಕೋರಿದರು.

ವಿದ್ಯೋದಯ ಶಿಕ್ಷಣ ಸಂಸ್ಥೆ ಉಪನ್ಯಾಸಕ ಕುಮಾರಸ್ವಾಮಿ ಮಾತನಾಡಿ, ವಾಟಾಳು ಮಠಾಧ್ಯಕ್ಷ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿಯವರ 76ನೇ ಜನ್ಮ ವರ್ಧಂತೋತ್ಸವ ಪ್ರಯುಕ್ತ ಪಟ್ಟಣದ ಮಹದೇಶ್ವರ ಕಲ್ಯಾಣ ಮಂಟಪದಲ್ಲಿ ಡಿ.25 ರಂದು ಶ್ರೀ ಶಾರದಾ ಡ್ಯಾನ್ಸ್ ಅಕಾಡೆಮಿ ವತಿಯಿಂದ ನೃತ್ಯ ಸ್ಪರ್ಧೆ ನಡೆಯಲಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ 50 ಸಾವಿರ, ದ್ವಿತೀಯ 30 ಸಾವಿರ ಹಾಗೂ ತೃತೀಯ 20 ಸಾವಿರ ಬಹುಮಾನ ನೀಡಲಾಗುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸುವವರು 9611555419 ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದರು.

ಅಖಿಲ ಭಾರತ ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್ ಎಂ.ಆರ್. ಪ್ರಕಾಶ್ ಮಾತನಾಡಿದರು. ಈ ವೇಳೆ ಸಮಾಜ ಸೇವಕ ಮಾದೇಶ್, ಮೆಡಿಕಲ್ ಕುಮಾರ್, ಸೇವಾಶ್ರಯ ಫೌಂಡೇಶನ್ ಅಧ್ಯಕ್ಷ ಮಣಿಕಂಠರಾಜ್‌ಗೌಡ, ಡ್ಯಾನ್ಸ್ ಬಸವರಾಜು, ತೋಂಟೇಶ್, ಗೌಡರ ಜಯಸ್ವಾಮಿ, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ರಾಜೇಶ್, ಶಿವು ಇತರರಿದ್ದರು.

ಹುಣಸೂರಲ್ಲಿ ಪತ್ರಿಕಾ ದಿನಾಚರಣೆ



ಹುಣಸೂರಲ್ಲಿ ಪತ್ರಿಕಾ ದಿನಾಚರಣೆ ನಡೆಯಿತು.

ಹುಣಸೂರು, ಡಿ.1– ಪತ್ರಕರ್ತರ ವೃತ್ತಿ ಸುಲಭದ ಮಾತಲ್ಲ. ಆದರೆ ಮಹಾತ್ಮ ಗಾಂಧಿ ಮತ್ತು ಡಾ.ಅಂಬೇಡ್ಕರ್ ಕೂಡ ಪತ್ರಕರ್ತರಾಗಿದ್ದರು ಎಂಬುದು ಸಮಾಧಾನದ ವಿಷಯ ಎಂದು ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪತ್ರಕರ್ತರ ಬದುಕು ದುಸ್ಥಿತಿಯಲ್ಲಿದೆ. ಈಗಾಗಲೇ ಸೋಷಿಯಲ್ ಮೀಡಿಯಾಗಳಿಂದ ಮುದ್ರಣಕ್ಕೆ ಕುತ್ತು ಬಂದಿದ್ದು, ಪತ್ರಿಕೆ ಓದುಗರ ಸಂಖ್ಯೆ ಗಣನೀಯ ಇಳಿಮುಖವಾಗಿದೆ ಎಂದರು.

ಪತ್ರಕರ್ತರು ಈ ಪೈಪೋಟಿ ನಡುವೆ ಉಳಿದುಕೊಳ್ಳಬೇಕಾದರೆ ನಿಮ್ಮ ಬರಹಗಳು ನೈಜತೆ ಮತ್ತು ಗಟ್ಟಿತನ ಬೇರೂರಬೇಕಿದೆ. ಅದೇ ರೀತಿ ಗ್ರಾಮೀಣ ಪತ್ರಕರ್ತರು ಪ್ರಭುದ್ಧರಾಗದಿದ್ದರೆ ಬೇರೆಯವರ ನಗೆಪಾಟಿಗೆ ಗುರಿಯಾಗಬೇಕಾಗುತ್ತದೆ ಎಂದರು. ಮೈ.ಜಿ.ಪ.ಸಂಘದ ಪ್ರಧಾನ ಕಾರ್ಯದರ್ಶಿ ನಾರಾಯಣ್ ಮಾತನಾಡಿ, ಮೈಸೂರು ಜಿಲ್ಲೆಯ ಮಾದರಿ ಸಂಘವಾಗಿ ಹುಣಸೂರು ಕೆಲಸದ ಮೂಲಕ ಗುರುತಿಸಿಕೊಂಡಿದೆ. ಆದರೆ ಸ್ವಂತ ಕಟ್ಟದ ಅವಶ್ಯಕತೆ ಇದ್ದು, ಅದಕ್ಕೆ ಜಿಲ್ಲೆಯ ಪರಿಪೂರ್ಣ ಸಹಕಾರವಿದೆ ಎಂದರು.

ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಆರ್. ಕೃಷ್ಣಕುಮಾರ್ ಮಾತನಾಡಿದರು. ಕಾರ್ಯಕ್ರಮದಲ್ಲಿ, ಮೈ.ಜಿ.ಪ.ಸಂ.ಗ್ರಾ.ಕಾ. ದಾರಾ ಮಹೇಶ್, ಮೈ.ಜಿ.ಪ.ಸ. ಉಪಾಧ್ಯಕ್ಷ ಹನಗೋಡು ವೆಂಕಟಪ್ಪ, ಕಾ.ಸ.ಮಿ.ಸದಸ್ಯ ಮೋಹನ್, ತಾಲೂಕು ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಎನ್.ಮಹದೇವ್, ಸಹ ಕಾರ್ಯದರ್ಶಿ ಶಂಕರ್, ಉಪಾಧ್ಯಕ್ಷ ಚಲುವರಾಜ್, ಖಜಾಂಚಿ ಯೋಗಿಶ್, ಕಾರ್ಯಕಾರಿ ಸಮಿತಿ ಸದಸ್ಯರಾದ ಹೆಚ್.ಕೆ.ಕೃಷ್ಣ, ಕೆ.ಕೃಷ್ಣ, ದಯಾಕರ್, ಅರುಣ್ ಕುಮಾರ್, ಕೆ.ಪ್ರತಾಪ್, ಹನಗೋಡು ದೀಪು, ಪ್ರದೀಪ್ ಹಾಗೂ ಶಿವಕುಮಾರ್ ವಿ.ರಾವ್, ಸ್ವಾಮಿಗೌಡ, ಸದಸ್ಯರು ಇದ್ದರು.

ಹೊಮ್ಮರಗಳ್ಳಿಯಲ್ಲಿ ಕನ್ನಡ ರಾಜ್ಯೋತ್ಸವ



ಹೆಚ್.ಡಿ.ಕೋಟೆ ತಾಲೂಕಿನ ಹೊಮ್ಮರಗಳ್ಳಿಯಲ್ಲಿ ಬಸವೇಶ್ವರ ಗೆಳೆಯರ ಬಳಗದಿಂದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು. ಶಾಸಕ ಅನಿಲ್, ಮುಖಂಡರಾದ ನಂದೀಶ್, ಮಹೇಶ್‌ಗೌಡ, ಪಾಪಣ್ಣೆಗೌಡ, ಪ್ರದೀಪ್‌ಗೌಡ, ಕಬ್ಬು ಬೆಳೆಗಾರರ ಸಂಘದ ತಾಲೂಕು ಅಧ್ಯಕ್ಷ ರಾಜೇಶ್ ಸೇರಿದಂತೆ ಇತರರಿದ್ದರು.

ಮಾಲಂಗಿ ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಪಿರಿಯಾಪಟ್ಟಣ ತಾಲೂಕಿನ ಮಾಲಂಗಿ ಗ್ರಾಪಂ ನೂತನ ಅಧ್ಯಕ್ಷೆಯಾಗಿ ಉಮಾದೇವಿ, ಉಪಾಧ್ಯಕ್ಷೆಯಾಗಿ ಭಾನುಮತಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ವೇಳೆ ಸದಸ್ಯರಾದ ಮಾದಯ್ಯ, ವಸಂತ, ಸಾಯಿನಾಭಾನು, ರವಿ, ದೇವೇಂದ್ರ, ಹರೀಶ, ಕಮಲಮ್ಮ, ಪೂವಮ್ಮ, ಮುಖಂಡರಾದ ನಾಗರಾಜ್, ಸುರೇಶ್, ಚಂದ್ರು ಇನ್ನಿತರರಿದ್ದರು.

ದೇವನೂರಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

ಯಾತ್ರಿ ಭವನ ಕಟ್ಟಡ ಲೋಕಾರ್ಪಣೆ, ರಸ್ತೆ, ಮಠದ ಮೂಲ ಸೌಲಭ್ಯ ಕಾಮಗಾರಿಗೆ ಗುದ್ದಲಿ ಪೂಜೆ



ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಹೆಚ್.ಸಿ.ಮಹದೇವಪ್ಪ ಚಾಲನೆ ನೀಡಿದರು.

ನಂಜನಗೂಡು, ಡಿ.1– ತಾಲೂಕಿನ ದೇವನೂರು ಗುರು ಮಲ್ಲೇಶ್ವರ ದಾಸೋಹ ಮಠಕ್ಕೆ ಲಕ್ಷಾಂತರ ಭಕ್ತರು ಆಗಮಿಸುತ್ತಿದ್ದರೂ ನಿರೀಕ್ಷಿತ ಅಭಿವೃದ್ಧಿ ಕಂಡಿರಲಿಲ್ಲ. ಆದ್ದರಿಂದ ಶ್ರೀಮಠದ ಅಭಿವೃದ್ಧಿಗಾಗಿ ಮೂಲ ಸೌಲಭ್ಯ ಕಾಮಗಾರಿ, ಯಾತ್ರಿ ಭವನ, ದೊಡ್ಡಕವಲಂದೆ– ದೇವನೂರು ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ. ಮಹದೇವಪ್ಪ ತಿಳಿಸಿದರು.

ತಾಲೂಕಿನ ದೇವನೂರು ಗ್ರಾಮದಲ್ಲಿ ಭಾನುವಾರ ಗುರು ಮಲ್ಲೇಶ್ವರ ದಾಸೋಹ ಮಠದ ಯಾತ್ರಿ ಭವನ ಕಟ್ಟಡ ಲೋಕಾರ್ಪಣೆಗೊಳಿಸಿ, 3.5 ಕೋಟಿ ವೆಚ್ಚದಲ್ಲಿ ದೇವನೂರಿನಿಂದ ಕೌಲಂದೆವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯ ದೇವನೂರು ಗುರು ಮಲ್ಲೇಶ್ವರ ದಾಸೋಹ ಮಠಕ್ಕೆ ಲಕ್ಷಾಂತರ ಭಕ್ತರು ಶ್ರದ್ಧಾಭಕ್ತಿಗಳಿಂದ ನಡೆದುಕೊಳ್ಳುತ್ತಾರೆ. ಈ ಭಾಗದ ಭಕ್ತರೊಂದಿಗೆ ತಾರತಮ್ಯ, ಭೇದ ಭಾವ ತೊರೆದೇ ಜನರು ಒಂದಾಗಿ ಬದುಕಬೇಕೆಂಬುದು ಗುರು ಮಲ್ಲೇಶ್ವರರ ಆಶಯವಾಗಿತ್ತು. ಮಠ ನೂರಾರು ವರ್ಷಗಳಿಂದ ನಿತ್ಯ ಅನ್ನ ದಾಸೋಹದಿಂದ ಪ್ರಖ್ಯಾತಿ ಹೊಂದಿದೆ. ಗ್ರಾಮಸ್ಥರ ಆಶಯದಂತೆ ಮಠಕ್ಕೆ ಮೂಲ ಸೌಲಭ್ಯ ಕಲ್ಪಿಸಲು ಹೆಚ್ಚಿನ ಅನುದಾನ ನೀಡಿ ಕಾಮಗಾರಿ ನಡೆಸಲಾಗಿದೆ. 3.5 ಕೋಟಿ ವೆಚ್ಚದಲ್ಲಿ ದೊಡ್ಡಕವಲಂದೆ–ದೇವನೂರು ಸಂಪರ್ಕ ರಸ್ತೆ ಅಭಿವೃದ್ಧಿಗೆ ಚಾಲನೆ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ದೇವನೂರು ಏತ ನೀರಾವರಿ ಯೋಜನೆಗೆ 90 ಕೋಟಿ ಅನುದಾನ ಮೀಸಲಿಟ್ಟಿದ್ದಾರೆ. ಯೋಜನೆ ಅನುಷ್ಠಾನವಾದರೆ ಅರಸನ ಕೆರೆ ಸೇರಿದಂತೆ ಈ ಭಾಗದ ಬಹುತೇಕ ಗ್ರಾಮಗಳ ಕೆರೆಗಳು ಭರ್ತಿಯಾಗಿ ಕೃಷಿಗೆ ಅನುಕೂಲವಾಗಲಿದೆ. ದೇವನೂರು ಮಠ ನನಗೆ ಶೈಕ್ಷಣಿಕ, ರಾಜಕೀಯವಾಗಿ ಬೆಳೆಯಲು ಸಹಕಾರಿಯಾಗಿದೆ. ಜೊತೆಗೆ ನನಗೆ ಹೆಚ್ಚು ಶಕ್ತಿ ತುಂಬಿದೆ. ಇದರ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಬಿಡುಗಡೆಗೊಳಿಸಲು ಶ್ರಮಿಸುತ್ತೇನೆ. ಜೊತೆಗೆ ನಂಜನಗೂಡು ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಬಸವ ಭವನ ಕಾಮಗಾರಿ ಪೂರ್ಣಗೊಳಿಸಲು ಸಿಎಂ ಬಳಿ ಹೆಚ್ಚುವರಿಯಾಗಿ 3 ಕೋಟಿ ಅನುದಾನ ಕೇಳಿದ್ದು, ಶೀಘ್ರ ಅನುದಾನ ಬಿಡುಗಡೆಗೊಳಿಸಿ ಪೂರ್ಣಗೊಳಿಸಲು ಶ್ರಮಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ದೇವನೂರು ಗುರುಮಲ್ಲೇಶ್ವರ ಮಠದ ಮಹಾಂತ ಸ್ವಾಮೀಜಿ, ಮಾಜಿ ಶಾಸಕ ಕೇಶವಮೂರ್ತಿ, ಮುಖಂಡರಾದ ಬುಲೆಟ್ ಮಹದೇವಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಜಿಪಂ ಮಾಜಿ ಸದಸ್ಯ ಚೋಳರಾಜು, ದೇವನೂರು ಗ್ರಾಪಂ ಅಧ್ಯಕ್ಷ ಮಂಜು, ಉಪಾಧ್ಯಕ್ಷೆ ಶಶಿಕಲಾ, ಕುರುಬರ ಸಂಘದ ಅಧ್ಯಕ್ಷ ಕೆಂಪಣ್ಣ, ಮುಖಂಡರಾದ ಪರಶಿವಮೂರ್ತಿ, ನಟರಾಜು, ಶಿವನಾಗಪ್ಪ, ಶಿವಪ್ರಕಾಶ್, ಕೆಆರ್‌ಐಡಿಎಲ್ ಕಾರ್ಯಪಾಲಕ ಅಭಿಯಂತರ ಎಸ್.ಟಿ.ತಿಪ್ಪಾರೆಡ್ಡಿ, ಎಇಇ ಶೋಭಾ, ಎಇ ಲೋಕೇಶ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಪ್ರಭುಸ್ವಾಮಿ, ನಗರಸಭೆ ಸದಸ್ಯ ಯೋಗೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

> ಈಗಾಗಲೇ ದೇವನೂರು ಏತ ನೀರಾವರಿ ಯೋಜನೆ ಕಾಮಗಾರಿ ಆರಂಭಗೊಳ್ಳಬೇಕಾಗಿತ್ತು. ಗುತ್ತಿಗೆದಾರರೊಬ್ಬರು ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದರಿಂದ ವಿಳಂಭವಾಗಿದೆ. ಮುಂದಿನ ತಿಂಗಳು ಕಾಮಗಾರಿ ಆರಂಭಗೊಳ್ಳಲಿದೆ. ಬದನವಾಳು ಖಾದಿ ಗ್ರಾಮೋದ್ಯೋಗ ಕೇಂದ್ರದ ಅಭಿವೃದ್ಧಿಗಾಗಿ ಅನುಷ್ಠಾನ ಸಮಿತಿ 40 ಕೋಟಿ ಅಂದಾಜು ವೆಚ್ಚ ತಯಾರಿಸಲಾಗಿದ್ದು, ಸರ್ಕಾರಕ್ಕೆ ಸಲ್ಲಿಸಲಾಗಿದೆ. ನಂಜನಗೂಡಿನ ಬಸವ ಭವನ ಕಾಮಗಾರಿಗೆ ಸಚಿವ ಮಹದೇವಪ್ಪನವರು ಹೆಚ್ಚಿನ ಅನುದಾನ ನೀಡಿ ಕಾಮಗಾರಿ ಪೂರೈಸಿಕೊಡಬೇಕು.
>
> - ದರ್ಶನ್, ಶಾಸಕ.

ಮೈಸೂರು ಮಿತ್ರ ಸೋಮವಾರ 2 ಡಿಸೆಂಬರ್ 2024

ಸಂವಿಧಾನದ ಆಶಯ ಉಳಿಯಲು ಸಿದ್ದರಾಮಯ್ಯ ನಾಯಕತ್ವ ಗಟ್ಟಿಯಾಗಬೇಕು

ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಅಭಿಮತ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಭಾನುವಾರ ಜಿಲ್ಲಾ ಕಾಂಗ್ರೆಸ್ ಕಾರ್ಯಕಾರಿಣಿ ಹಾಗೂ ಹಾಸನದಲ್ಲಿ ಡಿ.5ರಂದು ನಡೆಯುವ 'ಸ್ವಾಭಿಮಾನಿ ಸಮಾವೇಶ'ದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿದರು.

ಮೈಸೂರು, ಡಿ.1(ಎಂಟಿವೈ)– ರಾಜ್ಯದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನದ ಆಶಯ ಉಳಿಯಬೇಕಾದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಾಯಕತ್ವ ಮತ್ತಷ್ಟು ಗಟ್ಟಿಯಾಗಿ ಉಳಿಯಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಭಾನುವಾರ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಆಯೋಜಿಸಿದ್ದ ಜಿಲ್ಲಾ ಕಾಂಗ್ರೆಸ್ ಕಾರ್ಯಕಾರಿಣಿ ಹಾಗೂ ಹಾಸನದಲ್ಲಿ ಡಿ.5ರಂದು ನಡೆಯುವ ಸ್ವಾಭಿಮಾನಿ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸಂವಿಧಾನದ ಆಶಯ ಉಳಿಯಬೇಕಾದರೆ ಸಿಎಂ ಸಿದ್ದರಾಮಯ್ಯ ಅವರ ನಾಯಕತ್ವ ಉಳಿಯಬೇಕು. ಅವರ ನಾಯಕತ್ವ ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಹಾಸನದಲ್ಲಿ ಸ್ವಾಭಿಮಾನಿ ಸಮಾವೇಶ ಆಯೋಜಿಸಲಾಗಿದೆ. ಈ ಸಮಾವೇಶಕ್ಕೆ ಮೈಸೂರು ಭಾಗದಿಂದ ಹೆಚ್ಚಿನ ಸಂಖ್ಯೆಯಲ್ಲಿ ಮುಖಂಡರು, ಕಾರ್ಯಕರ್ತರು ಪಾಲ್ಗೊಳ್ಳಬೇಕು. ಈ ಸಮಾವೇಶ ಯಶಸ್ವಿಗೊಳಿಸಿದರೆ ಸರ್ಕಾರ ಮತ್ತಷ್ಟು ಜನಪರವಾಗಿ ಕಾರ್ಯಕ್ರಮ ರೂಪಿಸಲು ನೆರವಾಗಲಿದೆ. ಅಲ್ಲದೆ, ಪ್ರತಿದಿನ ಸರ್ಕಾರದ ವಿರುದ್ಧ ಸುಳ್ಳು ಆರೋಪ ಮಾಡುತ್ತಿರುವ ಕೋಮುವಾದಿ ಶಕ್ತಿಗಳಿಗೂ ದಿಟ್ಟ ಉತ್ತರ ನೀಡಿದಂತಾಗುತ್ತದೆ ಎಂದರು.

ಕಾರ್ಯಕಾರಿಣಿ: ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದ ಕಾಂಗ್ರೆಸ್, ಚಳವಳಿಯ ಹಿನ್ನೆಲೆಯಿಂದ ಬಂದ ಪಕ್ಷವಾಗಿದೆ. ಅಂದು ಮಹಾತ್ಮ ಗಾಂಧೀಜಿ, ಇಂದಿರಾಗಾಂಧಿಯಂತೆ ಇಂದು ರಾಹುಲ್ ಗಾಂಧಿ ಹಾಗೂ ಪಕ್ಷದ ಧುರೀಣರು ದನಿಯಿಲ್ಲದವರಿಗೆ ದನಿ ನೀಡುವ ಕಾಯಕದಲ್ಲಿ ತೊಡಗಿದ್ದಾರೆ. ಅಲ್ಲದೆ, ಸಂವಿಧಾನದ ಆಶಯ ರಕ್ಷಿಸುವುದೇ ನಮ್ಮ ಮೊದಲ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾ ಕಾರ್ಯಕಾರಿಣಿ ಗಂಭೀರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಸಂವಿಧಾನಕ್ಕೆ ಪೂರಕವಾದ ಮನವಿಗಳನ್ನು ಸಲ್ಲಿಸಬೇಕು. ನಿಮ್ಮ ಮನವಿ ಕೋರಿಕೆ ಸಂವಿಧಾನದ ಚೌಕಟ್ಟಿನಲ್ಲಿ ಹಿಂದುಳಿದವರ ಮೂಲ ಸೌಕರ್ಯ ನೀಡುವಂತೆ ಹಾಗೂ ಸಮ ಸಮಾಜ ನಿರ್ಮಿಸುವಂತಿರಬೇಕೆಂದು ಎಂದು ಸಲಹೆ ನೀಡಿದರು.

ಪಶು ಸಂಗೋಪನೆ ಇಲಾಖೆ ಸಚಿವ ಕೆ.ವೆಂಕಟೇಶ್ ಮಾತನಾಡಿ, ಹಾಸನದಲ್ಲಿ ನಡೆಯುತ್ತಿರುವ ಸಿದ್ದರಾಮಯ್ಯ ಸ್ವಾಭಿಮಾನಿ ಸಮಾವೇಶದ ಬಗ್ಗೆ ವಿರೋಧ ಪಕ್ಷದವರಿಗೆ ಆತಂಕ ಹುಟ್ಟಿಸಿದೆ. ಇದರಿಂದ ಗೊಂದಲವನ್ನುಂಟು ಮಾಡುತ್ತಿದ್ದಾರೆ. ಸಮಾವೇಶ ಕುರಿತಂತೆ ಯಾರು ಬೇಕಾದರೂ ಅನಾಮಧೇಯ ಪತ್ರ ಬರೆಯಬಹುದು. ಗೊಂದಲ ಸೃಷ್ಟಿಸಲು ಬಿಜೆಪಿಯವರೇ ಅನಾಮಧೇಯ ಪತ್ರ ಬರೆದಿರಬಹುದು. ಈ ಹಿನ್ನೆಲೆಯಲ್ಲಿ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ. ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶದಲ್ಲಿ ಪಾಲ್ಗೊಳ್ಳಬೇಕು ಎಂದರು.

ರಾಜ್ಯದಲ್ಲಿ ಅಧಿಕಾರ ಕಳೆದುಕೊಂಡಿರುವ ಬಿಜೆಪಿ ಇದೀಗ ಹತಾಶೆಗೊಂಡಿದೆ. ಬಿಜೆಪಿ ನಾಯಕರೇ ಬಹಿರಂಗವಾಗಿ ಬಡಿದಾಡಿಕೊಳ್ಳುತ್ತಿದ್ದಾರೆ. ಇತ್ತೀಚೆಗೆ ನಡೆದ ಮೂರು ಕ್ಷೇತ್ರಗಳ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿರುವುದು ಬಿಜೆಪಿಗೆ ಭಯ ಉಂಟುಮಾಡಿದೆ.

ತೊಡೆ ತಟ್ಟುವುದಕ್ಕಲ್ಲ ಕಾಂಗ್ರೆಸ್ ಸಮಾವೇಶ ಹಾಸನ ಜಿಲ್ಲೆಯಲ್ಲಿ ಮಾಡುತ್ತಿರುವುದು ಆ ಭಾಗದಲ್ಲಿ ನಮ್ಮ ಕಾರ್ಯಕರ್ತರಿಗೆ ಶಕ್ತಿ ತುಂಬುವುದರೊಂದಿಗೆ, ಮುಂಬರುವ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಶ್ರಮಿಸುವಂತೆ ಪ್ರೇರಣೆ ನೀಡುವ ಉದ್ದೇಶದಿಂದ ಈ ಸಮಾವೇಶ ಮಾಡುತ್ತಿದ್ದೇವೆ ಹೊರತು ಯಾರ ವಿರುದ್ಧವು ತೊಡೆ ತಟ್ಟುವುದಕ್ಕಾಗಿ ಅಲ್ಲ. ಆ ಭಾಗದಲ್ಲಿ ಪಕ್ಷವನ್ನು ಮತ್ತಷ್ಟು ಸಂಘಟಿಸಲು ಕಾರ್ಯಕರ್ತರನ್ನು ಹುರಿದುಂಬಿಸುವ ಉದ್ದೇಶ ಸಮಾವೇಶದ್ದಾಗಿದೆ. ಮೈಸೂರಿನಿಂದ 1300 ಬಸ್ ವ್ಯವಸ್ಥೆ ಮಾಡಿದ್ದು, ಬೇರೆ ಯಾವುದೇ ವ್ಯವಸ್ಥೆ ಜಿಲ್ಲಾ ಕಾಂಗ್ರೆಸ್ ಕೇಳಿದರೂ ಮಾಡಿಕೊಡಲಾಗುವುದು ಎಂದು ತಿಳಿಸಿದರು.

ವಿರೋಧಿಸುವವರೇ ಹೆಚ್ಚು: ರಾಜ್ಯದಲ್ಲಿ ಒಳ್ಳೆಯ ಆಡಳಿತ ನೀಡಿ, ಉತ್ತಮ ಕಾರ್ಯಕ್ರಮವನ್ನು ಜಾರಿಗೊಳಿಸಿದರೂ ನಮ್ಮ ಪರವಾಗಿ ಇರುವ ಮಾಧ್ಯಮಗಳ ಸಂಖ್ಯೆ ಕಡಿಮೆ ಇದೆ. ಸರ್ಕಾರವನ್ನು ವಿರೋಧಿಸುವ ಮಾಧ್ಯಮಗಳೇ ಹೆಚ್ಚಾಗಿವೆ. ದೃಶ್ಯ ಮಾಧ್ಯಮದಲ್ಲಿ ಬರುವುದನ್ನೇ ನಂಬಬೇಡಿ. ಮೈಸೂರು ಜಿಲ್ಲೆ ಜವಾಬ್ದಾರಿ ಸಿಎಂ ಅವರೇ ತೆಗೆದುಕೊಂಡಿದ್ದಾರೆ. ಪ್ರತಿ ತಾಲೂಕಿನ ವಿಚಾರ ಅವರಿಗೆ ಗೊತ್ತಿದೆ. ಇಲ್ಲಿ ಅವಕಾಶ ಸಿಗಲಿಲ್ಲ ಎಂದು ಹೊರಗಡೆ ಹೋದರೆ ಏನೂ ಪ್ರಯೋಜನ ಆಗುವುದಿಲ್ಲ. ಶೀಘ್ರದಲ್ಲೇ ಉಳಿದ ಅಧಿಕಾರ ಹಂಚಿಕೆಯಾಗಿ ಅವಕಾಶ ಆಗಲಿದೆ. ಜಿಲ್ಲೆಗೆ ಹೆಚ್ಚಿನ ಅವಕಾಶ ಮಾಡಿಕೊಡಿ ಎಂದಿದ್ದೇವೆ. ಅಧಿವೇಶನದ ವೇಳೆಗೆ ಪಟ್ಟಿ ಹೊರಬರಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಮಾಜಿ ಸಚಿವ ಉಗ್ರಪ್ಪ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮಾಜಿ ಶಾಸಕ ಹೆಚ್.ಪಿ. ಮಂಜುನಾಥ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪ ಅಮರನಾಥ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿಜೆ ವಿಜಯಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ಡಾ.ಬಿ.ಜೆ.ವಿಜಯಕುಮಾರ್ ವಿಧಾನ ಪರಿಷತ್‌ಗೆ ನಾಮ ನಿರ್ದೇಶನ

ಜಿಲ್ಲಾ ಕಾಂಗ್ರೆಸ್ ಕಾರ್ಯಕಾರಿಣಿ ನಿರ್ಣಯ



ಕಾಂಗ್ರೆಸ್ ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡುವಂತೆ ಕಾರ್ಯಕರ್ತರು ಒತ್ತಾಯಿಸುತ್ತಿರುವುದು.

ಮೈಸೂರು, ಡಿ.1(ಎಂಟಿವೈ)– ಮೈಸೂರು ನಗರ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ನಡೆದ ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ. ಬಿ.ಜೆ.ವಿಜಯ್ ಕುಮಾರ್ ಅವರನ್ನು ವಿಧಾನಪರಿಷತ್‌ಗೆ ನಾಮ ನಿರ್ದೇಶನ ಮಾಡುವಂತೆ ನಿರ್ಣಯ ಕೈಗೊಳ್ಳಲಾಯಿತು.

ಜಿಲ್ಲಾ ಕಾರ್ಯಕಾರಿಣಿ ಸಭೆಯಲ್ಲಿ ಬಿ.ಜೆ.ವಿಜಯ್‌ಕುಮಾರ್ ಅವರನ್ನು ವಿಧಾನಪರಿಷತ್ ಸದಸ್ಯರನ್ನಾಗಿ ಮಾಡಬೇಕು ಎಂಬ ಒಂದಂಶ ನಿರ್ಣಯ ಮಂಡಿಸುತ್ತಿದ್ದಂತೆ ವಿಜಯ್‌ಕುಮಾರ್ ಬೆಂಬಲಿಗರು ಬೆಂಬಲ ವ್ಯಕ್ತಪಡಿಸಿದರು. ಬಳಿಕ ಭಾಷಣ ಆರಂಭಿಸಿದ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಉಪ ಚುನಾವಣೆಯ ಮೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿದ ಮತದಾರರಿಗೆ ಅಭಿನಂದನೆ ಸಲ್ಲಿಸಲು ಈ ಕಾರ್ಯಕಾರಿಣಿ ನಿರ್ಣಯ ಕೈಗೊಳ್ಳಬೇಕೇ ಹೊರತು, ಇಂತಹವರಿಗೆ ಸಚಿವ ಸ್ಥಾನ, ವಿಧಾನಪರಿಷತ್ ಸ್ಥಾನ ಕೊಡಿ ಎಂದು ಕೇಳುವಂತಿಲ್ಲ. ಯಾರಿಗೆ ಯಾವ ಸ್ಥಾನಮಾನ ನೀಡಬೇಕು ಎಂಬುದನ್ನು ಪಕ್ಷ ಸೂಕ್ತ ಸಮಯದಲ್ಲಿ ನಿರ್ಣಯ ಕೈಗೊಳ್ಳಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಆದರೆ, ಸಭೆಯಲ್ಲಿ ಪಾಲ್ಗೊಂಡಿದ್ದ ಕೆಲ ಕಾರ್ಯಕರ್ತರು ಮೇಲೆದ್ದು ನೇಮಕಾತಿ ಮಾಡಲೇಬೇಕು ಎಂದು ಘೋಷಣೆ ಕೂಗಿದರು ಆಗ ಸಭೆಯಲ್ಲಿ ಗದ್ದಲ ಉಂಟಾಯಿತು.

ಕಾರ್ಯಕರ್ತರನ್ನು ಸಮಾಧಾನ ಮಾಡಿದ ನಂತರ ಸಚಿವರು ಮಾತು ಮುಂದುವರೆಸಿ, ರಾಜ್ಯದಲ್ಲಿ ನಿಗಮ– ಮಂಡಳಿ ಸೇರಿ 900 ಮೆಂಬರ್‌ಶಿಪ್ ಇವೆ. ಅದನ್ನು ನಿಮಗೇ ಕೊಡಬೇಕು. ಅದರ ಆಯ್ಕೆಗೆ ಪರಮೇಶ್ವರ್ ಅವರನ್ನು ಸಮಿತಿ ಅಧ್ಯಕ್ಷರನ್ನಾಗಿ ಮಾಡಲಾಗಿದೆ. ಸದ್ಯದಲ್ಲೇ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದರು.

ಬಿ.ರಂಜಿತಾಗೆ ಪಿಎಚ್.ಡಿ ಪದವಿ



ಮೈಸೂರು, ಡಿ.1–ಡಾ.ಪ್ರೀತಿ ಶ್ರೀಮಂಧರ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ಬಿ.ರಂಜಿತಾ ಅವರು ಕನ್ನಡ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾ ನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ನ್ಯಾಯಾಲಯ ಆದೇಶಿಸಿದ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಸೂಚನೆ



ಮೈಸೂರಿನ ನಜರ್‌ಬಾದ್‌ನಲ್ಲಿರುವ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಭೂದಾಖಲೆಗಳ ಉಪನಿರ್ದೇಶಕರಾದ ಕೆ.ರಮ್ಯಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಮೈಸೂರು,ಡಿ.1(ಎಂಟಿವೈ)– ನ್ಯಾಯಾಲಯ ಆದೇಶಿಸಿದ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಸರ್ವೇ ಸೇರಿದಂತೆ ವಿವಿಧ ಕಾರ್ಯ ನಡೆಸಿ, ಕಡತ ಸಿದ್ಧಪಡಿಸಲು ಆದ್ಯತೆ ನೀಡುವಂತೆ ಭೂದಾಖಲೆಗಳ ಉಪನಿರ್ದೇಶಕರಾದ ಕೆ.ರಮ್ಯಾ ಸೂಚಿಸಿದ್ದಾರೆ.

ಮೈಸೂರಿನ ನಜರ್‌ಬಾದ್‌ನಲ್ಲಿರುವ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಎಡಿಎಲ್‌ಆರ್ ಕಚೇರಿಯ ಮೋಜಿಣಿದಾರರು, ಸರ್ವೆಯರ್ ಸೇರಿದಂತೆ ಇಲಾಖೆ ಸಿಬ್ಬಂದಿಗಳ ಸಭೆ ನಡೆಸಿ, ಇಲಾಖೆಯ ಪ್ರಗತಿ ಪರಿಶೀಲಿಸಿದ ಅವರು, ಸರ್ವೆ ಇಲಾಖೆಗೆ ರೈತರು ಸಲ್ಲಿಸಿದ ಅರ್ಜಿಗಳ ಬಗ್ಗೆ ತಾತ್ಸಾರ ಮನೋಭಾವ ತಾಳಬಾರದು. ಅದರಲ್ಲೂ ನ್ಯಾಯಾಲಯಗಳ ಮೆಟ್ಟಿಲೇರಿರುವ ಪ್ರಕರಣದಲ್ಲಿ ನ್ಯಾಯಾಲಯದ ಆದೇಶವನ್ನು ಪಾಲಿಸಬೇಕು. ನ್ಯಾಯಾಲಯದ ಸೂಚನೆಯಂತೆ ನಡೆದುಕೊಳ್ಳಬೇಕು. ಕಾಲಮಿತಿಯೊಳಗೆ ನ್ಯಾಯಾಲಯದ ಪ್ರಕಟಣೆಗಳ ಅಳತೆ ಕಾರ್ಯವನ್ನು ನಡೆಸಬೇಕು. ಅಲ್ಲದೆ, ಸರ್ವೆ ಮಾಡಿದ ನಂತರ ಕಡತ ತಯಾರಿಸಿ ಕಚೇರಿಗೆ ಸಲ್ಲಿಸಬೇಕು. ಇಂತಹ ಪ್ರಕರಣಗಳನ್ನು ಲಘುವಾಗಿ ಪರಿಗಣಿಸಿದರೆ, ಅಂತಹ ಭೂಮಾಪಕರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಕೆಲಸದ ಸಮಯದಲ್ಲಿ ಭೂಮಾಪಕರ ಕಚೇರಿಯಲ್ಲಿ ಭೂಮಾಪಕರು ಹಾಗೂ ಸಿಬ್ಬಂದಿಗಳು ಇರುವುದಿಲ್ಲ ಎಂಬ ಆರೋಪ ಕೇಳಿ ಬಂದಿದೆ. ಕೆಲಸದ ಅವಧಿಯಲ್ಲಿ ಕಚೇರಿಯಲ್ಲಿ ಇರದಿದ್ದರೆ, ರೈತರಿಗೆ ಸಮಸ್ಯೆಯಾಗುತ್ತದೆ. ವಿವಿಧ ಅರ್ಜಿ ಸಲ್ಲಿಸುವ ಹಾಗೂ ಅರ್ಜಿ ಸಲ್ಲಿಸಿರುವವರು ಕಚೇರಿಗೆ ಬಂದಾಗ ತಮ್ಮ ಕೆಲಸದ ಬಗ್ಗೆ ಮಾಹಿತಿ ನೀಡಲು ಸಿಬ್ಬಂದಿಗಳೇ ಇಲ್ಲದಿದ್ದರೆ ಇಲಾಖೆ ಬಗ್ಗೆ ಕೆಟ್ಟ ಸಂದೇಶ ನೀಡಿದಂತಾಗುತ್ತದೆ. ಈ ಹಿನ್ನೆಲೆಯಲ್ಲಿ ಕರ್ತವ್ಯದ ವೇಳೆ ಸಿಬ್ಬಂದಿಗಳು ಕಡ್ಡಾಯವಾಗಿ ಕಚೇರಿಯಲ್ಲಿಯೇ ಇರಬೇಕು. ಮಾಹಿತಿ ನೀಡದೆ ಗೈರು ಆಗುವುದು, ಕರ್ತವ್ಯಕ್ಕೆ ಹಾಜರಾಗಿ ಕಚೇರಿಯ ಹೊರಗೆ ಇರುವ ಪ್ರಕರಣಗಳು ಕಂಡು ಬಂದರೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಕಚೇರಿಗೆ ಭೇಟಿ ನೀಡುವುದಾಗಿ ತಿಳಿಸಿದರು.

ಇದೇ ವೇಳೆ ಮೋಜಿಣಿ, ಆಕಾರ್‌ಬಂದ್ ಗಣಕೀಕರಣ, ಹಿಸ್ಸಾ ಮ್ಯಾಪಿಂಗ್, ಈ ಆಫೀಸ್, ದರಖಾಸ್ತು, ನ್ಯಾಯಾಲಯಗಳ ಪ್ರಕರಣ, ರೀ–ಇಶ್ಯೂ ಕಡತ, ಎಲ್‌ಎನ್‌ಡಿ ಸೇರಿದಂತೆ ಇನ್ನಿತರ ವಿಷಯಗಳ ಬಗ್ಗೆ ಪ್ರಗತಿ ಪರಿಶೀಲನೆ ನಡೆಸಿ ಮಾಹಿತಿ ಸಂಗ್ರಹಿಸಿದರು.

ಸಭೆಯಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕ ಎಂ.ಮಂಜುನಾಥ್, ಅಧೀಕ್ಷಕ ನಾಗೇಶ್, ಸರ್ವೆ ಪರ್ವೇಕ್ಷಕರಾದ ಸ್ವಾಮಿ, ನಾಗರಾಜು, ಕೀರ್ತಿಕುಮಾರ್, ಅನಿಲ್ ಅಂಥೋಣಿ, ಭೂಮಾಪಕರಾದ ಎಂ.ಕೆ.ಪ್ರಕಾಶ್, ಶಂಕರಪ್ಪ, ದಿನಕರ್, ಕಂಚಿನಕೆರೆ ಇ.ದೇವರಾಜು, ಕಂಚಿರಾಯ, ಮಹದೇವಸ್ವಾಮಿ, ಶಾಂತಮಲ್ಲಪ್ಪ, ಶಶಿಧರ್ ಮೂರ್ತಿ, ಮಲ್ಲೇಶ್, ಶ್ಯಾನ್‌ವಜ್, ಬಿಂಧು, ಲಕ್ಷ್ಮೀ, ಕಾವ್ಯ, ಎಂ.ಮಹದೇವಸ್ವಾಮಿ, ನಿಂಗಪ್ಪನಾಯಕ, ಲೋಕೇಶ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮಹದೇಶ್ವರರ ಹುಲಿವಾಹನ ಮೆರವಣಿಗೆ



ಮೈಸೂರಿನ ಹೊಸಬಂಡಿಕೇರಿಯ ಶ್ರೀ ಮಲೈ ಮಹದೇಶ್ವರ ಸ್ವಾಮಿ ಪೂಜಾ ಸಮಿತಿ ಪಶುಪಾಲಕರ ಸೇವಾ ಸಮಿತಿ ಆಶ್ರಯದಲ್ಲಿ ಕಾರ್ತಿಕ ಮಾಸದ ಮಹದೇಶ್ವರರ ಹುಲಿ ವಾಹನ ಮೆರವಣಿಗೆ ನಡೆಯಿತು. ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮೆರವಣಿಗೆಗೆ ಚಾಲನೆ ನೀಡಿದರು. ಈ ವೇಳೆ ಮುಖಂಡರಾದ ಮೋಹನ್, ಚೈನೀ ಪುನೀತ್, ಶಿವು, ಸಣ್ಣಪ್ಪ, ಜಗ್ಗು, ಸೋಮ, ರಾಜು ಮತ್ತಿತರರು ಉಪಸ್ಥಿತರಿದ್ದರು.

ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಕನ್ನಡಕ್ಕೆ ಹಿನ್ನಡೆ

ಜೈ ಭುವನೇಶ್ವರಿ ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಾಹಿತಿ ಬನ್ನೂರು ಕೆ.ರಾಜು ಬೇಸರ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಜೈ ಭುವನೇಶ್ವರಿ ಸೇವಾ ಟ್ರಸ್ಟ್ ಆಯೋಜಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದ ಸಾಧಕರಿಗೆ 'ಜೈ ಭುವನೇಶ್ವರಿ ಕನ್ನಡ ಸೇವಾ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಅಭಿನಂದಿಸಲಾಯಿತು.

ಗೊ.ರು.ಚ ಅವರನ್ನು ಆಯ್ಕೆ ಮಾಡಲು ಇಷ್ಟು ವರ್ಷ ಬೇಕಾಯ್ತ!

ಕನ್ನಡ ಸಾಹಿತ್ಯ ಸಮ್ಮೇಳನ ಕುರಿತು ಬನ್ನೂರು ಕೆ.ರಾಜು ಮಾತನಾಡಿ, ಮಂಡ್ಯದಲ್ಲಿ ಆಯೋಜಿಸಿರುವ ಸಾಹಿತ್ಯ ಸಮ್ಮೇಳನಕ್ಕೆ ಅಧ್ಯಕ್ಷರನ್ನು ಆಯ್ಕೆ ಮಾಡಲು ಆರಂಭದಲ್ಲಿ ಗೊಂದಲ ಮಾಡಿಕೊಂಡು ನಂತರ ಸೂಕ್ತ ವ್ಯಕ್ತಿಯಾದ ಗೊ.ರು.ಚ ಅವರನ್ನು ಆಯ್ಕೆ ಮಾಡಿದ್ದಾರೆ. ಸಂತಸ ಆದರೆ, 94 ವರ್ಷದ ಅವರನ್ನು ಆಯ್ಕೆ ಮಾಡಲು ಇಷ್ಟು ವರ್ಷ ಬೇಕಾಗಿದ್ದು ವಿಪರ್ಯಾಸ ಎಂದು ಬೇಸರ ವ್ಯಕ್ತಪಡಿಸಿದರು.

ಒಂದು ಸಮ್ಮೇಳನ ಮಾಡಲು ಕೋಟ್ಯಾಂತರ ರೂ. ಕೇಳಿದ್ದಾರೆ. ಮತ್ತೊಂದೆಡೆ ಕವಿಗೋಷ್ಠಿಯಲ್ಲಿ ಭಾಗವಹಿಸಲು ಈಗಾಗಲೇ ಲಾಭಗಳು ನಡೆಯುತ್ತಿವೆ. ಮತ್ತೊಂದೆಡೆ ಸಮ್ಮೇಳನ ನಡೆಯುತ್ತಿರುವ ಸ್ಥಳದ ಬಗ್ಗೆ ಸಾಕಷ್ಟು ವಿರೋಧ ವ್ಯಕ್ತವಾಗಿದೆ. ಈ ಸಮ್ಮೇಳನವನ್ನು ವಿರೋಧಿಸಿ, ಒಂದು ತಂಡ ಪರ್ಯಾಯವಾಗಿ ಸಮ್ಮೇಳನ ನಡೆಸಲು ಚಿಂತನೆ ಮಾಡುತ್ತಿದೆ ಎಂದರು.

ಸರ್ಕಾರ ಸಮ್ಮೇಳನಕ್ಕೆ ಹಣ ನೀಡಿ ಸುಮ್ಮನೆ ಕೂರಬಾರದು. ಸಮ್ಮೇಳನದ ಬಗ್ಗೆ ಮಾಹಿತಿ ಪಡೆದುಕೊಳ್ಳಬೇಕು. ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ಅವರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ನೀಡಿರುವ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ನಮಗೂ ಇದಕ್ಕೂ ಸಂಬಂಧವಿಲ್ಲ ಎಂಬಂತೆ ಇದ್ದಾರೆ ಎಂದು ತಿಳಿಸಿದರು.

ಮೈಸೂರು, ಡಿ.1(ಜಿಎ)–ನಮ್ಮ ನಾಡು, ನುಡಿ, ನೆಲ, ಜಲ, ಕಲೆ, ಸಾಹಿತ್ಯ, ಸಂಸ್ಕೃತಿ ಸೇರಿದಂತೆ ಒಟ್ಟಾರೆ ಕರ್ನಾಟಕವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಸಂರಕ್ಷಣೆ ಮಾಡುವಲ್ಲಿ ಆಳುವ ಸರ್ಕಾರಗಳ ಇಚ್ಛಾಶಕ್ತಿಯ ಕೊರತೆ, ಬೇಜವಾಬ್ದಾರಿ, ಹೊಣೆಗೇಡಿತನದಿಂದಾಗಿ ಎಲ್ಲಾ ರೀತಿಯ ಸಂಪನ್ಮೂಲಗಳು ನಮ್ಮಲ್ಲಿದ್ದರೂ ಕನ್ನಡಕ್ಕೆ ಹಿನ್ನಡೆ ಯಾಗುತ್ತಿದೆಯೆಂದು ಸಾಹಿತಿ ಬನ್ನೂರು ಕೆ. ರಾಜು ಬೇಸರ ವ್ಯಕ್ತಪಡಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಜೈ ಭುವನೇಶ್ವರಿ ಸೇವಾ ಟ್ರಸ್ಟ್ ಆಯೋಜಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಮತ್ತು ಕರ್ನಾಟಕವೆಂದು ಹೆಸರಾಗಿ 50 ವರ್ಷ ತುಂಬಿದ ಸಂಭ್ರಮದ ಸುವರ್ಣ ಕರ್ನಾಟಕೋತ್ಸವ ಹಾಗೂ ಸಾಧಕರಿಗೆ ಜೈ ಭುವನೇಶ್ವರಿ ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಒಂದು ರಾಜ್ಯದ ಪ್ರಗತಿ ಬಹುಪಾಲು ಅಲ್ಲಿನ ರಾಜ್ಯ ಸರ್ಕಾರದ ನೀತಿ, ನಿಯಮಾವಳಿ, ಬದ್ಧತೆ, ಸಿದ್ಧತೆ, ಅನುಷ್ಠಾನತೆಯ ಮೇಲೆ ಅವಲಂಬಿಸಿದ್ದು ಇದನ್ನು ಸಮರ್ಪಕವಾಗಿ ಯಾವ ಸರ್ಕಾರ ಆಡಳಿತಾತ್ಮಕವಾಗಿ ನಿಭಾಯಿಸುತ್ತದೆಯೋ ಆ ರಾಜ್ಯ ಯಾವತ್ತೂ ಸುಭಿಕ್ಷವಾಗಿರುತ್ತದೆ ಎಂದರು.

ಕರ್ನಾಟಕದ ಇತಿಹಾಸದಲ್ಲಿ ಇದುವರೆಗಿನ ಯಾವ ಪಕ್ಷಗಳ ಯಾವ ಸರ್ಕಾರಗಳೂ ಕೂಡ ಕನ್ನಡದ ಬಗ್ಗೆ ಹಾಗೂ ಕರ್ನಾಟಕದ ಬಗ್ಗೆ ಪ್ರಾಮಾಣಿಕ ಕಾಳಜಿ, ಬದ್ಧತೆ ತೋರದೆ ಇರುವುದರಿಂದ ನಾಡಾಭಿವೃದ್ಧಿಗಾಗಿ ರಚನೆಗೊಂಡಿರುವ ಸರೋಜಿನಿ ಮಹಿಷಿ ವರದಿ, ಮಹಾಜನ್ ವರದಿ ಒಳಗೊಂಡಂತೆ ಯಾವ ವರದಿಗಳೂ, ಮೇಕೆದಾಟು ಯೋಜನೆ ಸೇರಿದಂತೆ ಯಾವ ನಾಡಪರ ಯೋಜನೆಗಳೂ ಜಾರಿಗೊಂಡು ಅನುಷ್ಠಾನವಾಗಿಲ್ಲ. ಅಷ್ಟೇ ಏಕೆ ವರನಟ ಡಾ.ರಾಜ್‌ಕುಮಾರ್, ಡಾ.ಪಾಟೀಲ ಪುಟ್ಟಪ್ಪ ಅವರಂತಹ ಘಟಾನುಘಟಿ ದಿಗ್ಗಜರ ನೇತೃತ್ವದಲ್ಲಿ ಗೋಕಾಕ್ ವರದಿ ಜಾರಿಗಾಗಿ ನಡೆದ ಗೋಕಾಕ್ ಚಳವಳಿ ಸಹ ಪೂರ್ಣ ಪ್ರಮಾಣದಲ್ಲಿ ವರದಿಯನ್ನು ಜಾರಿಗೊಳಿಸಲಾಗಿಲ್ಲ. ಕಾವೇರಿ, ಕೃಷ್ಣಾ ನದಿ ಸಮಸ್ಯೆಗಳು ಕೂಡ ಬಗೆಹರಿದಿಲ್ಲ. ತಮಿಳುನಾಡು ಮತ್ತು ನಮ್ಮ ನಡುವಿನ ಕಾವೇರಿ ನದಿ ವಿವಾದ ಶಾಶ್ವತವಾಗಿ ಉಳಿದೇ ಬಿಟ್ಟಿದೆ ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿ ಬಂಗಾರಪ್ಪ ಒಬ್ಬರನ್ನು ಹೊರತುಪಡಿಸಿ ಉಳಿದಂತೆ ನಮ್ಮ ರಾಜ್ಯದಲ್ಲಿ ಇದುವರೆಗೆ ಆಡಳಿತ ನಡೆಸಿ ಹೋಗಿರುವ ಎಲ್ಲಾ ಮುಖ್ಯಮಂತ್ರಿಗಳೂ ಕರ್ನಾಟಕವನ್ನು ಕಡೆಗಣಿಸಿ ತಮಿಳುನಾಡಿಗೆ ನೀರು ಬಿಟ್ಟವರೇ. ಹೀಗೆ ಎಲ್ಲ ವಿಚಾರದಲ್ಲಿಯೂ ಕರ್ನಾಟಕಕ್ಕೆ ಮತ್ತು ಕನ್ನಡಿಗರಿಗೆ ಹೊರಗಿನವರಿಗಿಂತ ನಮ್ಮವರ ಬೇಜವಾಬ್ದಾರಿಯಿಂದ ಹೆಚ್ಚು ಅನ್ಯಾಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಭಾಷೆಯ ವಿಚಾರದಲ್ಲಿ ಪ್ರಸ್ತುತ ಕನ್ನಡವನ್ನು ಯಾರಾರೂ ಬೆಳೆಸಬೇಕಾಗಿಲ್ಲ. ಅದು ತನ್ನ ಸ್ವಸಾಮರ್ಥ್ಯದಿಂದ ಸಾಕಷ್ಟು ಬೆಳೆದಿದೆ. ಇದೇ ನೋಡಿ ಕನ್ನಡ ಭಾಷೆಯ ಶಕ್ತಿ. ಹಾಗಾಗಿ ಇಂಥ ಕನ್ನಡವನ್ನು ಬಳಸಿಕೊಂಡು ನಾವು ಕರ್ನಾಟಕವನ್ನು ಸಮರ್ಥವಾಗಿ ಕಟ್ಟಬೇಕು. ಸರ್ಕಾರ ಕೂಡ ಕನ್ನಡ ಮಾಧ್ಯಮದಲ್ಲಿ ಓದಿದವರ ಬದುಕಿಗೆ ಕನ್ನಡ ಅನ್ನದ ಭಾಷೆ ಆಗುವಂತೆ ಗ್ಯಾರಂಟಿ ನೀಡಬೇಕೆಂದು, ಇದಕ್ಕೊಂದು ವಿಶೇಷ ನೂತನ ಯೋಜನೆಯೊಂದನ್ನು ರೂಪಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಕೀಲ ಆರ್.ಲಕ್ಷ್ಮಣ್, ಕನ್ನಡ ಪುಸ್ತಕ ಪ್ರೇಮಿ ಸೈಯದ್ ಐಸಾಕ್, ಹೋರಾಟಗಾರ ಯತಿರಾಜ್, ಸಮಾಜ ಸೇವಕರಾದ ಮುನಿಸ್ವಾಮಿ, ಡಾ.ತಿರುಮಲಯ್ಯ, ತಿಪ್ಪಯ್ಯ ಅವರುಗಳಿಗೆ 'ಜೈ ಭುವನೇಶ್ವರಿ ಕನ್ನಡ ಸೇವಾ ರತ್ನ' ಪ್ರಶಸ್ತಿಯನ್ನು ಪ್ರದಾನ ಮಾಡಿ ಅಭಿನಂದಿಸಲಾಯಿತು. ಈ ವೇಳೆ ಜೈಭುವನೇಶ್ವರಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ತಿಪ್ಪಯ್ಯ, ಅರಕಲವಾಡಿ ನಾಗೇಂದ್ರ, ಟ್ರಸ್ಟ್‌ನ ಉಪಾಧ್ಯಕ್ಷ ಹನುಮಂತು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಅಮರನ್(ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಜಲಂಧರ(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ವಿಕ್ಕಿ ವಿದ್ಯಾ ಕಾ ವೋ ವಾಲಾ ವಿಡಿಯೋ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಜಲಂಧರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮೆಕ್ಯಾನಿಕ್ ರಾಕಿ (ತೆ)	4 ಪ್ರದರ್ಶನಗಳು
ಸಂಗಂ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಘೀರ (ಕ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಕಂಗುವಾ (3ಡಿ) (ತ): ಬೆ.10ಕ್ಕೆ, ಮ.1ಕ್ಕೆ, ರಾ.7.15ಕ್ಕೆ, ಅಮರನ್ (ತ): ಸಂ.4ಕ್ಕೆ, ಆನಂದ್ ಶ್ರೀಬಾಲ (ಮ): ರಾ.10.20ಕ್ಕೆ.
ಸ್ಕ್ರೀನ್ 2	ಅಮರನ್ (ತ): ಬೆ.9.40ಕ್ಕೆ, ಮ.1ಕ್ಕೆ, ಬಘೀರ (ಕ): ಸಂ.4.15ಕ್ಕೆ, ಗ್ಲಾಡಿಯೇಟರ್ 2 (ಇಂ): ರಾ.7.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ದಿ ಸಬರ್‌ಮತಿ ರಿಪೋರ್ಟ್ (ಹಿಂ): ಬೆ.10.35ಕ್ಕೆ, ರಾ.7.15ಕ್ಕೆ, ಬಘೀರ (ಕ): ಮ.1.10ಕ್ಕೆ, ಲಕ್ಕಿ ಭಾಸ್ಕರ್ (ಮ): ಸಂ.4.15ಕ್ಕೆ, ಮಟ್ಕಾ (ತೆ): ರಾ.9.55ಕ್ಕೆ.
ಸ್ಕ್ರೀನ್ 4	ಭೈರತಿ ರಣಗಲ್ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಬಘೀರ (ಕ): ಬೆ.10ಕ್ಕೆ, ಮ.3.55ಕ್ಕೆ, ಕಂಗುವಾ (ಕ): ಮ.1ಕ್ಕೆ, ಕಂಗುವಾ (ತ): ಸಂ.6.55ಕ್ಕೆ, ಅಮರನ್ (ತ): ರಾ.9.50ಕ್ಕೆ.
ಸ್ಕ್ರೀನ್ 2	ಅಮರನ್ (ಕ): ಬೆ.10.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಸಂ.4.25ಕ್ಕೆ, ರಾ.7.05ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಭೈರತಿ ರಣಗಲ್ (ಕ): ಬೆ.10ಕ್ಕೆ, ಸಂ.6.30ಕ್ಕೆ, ಅಮರನ್ (ಕ): ಮ.12.40ಕ್ಕೆ, ಕಂಗುವಾ (3ಡಿ)(ತ): ಮ.3.55ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಕಂಗುವಾ (ತ): ಬೆ.10.30ಕ್ಕೆ, ಸಂ.5.20ಕ್ಕೆ, ಅಮರನ್ (ತ): ಮ.2.10ಕ್ಕೆ, ಅಮರನ್ (ಕ): ರಾ.8.15ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಯತ್ನಾಳ್ ಒಬ್ಬ ಜೋಕರ್, ಮಾನಸಿಕ ರೋಗಿ: ಈಶ್ವರ್ ಖಂಡ್ರೆ



ಬೀದರ್, ಡಿ.1– ಯತ್ನಾಳ್ ಒಬ್ಬ ಜೋಕರ್, ಮಾನಸಿಕ ರೋಗಿಯಾಗಿದ್ದು ಅವರು ಮಾನಸಿಕ ತಜ್ಞರ ಹತ್ತಿರ ಚಿಕಿತ್ಸೆ ಪಡೆದುಕೊಳ್ಳುವುದು ಸೂಕ್ತ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ವ್ಯಂಗ್ಯವಾಡಿದ್ದಾರೆ.

ಬೀದರ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯತ್ನಾಳ್ ಅವರು ಬಸವಣ್ಣ ಹೊಳೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನುವ ಮೂಲಕ ರಣಹೇಡಿ ಎಂಬಂತೆ ಬಿಂಬಿಸುತ್ತಿದ್ದಾರೆ. ಆರ್‌ಎಸ್‌ಎಸ್ ಮನವೊಲಿಸಲು ಈ ರೀತಿ ಹೇಳಿಕೆಗಳನ್ನು ಅವರು ನೀಡುತ್ತಿರುವುದು ಖಂಡನೀಯ ಎಂದು ಕಿಡಿಕಾರಿದ್ದಾರೆ. ವೈಯಕ್ತಿಕ ಸ್ವಾರ್ಥ, ಪಕ್ಷದ ಆಂತರಿಕ ಕಲಹಕ್ಕಾಗಿ ಅವರು ಪ್ರತಿಭಟನೆಯ ನಾಟಕ ಮಾಡುತ್ತಿದ್ದಾರೆ. ಯತ್ನಾಳ್ ಹೇಳಿಕೆ ಬಸವ ಅನುಯಾಯಿಗಳಿಗೆ ತೀವ್ರ ನೋವಾಗಿದೆ. ಅವರಿಗೆ ವಿನಾಶ ಕಾಲೇ ವಿಪರೀತ ಬುದ್ಧಿ ಬಂದಿದೆ. ಬಸವಣ್ಣ ನಮ್ಮೆಲ್ಲರ ಆರಾಧ್ಯ ದೈವ. ಅವರ ಕುರಿತಾಗಿ ಮಾತನಾಡಿರುವುದನ್ನು ಖಂಡಿಸುತ್ತೇನೆ ಎಂದಿದ್ದಾರೆ.

ಬಿಜೆಪಿಯವರಿಗೆ ಬಸವಣ್ಣನವರ ಅನುಯಾಯಿಗಳ ಮತ ಬೇಕು. ಆದರೆ ಲಘುವಾಗಿ ಮಾತನಾಡಿರುವ ಯತ್ನಾಳ್ ವಿರುದ್ಧ ತುಟಿ ಬಿಚ್ಚುತ್ತಿಲ್ಲ. ಯತ್ನಾಳ್ ಮೂಲಕ ಬಸವಣ್ಣನವರಿಗೆ ಅವಮಾನ ಮಾಡಲು ಬಿಜೆಪಿ ಅವರನ್ನು ಛೂ ಬಿಟ್ಟಿದೆ ಎಂದು ಆರೋಪಿಸಿದ್ದಾರೆ. ಇನ್ನು ಬಿಜೆಪಿ ಅವಧಿಯಲ್ಲೇ ಅತಿಹೆಚ್ಚು ವಕ್ಫ್ ಬೋರ್ಡ್ ನೋಟೀಸ್ ಹೋಗಿದೆ. ಹೋರಾಟದ ಮೂಲಕ ಬಡ ರೈತರನ್ನ ಬಲಿಪಶು ಮಾಡೋಕೆ ಬಿಜೆಪಿ ಹೊರಟಿದೆ ಎಂದು ಕಿಡಿಕಾರಿದ್ದಾರೆ.

ಸ್ವಾಭಿಮಾನಿ ಸಮಾವೇಶದ ಪ್ರಚಾರ ವಾಹನಕ್ಕೆ ಸ್ವಾಗತ



ಹಾಸನದಲ್ಲಿ ಡಿ.5ರಂದು ನಡೆಯುವ ಸ್ವಾಭಿಮಾನಿ ಸಮಾವೇಶದ ಪ್ರಚಾರ ವಾಹನವನ್ನು ಭಾನುವಾರ ರೆಸ್ಪಾನ್ಸಿಬಲ್ ಸಿಟಿಜನ್ ವಾಯ್ಸ್ ಫೋರಂ ಸಂಸ್ಥೆಯ ಮುಸ್ಲಿಂ ಮುಖಂಡರು ಮಿಷನ್ ಹಾಸ್ಪಿಟಲ್ ವೃತ್ತದಲ್ಲಿ ಸ್ವಾಗತಿಸಿದರು. ನಂತರ ಎನ್.ಆರ್.ಮೊಹಲ್ಲಾದ ವಿವಿಧ ವಾರ್ಡ್‌ಗಳಲ್ಲಿ ಸಂಚರಿಸಿ ಪ್ರಚಾರ ಮಾಡಲಾಯಿತು. ಫೋರಂನ ರಾಜ್ಯಾಧ್ಯಕ್ಷ ಎಫ್.ಎಂ.ಕಲೀಂ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆಯ ಕೆ.ಎಸ್.ಶಿವರಾಮು, ಅಬ್ದುಲ್ ಗಫಾರ್,ಇಲಿಯಾಸ್ ಬೇಗ್, ಮುಸ್ಲಿಂ ಸಮುದಾಯದ ಸೌಹಾರ್ದ ವೇದಿಕೆಯ ಕಾರ್ಯದರ್ಶಿ ಸುಕುರ್ ಫಯಾಜ್ ಅಹ್ಮದ್, ಲೋಕೇಶ್‌ಕುಮಾರ್ ಮಾದಾಪುರ, ಎನ್.ಆರ್.ಸಿದ್ದು ಇನ್ನಿತರರಿದ್ದರು.

ಫೆಂಗಲ್ ಚಂಡಮಾರುತದ ಎಫೆಕ್ಟ್

ಮೈಸೂರು, ಚಾಮರಾಜನಗರ, ಕೊಡಗು, ಹಾಸನದಲ್ಲಿ ಡಿ.4ರವರೆಗೆ ತುಂತುರು ಮಳೆ



ಮೈಸೂರಿನ ಹವಾಮಾನ ವರದಿ
ಕನಿಷ್ಠ 17.4 ಡಿಗ್ರಿ ಸೆಲ್ಸಿಯಸ್
ಗರಿಷ್ಠ 26.4 ಡಿಗ್ರಿ ಸೆಲ್ಸಿಯಸ್

ಮೈಸೂರು, ಡಿ.1(ಬಿಎಲ್‌ಯು)– ಬಂಗಾಳಕೊಲ್ಲಿಯ ತಮಿಳುನಾಡು ಕರಾವಳಿಯಲ್ಲಿರುವ ಫೆಂಗಲ್ ಚಂಡಮಾರುತದ ಪರಿಣಾಮ ಮೈಸೂರು, ಚಾಮರಾಜನಗರ, ಕೊಡಗು, ಹಾಸನ ಸೇರಿದಂತೆ ದಕ್ಷಿಣ ಕರಾವಳಿ ಭಾಗದಲ್ಲಿ ಡಿಸೆಂಬರ್ 4ರವರೆಗೆ ತುಂತುರು ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಈ ಸಂಬಂಧ ಮಾಹಿತಿ ನೀಡಿರುವ ಮೈಸೂರಿನ ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ತಾಂತ್ರಿಕ ಅಧಿಕಾರಿ ಡಾ.ಜಿ.ವಿ. ಸುಮಂತ್‌ಕುಮಾರ್, ಗಾಳಿಯ ವೇಗ ಗಂಟೆಗೆ 6 ಕಿಲೋ ಮೀಟರ್ ವೇಗದಲ್ಲಿ ಬೀಸುತ್ತದೆ ಎಂದು ಹೇಳಿದ್ದಾರೆ.

ಮೈಸೂರಿನಲ್ಲಿ ಇಂದು ಕನಿಷ್ಠ 17.4 ಡಿಗ್ರಿ ಸೆಲ್ಸಿಯಸ್ ಹಾಗೂ ಗರಿಷ್ಠ 26.4 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಬಂಗಾಳಕೊಲ್ಲಿಯ ಕರಾವಳಿಯಲ್ಲಿರುವ ಫೆಂಗಲ್ ಚಂಡಮಾರುತ ಡಿಸೆಂಬರ್ 2 ಹಾಗೂ 3 ರಂದು ತಮಿಳುನಾಡು ಮತ್ತು ಕರ್ನಾಟಕ ಗಡಿಭಾಗಗಳಲ್ಲಿ ಸಾಗಿ ಕೇರಳದ ಕೋಜಿಕ್ಕೋಡ್ ಮೂಲಕ ಅರಬ್ಬಿ ಸಮುದ್ರ ಸೇರುವ ಸಾಧ್ಯತೆ ಇದೆ. ಚಂಡಮಾರುತ ಅರಬ್ಬಿ ಸಮುದ್ರ ಪ್ರವೇಶಿಸಿದ ನಂತರವೂ ಬಂಗಾಳಕೊಲ್ಲಿ ಕಡೆಯಿಂದ ಗಾಳಿ ಸೆಳೆಯಲ್ಪಡುವ ಕಾರಣ ಹಿಂಗಾರು ರೀತಿಯ ಮಳೆ ಮುಂದುವರೆಯುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ಫೆಂಗಲ್ ಚಂಡಮಾರುತದ ಪರಿಣಾಮ ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮೋಡ ಆವರಿಸಿದ್ದು, ಸೂರ್ಯನ ಕಿರಣಗಳು ಮಾಯವಾಗಿದೆ. ಮೋಡ ಮಾತ್ರವಲ್ಲದೆ ನಗರದ ಕೆಲವು ಪ್ರದೇಶಗಳಲ್ಲಿ ತುಂತುರು ಮಳೆಯಾಗಿದೆ. ಮೋಡದ ಪರಿಣಾಮ ಚಳಿ ವಾತಾವರಣವಿದೆ. ಇದರಿಂದ ಜನರು ಸ್ವೆಟರ್, ಜರ್ಕಿನ್, ಟೋಪಿ ಧರಿಸಿರುವುದು ಸಾಮಾನ್ಯವಾಗಿತ್ತು.

ಡಿ.4ರವರೆಗೆ ಭತ್ತ ಕಟಾವು ಮಾಡದಿರಿ



ಫೆಂಗಲ್ ಚಂಡಮಾರುತದ ಪರಿಣಾಮ ಡಿ.4ರವರೆಗೆ ರೈತರು ಭತ್ತ ಕಟಾವು ಮಾಡದಂತೆ ಮೈಸೂರಿನ ನಾಗನಹಳ್ಳಿ ಕೃಷಿ ಹವಾಮಾನ ಕ್ಷೇತ್ರ ವಿಭಾಗದ ತಾಂತ್ರಿಕ ಅಧಿಕಾರಿ ಡಾ.ಜಿ.ವಿ.ಸುಮಂತ್‌ಕುಮಾರ್ ಸಲಹೆ ನೀಡಿದ್ದಾರೆ.

ಒಂದು ವೇಳೆ ಯಂತ್ರಗಳ ಮೂಲಕ ಭತ್ತ ಕಟಾವು ಮಾಡಿದರೆ ಅದನ್ನು ಸುರಕ್ಷಿತ ಸ್ಥಳಕ್ಕೆ ಕೊಂಡೊಯ್ದು, ಅದರ ಮೇಲೆ ಟಾರ್ಪಾಲ್ ಹೊದಿಸಬೇಕು. ಈಗಾಗಲೇ ಭತ್ತ ಕಟಾವು ಮಾಡಿದ್ದರೆ ತೆನೆಯನ್ನು ಒಂದೆಡೆ ಸಂಗ್ರಹಿಸಿ ಅದರ ಮೇಲೆ ಟಾರ್ಪಾಲ್ ಹೊದಿಸಬೇಕು. ಒಂದು ವೇಳೆ ಈಗ ಭತ್ತ ಕಟಾವು ಮಾಡಿದರೆ ಮುಗ್ಗಲು ಬರುತ್ತದೆ. ಇಲ್ಲವೇ ಭತ್ತ ಮೊಳಕೆ ಹೊಡೆಯುತ್ತದೆ. ನಾವು ಸಲಹೆ ನೀಡಿದಂತೆ ಸುರಕ್ಷಿತ ಕ್ರಮ ಕೈಗೊಂಡರೆ ರೈತರು ನಷ್ಟದಿಂದ ಪಾರಾಗಬಹುದು. ತರಕಾರಿ ಬೆಳೆಯುವ ರೈತರು ಬಸಿಗಾಲುವೆ ಮಾಡಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಇಲ್ಲವೆಂದರೆ ಶಿಲೀಂಧ್ರ ರೋಗ ಬರುವ ಸಾಧ್ಯತೆ ಇರುತ್ತದೆ ಎಂದು ಡಾ.ಸುಮಂತ್ ಕುಮಾರ್ ಎಚ್ಚರಿಸಿದ್ದಾರೆ.

ನಾಳೆ ಶಹಿನ್‌ಷಾ ಬಾಗ್ದಾದ್ ಸಮ್ಮೇಳನ ಆಚರಣೆ

ಮೈಸೂರು, ಡಿ.1– ಮೊಹಮ್ಮದ್ ಹಿಮಾಯೂನ್ ಷಾ ಖಾದ್ರಿ ಮತ್ತು ವ್ಯವಸ್ಥಾಪಕ ಸಮಿತಿ ಪದಾಧಿಕಾರಿಗಳು, ಮಸೀದಿ ಮೌಲಾ ಅಲಿ, ಗೌಸಿಯಾ ನಗರ ವತಿಯಿಂದ ಶಹಿನ್‌ಷಾ ಬಾಗ್ದಾದ್ ಸಮ್ಮೇಳನವನ್ನು ಮಸೀದಿ ಹಜ಼ರತ್ ಮೌಲಾ ಅಲಿ ಆವರಣ, 13ನೇ ಕ್ರಾಸ್, ಹೈದರ್ ಅಲಿ "ಸಿ" ಬ್ಲಾಕ್, ಗೌಸಿಯಾನಗರ ಇಲ್ಲಿ ಡಿ.3ರಂದು ಸಂಜೆ 7ಕ್ಕೆ ಏರ್ಪಡಿಸಲಾಗಿದೆ.

ಕಾರ್ಯಕ್ರಮ ಶ್ರೀರಂಗಪಟ್ಟಣ ಜಾಮಿಯಾ ಟಿಪ್ಪು ಅರೇಬಿಕ್ ಕಾಲೇಜು ಪ್ರಿನ್ಸಿಪಾಲ್ ಹಜ಼ರತ್ ಮೌಲಾನಾ ಮುಫ್ತಿ ಸಜ್ಜದ್ ಹುಸೇನ್‌ಖಾನ್ ಮಿಸ್ಬಾಹಿ ರಜ್ವಿ ಸಾಹೆಬ್ ಅವರ ನೇತೃತ್ವದಲ್ಲಿ ನಡೆಯಲಿದೆ. ಅಂತರರಾಷ್ಟ್ರೀಯ ಇಸ್ಲಾಮಿಕ್ ವಿದ್ವಾಂಸ ಹಜ಼ರತ್ ಅಲಾಮಾ ಮೌಲಾನಾ ಅಲ್‌ಹಾಜ್ ಸೈಯದ್ ಷಾ ಗುಲ್ಜಾರ್ ಇಸ್ಮಾಯಿಲ್ ಖಾದ್ರಿ ವಸ್ತಿ ರಜ಼ಾಕಿ ಸಾಹೆಬ್ ಸಮ್ಮೇಳನದ ಮುಖ್ಯ ಭಾಷಣಕಾರರಾಗಿದ್ದಾರೆ. ಸಜ್ಜದ ನಷೀನ್ ಆಸ್ತಾನ ಫಾಲಕ್‌ಖಾನ್ ಖಾದ್ರಿಯ ಇಸ್ಮಾಲಿಯ ಮುಸ್ಲಿ ಷರೀಫ್ ಬರಾ ಬಂಕಿ, ಉತ್ತರ ಪ್ರದೇಶ; ಹಜ಼ರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಸಾಹೆಬ್, ಮಾನ್ಯ ಸರ್‌ಖಾಜ಼ಿ, ಮೈಸೂರುರವರು ಅಧ್ಯಕ್ಷತೆ ವಹಿಸಲಿದ್ದಾರೆ. ಉಲ್ಮಾ ಸುನ್ನತೋ ಜಮಾತ್ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕ ತನ್ವೀರ್ ಸೇಠ್, ಟಿಪ್ಪು ವಕ್ಫ್ ಎಸ್ಟೇಟ್ ಅಭಿವೃದ್ಧಿ ವ್ಯವಸ್ಥಾಪಕ ಸಮಿತಿಯ ಅಲ್ ಹಾಜ್ ಜಮೀಲ್ ಅಹಮದ್ ಅಶ್ರಫಿ, ಕಾರ್ಯದರ್ಶಿ, ತನ್‌ಜೀಮ್ ಅಹಲೆ ಸುನ್ನತೋ ಜಮಾತ್ ಟ್ರಸ್ಟ್, ಸೈಯದ್ ಯೂನುಸ್, ಕಾರ್ಯದರ್ಶಿ, ಜಾಮಿಯ ಟಿಪ್ಪು ಅರೇಬಿಕ್ ಕಾಲೇಜು; ಮನ್ಸೂರ್ ಮಜೀದ್ ಸೇಠ್ ಖುಶಾಲಿ, ಅಧ್ಯಕ್ಷರು, ಮಸೀದಿ ಹಾಲಿ ಮೆಮೂನ್ ಜಮಾತ್ ವ್ಯವಸ್ಥಾಪಕ ಸಮಿತಿ; ಎಸ್.ಎಂ. ಸೈಯದ್ ಷಫೀಕ್ ಸಾಹೆಬ್, ಕಾರ್ಯದರ್ಶಿ, ಮಸೀದಿ ಆಜ಼ಮ್ ಮರ್ಕಾಜ಼್ ಅಹಲೆ ಸುನ್ನತ್–ವಲ್–ಜಮಾತ್, ಅಶೋಕ ರಸ್ತೆ ಭಾಗವಹಿಸಲಿದ್ದಾರೆ.

ಆರೋಗ್ಯ ದರ್ಪಣ ಕುರಿತು ಉಪನ್ಯಾಸ....



ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆ ಆವರಣದ ಶ್ರೀ ಶಿವರಾತ್ರಿ ರಾಜೇಂದ್ರ ಭವನದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ ವತಿಯಿಂದ ಹಮ್ಮಿಕೊಂಡಿದ್ದ ಶಿವಾನುಭವ ದಾಸೋಹ 319ರ ಕಾರ್ಯಕ್ರಮದಲ್ಲಿ 'ಆರೋಗ್ಯ ದರ್ಪಣ–ಒಂದು ಅನುಭಾವ ಚಿಂತನೆ' ಕುರಿತು ವಿಶ್ರಾಂತ ಆಯುರ್ವೇದ ಪ್ರಾಧ್ಯಾಪಕ ಡಾ.ಬಿ.ಗುರುಬಸವರಾಜ ಉಪನ್ಯಾಸ ನೀಡಿದರು.

'ಸೃಜನಶೀಲ ಸಾಹಿತ್ಯಕ ಒಳನೋಟಗಳು' ಕೃತಿ ಬಿಡುಗಡೆ

ಮೈಸೂರು,ಡಿ.1(ಎಂಟಿವೈ)–ಕೋಮುವಾದಿ ಶಕ್ತಿಗಳು ವಿಜೃಂಭಿಸುತ್ತಿರುವ ಕಾಲಘಟ್ಟದಲ್ಲಿ ಸವಾಲನ್ನು ಎದುರಿಸಿ ಜನಪರ, ಜೀವಪರ ಸಾಹಿತ್ಯದ ಮೂಲಕ ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಸಲಹೆಗಾರ ಡಾ.ಎಸ್.ತುಕಾರಾಮ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿವಿ ಇಎಂಎಂಆರ್‌ಸಿ ಸಭಾಂಗಣದಲ್ಲಿ ದಲಿತ ಸಾಹಿತ್ಯ ಪರಿಷತ್ತು, ಮೈಸೂರು ವಿವಿ ಸಂಶೋಧಕರ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಳವಳ್ಳಿಯ ಪೂರಿಗಾಲಿ ಪಿಎಲ್‌ಎನ್ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಬಿ.ರಾಜಣ್ಣ ಬರೆದಿರುವ 'ಮ.ನ.ಜವರಯ್ಯ ಅವರ ಸೃಜನಶೀಲ ಸಾಹಿತ್ಯದ ಒಳನೋಟಗಳು' ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರಸ್ತುತ ಕಾಲಘಟ್ಟದಲ್ಲಿ ಮರ್ಯಾದೆಯ ಹೆಸರಿನಲ್ಲಿ ಹೆಣ್ಣು ಮಕ್ಕಳನ್ನು ಕೊಲ್ಲಲಾಗುತ್ತಿದೆ. ಏಕ ಸಂಸ್ಕೃತಿಯ ಹೆಸರಿನಲ್ಲಿ ಬಹು ಸಂಸ್ಕೃತಿಯನ್ನು ನಾಶ ಮಾಡಲಾಗುತ್ತಿದೆ. ಇದರೊಂದಿಗೆ ಕೋಮುವಾದಿ ಶಕ್ತಿಗಳು ಅಟ್ಟಹಾಸ ಮೆರೆಯುತ್ತಿವೆ. ಇದರಿಂದ ಜನರಲ್ಲಿ ಜಾಗೃತಿ ಮೂಡಿಸುವ ಅನಿವಾರ್ಯತೆ ಇದೆ ಎಂದು ಹೇಳಿದರು.

ಸಾಹಿತಿ ಮ.ನ.ಜವರಯ್ಯ ದಲಿತ ಚಳುವಳಿಗೆ ಬೌದ್ಧಿಕ ಉತ್ತೇಜನ ನೀಡುತ್ತಿದ್ದರು. ಡಾ.ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ತಮ್ಮ ಸಾಹಿತ್ಯದ ಮೂಲಕ ಯುವ ಸಮುದಾಯಗಳಿಗೆ ತಲುಪಿಸುತ್ತಿದ್ದರು. ಅವರ ಬರವಣಿಗೆ ಶೋಷಿತ ಸಮುದಾಯಗಳ ಧ್ವನಿಯಾಗಿ, ಮಾನವ ಪರ ನಿಲುವು ಮನಜ ಅವರ ಸಾಹಿತ್ಯದ ವಿಶೇಷತೆಯಾಗಿತ್ತು. ದೇವನೂರು ಮಹಾದೇವ, ಆಲನಹಳ್ಳಿ ಕೃಷ್ಣ, ಮ.ನ. ಜವರಯ್ಯ ನಡೆಸುತ್ತಿದ್ದ ರಾತ್ರಿ ಪಾಠಶಾಲೆಗಳು ಯುವ ಸಮುದಾಯಗಳಲ್ಲಿನ ಹೆಪ್ಪುಗಟ್ಟಿದ ಅಭಿವ್ಯಕ್ತಿ ಹೊರಬರಲು ಸಹಕಾರಿಯಾಗಿದ್ದವು ಎಂದು ಅಭಿಪ್ರಾಯಪಟ್ಟರು.

ಮೈಸೂರು ವಿವಿಯ ಗಾಂಧಿ ಅಧ್ಯಯನ ಕೇಂದ್ರದ ನಿರ್ದೇಶಕ ಡಾ.ಎಸ್.ನರೇಂದ್ರಕುಮಾರ್ ಮಾತನಾಡಿ, ಯುಗಮಾನಗಳಿಂದ ಶೋಷಣೆಗೆ ಒಳಗಾಗುತ್ತಾ ಬಂದಿರುವ ದಲಿತ ಸಮುದಾಯದ ಸಾಹಿತಿಗಳು ಸಮಾನ ದುಃಖಿಗಳಾಗಿದ್ದರು. ಆದ್ದರಿಂದ ದಲಿತ ಸಾಹಿತಿಗಳು ಶೋಷಿತರೆಲ್ಲರೂ ಒಗ್ಗಟ್ಟಾಗಿ ಸಾಗುವ ಕಾಳಜಿಯನ್ನು ಸಾಹಿತ್ಯ ಕೃತಿಗಳ ಮೂಲಕ ಕಟ್ಟಿಕೊಡುವ ಪ್ರಯತ್ನ ಮಾಡಿದರು. ಸಂಶೋಧಕರು ದಲಿತ ಸಾಹಿತಿಗಳ ಕೃತಿಗಳನ್ನು ಅಧ್ಯಯನ ಮಾಡುವಾಗ ಒಬ್ಬರು ಹೆಚ್ಚು ಮತ್ತೊಬ್ಬರು ಕಡಿಮೆ ಎಂದು ನೋಡಬಾರದು. ಸಂಶೋಧಕರು ದಲಿತ ಸಾಹಿತಿಗಳ ನೋವಿನ ಅನುಭವದ ಆಳವನ್ನು ಅರ್ಥ ಮಾಡಿಕೊಂಡರೆ ಎಲ್ಲಾ ದಲಿತ ಸಾಹಿತಿಗಳ ಸಾಹಿತ್ಯವೂ ವಿಶಾಲವಾಗಿ, ವೈಶಿಷ್ಟ್ಯವಾಗಿ ಕಾಣುತ್ತದೆ ಎಂದರು. ಕಾರ್ಯಕ್ರಮದಲ್ಲಿ ಚಿಂತಕ ನಾ.ದಿವಾಕರ, ದಲಿತ ಸಾಹಿತ್ಯ ಪರಿಷತ್ತಿನ ವಿಭಾಗೀಯ ಸಂಚಾಲಕ ಡಾ.ಚಂದ್ರಗುಪ್ತ, ಮೈಸೂರು ವಿವಿ ಸಂಶೋಧಕರ ಸಂಘದ ಅಧ್ಯಕ್ಷ ಶಿವಶಂಕರ, ಕೃತಿಯ ಲೇಖಕರಾದ ಡಾ.ಬಿ.ರಾಜಣ್ಣ, ದಲಿತ ಸಾಹಿತ್ಯ ಪರಿಷತ್ತಿನ ಸಂಘಟಕ ಡಾ.ಬಿ.ಮೂರ್ತಿ, ಲೇಖಕ ತಲಕಾಡು ನಾಗರಾಜು ಉಪಸ್ಥಿತರಿದ್ದರು.



ಮೈಸೂರು ವಿವಿ ಇಎಂಎಂಆರ್‌ಸಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ.ಬಿ.ರಾಜಣ್ಣ ಬರೆದಿರುವ 'ಮ.ನ.ಜವರಯ್ಯರ ಸೃಜನಶೀಲ ಸಾಹಿತ್ಯದ ಒಳನೋಟಗಳು' ಕೃತಿಯನ್ನು ಡಾ.ತುಕಾರಾಮ್ ಬಿಡುಗಡೆಗೊಳಿಸಿದರು.

ಅರ್ಜಿ ಆಹ್ವಾನ

ಮೈಸೂರು: 2024–25ನೇ ಸಾಲಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆ ಹಿಂಗಾರು ಹಂಗಾಮಿನಲ್ಲಿ ಘೋಷಿಸಲಾಗಿದೆ.

ಮೈಸೂರು ತಾಲೂಕಿನ ವರುಣ, ಜಯಪುರ, ಇಲವಾಲ ಹೋಬಳಿಗಳಿಗೆ ಟೊಮೆಟೊ ಬೆಳೆ ಆಯ್ಕೆಯಾಗಿದ್ದು, ಪ್ರತಿ ಹೆಕ್ಟೇರ್‌ಗೆ ವಿಮಾ ಮೊತ್ತ ರೂ. 141500ಗಳಿಗೆ ರೈತರು ಪಾವತಿಸಬೇಕಾದ ವಿಮಾ ಕಂತಿನ ಮೊತ್ತ ರೂ.7075 ಆಗಿರುತ್ತದೆ. ಈ ಯೋಜನೆಯಡಿ ಬೆಳೆ ಸಾಲ ಪಡೆಯದ ರೈತರು ನಿಗದಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಆಧಾರ್ ಮತ್ತು ಸ್ವಯಂಘೋಷಿತಾ ಬೆಳೆ ವಿವರಗಳನ್ನು ಹತ್ತಿರದ ಬ್ಯಾಂಕ್, ಗ್ರಾಮ್ ಒನ್/ನಾಗರಿಕ ಸೇವಾ ಕೇಂದ್ರದಲ್ಲಿ ವಿಮಾ ಕಂತನ್ನು ಡಿ.16ರೊಳಗೆ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಇಲವಾಲ ಹೋಬಳಿ ಸಹಾಯಕ ತೋಟಗಾರಿಕೆ ಅಧಿಕಾರಿ ಅವರ ಮೊ.ಸಂ:9986086262, ವರುಣ ಹೋಬಳಿ ಸಹಾಯಕ ತೋಟಗಾರಿಕೆ ಅಧಿಕಾರಿ ಅವರ ಮೊ.ಸಂ:7259592484 ಅನ್ನು ಸಂಪರ್ಕಿಸಬಹುದು.

ಮಿಸ್ಟರ್ ಕರುನಾಡ ಸೇವಾ ಸೇನೆ ಪ್ರಶಸ್ತಿ ಪ್ರದಾನ



ಕರುನಾಡ ಸೇವಾ ಸೇನೆ, ಮೈಸೂರು ಜಿಲ್ಲಾ ದೇಹದಾರ್ಢ್ಯ ಮತ್ತು ಫಿಟ್ನೆಸ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ನಿಮಿತ್ತ ವಿದ್ಯಾರಣ್ಯಪುರಂನಲ್ಲಿ ಮೈಸೂರು ಜಿಲ್ಲಾ ಮಟ್ಟದ ದೇಹದಾರ್ಢ್ಯ ಸ್ಪರ್ಧೆ ಮತ್ತು ಮಿಸ್ಟರ್ ಕರುನಾಡ ಸೇವಾ ಸೇನೆಯ ವಿಜೇತರಿಗೆ ಮಾಜಿ ಶಾಸಕ ಎಂ.ಕೆ ಸೋಮಶೇಖರ್ ಬಹುಮಾನ ಮತ್ತು ಪ್ರಶಸ್ತಿ ಪ್ರದಾನ ಮಾಡಿದರು. ಸೇನೆಯ ರಾಜ್ಯಾಧ್ಯಕ್ಷ ಗಣೇಶ್, ಮುರುಳಿ, ಕುಮಾರ್, ಮುಖಂಡರಾದ ಭಾಸ್ಕರ್ ಮತ್ತಿತರರಿದ್ದರು.

ಮೈಸೂರು ಕಲ್ಚರಲ್ ಅಸೋಸಿಯೇಷನ್‌ನಿಂದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ



ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಜನಾರ್ಧನ್(ಜನ್ನಿ), ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅವರನ್ನು ಮೈಸೂರು ಕಲ್ಚರಲ್ ಅಸೋಸಿಯೇಷನ್ ವತಿಯಿಂದ ಸನ್ಮಾನಿಸಲಾಯಿತು.

ಮೈಸೂರು,ಡಿ.1–ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ರಂಗ ನಿರ್ದೇಶಕ ಜನಾರ್ಧನ್(ಜನ್ನಿ) ಮತ್ತು ಸುವರ್ಣ ಕರ್ನಾಟಕ ಪ್ರಶಸ್ತಿ ಪುರಸ್ಕೃತರಾದ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅವರನ್ನು, ಮೈಸೂರು ಕಲ್ಚರಲ್ ಅಸೋಸಿಯೇಷನ್ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಸಿಸಿಬಿ ಎಸಿಪಿ ಸಂದೇಶ್ ಕುಮಾರ್ ಮಾತನಾಡಿ, ರಂಗಭೂಮಿಯ ನಾಟಕಗಳು ಪ್ರಬಲವಾದ ಅಭಿವ್ಯಕ್ತಿ ಮಾಧ್ಯಮವಾಗಿದ್ದು, ಈ ಮೂಲಕ ಜನಸಾಮಾನ್ಯರನ್ನು ತಲುಪಬಹುದು ಎಂದು ಹೇಳಿದರು.

ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ರಂಗ ನಿರ್ದೇಶಕ ಜನಾರ್ಧನ್(ಜನ್ನಿ) ಮಾತನಾಡಿ, ಸಮಾಜ ನಾವು ಅಂದುಕೊಂಡಂತೆ ಶುದ್ಧವಾಗಿಲ್ಲ. ಆದ್ದರಿಂದ ಪ್ರತಿಯೊಬ್ಬರ ನಡುವೆ ಸಾಂಸ್ಕೃತಿಕ ಸಂಬಂಧ ಮುಖ್ಯವಾಗಿದೆ. ಸಾಹಿತ್ಯ ಮತ್ತು ಸಂಸ್ಕೃತಿಗೆ ಹೊಂದಾಣಿಕೆ ಇರಬೇಕಿದ್ದು, ಸಾಮಾಜಿಕ ಜವಾಬ್ದಾರಿಯ ಅಗತ್ಯವಿದೆ. ಇದರೊಂದಿಗೆ ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗದೊಂದಿಗೆ ಮಾಧ್ಯಮ ಕ್ಷೇತ್ರಕ್ಕೂ ಆದ್ಯತೆ ನೀಡಬೇಕಿದೆ ಎಂದು ಹೇಳಿದರು.

ಸುವರ್ಣ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಡ್ಡಿಕೆರೆ ಗೋಪಾಲ್ ಮಾತನಾಡಿ, ಸಾಹಿತ್ಯ ಕ್ಷೇತ್ರಕ್ಕಿಂತ ಸಮಾಜ ಸೇವಾ ಕ್ಷೇತ್ರವಾದ ಜನಸಂಖ್ಯೆ ನಿಯಂತ್ರಣಕ್ಕೆ ಕುಟುಂಬ ಕಲ್ಯಾಣ ಯೋಜನೆಯಲ್ಲಿನ ನನ್ನ ಸೇವೆಯನ್ನು ಗುರುತಿಸಿ ಸರ್ಕಾರ ಈ ಪ್ರಶಸ್ತಿ ನೀಡಿ ಗೌರವಿಸಿರುವುದು ಸಂತಸ ತಂದಿದೆ. ಈ ಹಿಂದೆ ನಾಲ್ಕು ಬಾರಿ ಪ್ರಶಸ್ತಿಗೆ ನಾನು ಕೂಡ ಅರ್ಜಿ ಸಲ್ಲಿಸಿದ್ದೆ. ಕೊನೆಗೆ ಬರಲಿಲ್ಲ. ಆಮೇಲೆ ಪ್ರಶಸ್ತಿಗೆ ಅರ್ಜಿ ಸಲ್ಲಿಸುವುದನ್ನೇ ನಿಲ್ಲಿಸಿದ್ದೆ. ಈಗ ನನ್ನ ಸೇವೆಯನ್ನು ಗುರುತಿಸಿ ಸರ್ಕಾರವೇ ಪ್ರಶಸ್ತಿ ನೀಡಿದೆ. ಇದು ನನ್ನ ಸೇವಾ ಕಾರ್ಯಕ್ಕೆ ಮತ್ತಷ್ಟು ಸ್ಫೂರ್ತಿ, ಪ್ರೇರಣೆ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿ ಮೈಸೂರು ಕಲ್ಚರಲ್ ಅಸೋಸಿಯೇಷನ್‌ನ ಅಧ್ಯಕ್ಷ ಎ.ಪಿ.ನಾಗೇಶ್, ಸಂಚಾಲಕರಾದ ಐತಿಚಂಡ ರಮೇಶ್ ಉತ್ತಪ್ಪ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮು, ಕನ್ನಡ ಸಾಹಿತ್ಯ ಪರಿಷತ್ತಿನ ಚಂದ್ರಶೇಖರ್, ಮೈಸೂರು ರವಿ, ರಮೇಶ್, ಕನ್ನಡ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಇತರರಿದ್ದರು.

ನಿಧನ



ಶ್ರೀಮತಿ ಲಕ್ಷ್ಮೀ ಪರಮಶಿವಂ

ಇವರು ದಿ:01/12/2024 ರ ಭಾನುವಾರ ಮಧ್ಯಾಹ್ನ 3:00 ಕ್ಕೆ ದೈವಾಧೀನರಾಗಿದ್ದಾರೆ ಮೃತರ ಅಂತ್ಯಕ್ರಿಯೆಯವನ್ನು ಸೋಮವಾರ ಬೆಳಗ್ಗೆ 09:00 ಗಂಟೆ ನಂತರ ದೇವಯ್ಯನಹುಂಡಿ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು

ದುಃಖತಪ್ತರು: ಮಗ: ಪಿ ಕೆ ರಾಧಾಕೃಷ್ಣ ರೈಲ್ವೇ (ಎಸ್‌ಎಸ್‌ಸಿ ಸಿಡಬ್ಲ್ಯೂಎಸ್) ಮೊಮ್ಮಗ: ಅಜಯ್ ಕುಮಾರ್, ಮಗಳು: ಗಿರಿಜಾ ಎನ್, ಮೊಮ್ಮಕ್ಕಳು:ಆನಂದ್ ಎನ್, ರಾಧಾಕೃಷ್ಣ (ಜೈ ಆಂಜನೇಯ ಬೋರ್‌ವೆಲ್ಸ್), ಪೂರ್ಣಿಮಾ, ಮಲ್ಲಿಕಾರ್ಜುನ್ ಶ್ರೀದೇವಿ ಮತ್ತು ಮರಿಮೊಮ್ಮಕ್ಕಳು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ

ಜೆ.ಎಲ್.ಬಿ. ರಸ್ತೆ, ಮೈಸೂರು

ಸಂಖ್ಯೆ: ಮೈನ.ಪ್ರಾ/ಆಆಸಶಾ/ಪ.ಪ್ರ/ತು.ಜಾ/2024–25 ದಿನಾಂಕ: 30.11.2024

ಪತ್ರಿಕಾ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ರಚಿಸಲಾದ ಬಡಾವಣೆಗಳಲ್ಲಿ ತುಂಡು ಭೂಮಿ ಅಥವಾ ಉಳಿದಿರುವ ಭೂಮಿಯನ್ನು ವಿಲೇವಾರಿ ಮಾಡುವ ಸಂಬಂಧ ಮಾನ್ಯ ಸರ್ಕಾರವು ಸಂಖ್ಯೆ ನಅಇ 2 ಎಸಿಬಿ 2022, ದಿನಾಂಕ 22.11.2024 ರಂದು ಮಾರ್ಗಸೂಚಿಗಳನ್ನು ತಿಳಿಸಿ ತುಂಡುಭೂಮಿ ಅಥವಾ ಉಳಿದ ಭೂಮಿಯನ್ನು ವಿಲೇವಾರಿ ಮಾಡಲು ಸೂಚಿಸಿರುತ್ತದೆ. ಅದರಂತೆ ಪ್ರಾಧಿಕಾರದಿಂದ ರಚಿತವಾದ ಬಡಾವಣೆಗಳಲ್ಲಿ ಮಂಜೂರಾತಿ ಪಡೆದಿರುವ ಸಾರ್ವಜನಿಕರ ತಮ್ಮ ನಿವೇಶನ/ಮನೆಗಳಿಗೆ ಹೊಂದಿಕೊಂಡಂತೆ ತುಂಡುಜಾಗ ಲಭ್ಯವಿದ್ದಲ್ಲಿ ಅಂತಹ ತುಂಡುಜಾಗವನ್ನು ಮಂಜೂರು ಮಾಡುವ ಸಂಬಂಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಈ ಪ್ರಕಟಣೆ ಹೊರಡಿಸಿದ 15 ದಿವಸಗಳೊಳಗಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ನಂತರ ಸರ್ಕಾರದ ಮಾರ್ಗಸೂಚಿಯಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು ಎಂದು ಈ ಮೂಲಕ ತಿಳಿಯಪಡಿಸಿದೆ.

ಸಹಿ/– ಕಾರ್ಯದರ್ಶಿ
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು